ಸಂಪುಟ: 04 ಸಂಚಿಕೆ: 325 ಪುಟಗಳು: 08 ಗುರುವಾರ 06 ಫೆಬ್ರವರಿ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ತಪ್ಪು ಮಾಡುವಾಗ ಮನುಷ್ಯನಿಗೆ ಅರಿವಿರುವುದಿಲ್ಲ, ಆದ್ರೆ ಮೋಸ ಮಾಡುವಾಗ ಅರಿವಿರುತ್ತದೆ, ಹಾಗಾಗಿ ತಪ್ಪನ್ನು ಕ್ಷಮಿಸಬಹುದು.

# ನನಗೆ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಕೊಟ್ಟರೆ ನಿಭಾಯಿಸುತ್ತೇನೆ

**ಮಾಜಿ ಸಚಿವ ಶ್ರೀರಾಮುಲು ಹೊಸ ಬಾಂಬ್!**


• ಉದಯವಾಹಿನಿ, ಕೋಲಾರ



ಒಂದು ಕಡೆ ಬಿಜೆಪಿ ರಾಜ್ಯಾಧ್ಯಕ್ಷ ಬದಲಾಯಿಸ ಬೇಕು ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಣ ಹೈಕಮಾಂಡ ವಿಜಯೇಂದ್ರ ವಿರುದ್ಧ ದೂರು ನೀಡಿದ್ದು, ಇನ್ನೊಂದು ಕಡೆ ನನಗೆ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಕೊಟ್ಟರೆ ಸರಿಯಾಗಿ ನಿಭಾಯಿಸುತ್ತೇನೆ ಎಂದು ಮಾಜಿ ಸಚಿವ ಶ್ರೀರಾಮುಲು ಇದೀಗ ಹೊಸ ದಾಳವನ್ನು ಉರುಳಿಸಿದ್ದಾರೆ.

ಈ ಕುರಿತು ಕೋಲಾರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನನಗೆ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಕೊಟ್ಟರೆ ನಿಭಾಯಿಸುತ್ತೇನೆ. ಸದ್ಯಕ್ಕೆ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿವೈ ವಿಜಯೇಂದ್ರ ಇದ್ದಾರೆ. ಆಕಸ್ಮಿಕವಾಗಿ ಬದಲಾದರೆ ನಾನು ರಾಜ್ಯಾಧ್ಯಕ್ಷನಾಗಲು ಸಿದ್ಧನಿದ್ದೇನೆ ಎಂದು ಹೊಸ ದಾಳ ಉರುಳಿಸಿದ್ದಾರೆ.

ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನನ್ನ ಹೆಸರು ಪ್ರಸ್ತಾಪ ಮಾಡಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷರನ್ನು ಬದಲಿಸಿ ಎಂದು ಒತ್ತಾಯ ಮಾಡಲ್ಲ.ಒಂದು ವೇಳೆ ನನಗೆ ಅವ ಕಾಶ ಕೊಟ್ಟರೆ ನಾನು ರಾಜ್ಯಾಧ್ಯಕ್ಷ ಸ್ಥಾನವನ್ನು ನಿಭಾಯಿಸುತ್ತೇನೆ. ಆದರೆ ಸದ್ಯ ಇರುವ ಹಾಲಿ ಅಧ್ಯಕ್ಷರನ್ನು ಬದಲಿಸಿ ಎಂದು ಒತ್ತಾಯ ಮಾಡಲ್ಲ ಎಂದು ಮಾಜಿ ಸಚಿವ ಶ್ರೀರಾಮುಲು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.



ಬಿಎಸ್ ಯಡಿಯೂರಪ್ಪ ಅವರ ಗರಡಿಯಲ್ಲಿ ಬೆಳೆದಿದ್ದೇನೆ. 224 ಕ್ಷೇತ್ರಗಳಲ್ಲೂ ಸಂಘಟನೆ ಮಾಡಿ ಬಂಡಾಯ ಶಮನ ಮಾಡುವೆ. 2028 ರಲ್ಲಿ ಬಿಜೆಪಿ 150 ಸ್ಥಾನ ಗೆಲ್ಲಲು ಕೆಲಸ ಮಾಡುತ್ತೇನೆ. ಮಾಜಿ ಸಿಎಂ ಯಡಿಯೂರಪ್ಪ ಅವರ ಆಶೀರ್ವಾದ ಬೇಕಾಗಿದೆ. ಒಂದು ವೇಳೆ ಹೈಕಮಾಂಡ್ ಬದಲಾವಣೆ ಮಾಡಿದರೆ ನಾನು ರಾಜ್ಯಾಧ್ಯಕ್ಷ ಸ್ಥಾನ ನಿಭಾಯಿಸಲು ಸಿದ್ಧನಿದ್ದೇನೆ ಎಂದರು.

## ಪಕ್ಷದಲ್ಲಿನ ವಿದ್ಯಮಾನ ನನಗೂ ಬೇಸರ ತಂದಿದೆ ಎಂದ ಅಶೋಕ್

• ಉದಯವಾಹಿನಿ, ಬೆಂಗಳೂರು

ರಾಜ್ಯ ಬಿಜೆಪಿಯಲ್ಲಿನ ಬಣ ಬಡಿದಾಟ ತಾರಕಕ್ಕೇರಿದ್ದು, ಹೈಕಮಾಂಡ್ ಅಂಗಳ ತಲುಪಿದೆ. ಪಕ್ಷದಲ್ಲಿನ ಈ ಬೆಳವಣಿಗೆ ನಮಗೂ ಬೇಸರ ತಂದಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆರ್.ಅಶೋಕ್, ಪಕ್ಷದಲ್ಲಿನ ವಿದ್ಯಮಾನಗಳು ನಮಗೂ ಬೇಸರ ತಂದಿದೆ. ನಾನೂ ದೆಹಲಿಗೆ ಹೋಗಿ ವರಿಷ್ಠರನ್ನು ಭೇಟಿಯಾಗುತ್ತೇನೆ ಎಂದು ಹೇಳಿದರು. ಈ ಹಿಂದೆ ಜೆ.ಪಿ.ನಡ್ಡಾ ರಾಜ್ಯಕ್ಕೆ ಆಗಮಿಸಿದ್ದಾಗ ಅವರನ್ನು ಭೇಟಿಯಾಗಿ ರಾಜ್ಯ ಬಿಜೆಪಿಯಲ್ಲಿ ಏನೆಲ್ಲ ನಡೆಯುತ್ತಿದೆ ಎಂಬುದನ್ನು ಸವಿಸ್ತಾರವಾಗಿ ತಿಳಿಸಿದ್ದೆ. ಈಗಾಗಲೇ ಯತ್ನಾಳ್ ಟೀಂ ಹೈಕಮಾಂಡ್ ಭೇಟಿಯಾಗಿ ಎಲ್ಲಾ ವಿಚಾರಗಳನ್ನು ಗಮನಕ್ಕೆ ತಂದಿದೆ. ಬೊಮ್ಮಾಯಿ ಅವರು ದೆಹಲಿಯಲ್ಲಿಯೇ ಇದ್ದಾರೆ. ಅವರು ತಿಳಿಸಿದಾಗ ನಾನೂ ದೆಹಲಿಗೆ ಹೋಗುತ್ತೇನೆ. ಒಟ್ಟಿನಲ್ಲಿ ಪಕ್ಷದಲ್ಲಿನ ಈ ಬೆಳವಣಿಗೆ ಸರಿ ಹೋಗಬೇಕು ಎಂದರು. ರಾಜ್ಯಾಧ್ಯಕ್ಷರ ಬದಲಾವಣೆ ವಿಚಾರ ಹೈಕಮಾಂಡ್ ಗೆ ಬಿಟ್ಟಿದ್ದು. ವರಿಷ್ಠರು ಎಲ್ಲಾ ಅಭಿಪ್ರಾಯಗಳನ್ನು ಪರಿಗಣಿಸಿ ತೀರ್ಮಾನ ಕೈಗೊಳ್ಳುತ್ತಾರೆ. ಒಂದಿಷ್ಟು ಜನ ರಾಜ್ಯಾಧ್ಯಕ್ಷರ ಪರವಾಗಿ ಅಭಿಪ್ರಾಯ ಕೊಟ್ಟಿದ್ದಾರೆ. ಹೈಕಮಾಂಡ್ ಏನು ತೀರ್ಮಾನ ಕೈಗೊಳ್ಳುತ್ತೆ ಅದಕ್ಕೆ ನಾವೆಲ್ಲರೂ ಬದ್ಧರಾಗಿರುತ್ತೇವೆ ಎಂದು ಹೇಳಿದರು.



## ಶಾಸಕ ಯತ್ನಾಳ್ ಅಂಡ್ ಟೀಂ ವಿರುದ್ಧ ಸಿಡಿದೆದ್ದ ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅಂಡ್ ಟೀಂ ವಿರುದ್ಧ ಬಿವೈ ವಿಜಯೇಂದ್ರ ಬಣ ಸಿಡಿದೆದ್ದಿದೆ. ಫೆಬ್ರವರಿ 12ರಂದು ಬೆಂಗಳೂರಲ್ಲಿ ಸಭೆ ನಡೆಸಲು ತೀರ್ಮಾನಿಸಲಾಗಿದೆ. ಈ ಸಭೆಯ ಬಳಿಕ ದೆಹಲಿಗೆ ತೆರಳಿ ಪಕ್ಷದಿಂದ ಉಚ್ಛಾಟನೆಗೆ ಆಗ್ರಹಿಸಲಿದೆ ಎನ್ನಲಾಗುತ್ತಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧ ಶಾಸಕ ಬಸನಗೌಡ ಪಾಟೀಲ್ ಅಂಡ್ ಟೀಂ ದೆಹಲಿಯಲ್ಲಿ ಬೀಡು ಬಿಟ್ಟು ವಾಗ್ದಾಳಿ ಕೂಡ ನಡೆಸುತ್ತಿದೆ. ಇದರಿಂದಾಗಿ ಬಿಜೆಪ ಪಕ್ಷದಲ್ಲಿ ಆತಂರೀಕ ಕಚ್ಚಾಟ ಬೀದಿಗೆ ಬಿದ್ದಂತೆ ಆಗಿದೆ. ಈ ಹಿನ್ನಲೆಯಲ್ಲಿ ಬಿವೈ ವಿಜಯೇಂದ್ರಗೆ ಬೆಂಬಲಿಸಲು ಮತ್ತೊಂದು ಟೀಮ್ ರೆಡಿಯಾಗಿದೆ. ಇದೇ ಫೆಬ್ರವರಿ 12ರಂದು ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಸಭೆ ನಡೆಸಿ ಯತ್ನಾಳ್ ನಡೆ ಬಗ್ಗೆ ಚರ್ಚಿಸಲು ತೀರ್ಮಾನಿಸಿದೆ ಎನ್ನಲಾಗಿದೆ. ಫೆಬ್ರವರಿ 12ರ ಸಭೆಯಲ್ಲಿ 100ಕ್ಕೂ ಹೆಚ್ಚು ಮಾಜಿ ಸಚಿವರು, ಶಾಸಕರು ಭಾಗಿಯಾಗೋ ಸಾಧ್ಯತೆ ಇದೆ. ಈ ಸಭೆಯಲ್ಲಿ ಯತ್ನಾಳ್ ಅಂಡ್ ಟೀಂ ಬಗ್ಗೆ ಚರ್ಚೆ ನಡೆಸಿ, ದೆಹಲಿಗೆ ತೆರಳಿ ಪಕ್ಷದಿಂದ ಉಚ್ಛಾಟನೆ ಮಾಡಲು ಆಗ್ರಹಿಸೋದಾಗಿ ತಿಳಿದು ಬಂದಿದೆ.

## ಸವದತ್ತಿ ಯಲ್ಲಮ್ಮ ಗುಡ್ಡದ ಅಭಿವೃದ್ಧಿಗೆ ಟಿಟಿಡಿ ಮಾದರಿ ಯೋಜನೆ: ಸಚಿವ

• ಉದಯವಾಹಿನಿ, ಬೆಳಗಾವಿ

ಪವಿತ್ರ ಯಲ್ಲಮ್ಮನ ಗುಡ್ಡದ ಅಭಿವೃದ್ಧಿಗೆ ಟಿಟಿಡಿ ಮಾದರಿಯಲ್ಲಿ ಅಭಿವೃದ್ಧಿಯನ್ನು ಮಾದರಿಯಾಗಿಟ್ಟುಕೊಂಡು ಯೋಜನೆ ರೂಪಿಸಲಾಗುವುದು ಎಂದು ಪ್ರವಾಸೋದ್ಯಮ ಇಲಾಖೆಯ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು. ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು 'ಈ ಬಾರಿ ಭರತ ಹುಣ್ಣಿಮೆ ವೇಳೆ ಸವದತ್ತಿ ಯಲ್ಲಮ್ಮನ ಗುಡ್ಡದಲ್ಲಿ ಜಿಲ್ಲಾಡಳಿತ ಜನಸಂದಣಿ ನಿರ್ವಹಣೆ, ಪಾರ್ಕಿಂಗ್, ಶೌಚಾಲಯ, ಎಲ್.ಇ.ಡಿ.ಸ್ಕಿನ್ ಅಳವಡಿಕೆ ಸೇರಿ ಕಾಮಗಾರಿ ಆರಂಭ ಮಾಡಲಾಗಿದೆ. ದಾಸೋಹ ಭವನ ಮತ್ತು ಮೇವು ದಾಸೋಹ ಭವನ ನಿರ್ಮಾಣಕ್ಕೆ ಒಂದು ತಿಂಗಳಿನಲ್ಲಿ ಶಂಕುಸ್ಥಾಪನೆ ಮಾಡಲು ಪ್ರಯತ್ನಿಸಲಾಗುತ್ತಿದೆ ಎಂದರು. ಸವದತ್ತಿ ಅಭಿವೃದ್ಧಿ ಮಂಡಳಿ ಪ್ರಗತಿ ಪರಿಶೀಲನೆ ನಡೆಸಿ, ಸಣ್ಣಪುಟ್ಟ ಕಾನೂನಾತ್ಮಕ ಸಮಸ್ಯೆಗಳನ್ನು ಜಿಲ್ಲಾಡಳಿತ ಬಗೆಹರಿಸಿದೆ. ಫೆ. 12 ರಂದು ಭರತ ಹುಣ್ಣಿಮೆಗೆ ಸಕಲ ವ್ಯವಸ್ಥೆ ಮಾಡಲಾಗಿದೆ ಕೇಂದ್ರದಿಂದ ನೂರು ಕೋಟಿ ಮಂಜೂರಾಗಿದ್ದು ಇದು ಮಾತ್ರವಲ್ಲದೇ 20 ಕೋಟಿ ಪ್ರಸಾದ ಯೋಜನೆಯಡಿ ಮಂಜೂರಾಗಿದೆ. ಇದಲ್ಲದೇ ರಾಜ್ಯ ಸರ್ಕಾರದಿಂದ ಕೂಡ ಸಾಕಷ್ಟು ಅನುದಾನ ನೀಡಲಾಗುತ್ತಿದೆ ಎಂದು ತಿಳಿಸಿದರು.

# ದೆಹಲಿ ಗದ್ದುಗೆ ಏರುವವರ್‍ಯಾರು...?

■ ದೆಹಲಿ ವಿಧಾನಸಭೆ ಚುನಾವಣೆ: ಶೇ.57 ರಷ್ಟು ಮತದಾನ ■ ಬುಧವಾರ ಬೆಳಗ್ಗೆ 7 ಗಂಟೆಯಿಂದ ಮತದಾನ ■ ಫೆಬ್ರವರಿ 8ಕ್ಕೆ ಫಲಿತಾಂಶ ಹೊರಬೀಳಲಿದೆ ■ ಮತ ಚಲಾಯಿಸಿದ ಮಾಜಿ ರಾಷ್ಟ್ರಪತಿ ರಾಮನಾಥ ಕೋವಿಂದ

• ಉದಯವಾಹಿನಿ, ನವದೆಹಲಿ

ರಾಷ್ಟ್ರ ರಾಜಧಾನಿ ದೆಹಲಿ ವಿಧಾನಸಭೆ ಚುನಾವಣೆಯ ಮತದಾನ ಬುಧವಾರ ಮುಕ್ತಾಯವಾಗಿದ್ದು, ಶೇ.57.70 ರಷ್ಟು ಮತದಾನ ದಾಖಲಾಗಿದೆ. ದೆಹಲಿಯ 70 ವಿಧಾನಸಭಾ ಸ್ಥಾನಗಳಿಗೆ ಇಂದು ಒಂದೇ ಹಂತದಲ್ಲಿ ಚುನಾವಣೆ ನಡೆದಿದ್ದು, ಬೆಳಗ್ಗೆ 7.00 ಗಂಟೆಗೆ ಮತದಾನ ಪ್ರಾರಂಭವಾಯಿತು ಮತ್ತು ಎಲ್ಲಾ ಕ್ಷೇತ್ರಗಳಲ್ಲಿ ಬಿಗಿ ಭದ್ರತೆಯ ನಡುವೆ ಸಂಜೆ 6ಗಂಟೆಗೆ ಮತದಾನ ಮುಕ್ತಾಯವಾಗಿದೆ.

| | |
|---|---|
| 1 | ಮತ್ತೆ ಕಮಲ್ ಮಾಡ್ತಾರಾ...! ಕೇಜ್ರಿವಾಲ್..! |
| 2 | ದೆಹಲಿ ವಿಧಾನಸಭಾ ಚುನಾವಣೆ |
| 3 | ರಾಷ್ಟ್ರ ರಾಜಧಾನಿಯಲ್ಲಿ ಹ್ಯಾಟ್ರಿಕ್ ಗೆಲುವು ಸಾಧಿಸುವುದಕ್ಕೆ ಆಮ್ ಅದ್ಮಿ ಪಕ್ಷ ಸಜ್ಜಾಗಿದೆ. |

ಬೆಳಗ್ಗೆಯಿಂದಲೇ ನೀರಸವಾಗಿ ಸಾಗುತ್ತಿದ್ದ ಮತದಾನ ಮಧ್ಯಾಹ್ನದ ವೇಳೆಗೆ ತುಸು ಚುರುಕು ಪಡೆದುಕೊಂಡಿದೆ. ಮತ್ತೊಮ್ಮೆ ಅಧಿಕಾರದ ಗದ್ದುಗೆ ಏರಿ, ರಾಷ್ಟ್ರ ರಾಜಧಾನಿಯಲ್ಲಿ ಹ್ಯಾಟ್ರಿಕ್ ಗೆಲುವು ಸಾಧಿಸುವುದಕ್ಕೆ ಆಮ್ ಅದ್ಮಿ ಪಕ್ಷ ಸಜ್ಜಾಗಿದೆ.

ಇನ್ನು ಬಿಜೆಪಿ ಈ ಬಾರಿಯಾದರೂ ಅಧಿಕಾರ ಪಡೆಯುವ ಉತ್ಸಾಹದಲ್ಲಿದೆ. ಇದರ ಮಧ್ಯೆ ಆಮ್ ಆದ್ಮಿಯಿಂದ ದೂರ ಸರಿದು, ಪ್ರತ್ಯೇಕವಾಗಿ ಸ್ಪರ್ಧಿಸಿರುವ ಕಾಂಗ್ರೆಸ್ ಕೂಡ ಸರ್ಕಾರ ರಚಿಸೋ ಕನಸು ಕಾಣುತ್ತಿದೆ. 70 ಸ್ಥಾನಗಳಿಗೆ ಒಟ್ಟು 699 ಅಭ್ಯರ್ಥಿಗಳು ಸ್ಪರ್ಧಿಸಿದ್ದು, ಮತದಾನಕ್ಕಾಗಿ ಒಟ್ಟು 13766 ಮತಗಟ್ಟೆಗಳನ್ನು ರೂಪಿಸಿದ್ದಾರೆ. ಕೆಲವರು ಬುರ್ಖಾ ಧರಿಸಿ ನಕಲಿ ಮತದಾನ ಮಾಡಲು ಯತ್ನಿಸಿದರು ಎಂದು ಬಿಜೆಪಿ ನಾಯಕರೊಬ್ಬರು ಆರೋಪಿಸಿದ ಬಳಿಕ ಹೈಡ್ರಾಮಾ ನಡೆಯಿತು. ಆದರೆ, ಈ ಕ್ಷೇತ್ರಗಳಲ್ಲಿ ನಕಲಿ ಮತದಾನ ಆಗಿರುವ ವಿಚಾರವನ್ನು ಪೊಲೀಸರು ತಳ್ಳಿ ಹಾಕಿದ್ದಾರೆ. ಕಸ್ತುರ್ಬಾ ಕ್ಷೇತ್ರದಲ್ಲಿ ನಕಲಿ ಮತದಾನಕ್ಕೆ ಯತ್ನ: ಆದರೆ ಕಸ್ತುರ್ಬಾ ನಗರದಲ್ಲಿ ಇಬ್ಬರು ನಕಲಿ ಮತದಾನಕ್ಕೆ ಯತ್ನಿಸಿದ್ದು, ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗಿದೆ ಎಂದು ಪೊಲೀಸ್ ಮೂಲಗಳು ಮಾಹಿತಿ ನೀಡಿವೆ. ಮತದಾರರಿಗೆ ಹಣ ಹಂಚಲಾಗಿದೆ–ಸಿಸೋಡಿಯಾ: ಈ ಮಧ್ಯೆ, ಗ್ರೇಟರ್ ಕೈಲಾಶ್ ಕ್ಷೇತ್ರದ ಆಪ್ ಸ್ಪರ್ಧಿ ಸೌರಭ್ ಭಾರಧ್ವಾಜ್ ಅವರು, ಚಿರಾಗ್ ದಿಲ್ಲಿ ಪ್ರದೇಶದಲ್ಲಿ ಜನ ಮತ ಹಾಕದಂತೆ ತಡೆಯೊಡ್ಡಲಾಗಿದೆ ಎಂದು ಆರೋಪಿಸಿದರು. ಅದೇ ರೀತಿ ಪಕ್ಷದ ಹಿರಿಯ ನಾಯಕ ಮನೀಶ್ ಸಿಸೋಡಿಯಾ, ಜಂಗ್‌ಪುರದಲ್ಲಿ ಮತದಾರರಿಗೆ ಹಣ ಹಂಚಲಾಗಿದೆ ಎಂದು ದೂರಿದರು.

**ಮತದಾರ ಹೃದಯ ಗೆಲ್ಲೋರು ಯಾರು..?**




### ಕೇಜ್ರಿವಾಲ್ ಮತದಾನ

ಆಮ್ ಆದ್ಮಿ ಪಕ್ಷದ ಸಂಚಾಲಕ ಹಾಗು ಮಾಜಿ ಸಿಎಂ ಕೇಜ್ರಿವಾಲ್ ಅವರು ಮತದಾನ ಮಾಡಿದ್ದು, ದೆಹಲಿಯ ಅಭಿವೃದ್ಧಿಗೆ ಮತ ಹಾಕುವಂತೆ ಮತದಾರರಲ್ಲಿ ಮನವಿ ಮಾಡಿದರು. ತಮ್ಮ ಪೋಷಕರು ಮತ್ತು ಸಂಬಂಧಿಕರೊಂದಿಗೆ ಮತಗಟ್ಟೆಗೆ ಆಗಮಿಸಿ ವೋಟ್ ಮಾಡಿದರು. ಉತ್ತಮ ಶಾಲೆಗಳು, ಆಸ್ಪತ್ರೆಗಳು ಮತ್ತು ನಗರದ ಅಭಿವೃದ್ಧಿಗೆ ಮತದಾನ ಮಾಡುವಂತೆ ಅವರು ಮತದಾರಲ್ಲಿ ಕೇಳಿಕೊಂಡರು. ಕೇಜ್ರಿವಾಲ್ ನವದೆಹಲಿ ಕ್ಷೇತ್ರದಿಂದ ಸತತ ನಾಲ್ಕನೇ ಬಾರಿಗೆ ಸ್ಪರ್ಧಿಸುತ್ತಿದ್ದು, ಈ ಬಾರಿ ಬಿಜೆಪಿಯ ಪರ್ವೇಶ್ ವರ್ಮಾ ಮತ್ತು ಕಾಂಗ್ರೆಸ್‌ನ ಸಂದೀಪ್ ದೀಕ್ಷಿತ್ ಎದುರು ಸ್ಪರ್ಧಿಸುತ್ತಿದ್ದಾರೆ.ನನ್ನ ಪೋಷಕರಿಗೆ ಆರೋಗ್ಯ ಸಂಬಂಧಿ ಸಮಸ್ಯೆಗಳಿವೆ. ಹೀಗಿದ್ದರೂ ಬೆಳಗ್ಗೆಯಿಂದ ಮತದಾನದ ವಿಚಾರವಾಗಿ ಸಾಕಷ್ಟು ಉತ್ಸುಕರಾಗಿದ್ದಾರೆ ಎಂದು ಮಾಧ್ಯಮ ಪ್ರತಿನಿಧಿಗಳಿಗೆ ಹೇಳಿಕೆ ನೀಡಿದರು. ಮತಗಟ್ಟೆಯಲ್ಲಿ ಪತ್ನಿ ಸುನಿತಾ ಕೇಜ್ರಿವಾಲ್ ಮತ್ತು ಪುತ್ರ ಪುಲ್ಕಿತ್ ಕೇಜ್ರಿವಾಲ್ ಕಾಣಿಸಿಕೊಂಡರು. ಕೆಲಸ ಮಾಡುವವರಿಗೆ ಜನ ಮತ ಹಾಕುವ ನಂಬಿಕೆ ಇದೆ ಎಂದು ಹೇಳಿದರು.

### ಆಪ್ ವಿರುದ್ಧ ರಾಹುಲ್ ಗಾಂಧಿ ಟೀಕೆ

ದೆಹಲಿಯಲ್ಲಿ ಅತಿ ದೊಡ್ಡ ಹಗರಣ ಮಾಡಿದವರು ಈಗ ಶುದ್ಧ ರಾಜಕಾರಣದ ಬಗ್ಗೆ ಮಾತನಾಡುತ್ತಿದ್ದಾರೆ ಎಂಬುದನ್ನು ನೆನಪಿಸಿಕೊಳ್ಳಿ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆಮ್ ಆದ್ಮಿ ಪಕ್ಷದ ವಿರುದ್ಧ ವಾಗ್ದಾಳಿ ಮಾಡಿದ್ದಾರೆ. ವಿಧಾನಸಭಾ ಕ್ಷೇತ್ರದ ನಿರ್ಮಲ್ ಭವನ್ ಮತಗಟ್ಟೆಯಲ್ಲಿ ಬೆಳಗ್ಗೆ ರಾಹುಲ್ ಮನತದಾನ ಮಾಡಿದರು. ಉಪ ರಾಷ್ಟ್ರಪತಿ ಜಗದೀಪ್ ಧನ್ ಕರ್, ಸಿಜೆಐ ಸಂಜೀವ್ ಖನ್ನಾ, ಕೇಂದ್ರ ಸಚಿವರಾದ ಜೈಶಂಕರ್, ಹರ್ದೀಪ್ ಸಿಂಗ್ ಪುರಿ, ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ, ದೆಹಲಿ ಸಿಎಂ ಆತಿಶಿ ಸೇರಿದಂತೆ ಹಲವರು ಮತದಾನ ಮಾಡಿದ್ದಾರೆ.ಒಟ್ಟು 70 ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯುತ್ತಿದ್ದು, 13,766 ಮತಗಟ್ಟೆಗಳನ್ನು ನಿರ್ಮಿಸಲಾಗಿದೆ. ಕಣದಲ್ಲಿ 699 ಅಭ್ಯರ್ಥಿಗಳಿದ್ದಾರೆ. 2020ರ ವಿಧಾನಸಭೆ ಚುನಾವಣೆಯಲ್ಲಿ ದಾಖಲೆಯ ಶೇ 62.59ರಷ್ಟು ಮತದಾನವಾಗಿತ್ತು. 2024ರ ಲೋಕಸಭೆಯಲ್ಲಿ ಶೇ 56ರಷ್ಟು ಮತದಾನವಾಗಿತ್ತು.





### ರಾಷ್ಟ್ರಪತಿ ಮುರ್ಮು ಸಿಎಂ ಅತಿಶಿ ಮತದಾನ

ರಾಷ್ಟ್ರ ರಾಜಧಾನಿಯಲ್ಲಿಂದು 70 ವಿಧಾನಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯುತ್ತಿದ್ದು, ಬೆಳ್ಳಂಬೆಳಗ್ಗೆ ಕೊರೆವ ಚಳಿಯನ್ನೂ ಲೆಕ್ಕಿಸದೇ ಮತದಾರರು ಉತ್ಸಾಹದಿಂದಲೇ ಹಕ್ಕು ಚಲಾಯಿಸುತ್ತಿದ್ದಾರೆ. ಅಂತೆಯೇ ಲೋಕಸಭೆ ವಿಪಕ್ಷ ನಾಯಕರೂ ಆಗಿರುವ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ. ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ದೆಹಲಿ ಮುಖ್ಯಮಂತ್ರಿ ಆತಿಶಿ ಅವರು ತಮ್ಮ ಹಕ್ಕು ಚಲಾಯಿಸಿದ್ದಾರೆ.ಇದರಂತೆ ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್ ಸಂತೋಷ್, ಬಿಜೆಪಿ ಸಂಸದೆ ಬಾನ್ಸುರಿ ಸ್ವರಾಜ್, ಆಪ್ ನಾಯಕ ಮನೀಶ್ ಸಿಸೋಡಿಯಾ, ದೆಹಲಿ ಮಾಜಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಸೇರಿದಂತೆ ಅನೇಕ ನಾಯಕರು ಮತ ಚಲಾಯಿಸಿದ್ದಾರೆ. ಫೆಬ್ರವರಿ 8ಕ್ಕೆ ಫಲಿತಾಂಶ ಹೊರಬೀಳಲಿದೆ.

## ಮುಖ್ಯಮಂತ್ರಿ 'ಸಿದ್ದರಾಮಯ್ಯ' ಅವರನ್ನು ಬದಲಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ : ಸಚಿವ ಕೆ.ಹೆಚ್.ಮುನಿಯಪ್ಪ

• ಉದಯವಾಹಿನಿ, ಬೆಳಗಾವಿ

**ಸುವ್ಯವಸ್ಥಿತ ಬಜೆಟ್ ಮಂಡಿಸುವ ನಿರೀಕ್ಷೆ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದಲ್ಲಿ ಉತ್ತಮ ಆಡಳಿತ ನೀಡುತ್ತಿದ್ದು ಅವರನ್ನು ಬದಲಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.


ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಮುನಿಯಪ್ಪ, ನಾಯಕತ್ವ ಬದಲಾವಣೆ ವಿಚಾರ ಬಂದಾಗ ಕಾಂಗ್ರೆಸ್ ಹೈಕಮಾಂಡ್ ಬಗೆಹರಿಸುತ್ತದೆ ಎಂದು ಹೇಳಿದರು. ಆದಾಗ್ಯೂ, ಪ್ರಸ್ತುತ ಅಂತಹ ಯಾವುದೇ ಪರಿಸ್ಥಿತಿ ಇಲ್ಲ ಎಂದು ಅವರು ಒತ್ತಿ ಹೇಳಿದರು. ಸಿದ್ದರಾಮಯ್ಯ ಅವರ ಆಡಳಿತವು ರಾಜ್ಯದ ಜನರಿಗೆ ಪ್ರಮುಖ ಖಾತರಿಗಳು ಮತ್ತು ಪ್ರಯೋಜನಕಾರಿ ಕಾರ್ಯಕ್ರಮಗಳು ಸೇರಿದಂತೆ ಪರಿಣಾಮಕಾರಿ ಆಡಳಿತವನ್ನು ಜಾರಿಗೆ ತರುತ್ತಿದೆ ಎಂದು ಅವರು ಒತ್ತಿ ಹೇಳಿದರು. ಮುಖ್ಯಮಂತ್ರಿಗಳು ಶೀಘ್ರದಲ್ಲೇ ಸುವ್ಯವಸ್ಥಿತ ಬಜೆಟ್ ಮಂಡಿಸುವ ನಿರೀಕ್ಷೆಯಿದೆ ಎಂದು ಮುನಿಯಪ್ಪ ಉಲ್ಲೇಖಿಸಿದ್ದು, ನಾಯಕತ್ವ ಬದಲಾವಣೆಗೆ ಯಾವುದೇ ಕಾರಣವಿಲ್ಲ ಎಂಬ ಕಲ್ಪನೆಯನ್ನು ಮತ್ತಷ್ಟು ಗಟ್ಟಿಗೊಳಿಸಿದೆ. ಕೆಲವು ಸಚಿವರು ಮತ್ತು ಶಾಸಕರು ಹೈಕಮಾಂಡ್ ಭೇಟಿ ಮಾಡಲು ಮತ್ತು ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ಚರ್ಚಿಸಲು ನವದೆಹಲಿಗೆ ಪ್ರಯಾಣಿಸುತ್ತಿದ್ದಾರೆ ಎಂಬ ವರದಿಗಳ ಬಗ್ಗೆ ಕೇಳಿದಾಗ, ಅಂತಹ ಬೆಳವಣಿಗೆಗಳ ಬಗ್ಗೆ ನನಗೆ ತಿಳಿದಿಲ್ಲ ಎಂದು ಮುನಿಯಪ್ಪ ಹೇಳಿದರು.



## ವಿಜಯೇಂದ್ರರನ್ನ ಟೀಕಿಸಿದ್ರೆ ಮೋದಿಯನ್ನ ಟೀಕಿಸಿದಂತೆ

• ಉದಯವಾಹಿನಿ, ಬೆಂಗಳೂರು

ವಿಜಯೇಂದ್ರರನ್ನ ಟೀಕಿಸಿದ್ರೆ ಮೋದಿಯನ್ನ ಟೀಕಿಸಿದಂತೆ ಎಂದು ಎಂಪಿ ರೇಣುಕಾಚಾರ್ಯ ಹೇಳಿದ್ದಾರೆ. ಈ ಸಂಬಂಧ ಮಾತನಾಡಿದ ಅವರು, ನಮ್ಮ ಒಳಜಗಳದಿಂದ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ವಿಜಯೇಂದ್ರರನ್ನ ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿಸಿದರೆ ಬಿಜೆಪಿಗೆ 10 ಸೀಟೂ ಬರಲ್ಲ ಎಂದರು. ಪಕ್ಷದಲ್ಲಿನ ಬೆಳವಣಿಗೆ ನೋಡಿ ಜನ ಉಗೀತಿದ್ದಾರೆ, ಕಾರ್ಯಕರ್ತರಿಗೆ ನೋವಾಗಿದೆ. ನಾವು ಸೈಲೆಂಟ್ ಇದ್ವಿ, ಯಡಿಯೂರಪ್ಪ, ವಿಜಯೇಂದ್ರ ಮಾತಾಡಬೇಡಿ ಅಂದಿದ್ರು. ಆದ್ರೆ ನಮಗೆ ನೋವಾಗಿದೆ. ಹೀಗಾಗಿ ಇಂದು ತುರ್ತು ಸಭೆ ನಡೆಸಬೇಕಾಯಿತು ಅಂತ ಹೇಳಿದ್ದಾರೆ. ಕಳೆದ 3–4 ತಿಂಗಳಿಂದ ಜೆ.ಪಿ ನಡ್ಡಾ, ಅಮಿತ್ ಶಾ ಭೇಟಿ ಮಾಡಲಾಗಿಲ್ಲ ಯತ್ನಾಳ್ ತಂಡ ಭೇಟಿ ಮಾಡಿದ್ದೀವಿ ಅಂತ ಸುಳ್ಳು ಹೇಳಿಕೊಂಡು ಸ್ಟೋರಿಗಳನ್ನು ಪ್ಲಾಂಟ್ ಮಾಡಿಸ್ತಿದ್ದಾರೆ. ಭೇಟಿಯಾದ ಫೋಟೋ ಕೊಡಿ ಅಂದ್ರೆ ಇಲ್ಲ ತೆಗೀಬೇಡಿ ಅಂದಿದ್ದಾರೆ ಅಂತ ಹೇಳೀರಿ ಎಂದು ಅಸಮಾಧಾನ ಹೊರಹಾಕಿದ್ದಾರೆ.





ವಿಜಯೇಂದ್ರರನ್ನು ನೀವು ಕುಗ್ಗಿಸಲು ಆಗಲ್ಲ, ಯಡಿಯೂರಪ್ಪ ಕಾಲಿಗೆ ಚಕ್ರ ಕಟ್ಟಿ ಪಕ್ಷ ಕಟ್ಟಿದ್ರು. ಅದೇ ರೀತಿ ವಿಜಯೇಂದ್ರ ನಾಡಿನ ಯುವಕರ ಕಣ್ಮಣಿ ಆಗಿದ್ದಾರೆ. ಅಂಥವರ ಬಗ್ಗೆ ಮಾತಾಡ್ತೀರ ಮುಂದಿನ ವಾರ ನಾವು ಮತ್ತೆ ಸಭೆ ಮಾಡ್ತೀವಿ. 100ಕ್ಕೂ ಹೆಚ್ಚು ಜನ ಸೇರಿ ದೊಡ್ಡ ಸಭೆ ಮಾಡ್ತೀವಿ. ಪಕ್ಷ ಕಟ್ಟೋ ಶಕ್ತಿ ವಿಜಯೇಂದ್ರಗೆ ಮಾತ್ರ ಇದೆ ಅನ್ನೋದು ನಿಜ. ವಿಜಯೇಂದ್ರರನ್ನ ಟೀಕೆ ಮಾಡೋದು ಮೋದಿ, ಅಮಿತ್ ಶಾ ನಡ್ಡಾರನ್ನ ಟೀಕೆ ಮಾಡಿದಂತೆ ಎಂದು ನುಡಿದಿದ್ದಾರೆ.

# ಪಕ್ಷ ಶುದ್ಧೀಕರಣವಾಗದೆ ಬಿಜೆಪಿ ಸೇರಲ್ಲ, ಸೇರಿದರೂ ಕ್ರಾಂತಿವೀರ ಬ್ರಿಗೇಡ್ ನಿಲ್ಲುವುದಿಲ್ಲ

● ಎಲ್ಲ ರಾಜಕೀಯ ಪಕ್ಷಗಳೂ ಹಾಳಾಗಿ ಹೋಗಿವೆ. ● ಬಿಜೆಪಿಯಾದರೂ ಬೇಕು, ಕಾಂಗ್ರೆಸ್ ಬೇಡ ಎನ್ನುವ ಸ್ಥಿತಿ

• ಉದಯವಾಹಿನಿ, ಬೆಂಗಳೂರು

**ರಾಯಣ್ಣ ಬ್ರಿಗೇಡ್‌ಗೆ ಮರುಚಾಲನೆ**

ಭಾರತೀಯ ಜನತಾ ಪಕ್ಷ ಶುದ್ಧೀಕರಣವಾದರೆ ಮಾತ್ರ ನಾನು ಸೇರುತ್ತೇನೆ. ಇಲ್ಲದಿದ್ದರೆ ಹೋಗುವುದಿಲ್ಲ. ಎಲ್ಲಾ ರಾಜಕೀಯ ಪಕ್ಷಗಳೂ ಹಾಳಾಗಿ ಹೋಗಿವೆ. ಎಲ್ಲೂ ಸಿದ್ಧಾಂತ ಉಳಿದಿಲ್ಲ. ಬಿಜೆಪಿಯಾದರೂ ಬೇಕು, ಕಾಂಗ್ರೆಸ್ ಬೇಡ ಎನ್ನುವ ಸ್ಥಿತಿ ಇದೆ. ಅವೆಲ್ಲಕ್ಕೂ ಕ್ರಾಂತಿವೀರ ಬ್ರಿಗೇಡ್ ಚಟುವಟಿಕೆಗಳಿಗೂ ಸಂಬಂಧವಿಲ್ಲ.

ಒಂದು ವೇಳೆ ಬಿಜೆಪಿ ಸೇರಿದರೂ ಬ್ರಿಗೇಡ್ ಚಟುವಟಿಕೆಗಳನ್ನು ನಿಲ್ಲಿಸುವುದಿಲ್ಲ. ಮುಂದುವರಿಯಲಿದೆ. ಇದು ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಅವರ ಮಾತುಗಳು. ಬಿಜೆಪಿಯಲ್ಲಿದ್ದಾಗ ಕೈಬಿಟ್ಟಿದ್ದ ರಾಯಣ್ಣ ಬ್ರಿಗೇಡ್‌ಗೆ ಮರುಚಾಲನೆ ನೀಡಿರುವ ಅವರು, ಬ್ರಿಗೇಡ್‌ನ ಉದ್ದೇಶ, ಮುಂದಿನ ಕಾರ್ಯಯೋಜನೆಗಳ ಜತೆಗೆ ಪ್ರಚಲಿತ ರಾಜ್ಯ ರಾಜಕಾರಣದ ಬಗ್ಗೆಯೂ ಪ್ರಸ್ತಾವಿಸಿದ್ದಾರೆ. ಇತ್ತೀಚೆಗೆ ಹಿಂದೂ ಧರ್ಮಕ್ಕೆ ಅವಮಾನ ಮಾಡುವಂತಹ ದುಷ್ಕೃತ್ಯಗಳು ನಡೆಯುತ್ತಿವೆ. ಹಸುವಿನ ಕೆಚ್ಚಲು ಕತ್ತರಿಸುವುದು, ಬಾಲ ಕತ್ತರಿಸುವ ಕೆಲಸಗಳಾಗುತ್ತಿವೆ. ಸನಾತನ ಧರ್ಮ ಮತ್ತು ದೇಶ ರಕ್ಷಣೆಯ ವಿಚಾರದಲ್ಲಿ ರಾಜೀ ಆಗುವುದಿಲ್ಲ. ಹಿಂದೂ ಧರ್ಮಕ್ಕೆ ಅವಮಾನ ಆಗುವುದನ್ನು ಸಹಿಸುವುದಿಲ್ಲ ಎನ್ನುವ ಸಂದೇಶ ನೀಡುವ ಸಲುವಾಗಿಯೇ ಬ್ರಿಗೇಡ್ ಸ್ಥಾಪಿಸಲಾಗಿದೆ. ಸಾಧು-ಸಂತರು ಆರ್ಥಿಕ ದುಃಸ್ಥಿತಿ ಎದುರಿಸುತ್ತಿದ್ದು ಮಠ- ಮಂದಿರಗಳು ಗುಡಿಸಲಿನಲ್ಲಿ ನಡೆಯುತ್ತಿವೆ. ಸಾಧು-ಸಂತರ ಮಠ-ಮಂದಿರಗಳ ಅಭಿವೃದ್ಧಿ ಆಗಬೇಕೆಡವೇ ಭಕ್ತಿಯ ಜತೆಗೆ ಸ್ನಾನ, ಶುಭವಸ್ತ್ರಧಾರಣೆ ಬಗ್ಗೆಯೂ ಅರ್ಚಕರಿಗೆ ತರಬೇತಿ ಕೊಡಬೇಕಿದೆ. ಶಿಥಿಲಾವಸ್ಥೆಯಲ್ಲಿರುವ ಸಣ್ಣ ದೇವಾಲಯಗಳ ಜೀರ್ಣೋದ್ಧಾರ ಆಗಬೇಕು. ಹಿಂದು ಸಮಾಜಕ್ಕೆ ಬೇರೆಯವರ ಮೂಲಕ ಆಗುತ್ತಿರುವ ಅನ್ಯಾಯ ಸರಿಪಡಿಸಲು ಬ್ರಿಗೇಡ್ ಆರಂಭಿಸುತ್ತಿದ್ದೇವೆ. ಹಿಂದೂ ಹೆಣ್ಣು ಮಕ್ಕಳ ಅತ್ಯಾಚಾರ, ಲವ್ ಜೆಹಾದ್ ಹೆಸರಿನಲ್ಲಿ ಅನ್ಯಾಯ ಮಾಡುವುದನ್ನು ತಪ್ಪಿಸಬೇಕಿದೆ. ಪಹಣಿಯಲ್ಲಿ ವಕ್ಸ್ ಆಸ್ತಿ ಎಂದು ಬದಲಿಸಿದ್ದಾರೆ. ರೈತರಿಗೂ ರಕ್ಷಣೆ ಸಿಗಬೇಕು.



> ಡಿ.ಕೆ.ಶಿವಕುಮಾರ್ ಕುಂಭಮೇಳಕ್ಕೆ ಹೋಗುವುದಾಗಿ ಹೇಳಿದ್ದಾರೆ. ಸ್ಪೀಕರ್ ಯು.ಟಿ.ಖಾದರ್ ಹೋಗಿ ಬಂದಿದ್ದಾರೆ. 45 ಕೋಟಿ ಜನರಲ್ಲಿ ಕಾಂಗ್ರೆಸ್, ಬಿಜೆಪಿ, ಜೆಡಿಎಸ್‌ನವರು ಎಲ್ಲರೂ ಇದ್ದಾರೆ. ಸಾಧು- ಸಂತರಿದ್ದಾರೆ. ಎಲ್ಲರಿಗೂ ಅವಮಾನ ಮಾಡಿದಂತೆ ಅಲ್ಲವೇ ಅಷ್ಟಿದ್ದರೆ ಕುಂಭಮೇಳಕ್ಕೆ ಹೋದ ಕಾಂಗ್ರೆಸಿಗರನ್ನು ಅವರ ಪಕ್ಷದಿಂದ ಅಮಾನತು ಮಾಡಲಿ.
>
> –ಈಶ್ವರಪ್ಪ, ಮಾಜಿ ಸಚಿವ

ಸಾಧು-ಸಂತರ,ದೇವಸ್ಥಾನಗಳು, ಪುಣ್ಯಕ್ಷೇತ್ರ, ಮಹಿಳೆಯರ ರಕ್ಷಣೆಗಾಗಿ ಬ್ರಿಗೇಡ್ ಕೆಲಸ ಮಾಡಲಿದೆ.

1008 ಸ್ವಾಮೀಜಿಗಳು ನಮ್ಮ ಹಿಂದೆ ಇದ್ದಾರೆ. ಅವರೆಲ್ಲರ ಪಾದಪೂಜೆ ಮಾಡಿ, ಆಶೀರ್ವಾದ ಪಡೆದು, ಅವರ ಮಾರ್ಗದರ್ಶನದೊಂದಿಗೆ ಕ್ರಾಂತಿವೀರ ಬ್ರಿಗೇಡ್ ಶುರು ಮಾಡಿದ್ದೇವೆ.

**ವಿಶ್ವಾಸಕ್ಕೆ ತೆಗೆದುಕೊಳ್ಳುವ ವ್ಯಕ್ತಿಯನ್ನು ನಾಯಕರನ್ನಾಗಿ ಆಯ್ಕೆ ಮಾಡಬೇಕು**

ಕುಂಭಮೇಳಕ್ಕೆ ಹೋಗಿ ಸ್ನಾನ ಮಾಡಿ ಬಂದರೆ ಹೊಟ್ಟೆ ತುಂಬುತ್ತದೆಯೇ ಎಂದು ಪ್ರಶ್ನಿಸುತ್ತಾರೆ. ಇವರಿಗೆ ತಾಕತ್ತಿದ್ದರೆ, ಮುಸ್ಲಿಮರ ಮೆಕ್ಕಾ, ಮದಿನಾ ಬಗ್ಗೆ ಟೀಕಿಸಲಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಹೋಗುವ ಜೆರುಸಲೇಂ ಬಗ್ಗೆ ಟೀಕೆ ಮಾಡಲಿ ನೋಡೋಣ.ಹಿಂದೂ ಸಮಾಜ ಹೇಗಿದ್ದರೂ ಸುಮ್ಮನಿರುತ್ತದೆ ಎಂದುಕೊಂಡಿದ್ದಾರೆ. ನಾವು ಶಾಂತಿಯಿಂದ ಇರುವುದನ್ನು ದೌರ್ಬಲ್ಯ ಎಂದುಕೊಂಡಿದ್ದಾರೆ.

ಈ ಹಿಂದೆ ನೀವು ಬಿಜೆಪಿಯಲ್ಲಿದ್ದಾಗ ರಾಯಣ್ಣ ಬ್ರಿಗೇಡ್ ಶುರು ಮಾಡಿದ್ದೀರಿ. ಅದನ್ನೇಕೆ ನಿಲ್ಲಿಸಿದಿರಿ ಬಿಜೆಪಿ ನಿಮ್ಮ ಕೈಕಟ್ಟಿ ಹಾಕಿತ್ತೇ ಆಗ ನಾವುಗಳೇ ಶುರು ಮಾಡಿದ್ದೆವು. ಸಾಧು-ಸಂತರು ಇರಲಿಲ್ಲ. ಈಗ ಸಾಧು-ಸಂತರು ಸಹಕಾರ ಕೇಳಿದ್ದಾರೆ. ಸಂಪೂರ್ಣ ಸಹಕಾರ ಕೊಡುತ್ತಿದ್ದೇವೆ. ಆಗ ಬಿಜೆಪಿ ರಾಷ್ಟ್ರೀಯ ನಾಯಕರ ಸೂಚನೆ ಮೇರೆಗೆ ಕೈಬಿಟ್ಟಿದ್ದೆವು. ವಿಧಿಯಿಲ್ಲದೆ, ದೊಡ್ಡವರ ಮಾತು ಕೇಳಬೇಕಾಗಿ ಬಂದಿತ್ತು. ಆದರೀಗ ಅದನ್ನು ಕೈಬಿಟ್ಟಿದ್ದು ತಪ್ಪು ಎಂದು ಎಲ್ಲರಿಗೂ ನಿಧಾನವಾಗಿ ಅರ್ಥವಾಗುತ್ತಿದೆ. ಅಂದು ಹಿಂದುಳಿದವರು, ದಲಿತರಿಗೆ ನ್ಯಾಯ ಕೊಡಿಸಲು ಹೊರಟಿದ್ದೆವು. ಆಗಲೂ ಯಾರೂ ಕೈ ಕಟ್ಟಿ ಹಾಕಿರಲಿಲ್ಲ. ಈಗಲೂ ಯಾರೂ ಕೈ ಕಟ್ಟಿ ಹಾಕಿಲ್ಲ. ಕೆಲವರು ಹೋಗಿ ಕೇಂದ್ರ ನಾಯಕರಿಗೆ ದೂರು ಕೊಟ್ಟಿದ್ದರು. ಮಾಡುತ್ತಿರುವ ಉದ್ದೇಶ ಸರಿ ಇದೆಯಲ್ಲವೇ ಏಕೆ ನಿಲ್ಲಿಸಬೇಕು ಎಂದು ವರಿಷ್ಠರೂ ಕೇಳಿದ್ದರು. ಭಂಡತನ ಮಾಡಿ ಒತ್ತಡ ಹಾಕಿದ್ದರಿಂದ ಅಮಿತ್ ಶಾ ಕೈಬಿಡಿ ಎಂದಿದ್ದರು, ನಿಲ್ಲಿಸಿದ್ದೆವು. ಕ್ರಾಂತಿವೀರ ಬ್ರಿಗೇಡ್‌ನಿಂದ ರಾಜ್ಯ, ದೇಶ, ಧರ್ಮಕ್ಕೆ ಒಳ್ಳೆಯದಾಗುತ್ತದೆ ಎಂದು ಮನದಟ್ಟು ಮಾಡಿಸುವ ಶಕ್ತಿ ಈಗ ಇದೆ ಮಾಡುತ್ತೇನೆ. ಇದರ ಚಟುವಟಿಕೆಯನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ. ಸಿದ್ದರಾಮಯ್ಯರನ್ನು ಬೇರೆ ಅಹಿಂದ. ರಾಜಕೀಯವಾಗಿ ಅಹಿಂದ ಎನ್ನುವವರು ಅವರು. ದೇಶ, ಧರ್ಮ ಉಳಿಸಲು ಹಿಂದುಳಿದ ವರ್ಗ, ದಲಿತರು ಸೇರಿದಂತೆ ಸಕಲ ಹಿಂದೂ ಸಮಾಜಕ್ಕೆ ಒಳಿತು ಮಾಡುವ ಪ್ರಕ್ರಿಯೆ ನಮ್ಮದು. ಮಲ್ಲಿಕಾರ್ಜುನ ಖರ್ಗೆಯಂತಹ ಹಿರಿಯರು ಕುಂಭಮೇಳದ ಬಗ್ಗೆ ಟೀಕೆಗೆ ಮಾಡಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹8,624 /Gram24ct ₹7,905/Gram22ct ಬೆಳ್ಳಿ: ₹99.50/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಶೂದ್ರಸ್ತು ಯಸ್ಮಿನ್ ಕಸ್ಮಿನ್ ವಾ.

ಮನುಸ್ಮೃತಿಯ ಎರಡನೇ ಅಧ್ಯಾಯದ ಮಾತು. ಪೂರ್ವ ಹಾಗೂ ದಕ್ಷಿಣದ ಹಿಂದೂ ಮಹಾಸಾಗರ, ಪಶ್ಚಿಮದ ಅರಬ್ಬೀ ಸಮುದ್ರ ಮತ್ತು ಉತ್ತರದ ಹಿಮಾಲಯದ ವಿಂಧ್ಯ ಪರ್ವತಶ್ರೇಣಿಗಳ ನಡುವಿನ ವಿಶಾಲ ದೇಶ ಆರ್ಯಾವರ್ತ. ಆರ್ಯ = ಪೂಜ್ಯ. ಪೂಜ್ಯರು ಶ್ರೇಷ್ಠ ಜನರು ಉದಿಸುವ ವಾಸಿಸುವ ದೇಶ ಆರ್ಯಾವರ್ತ. ಕೃಷ್ಣಮೃಗ = ಕಸ್ತೂರೀಮೃಗ ಚಮರೀಮೃಗ ( ಇದರ ಕೂದಲಿನಿಂದ ದೇವರಿಗೆ ಬೀಸುವ ಚಾಮರ ಮಾಡುವರು. ಈ ಮೃಗದ ಹೊಕ್ಕಳಿನಿಂದ ಸುವಾಸನೆ ಹೊರಸೂಸುವುದು.) ಸಹಜವಾಗಿ ವಾಸಿಸುವ ಪ್ರದೇಶ ಯಜ್ಞಭೂಮಿ. ಇದು ವಿಶೇಷವಾಗಿ ಕಾಶ್ಮೀರ. ಪಾಂಡಿತ್ಯದ ಶಿಖರ. ಅದಕ್ಕೆಂದೇ ಶಾರದೆ ಕಾಶ್ಮೀರ ಪುರವಾಸಿನೀ. ಅದರಾಚೆ ಮ್ಲೇಚ್ಛ = ಮುಸ್ಲಿಮರ ವಾಸ. ಆದರಿಂದು ಕಾಶ್ಮೀರ ಮುಸ್ಲಿಮಬಹುಸಂಖ್ಯಾತ ಪ್ರದೇಶವಾಗಿರುವುದು. ಇದು ರಾಜಕೀಯ ಪ್ರೇರಿತ. ದ್ವಿಜರಾದ ಬ್ರಾಹ್ಮಣ ಕ್ಷತ್ರಿಯ ಹಾಗೂ ವೈಶ್ಯರು ಆರ್ಯಾವರ್ತದಲ್ಲಿ ಯಜ್ಞಭೂಮಿಯಲ್ಲಿಯೇ ವಾಸಿಸಬೇಕು. ಶೂದ್ರರು ಅವರ ಕರ್ತವ್ಯಕ್ಕೆ ಅನುಗುಣವಾಗಿ ಯಾವ ಪ್ರದೇಶದಲ್ಲಿಯಾದರೂ ವಾಸಿಸಬಹುದು. ಮೇಲು ಕೀಳು ವ್ಯವಸ್ಥೆ ಇಲ್ಲೂ ತೂರಿದೆ.

## ಹರಿನಾಮ ಸಂಕೀರ್ತನೆ

• ಉದಯವಾಹಿನಿ, ಬೆಂಗಳೂರು



ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿ ಯಿಂದ ಫೆಬ್ರವರಿ 6, ಗುರುವಾರ ಸಂಜೆ 5-30ಕ್ಕೆ ಹರಿನಾಮ ಸಂಕೀರ್ತನೆ. ಗಾಯನ ಶ್ರೀಮತಿ ಸುಷ್ಮಾ ಶ್ರೇಯಸ್, ಕೀ-ಬೋರ್ಡ್ ಶ್ರೀ ಟಿ.ಎಸ್. ರಮೇಶ್, ತಬಲಾ ಶ್ರೀ ಶ್ರೀನಿವಾಸ ಕಾಖಂಡಕಿ. ಸ್ಥಳ ನಂಜ ನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯ ನಗರ 5ನೇ ಬಡಾವಣೆ, ಬೆಂಗಳೂರು-41.

## ವಿಚಾರಣೆಗೆ ಹಾಜರಾಗುವಂತೆ ನಲಪಾಡ್‌ಗೆ ಎಸ್‌ಐಟಿ ನೋಟಿಸ್

• ಉದಯವಾಹಿನಿ, ಬೆಂಗಳೂರು

ಬಿಟ್ ಕಾಯಿನ್ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗುವಂತೆ ನಲಪಾಡ್‌ಗೆ ಎಸ್‌ಐಟಿ ನೋಟಿಸ್ ನೀಡಿದೆ.ಫೆ.7 ರಂದು ವಿಚಾರಣೆಗೆ ಹಾಜರಾಗುವಂತೆ ನಲಪಾಡ್‌ಗೆ ಎಸ್ ಐ ಟಿ ನೋಟಿಸ್ ನೀಡಿದೆ ಎಂಬ ಮಾಹಿತಿ ಲಭ್ಯವಾಗಿದೆ. ಬಿಟ್ ಕಾಯಿನ್ ಹಗರಣದಲ್ಲಿ ಶ್ರೀಕಿ ಜೊತೆ ಕೈ ಜೋಡಿಸಿರುವ ಆರೋಪ ಕೇಳಿಬಂದಿದ್ದು, ಈ ಹಿನ್ನೆಲೆ ಎಸ್ ಐ ಟಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದೆ.

## ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಉನ್ನತ ಶಿಕ್ಷಣ ಸಚಿವರುಗಳ ಸಮ್ಮೇಳನ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಬುಧವಾರ ರಾಜ್ಯ ಉನ್ನತ ಶಿಕ್ಷಣ ಸಚಿವರುಗಳ ಸಮ್ಮೇಳನದಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್, ಗೃಹ ಸಚಿವ ಡಾ. ಜಿ ಪರಮೇಶ್ವರ, ಉನ್ನತ ಶಿಕ್ಷಣ ಸಚಿವ ಡಾ. ಎಂ ಸಿ ಸುಧಾಕರ್,ತೆಲಾಂಗಣ ಐಟಿ ಮತ್ತು ಕೈಗಾರಿಕೆ ಸಚಿವ ಶ್ರೀಧರ್ ಬಾಬು, ತಮಿಳುನಾಡು ಉನ್ನತ ಶಿಕ್ಷಣ ಸಚಿವ ಡಾ.ಗೋವಿ ಚೆಳಿಯನ್, ಕೇರಳ ಉನ್ನತ ಶಿಕ್ಷಣ ಸಚಿವೆ ಡಾ. ಆರ್ ಬಿಂದು,

ಹಿಮಾಚಲ ಪ್ರದೇಶ ಶಿಕ್ಷಣ ಸಚಿವ ರೋಹಿತ್ ಥಾಕುರ್, ಜಾರ್ಖಂಡ್ ಉನ್ನತ ಮತ್ತು ತಾಂತ್ರಿಕ ಶಿಕ್ಷಣ ಸಚಿವ ಸುದಿವ್ಯ ಕುಮಾರ್ ಭಾಗವಹಿಸಿದ್ದರು.

ಮಹಾರಾಷ್ಟ್ರ ಉನ್ನತ ಶಿಕ್ಷಣ ಸಚಿವ ಡಾ. ಚಂದ್ರಕಾಂತ್ ಪಾಟೀಲ್ ವಿಡಿಯೋ ಕಾನ್ಸರೆನ್ಸ್ ಮೂಲಕ ಪಾಲ್ಗೊಂಡರು. ಕರ್ನಾಟಕ ಉನ್ನತ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ಶ್ರೀಕರ ತಮಿಳುನಾಡಿನ ವಿಜಯಕುಮಾರ್, ತೆಲಾಂಗಣದ ದೇವಸೇನಾ, ಜಾರ್ಖಂಡ್ ರಾಮನಿವಾಸ್ ಯಾದವ್, ಹಿಮಾಚಲ ಪ್ರದೇಶದ ರಾಕೇಶ್ ಕನ್ನರ್ ಉಪಸ್ಥಿತರಿದ್ದರು.

## ಅಶೋಕ್ ಅವರೇ ನಿಮ್ಮ ತಟ್ಟೆಯಲ್ಲಿ ಹೆಗ್ಗಣ ಬಿದ್ದಿದೆ, ಅದನ್ನ ಮೊದಲು ತೆಗೆದುಕೊಳ್ಳಿ

• ಉದಯವಾಹಿನಿ, ಬೆಂಗಳೂರು

ಅಶೋಕ್ ಅವರೇ ನಿಮ್ಮ ತಟ್ಟೆಯಲ್ಲಿ ಹೆಗ್ಗಣ ಬಿದ್ದಿದೆ. ಅದನ್ನ ಮೊದಲು ತೆಗೆದುಕೊಳ್ಳಿ ಎಂದು ಮಾಜಿ ಸಚಿವ, ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ವ್ಯಂಗ್ಯವಾಡಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಅಶೋಕ್ ಅವರು ವಿಪಕ್ಷಗಳ ನಾಯಕ ಅವರು ನಿತ್ಯ ಏನಾದರೂ ಹೇಳಬೇಕು.ಇಲ್ಲದೇ ಹೋದರೆ ಮೇಲಿನವರು ಏನು



ಮಲಗಿದ್ದೀರಾ ಎಂದು ಕೇಳುತ್ತಾರೆ.ಹೀಗಾಗಿ ಸುದ್ದಿಯಲ್ಲಿ ಇರಬೇಕು ಎಂದು ಈ ರೀತಿಯಾಗಿ ಹೇಳುತ್ತಾರೆ. ಅಶೋಕ್ ಅವರೇ ನಿಮ್ಮ ತಟ್ಟೆಯಲ್ಲಿ ಹೆಗ್ಗಣ ಬಿದ್ದಿದೆ. ಅದನ್ನ ಮೊದಲು ತೆಗೆದುಕೊಳ್ಳಿ. ಅವರ ತಟ್ಟೆಯ ನೊಣದ ಬಗ್ಗೆ ಯಾಕೆ ಚಿಂತೆ ಮಾಡ್ತೀರಾ? ನಿಮ್ಮ ಪಕ್ಷದಲ್ಲಿ ಏನು ನಡೆದಿದೆ ನೋಡಿಕೊಳ್ಳಿ. ಬೇರೆ ಪಕ್ಷದ ಬಗ್ಗೆ ಮಾತಾಡುವ ಯಾವ ನೈತಿಕತೆ ನಿಮಗಿದೆ ಎಂದು ಕಿಡಿಕಾರಿದರು.

ವಿಪಕ್ಷ ನಾಯಕ ಆಗಿ ಅವರ ಪಕ್ಷ ಸರಿ ಮಾಡಿಕೊಳ್ಳೋ ಬಗ್ಗೆ ಅಶೋಕ್ ಗಮನ ಕೊಡಲಿ, ನಿನ್ನ ಟೆಂಟ್ ಕಿತ್ತು ಹೊರಟಿದೆ. ಬೇರೆಯವರ ಟೆಂಟ್ ಬಗ್ಗೆ ಯಾಕೆ ಆಲೋಚನೆ ಮಾಡ್ತೀಯಾ? ಬಿಜೆಪಿಯಲ್ಲಿ ಅಧ್ಯಕ್ಷನ ಜೊತೆಗೆ ವಿಪಕ್ಷ ನಾಯಕನ ಬದಲಾವಣೆ ಬಗ್ಗೆಯೂ ಚರ್ಚೆ ಆಗ್ತಿದೆ.

ಬಿಜೆಪಿಯಲ್ಲಿ ಅಧ್ಯಕ್ಷರು ಬದಲಾವಣೆ ಆದ ಸಮಯದಲ್ಲಿ ವಿಪಕ್ಷ ನಾಯಕ ಬದಲಾವಣೆ ಆಗಬೇಕು ಅಂತ ಚರ್ಚೆ ನಡೆದಿದೆ. ಬಿಜೆಪಿಯಲ್ಲಿ ಬಹಳಷ್ಟು ಸ್ನೇಹಿತರು ನನಗೆ ಇದ್ದಾರೆ. ಅವರೇ ಹೇಳಿದ್ದಾರೆ. ಬಿಜೆಪಿಯಲ್ಲಿ ಎರಡು ಕುರ್ಚಿ ಮೇಲೆ ಟವಲ್ ಹಾಕಿ ಕೂತಿದ್ದಾರೆ. ಕುರ್ಚಿ ಉಳಿಸಿಕೊಳ್ಳಲು ಜನರ ದಿಕ್ಕು ಬೇರೆಡೆಗೆ ಸೆಳೆಯಲು ಹೀಗೆ ಮಾತಾಡ್ತಿದ್ದಾರೆ. ಅಶೋಕ್ ಅಣ್ಣ ನಿನ್ನ ಸೀಟನ್ನು ಭದ್ರವಾಗಿ ಇಟ್ಟುಕೋ, ಆಮೇಲೆ ಬೇರೆ ಅವರ ಸೀಟಿನ ಬಗ್ಗೆ ಚರ್ಚೆ ಮಾಡಿ ವ್ಯಂಗ್ಯವಾಡಿದರು.

## ಐಷರಾಮಿ ಕಾರುಗಳ ವಿಲ್ ಕದಿಯುತ್ತಿದ್ದ ಇಬ್ಬರು ಖತರ್ನಾಕ್ ಕಳ್ಳರು ಅಂದರ್

• ಉದಯವಾಹಿನಿ, ಬೆಂಗಳೂರು



ಬೆಂಗಳೂರಿನಲ್ಲಿ ಐಷಾರಾಮಿ ಕಾರುಗಳ ವೀಲ್‌ಗಳನ್ನು ಕದ್ದು ಅಂಗಡಿಗಳಿಗೆ ಹಾಗೂ ಆನ್ಲೈನ್ ಮುಖಾಂತರ ಮಾರಾಟ ಮಾಡುತ್ತಿದ್ದ ಇಬ್ಬರು ಖತರ್ನಾಕ್ ಕಳ್ಳರನ್ನು ಇದೀಗ ಪೊಲೀಸರು ಅರೆಸ್ಟ್ ಮಾಡಿದ್ದಾರೆ.

ಹೌದು ಬೆಂಗಳೂರಲ್ಲಿ ಕಾರ್ ಟೈರ್ ಕದಿಯುತ್ತಿದ್ದ ಗ್ಯಾಂಗ್ ಅನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ.ಮನೆಯ ಮುಂದೆ ನಿಲ್ಲಿಸಿದಂತಹ ಕಾರ್ ಟೈರ್ ಗಳನ್ನು ಕದಿಯುತ್ತಿದ್ದ ಹೈದರ್ ಅಲಿ ಹಾಗೂ ಗೌಸ್ ಬೇಗ್ ಎನ್ನುವ ಆರೋಪಿಗಳನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ರಾತ್ರಿಯಲ್ಲಿ ಸ್ಕೂಟಿಯಲ್ಲಿ ಬಂದು ವಿಲ್ ಕದ್ದು ಪರಾರಿಯಾಗುತ್ತಿದ್ದರು. ಅಂಗಡಿ ಹಾಗೂ ಆನ್ಲೈನ್ ಮೂಲಕ ವಿಲ್ ಗಳನ್ನು ಸೇಲ್ ಮಾಡುತ್ತಿದ್ದರು. ಸದ್ಯ ಆರೋಪಿಗಳಿಂದ 60 ಮ್ಯಾಗ್ ವೀಲ್ ಗಳನ್ನು ಪೊಲೀಸರ ವಶಕ್ಕೆ ಪಡೆದುಕೊಂಡಿದ್ದು, ಆರೋಪಿಗಳ ಬಂಧನದಿಂದ 20 ಪ್ರಕರಣಗಳು ಇದೀಗ ಪತ್ತೆಯಾಗಿವೆ.

---

ದೇಶೀಯವಾಗಿ ಅಭಿವೃದ್ಧಿಪಡಿಸಲಾದ ರೇಡಿಯೋ ಕಾಲರ್ ಲೋಕಾರ್ಪಣೆಗೊಳಿಸಿದ ಸಚಿವ ಈಶ್ವರ್ ಖಂಡ್ರೆ

# ಆನೆಗಳಿಗೆ ರೇಡಿಯೋ ಕಾಲರ್ ಅಳವಡಿಸಿ ಸ್ಥಳೀಯರಿಗೆ ಮಾಹಿತಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರೇಡಿಯೋ ಕಾಲರ್ ಮಾತ್ರ ಸಿದ್ಧ

ಕೊಡಗು, ಚಿಕ್ಕಮಗಳೂರು, ಹಾಸನ ಸುತ್ತಮುತ್ತ ಆನೆಗಳು ನಾಡಿನಲ್ಲೇ ಸಂಚರಿಸುತ್ತಿದ್ದು ಸಾಮಾನ್ಯವಾಗಿ ಗುಂಪಿನ ನಾಯಕತ್ವ ವಹಿಸುವ ಹೆಣ್ಣಾನೆಗಳಿಗೆ ದೇಶೀ ನಿರ್ಮಿತ ರೇಡಿಯೋ ಕಾಲರ್ ಅಳವಡಿಸುವ ಮೂಲಕ ಆನೆ ಚಲನ ವಲನದ ಬಗ್ಗೆ ಸ್ಥಳೀಯರಿಗೆ ಮಾಹಿತಿ ನೀಡಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ, ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ತಿಳಿಸಿದ್ದಾರೆ.

ಅರಣ್ಯ ಭವನದಲ್ಲಿಂದು ಕರ್ನಾಟಕ ಅರಣ್ಯ ಇಲಾಖೆ ಬೆಂಗಳೂರಿನ ಇನ್‌ಫಿಕ್ಷನ್ ಲ್ಯಾಟ್ಸ್ ಪ್ರೈವೇಟ್ ಲಿಮಿಟೆಡ್ ಜೊತೆಗೂಡಿ ಅಭಿವೃದ್ಧಿ ಪಡಿಸಿರುವ ವೆಚ್ಚದಕ್ಷ ಕರ್ನಾಟಕ-ಪರಿಶೋಧಿತ ಪತ್ತೆ ಸಾಧನ (ಕೆ.ಪಿ. ಟ್ರ್ಯಾಕರ್) ಎಂಬ ಹೆಸರಿನ ರೇಡಿಯೋ ಕಾಲರ್ ಗಳನ್ನು ಬಂಡೀಪುರ, ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಅಧಿಕಾರಿಗಳಿಗೆ ಹಸ್ತಾಂತರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

6395 ಆನೆಗಳನ್ನು ಹೊಂದಿರುವ ಕರ್ನಾಟಕ ದೇಶದಲ್ಲಿ ಆನೆಗಳ ಸಂಖ್ಯೆಯಲ್ಲಿ ಅಗ್ರಸ್ಥಾನದಲ್ಲಿದೆ. ಆದರೆ ಆನೆಗಳ ಸಂಖ್ಯೆಗೆ ಅನುಗುಣವಾಗಿ ವನ ಪ್ರದೇಶ ಹೆಚ್ಚಳವಾಗದ ಕಾರಣ ಆನೆ-ಮಾನವ ಸಂಘರ್ಷ ಹೆಚ್ಚುತ್ತಿದೆ. ಅಮೂಲ್ಯವಾದ ಜೀವ ಉಳಿಸಲು ಆನೆಗಳಿಗೆ ರೇಡಿಯೋ ಕಾಲರ್ ಅಳವಡಿಸಿ ಸ್ಥಳೀಯರಿಗೆ ಮಾಹಿತಿ ನೀಡಲು ಸರ್ಕಾರ ಪ್ರಯತ್ನ ಮಾಡುತ್ತಿದೆ ಎಂದರು. ಈವರೆಗೆ ದಕ್ಷಿಣ ಆಫ್ರಿಕಾ ದೇಶದ ಆಫ್ರಿಕನ್ ವೈಲ್ಡ್ ಲೈಫ್ ಟ್ರಾಕಿಂಗ್, ಜರ್ಮನಿಯ ವೆಕ್ಟೋನಿಕ್ ಸಂಸ್ಥೆಗಳಿಂದ ಈ ರೇಡಿಯೋ ಕಾಲರ್ ಗಳನ್ನು

> **ವಿದೇಶದಿಂದ ಆಮದು ಮಾಡಿಕೊಳ್ಳಲಾಗುತ್ತಿದ್ದ ರೇಡಿಯೋ ಕಾಲರ್‌ಗಳಿಂದ ನಮ್ಮ ಕಾಡು ಮತ್ತು ವನ್ಯಜೀವಿಗಳ ಮಾಹಿತಿ ಸೋರಿಕೆ ಆಗುವ ಅಪಾಯವೂ ಇತ್ತು ಈಗ ದೇಶೀಯವಾಗಿ ಈ ರೇಡಿಯೋ ಕಾಲರ್ ಅಭಿವೃದ್ಧಿ ಪಡಿಸಿರುವುದರಿಂದ ಅಂತಹ ಅಪಾಯ ಇರುವುದಿಲ್ಲ. ದತ್ತಾಂಶ ಕೂಡ ಸ್ಥಳೀಯ ಸರ್ವರ್‌ಗಳಲ್ಲಿ ಸುರಕ್ಷತವಾಗಿರುತ್ತದೆ ಎಂದು ಈಶ್ವರ ಖಂಡ್ರೆ ವಿವರಿಸಿದರು.**

ಆಮದು ಮಾಡಿಕೊಳ್ಳಲಾಗುತ್ತಿತ್ತು. ಸಕಾಲದಲ್ಲಿ ಈ ರೇಡಿಯೋ ಕಾಲರ್ ಲಭ್ಯವಾಗುತ್ತಿರಲಿಲ್ಲ, ಜತೆಗೆ ಒಂದು ರೇಡಿಯೋ ಕಾಲರ್‌ಗೆ 6.5 ಲಕ್ಷ ರೂ. ವೆಚ್ಚತಗುಲುತ್ತಿತ್ತು. ಆದರೆ ಈಗ ದೇಶೀಯವಾಗಿ ಅಭಿವೃದ್ಧಿ ಪಡಿಸಿರುವ ರೇಡಿಯೋ ಕಾಲರ್ ಗೆ 1.80 ಲಕ್ಷ ರೂ. ಆಗುತ್ತದೆ. ಇದು ಹೆಚ್ಚಿನ ರೇಡಿಯೋಕಾಲರ್‌ಗಳು ಲಭ್ಯವಾಗುವಂತೆ

> **ಅರಣ್ಯ ಇಲಾಖೆ ತನ್ನ ಅಗತ್ಯಗಳಿಗೆ ಅನುಗುಣವಾಗಿ ಮತ್ತು ಪರಿಸರ ಸ್ನೇಹಿಯಾದ ಕಚ್ಚಾವಸ್ತುಗಳನ್ನೇ ಬಳಸಿ ಈ ರೇಡಿಯೋ ಕಾಲರ್ ತಯಾರಿಸಿದ್ದು, ವನ್ಯಜೀವಿಗಳಿಗಾಗಲೀ, ಪರಿಸರಕ್ಕಾಗಲೀ ಅಪಾಯವಾಗುವುದಿಲ್ಲ. ಒಂದೊಮ್ಮೆ ರೇಡಿಯೋ ಕಾಲರ್‌ಗಳಲ್ಲಿ ದೋಷ ಕಂಡು ಬಂದರೆ ದುರಸ್ತಿ ಮಾಡಲು, ಬ್ಯಾಟರಿ, ಬಲ್ಡ್, ಸರ್ಕ್ಯೂಟ್ ಬದಲಾಯಿಸಲು ಅವಕಾಶವಿದೆ. ಆದರೆ ಆಮದು ರೇಡಿಯೋ ಕಾಲರ್‌ಗಳಲ್ಲಿ ಈ ಅವಕಾಶ ಇರಲಿಲ್ಲ ಎಂದರು.**

ಮಾಡುವುದಲ್ಲದೆ, ವಿದೇಶೀ ಅವಲಂಬನೆ, ದುಬಾರಿ ವೆಚ್ಚತಗ್ಗಿಸುತ್ತದೆ, ವಿದೇಶೀ ವಿನಿಮಯವನ್ನೂ ಉಳಿಸುತ್ತದೆ ಎಂದು ಹೇಳಿದರು. ಜೊತೆಗೆ ಆಮದು ರೇಡಿಯೋ ಕಾಲರ್‌ಗಳ ತೂಕ 16 ರಿಂದ 17 ಕೆ.ಜಿ. ಇರುತ್ತಿತ್ತು. ಆದರೆ ಈಗ ದೇಶೀಯವಾಗಿ ಅಭಿವೃದ್ಧಿ ಪಡಿಸಲಾಗಿರುವ ಕಾಲರ್ ಕೇವಲ 7 ಕೆ.ಜಿ. ತೂಕವಿದ್ದು, ಇದು ಹಗುರವಾಗಿರುತ್ತದೆ ಎಂದರು.

ಮೊದಲ ಹಂತದಲ್ಲಿ ಆನೆಗಳ ರೇಡಿಯೋ ಕಾಲರ್ ಮಾತ್ರ ಸಿದ್ಧವಾಗಿದೆ. ಹುಲಿ ಮತ್ತು ಚಿರತೆ ಕಾಲರ್‌ಗಳ ಅಭಿವೃದ್ಧಿಯೂ ಪುಗತಿಯಲ್ಲಿದ್ದು, ಇದನ್ನು ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು ಎಂದು ಈಶ್ವರ ಖಂಡ್ರೆ ಮಾಹಿತಿ ನೀಡಿದರು.

ಕರ್ನಾಟಕ ಅರಣ್ಯ ಇಲಾಖೆಯ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಕುಮಾರ್ ಪುಷ್ಕರ್, ಇನ್‌ಫಿಕ್ಷನ್ ಲ್ಯಾಟ್ಸ್ ಪ್ರೈವೇಟ್ ಲಿಮಿಟೆಡ್ನ ತಾಂತ್ರಿಕ ತಜ್ಞ ಗುರುದೀಪ ಅವರು ಸ್ವದೇಶಿ ಜಿಎಸ್.ಎಂ ಆಧಾರಿತ ಆನೆ ರೇಡಿಯೋ ಕಾಲರ್ ಅಭಿವೃದ್ಧಿ ಪಡಿಸಿದ್ದಾರೆ. ಈ ಕಾಲರ್ ಗೆ ಕರ್ನಾಟಕ ಪರಿಶೋಧಿತ ಟ್ರ್ಯಾಕರ್ ಅಥವಾ ಕರ್ನಾಟಕ ಪ್ರಡ್ಯೂಸ್ಟ್ (ಕೆ.ಪಿ. ಟ್ರ್ಯಾಕರ್) ಎಂದು ಹೆಸರಿಸಲಾಗಿದೆ. ಈ ಸಂದರ್ಭದಲ್ಲಿ ಮುಖ್ಯ ಪ್ರಧಾನ ಅರಣ್ಯ ಸಂರಕ್ಷಣಾಧಿಕಾರಿ ಸುಭಾಷ್ ಮಾಲ್ಕಡೆ, ಎಪಿಸಿಸಿಎಫ್ ಕುಮಾರ್ ಪುಷ್ಕರ್ ಮತ್ತು ಅಜಿತ್ರೆ ಉಪಸ್ಥಿತರಿದ್ದರು.


---

## ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದ ವಿಜಯ್ ಮಲ್ಯ

• ಉದಯವಾಹಿನಿ, ಬೆಂಗಳೂರು



ಕಿಂಗ್ ಫಿಶರ್ ಏರ್ ಲೈನ್ಸ್‌ನ ಸಾಲ ವಸೂಲಾತಿ ಪ್ರಕ್ರಿಯೆಯನ್ನು ಪ್ರಶ್ನಿಸಿ ಉದ್ಯಮಿ ವಿಜಯ್ ಮಲ್ಯ ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಕಿಂಗ್ಫಿಶರ್ ಏರ್ಲೈನ್ಸ್ ಸುಮಾರು 6,200 ಕೋಟಿ ರೂ.ಗಳನ್ನು ಬಾಕಿ ಉಳಿಸಿಕೊಂಡಿದ್ದರೂ, ಅಧಿಕಾರಿಗಳು ಮೂಲ ಸಾಲದ ಮೊತ್ತವನ್ನು ಅನೇಕ ಪಟ್ಟು ಹೆಚ್ಚು ವಸೂಲಿ ಮಾಡಿದ್ದಾರೆ ಎಂದು ಮಲ್ಯ ವಾದಿಸಿದರು. ಫೆಬ್ರವರಿ 3 ರಂದು ಸಲ್ಲಿಸಲಾದ ಅರ್ಜಿಯನ್ನು ನ್ಯಾಯಮೂರ್ತಿ ಆರ್ ದೇವದಾಸ್ ಬುಧವಾರ ಸಂಕ್ಷಿಪ್ತವಾಗಿ ವಿಚಾರಣೆ ನಡೆಸಿದರು. ಮಲ್ಯ ಪರ ವಾದ ಮಂಡಿಸಿದ ಹಿರಿಯ ವಕೀಲ ಸಜನ್ ಪೂವಯ್ಯ, ಪ್ರತಿವಾದಿಗಳ ವಾದ ಆಲಿ ಸುವ




ಮುನ್ನ ಯಾವುದೇ ಮಧ್ಯಂತರ ಪರಿಹಾರವನ್ನು ಕೋರಲಾಗಿಲ್ಲ ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ನ್ಯಾಯಾ ಲಯವು ಹತ್ತು ಬ್ಯಾಂಕುಗಳು, ವಸೂಲಾತಿ ಅಧಿಕಾರಿ, ಮನವಿಯಲ್ಲಿ ಹೆಸರಿಸಲಾದ ಆಸ್ತಿ ಪುನರ್ನಿಮರ್ಾಣ ಕಂಪನಿಗೆ ನೋಟಿಸ್ ನೀಡಿದೆ. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಪಂಜಾಬ್ ನ್ಯಾಷನಲ್ ಬ್ಯಾಂಕ್ ಸೇರಿದಂತೆ ಹಲವಾರು ರಾಷ್ಟ್ರೀಕೃತ ಮತ್ತು ಖಾಸಗಿ ವಲಯದ ಬ್ಯಾಂಕುಗಳು ಪ್ರಾರಂಭಿಸಿದ ವಸೂಲಾತಿ ಪ್ರಕ್ರಿಯೆಯನ್ನು ಮಲ್ಯ ಅವರ ಅರ್ಜಿ ಪ್ರಶ್ನಿಸಿದೆ. ಅವರು ಮುಂದಿನ ವಸೂಲಾತಿ ಕ್ರಮಕ್ಕೆ ಮಧ್ಯಂತರ ತಡೆಯಾಜ್ಞೆಯನ್ನು ಕೋರಿ ದ್ದಾರೆ ಮತ್ತು ಅವರು ಯುನೈಟೆಡ್ ಬ್ರೂವರೀಸ್ ಹೋಲ್ಡಿಂಗ್ಸ್ ಮತ್ತು ಅವರ ಇತರ ಸಾಲಗಾರರಿಗೆ ನೀಡ ಬೇಕಾದ ಎಲ್ಲಾ ಮೊತ್ತಗಳನ್ನು ವಿವರಿಸುವ ಖಾತೆಗಳ ಹೇಳಿಕೆಯನ್ನು ಕೋರಿದ್ದಾರೆ.

> **ಬ್ಯಾಂಕುಗಳಿಗೆ ಪುನಃಸ್ಥಾಪನೆ**
>
> **ಕಳೆದ ವರ್ಷ ಡಿಸೆಂಬರ್‌ನಲ್ಲಿ ಸಾಲ ವಸೂಲಾತಿ ನ್ಯಾಯಮಂಡಳಿ ತೀರ್ಪು ನೀಡಿದ 6,203 ಕೋಟಿ ರೂ.ಗಿಂತ ಎರಡು ಪಟ್ಟು ಹೆಚ್ಚು ಹಣವನ್ನು ಬ್ಯಾಂಕುಗಳು ವಸೂಲಿ ಮಾಡಿವೆ ಎಂದು ಮಲ್ಯ ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೊಂಡಿದ್ದರು. ಮಲ್ಯ ಅವರ 14,131.6 ಕೋಟಿ ಮೌಲ್ಯದ ಆಸ್ತಿಯನ್ನು ಸಾರ್ವಜನಿಕ ವಲಯದ ಬ್ಯಾಂಕುಗಳಿಗೆ ಪುನಃಸ್ಥಾಪಿಸಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ ನೀಡಿದ ಹೇಳಿಕೆಯನ್ನು ಅವರು ಉಲ್ಲೇಖಿಸಿದರು.**

## ಪಾಲಿಕೆಗೆ ತಲೆಬಿಸಿಯಾದ ಇಂದಿರಾ ಕ್ಯಾಂಟೀನ್‌ಗಳು

• ಉದಯವಾಹಿನಿ, ಬೆಂಗಳೂರು



ಸಿಎಂ ಸಿದ್ದರಾಮಯ್ಯನವರ ಕನಸಿನ ಕೂಸಾಗಿರುವ ಇಂದಿರಾ ಕ್ಯಾಂಟೀನ್ ಸಾವಿರಾರು ಬಡ ಜನರ ಹೊಟ್ಟೆ ತುಂಬಿಸುತ್ತಿದೆ. ಇಂದಿರಾ ಕ್ಯಾಂಟಿನ್ ಅಭಿವೃದ್ಧಿಗಾಗಿ ಸಿಎಂ ಸಿದ್ದರಾಮಯ್ಯ ಸಾಕಷ್ಟು ಅನುದಾನ ಬಿಡುಗಡೆ ಮಾಡಿದ್ದಾರೆ.ಆದ್ರೆ, ಕಳೆದ ಅಕ್ಟೋಬರ್ ತಿಂಗಳಲ್ಲಿ 52 ಇಂದಿರಾ ಕ್ಯಾಂಟೀನ್ ನಿರ್ಮಾಣಕ್ಕೆ ಬಿಬಿಎಂಪಿ ಟೆಂಡರ್ ಕೂಡ ಕರೆದಿತ್ತು. ಆದರೆ ಬಿಬಿಎಂಪಿ ಕರೆದಿದ್ದ ಟೆಂಡರ್‌ಗೆ ಯಾವ ಕಂಪನಿಯಾಗಲೀ, ಯಾರೊಬ್ಬರಾಗಲೀ ಭಾಗವಹಿಸಿಲ್ಲ. ಹೀಗಾಗಿ 52 ವಾರ್ಡ್ ಗಳಲ್ಲಿ ಹೊಸ ತಂತ್ರಜ್ಞಾನ ಇಂದಿರಾ ಕ್ಯಾಂಟೀನ್ ನಿರ್ಮಾಣಕ್ಕೆ ಆರಂಭದಲ್ಲೇ ವಿಘ್ನ ಎದುರಾಗಿದೆ.

ಇನ್ನೂ ಟೆಂಡರ್‌ನಲ್ಲಿರುವ ಇರುವ ಟಫ್ ರೂಲ್ಸ್ ನಿರ್ಮಾಣಕ್ಕೆ ಇರುವ ವೆಚ್ಚದ ಸಮಸ್ಯೆಯೇ ಯಾರೊಬ್ಬರು ಭಾಗವಹಿಸದೇ ಇರಲು ಕಾರಣವಾಗಿದೆ. ಜೊತೆಗೆ ಈಗ ಆಗುತ್ತಿರುವ ಇಂದಿರಾ ಕ್ಯಾಂಟೀನ್ ಗಳ ಅವ್ಯವಸ್ಥೆ, ಬಾಕಿ ಬಿಲ್ ಸಮಸ್ಯೆಯೇ ಟೆಂಡರಲ್ಲಿ ಭಾಗಿವಹಿಸದೇ ಇರೋದಕ್ಕೆ ಕಾರಣ ಅಂತಾ ಹೇಳಲಾಗುತ್ತಿದೆ. ಟೆಂಡರಲ್ಲಿರೋ ಕಠಿಣ ನಿಯಮಗಳ ರಿಲ್ಯಾಕ್ಸೇಷನ್ ಗೆ ಬಿಬಿಎಂಪಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತರಾದ ವಿಕಾಸ್ ಸುರಳ್ಕರ್ ಮುಖ್ಯ ಆಯುಕ್ತರ ಮುಂದೆ ಪ್ರಸ್ತಾವನೆ ಇಟ್ಟಿದ್ದಾರೆ. ಮುಖ್ಯ ಆಯುಕ್ತರಿಂದ ಟೆಂಡರ್ ರಿಲ್ಯಾಕ್ಸೇಷನ್ ಸಿಕ್ಕಿದರೆ ಮತ್ತೆ ಟೆಂಡರ್ ಕರೆದು ಮುಂದಿನ ಎರಡು ವರ್ಷದ ಒಳಗಡೆ ಇಂದಿರಾ ಕ್ಯಾಂಟಿನ್ ನಿರ್ಮಾಣ ಮಾಡಲಿದ್ದಾರೆ.

ಒಟ್ಟಾರೆ ಈ ವರ್ಷದಲ್ಲೇ 52 ಇಂದಿರಾ ಕ್ಯಾಂಟೀನ್ ಗಳ ನಿರ್ಮಾಣ ಕಾರ್ಯ ಮುಕ್ತಾಯ ಆಗಬೇಕಿತ್ತು. ಆದರೆ ಇದಾಗದೇ ಇರುವುದು ಸಿದ್ಧರಾಮಯ್ಯ ಅವರ ಕನಸಿನ ಮಹ ತ್ವಾಕಾಂಕ್ಷೆಯ ಯೋಜನೆಗೆ ಹಿನ್ನಡೆಯಾಗಿದೆ.

---

## ಕುಂಭಮೇಳಕ್ಕೆ ಹೋಗಬೇಕು ಅಂತಿರೋರೆ ಇವರ ವಂಚಕರ ಟಾರ್ಗೆಟ್

• ಉದಯವಾಹಿನಿ, ಬೆಂಗಳೂರು

ಕುಂಭಮೇಳಕ್ಕೆ ಹೋಗಬೇಕು ಅಂತ ಗೂಗಲ್‌ನಲ್ಲಿ ಸರ್ಚ್ ಮಾಡುವ ಮುನ್ನ ಎಚ್ಚರ ಎಚ್ಚರ. ಹೌದು ಗೂಗಲ್ ನಲ್ಲಿ ಸರ್ಚ್ ಮಾಡಿದ ವ್ಯಕ್ತಿಯೊಬ್ಬನ ಟಾರ್ಗೆಟ್ ಮಾಡಿ ಪಂಗನಾಮ ಹಾಕಿರುವ ಘಟನೆ ಸಿಲಿಕಾನ್ ಸಿಟಿಯಲ್ಲಿ ನಡೆದಿದೆ.

ಟೂರ್ ಪ್ಯಾಕೇಜ್ಕಂ ಪನಿಯಿಂದ ಕಾಲ್ ಮಾಡ್ತಾ ಇದ್ದೇವೆ ಅಂತ ನಂಬಿಸಿ ವಂಚನೆ ಮಾಡಿದ್ದಾರೆ. ಹೌದು ಮಹಾಕುಂಭಮೇಳದ ಹೆಸರಿನಲ್ಲಿ ವ್ಯಕ್ತಿಯೋರ್ವ ವಂಚನೆಗೊಳಗಾಗಿ ಬರೋಬ್ಬರಿ 64 ಸಾವಿರ ರೂ. ಕಳೆದುಕೊಂಡಿರುವ ಘಟನೆ ಬೆಂಗಳೂರಿನ ಜ್ಞಾನಭಾರತಿಯಲ್ಲಿ ನಡೆದಿದೆ. ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳದಲ್ಲಿ ಪುಣ್ಯ ಸ್ನಾನ ಮಾಡುವುದು ಕೋಟ್ಯಂತರ ಜನರ ಹೆಬ್ಬಕೆಯಾಗಿದೆ. ಇದನ್ನೇ ಬಂಡವಾಳ ಮಾಡಿಕೊಂಡು ಕೆಲವರು ಜನರಿಗೆ ವಂಚಿಸಲು ಶುರುಮಾಡಿದ್ದಾರೆ.

ಸೈಬರ್ ವಂಚಕರು ಟ್ರೆಂಡ್‌ಗೆ ತಕ್ಕಂತೆ ವಂಚನೆ ಮಾಡಲು ಶುರುಮಾಡಿದ್ದಾರೆ. ಜ್ಞಾನಭಾರತಿಯ ಓರ್ವ ನಿವಾಸಿ ಪ್ರಯಾಗ್‌ರಾಜ್‌ಗೆ ತೆರಳುವ ಸ್ಕ್ಯಾನ್ ಮಾಡಿದ್ದರು. ಹಾಗೆಯೇ ಗೂಗಲ್‌ನಲ್ಲಿ ಸರ್ಚ್ ಮಾಡಿ ಕುಂಭಮೇಳಕ್ಕೆ ಹೋಗಲು ಎಷ್ಟು ವೆಚ್ಚ ತಗಲಬಹುದು ಎಂದು ನೋಡಿದ್ದಾರೆ. ಅದಾದ ಕೆಲವೇ ನಿಮಿಷಗಳಲ್ಲಿ ಅಪರಿಚಿತ ವ್ಯಕ್ತಿಯಿಂದ ಕರೆ




ಬಂದಿದೆ. ನಾನು ರಾಕೇಶ್ ಟೂರ್ಸ್ ಟ್ರಾವೆಲ್‌ನಿಂದ ಮಾತಾಡ್ತಿದ್ದೀನಿ. ನಮ್ ಕಂಪನಿಯಿಂದ ಕಡಿಮೆ ಬೆಲೆಯಲ್ಲಿ ಪ್ರಯಾಗ್‌ರಾಜ್‌ಗೆ ಹೋಗುವ ಪ್ಯಾಕೆಜ್ ಇದೆ ಎಂದು ಪರಿಚಯ ಮಾಡಿಕೊಂಡಿದ್ದ.

ಕರೆ ಮಾಡಿ ವ್ಯಕ್ತಿಯ ಮಾತನ್ನು ನಂಬಿ, ಅವರು ಹೇಳಿದ ಅಕೌಂಟ್‌ಗೆ ಹಂತ ಹಂತವಾಗಿ 64 ಸಾವಿರ ರೂ. ಹಾಕಿದ್ದಾರೆ.

> **ಕುಂಭಮೇಳಕ್ಕೆ ಟಿಕೆಟ್ ಕೊಡಿಸುವುದಾಗಿ ಹೇಳಿ ವಂಚನೆ**
>
> **ಹಣ ಹಾಕಿದ ಕೆಲವೇ ನಿಮಿಷಗಳ ನಂತರ ಆ ವ್ಯಕ್ತಿಗೆ ಕರೆ ಮಾಡಿದಾಗ, ನಂಬರ್ ಸ್ವಿಚ್ ಆಫ್ ಬಂದಿದೆ. ಬಳಿಕ ಮೋಸ ಹೋಗಿರುವ ಬಗ್ಗೆ ಅರಿವಾದಾಗ 1930ಗೆ ಕರೆ ಮಾಡಿ ದೂರು ನೀಡಿದ್ದಾರೆ. ಅಷ್ಟೇ ಅಲ್ಲದೇ ಹಣ ಹಾಕಿರುವ ದಾಖಲೆಯೊಂದಿಗೆ ಜ್ಞಾನಭಾರತಿ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಿಸಿದ್ದಾರೆ. ಈ ಬಗ್ಗೆ ಪೊಲೀಸರು ಪರಿಶೀಲನೆ ನಡೆಸಿದಾಗ ಸೈಬರ್ ವಂಚಕರು, ಪ್ರಯಾಗ್‌ರಾಜ್‌ನಲ್ಲಿ ನಡೆಯುವ ಕುಂಭಮೇಳಕ್ಕೆ ಟಿಕೆಟ್ ಕೊಡಿಸುವುದಾಗಿ ಹೇಳಿ ವಂಚಿಸುತ್ತಿರುವುದು ಬೆಳಕಿಗೆ ಬಂದಿದೆ.**

---

## ಅನುಕಂಪಕ್ಕಾಗಿ ಆರೋಗ್ಯ ಸರಿಯಿಲ್ಲ ಎಂಬ ನಾಟಕ:ಯತ್ನಾಳ್

• ಉದಯವಾಹಿನಿ, ಬೆಂಗಳೂರು



ರಾಜ್ಯ ಬಿಜೆಪಿಯ ಭಿನ್ನಮತ ದೆಹಲಿ ಅಂಗಳಕ್ಕೆ ತಲುಪಿದ ಬಳಿಕವೂ ಪರಸ್ಪರ ವಾಗ್ದಾಳಿ ಮುಂದುವರಿದಿದ್ದು ಬಸನ ಗೌಡ ಪಾಟೀಲ್ ಯತ್ನಾಳ್ ಮತ್ತೆ ಯಡಿಯೂರಪ್ಪ ವಿರುದ್ಧ ಕಿಡಿಕಾರಿ ಆರೋಗ್ಯ ಸರಿ ಇಲ್ಲ ಎಂದು ಹೇಳಿ ಅನುಕಂಪ ಗಿಟ್ಟಿಸಿಕೊಳ್ಳುವ ನಾಟಕ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಯತ್ನಾಳ್ ಯಡಿಯೂರಪ್ಪ ನಾಟಕ ಕಂಪನಿ ತೆರೆದಿದ್ದಾರೆ.

ಮನೆಯಲ್ಲಿ ಹುಷಾರಿಲ್ಲ ಎಂದವರು ಸಿದ್ದರಾಮಯ್ಯ ಅವರ ಭೇಟಿಗೆ ಹೋಗಿದ್ದಾರೆ. ಅನುಕಂಪ ಗಿಟ್ಟಿಸಿಕೊಂಡು ಮಗನ ರಕ್ಷಣೆ ಮಾಡಿರಪ್ಪ.. ಉಳಿಸಿ, ಇಡೀ ಕರ್ನಾಟಕ ನಾನು ನುಂಗಿದ್ದೇನೆ, ಇನ್ನೂ ಉಳಿದದ್ದನ್ನು ನನ್ನ ಮಗ ವಿಜಯೇಂದ್ರ ನುಂಗುತ್ತಾನೆ ಎನ್ನುವ ಕನಸು ಅವರದ್ದಿದೆ ಎಂದು ವಾಗ್ದಾಳಿ ನಡೆಸಿದರು. ಯಡಿಯೂರಪ್ಪ ನೂರು ವರ್ಷ ಬದುಕಲಿ, ಅವರಿಗೆ ಬಹಳಷ್ಟು ಮೊಮ್ಮಕ್ಕಳು, ಮರಿ ಮಕ್ಕಳು ಇದ್ದಾರೆ ಅವರ ಕುಟುಂಬ ಬಹಳ ದೊಡ್ಡದಿದೆ. ಆ ಮೊಮ್ಮಕ್ಕಳನ್ನು ದಿನಾ ಒಂದು ಗಂಟೆ ಆಡಿಸಿಕೊಳ್ಳುತ್ತಾ ಕೂತರೆ ನೂರು, ನೂರಿಪ್ಪತ್ತು ವರ್ಷ ಬದುಕಬಹುದು. ಅದಕ್ಕೆ ನನ್ನ ತಕರಾರಿಲ್ಲ. ಅದು ಬಿಟ್ಟು ಹುಷಾರಿಲ್ಲ ಎಂದು ಹೇಳಬೇಡಿ. ಅಪ್ಪಾಜಿ ಆಪ್ ಘರ್ ಮೇ ಚುಪ್ ಬೈಟೊ.. ಆರಾಮ್ ಕರೋ... ಎಂದು ಹಿಂದಿಯಲ್ಲಿ ವ್ಯಂಗ್ಯವಾಡಿದರು.

ಯಡಿಯೂರಪ್ಪ ಮೆರೆದಾಟ ಕೊನೆಗೊಂಡಿದ್ದು ಮಗನ ಜತೆ ಸೇರಿ ಲಿಂಗಾಯತರನ್ನು ತುಳಿಯುವುದು ಬಿಟ್ಟರೆ ಬೇರೇನೂ ಮಾಡಿಲ್ಲ, ಯಡಿಯೂರಪ್ಪನ ಖರ್ಚು ವೆಚ್ಚಗಳನ್ನು ನೋಡಿಕೊಳ್ಳುತ್ತಿದ್ದ ಮಾಜಿ ಸಂಸದ ಸಿದ್ದೇಶ್ವರ್, ನಿಲ್ಲಲು ಮನೆ ಬಿಟ್ಟು ಕೊಟ್ಟ ಮಲ್ಲಿಕಾರ್ಜುನಯ್ಯ, ಅನಂತಕುಮಾರ್, ಬಿ.ಬಿ.ಶಿವಪ್ಪ ಮೊದಲಾದವರನ್ನೆಲ್ಲ ತುಳಿದಿದ್ದಾರೆ. ಯಡಿಯೂರಪ್ಪ ಅವರನ್ನು ಉಳಿಸುವುದು ಈಗ ಯಾರಿಂದಲೂ ಸಾಧ್ಯವಿಲ್ಲ, ರಾಜಾಹುಲಿ, ಬೆಟ್ಟದ ಹುಲಿ ಎಂದರೂ ಪ್ರಯೋಜನಕ್ಕೆ ಬರುವುದಿಲ್ಲ ಎಂದಿದ್ದಾರೆ.

## ವಿಜಯೇಂದ್ರ ಯುವಕರ ಕಣ್ಮಣಿ: ರೇಣುಕಾಚಾರ್ಯ

• ಉದಯವಾಹಿನಿ ಬೆಂಗಳೂರು

ಕಳೆದ ಬಾರಿ ನಮ್ಮ ಒಳಜಗಳದಿಂದ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ವಿಜಯೇಂದ್ರರನ್ನು ಕೆಳಗಿಳಿಸಿದರೆ ರಾಜ್ಯದಲ್ಲಿ ಬಿಜೆಪಿಗೆ 10 ಸ್ಥಾನ ಬರೋದಿಲ್ಲ ಎಂದು ಮಾಜಿ ಸಚಿವ ಎಂ.ಪಿ. ರೇಣುಕಚಾರ್ಯ ವಾಗ್ದಾಳಿ ನಡೆಸಿದ್ದಾರೆ. ನಗರದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ರೇಣುಕಚಾರ್ಯ ಕಳೆದ 3-4 ತಿಂಗಳಿಂದ ಜೆ.ಪಿ ನಡ್ಡಾ, ಅಮಿತ್ ಶಾ ಭೇಟಿ ಮಾಡಲಾಗ್ತಿಲ್ಲ. ಯತ್ನಾಳ್ ತಂಡ ಭೇಟಿ ಮಾಡಿದ್ದೀವಿ ಅಂತ ಸುಳ್ಳು ಹೇಳಿಕೊಂಡು ಸ್ಟೋರಿಗಳನ್ನು ಹೇಳುತ್ತಿದ್ದಾರೆ. ರಾಷ್ಟ್ರೀಯ ನಾಯಕರನ್ನು ಭೇಟಿಯಾದ ಫೋಟೋ ಕೊಡಿ ಅಂದ್ರೆ, ಇಲ್ಲ ತೆಗೀಬೇಡಿ ಅಂದಿದ್ದಾರೆ ಅಂತ ಹೇಳೀರಿ ಎಂದು ಕಿಡಿಕಾರಿದ್ದಾರೆ.



> **ನಮ್ಮ ಒಳಜಗಳದಿಂದ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಈಗ ವಿಜಯೇಂದ್ರರನ್ನು ಕೆಳಗಿಳಿಸಿದರೆ ಬಿಜೆಪಿಗೆ ಹತ್ತು ಸೀಟೂ ಬರಲ್ಲ. ಹೈಕ ಮಾಂಡ್ ವಿಜಯೇಂದ್ರರನ್ನ ಕೆಳಗಿಳಿಸಲ್ಲ, ಅವರೇ ಮುಂದುವರೀತಾರೆ ಅನ್ನೋ ವಿಶ್ವಾಸ ಇದೆ. ಇದೇ ಗುಡ್ ನ್ಯೂಸ್ ಎಂದು ಮಾಜಿ ಸಚಿವ ಎಂ.ಪಿ. ರೇಣುಕಚಾರ್ಯ ಭಿನ್ನಮತೀಯರ ವಿರುದ್ಧ ಸುದ್ದಿಗೋಷ್ಠಿ ನಡೆಸಿ ಗುಡುಗಿದ್ದಾರೆ.**

ಪಕ್ಷದಲ್ಲಿನ ಬೆಳವಣಿಗೆ ನೋಡಿ ಜನ ಬೈಯುತ್ತಿದ್ದಾರೆ. ಪಕ್ಷದಲ್ಲಿನ ಬೆಳವಣಿಗೆ ಕಂಡು ಕಾರ್ಯಕರ್ತರಿಗೆ ನೋವಾಗಿದೆ. ನಾವು ಸೈಲೆಂಟ್ ಇದ್ವಿ, ಯಡಿಯೂರಪ್ಪ, ವಿಜಯೇಂದ್ರ ಮಾತಾಡಬೇಡಿ ಅಂದಿದ್ರು. ಆದ್ರೆ ನಮಗೆ ನೋವಾಗಿದೆ. ಹೀಗಾಗಿ ತುರ್ತು ಸಭೆ ನಡೆಸಿ ಸುದ್ದಿಗೋಷ್ಠಿ ನಡೆಸಬೇಕಾಯಿತು.

ವಿಜಯೇಂದ್ರರನ್ನ ನೀವು ಕುಗ್ಗಿಸಲು ಆಗಲ್ಲ. ಯಡಿಯೂರಪ್ಪ ಕಾಲಿಗೆ ಚಕ್ರ ಕಟ್ಟಿ ಪಕ್ಷ ಕಟ್ಟಿದ್ರು. ಅದೇ ರೀತಿ ವಿಜಯೇಂದ್ರ ನಾಡಿನ ಯುವಕರ ಕಣ್ಮಣಿ ಆಗಿದ್ದಾರೆ. ಅಂಥವರ ಬಗ್ಗೆ ಮಾತಾಡ್ತೀರ. ಮುಂದಿನ ವಾರ ನಾವು ಮತ್ತೆ ಸಭೆ ಮಾಡ್ತೀವಿ.

100ಕ್ಕೂ ಹೆಚ್ಚು ಜನ ಸೇರಿ ದೊಡ್ಡ ಸಭೆ ಮಾಡ್ತೀವಿ. ಪಕ್ಷ ಕಟ್ಟೋ ಶಕ್ತಿ ವಿಜಯೇಂದ್ರಗೆ ಮಾತ್ರ ಇದೆ ಅನ್ನೋದು ನಿಜ. ವಿಜಯೇಂದ್ರರನ್ನ ಟೀಕೆ ಮಾಡೋದು ಮೋದಿ, ಅಮಿತ್ ಶಾ ನಡ್ಡಾರನ್ನ ಟೀಕೆ ಮಾಡಿದಂತೆ ಎಂದು ಎಚ್ಚರಿಸಿದ್ದಾರೆ.

---

# ವೈಯಕ್ತಿಕ ನಂಬಿಕೆ ವಿಚಾರವಾಗಿ ಮಾತನಾಡಲು ಯಾರಿಗೂ ಹಕ್ಕಿಲ್ಲ

## ಧರ್ಮ, ಧಾರ್ಮಿಕ ನಂಬಿಕೆ, ಆಚರಣೆಗಳಲ್ಲಿ ಬಿಜೆಪಿ ರಾಜಕೀಯ ಹುಡುಕುತ್ತಿದೆ: ಡಿ.ಕೆ.ಶಿವಕುಮಾರ್ ತರಾಟೆ

• ಉದಯವಾಹಿನಿ, ಬೆಂಗಳೂರು



ಯಾವುದೇ ಧರ್ಮದ ಬಗ್ಗೆ ಶ್ರದ್ಧೆ, ಆಚರಣೆ, ನಂಬಿಕೆಗಳು ಆಯಾಯ ವ್ಯಕ್ತಿಗೆ ಸಂಬಂಧಿಸಿದ ವಿಚಾರಗಳು. ನಾವು ಪ್ರತಿಯೊಂದಕ್ಕೂ ಗೌರವ ನೀಡಬೇಕು. ಆದರೆ ಇವುಗಳನ್ನು ಬಿಜೆಪಿ ತನ್ನ ರಾಜಕೀಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತರಾಟೆಗೆ ತೆಗೆದುಕೊಂಡರು. ಖಾಸಗಿ ಹೋಟೆಲ್‌ನಲ್ಲಿ ಮಾಧ್ಯ ಮಗಳ ಪ್ರಶ್ನೆಗೆ ಬುಧವಾರ ಉತ್ತರಿಸಿದರು.

ಕುಂಭಮೇಳದಲ್ಲಿ ಭಾಗವಹಿಸುತ್ತಿರುವ ಬಗ್ಗೆ ಆರ್.ಅಶೋಕ್ ಅವರು ಎಕ್ಸ್ ಖಾತೆಯಲ್ಲಿ ಟೀಕೆ ಮಾಡಿರುವ ಬಗ್ಗೆ ಕೇಳಿದಾಗ, ವಿರೋಧ ಪಕ್ಷದ ನಾಯಕ ಅಶೋಕ್ ಅವರ ಹೇಳಿಕೆಗೆ ಉತ್ತರಿಸಲು ನಾನು ಇಷ್ಟ ಪಡುವುದಿಲ್ಲ. ಯಾರು ಏನಾದರೂ ಹೇಳಿಕೊಳ್ಳಲಿ, ನಮ್ಮ ಧರ್ಮ, ನಮ್ಮ ಕರ್ಮ, ಆಚಾರ ವಿಚಾರ ಅನವಶ್ಯಕವಾಗಿ ಈ ವಿಚಾರಗಳನ್ನು ಎಳೆದಾಡಲು ನಾನು ಹೋಗುವುದಿಲ್ಲ.

ನಮ್ಮ ಪಕ್ಷದ ನಾಯಕರು ಈ ವಿಚಾರವಾಗಿ ವಿಶಾಲಾರ್ಥದ ಹೇಳಿಕೆ ನೀಡಿದ್ದಾರೆ. ಆದರೆ ಬಿಜೆಪಿ ಇದರಲ್ಲಿ ರಾಜಕೀಯ ಮಾಡುತ್ತಿದೆ. ಧರ್ಮ, ಆಚರಣೆ, ನಂಬಿಕೆಗಳು ರಾಜಕೀಯವಾಗಿ ಉಪಯೋಗಿಸಿಕೊಳ್ಳುವ ವಿಚಾರವಲ್ಲ ಎಂದು ಹೇಳಿದರು. ಗಂಗೆಯಾಗಲಿ, ಕಾವೇರಿಯಾಗಲಿ, ಕೃಷ್ಣಾ, ಅರ್ಕಾವತಿಯಾಗಲಿ, ನೀರಿಗೆ ಬಣ್ಣ, ರುಚಿ, ಆಕಾರವಿಲ್ಲ. ನೀರು ಎಲ್ಲರಿಗೂ ಬೇಕು. ಅವರು ಅಶೋಕ ಎಂದು ಯಾಕೆ ಹೆಸರಿಟ್ಟುಕೊಂಡಿದ್ದಾರೆ, ಕಲ್ಲು ಎಂದು ಹೆಸರು ಇಟ್ಟುಕೊಳ್ಳಬಹುದಿತ್ತಲ್ಲವೇ ಅವರಿಗೆ ಏನು ಹೆಚ್ಚುಕಮ್ಮಿಯಾಗಿದೆಯೋ? ಅವರಲ್ಲಿ ಏನೋ ಸಮಸ್ಯೆ ಇರಬೇಕು. ನನ್ನ ವೈಯಕ್ತಿಕ ನಂಬಿಕೆ ವಿಚಾರವಾಗಿ ಮಾತನಾಡಲು ಯಾರಿಗೂ ಹಕ್ಕಿಲ್ಲ. ನನ್ನ ಭಕ್ತಿ, ನಂಬಿಕೆ ನನಗೆ ಬಿಟ್ಟ ವಿಚಾರ ಎಂದು ತಿರುಗೇಟು ನೀಡಿದರು.

ಪ್ರಪಂಚದಲ್ಲಿ ಹಲವಾರು ಧಾರ್ಮಿಕ ಆಚರಣೆ, ನಂಬಿಕೆ ಗಳಿವೆ. ನಾನು ನನ್ನ ದೇವರನ್ನು ನಂಬುತ್ತೇನೆ. ಕೆಲವರು ಹಸ್ತ ನೋಡಿ ಕೊಳ್ಳುತ್ತಾರೆ, ಇನ್ನೂ ಕೆಲ ವರು ನೀರು, ಆಕಾಶ, ಸೂರ್ಯನನ್ನು ನಂಬುತ್ತಾರೆ. ಇದರಲ್ಲಿ ಸರಿ ತಪ್ಪು ಎಂಬುದಿಲ್ಲ, ಅವರವರ ನಂಬಿಕೆ ಅಷ್ಟೇ ಎಂದರು. ನೀರಿನ ದರ ಏರಿಕೆ ಪ್ರಸ್ತಾವನೆ ಸಲ್ಲಿಕೆ ಬಗ್ಗೆ ಕೇಳಿದಾಗ, ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಬೇಕು ಎಂದು ತಿಳಿಸಿದರು.



> **ಹೋಗುವುದು ಹೋಗದಿರುವುದು ನನ್ನ ವೈಯಕ್ತಿಕ ನಂಬಿಕೆ**
>
> **ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಕುಂಭಮೇಳಕ್ಕೆ ತೆರಳುವ ಕುರಿತು ಪ್ರತಿಕ್ರಿಯಿಸಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇದು ನನ್ನ ವೈಯಕ್ತಿಕ ನಂಬಿಕೆ. ಭಕ್ತಿಯನ್ನು ಪ್ರಶ್ನಿಸುವ ಹಕ್ಕು ಯಾರಿಗೂ ಇಲ್ಲ ಎಂದು ಬುಧವಾರ ಹೇಳಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅವರ ಇತ್ತೀಚಿನ ಹೇಳಿಕೆಗೆ ಸಂಬಂಧಿಸಿ ಕುಂಭಮೇಳಕ್ಕೆ ಭೇಟಿ ನೀಡುವ ಕುರಿತು ಟೀಕೆಗಳ ಕುರಿತು ಪ್ರತಿಕ್ರಿಯಿಸಿದ ಶಿವಕುಮಾರ್ ಯಾರು ಬೇಕಾದರೂ ಏನು ಬೇಕಾದರೂ ಹೇಳಲಿ. ನಮ್ಮ ಧರ್ಮ ಮತ್ತು ಕರ್ಮ, ನಮ್ಮ ಆಚರಣೆಗಳು, ಸಂಪ್ರದಾಯಗಳು ಮತ್ತು ನಂಬಿಕೆಗಳ ವಿಷಯವಾಗಿದೆ, ಗಂಗಾ, ಕಾವೇರಿ, ಕೃಷ್ಣಾ, ಬ್ರಹ್ಮಪುತ್ರ, ಅರ್ಕಾವತಿ ಮತ್ತು ವೃಷಭಾವತಿ ನದಿಗಳೆಲ್ಲ ಯಾರಿಗೂ ಸೇರಿದ್ದಲ್ಲ. ನೀರಿಗೆ ಬಣ್ಣ, ರುಚಿ ಅಥವಾ ಆಕಾರವಿಲ್ಲ. ಪ್ರತಿಯೊಬ್ಬರಿಗೂ ನೀರು ಬೇಕು. ಜನರು ಏನು ಬೇಕಾದರೂ ಹೇಳುತ್ತಾರೆ ಎಂದರು.ಆರ್. ಅಶೋಕ್ ಅವರ ಸಮಸ್ಯೆ ಏನು ಎಂದು ನನಗೆ ತಿಳಿದಿಲ್ಲ. ಬಹುಶಃ ಅವರಿಗೆ ಏನಾದರೂ ಸಮಸ್ಯೆ ಇರಬಹುದು. ನನ್ನ ವೈಯಕ್ತಿಕ ನಂಬಿಕೆಗಳ ಬಗ್ಗೆ ಮಾತನಾಡುವ ಹಕ್ಕು ಯಾರಿಗೂ ಇಲ್ಲ. ನಂಬಿಕೆ ಮತ್ತು ಭಕ್ತಿ ನನ್ನ ವೈಯಕ್ತಿಕ ವಿಷಯಗಳು, ಎಂದರು.**

> **ತಮ್ಮ ಮನೆಯಲ್ಲಿರುವ ಗಲಾಟೆ ಮುಚ್ಚಿಕೊಳ್ಳಲು ಈ ರೀತಿ ಹೇಳಿಕೆ ನೀಡುತ್ತಿದ್ದಾರಾ ಎಂದು ಕೇಳಿದಾಗ, ಅವರಲ್ಲಿ ಏನು ಸಮಸ್ಯೆ ಇದೆಯೋ ಗೊತ್ತಿಲ್ಲ. ಅವರು ಟೀಟ್ ಆದರೂ ಮಾಡಲಿ, ಭಾಷಣವಾದರೂ ಮಾಡಲಿ ಅವರಿಗೆ ಉತ್ತರ ನೀಡಲು ನನಗೆ ಇಚ್ಚೆ ಇಲ್ಲ. ಕೆಲವರಿಗೆ ನನ್ನ ಹೆಸರು ಹೇಳದಿದ್ದರೆ ಮಾರ್ಕೆಟ್ ಇರುವುದಿಲ್ಲ. ನನ್ನ ಹೆಸರು ತೆಗೆದುಕೊಳ್ಳದಿದ್ದರೆ, ನಿದ್ದೆಯೂ ಬರುವುದಿಲ್ಲ, ಶಕ್ತಿಯೂ ಬರುವುದಿಲ್ಲ. ಉತ್ಸಾಹ, ಹುಮ್ಮಸ್ಸು ಬರುವುದಿಲ್ಲ ಎಂದು ತಿಳಿಸಿದರು.**

## ಉರ್ದು ಶಾಲೆ ತೆರವು ಖಂಡಿಸಿ ಪೋಷಕರ ಪ್ರತಿಭಟನೆ

• **ಉದಯವಾಹಿನಿ, ಪಾವಗಡ**

ಪಟ್ಟಣದ ಉರ್ದು ಶಾಲೆ ತೆರವುಗೊಳಿಸುವುದನ್ನು ವಿರೋಧಿಸಿ ಪೋಷಕರು ಮಂಗಳವಾರ ಶಾಲೆಯ ಬಳಿ ಪ್ರತಿಭಟನೆ ನಡೆಸಿದರು.

ಅತ್ಯಂತ ಹಳೆಯ ಉರ್ದು ಶಾಲೆ ನೆಲಸಮ ಮಾಡಿ ಮತ್ತೊಂದು ಶಾಲೆ ನಿರ್ಮಿಸುವ ಹುನ್ನಾರ ನಡೆಯುತ್ತಿದೆ. ಶಾಲೆಯಲ್ಲಿ ಶಿಕ್ಷಣ ಪಡೆದವರು ಉತ್ತಮ ಸ್ಥಾನದಲ್ಲಿದ್ದಾರೆ.

ತಾಲ್ಲೂಕಿನ ಏಕೈಕ ಉರ್ದು ಶಾಲೆ ಮುಚ್ಚುವ ಕೆಲಸಕ್ಕೆ ಅಧಿಕಾರಿಗಳು ಸನ್ನದ್ಧರಾಗಿರುವುದು ಖಂಡನೀಯ ಎಂದು ಪ್ರತಿಭಟನನಿರತರು ಆರೋಪಿಸಿದರು.



ಉದಯವಾಹಿನಿ ಚಿತ್ರ

**ಶಾಲೆಯಲ್ಲಿ ಶಿಕ್ಷಣ ಪಡೆದವರು ಉತ್ತಮ ಸ್ಥಾನದಲ್ಲಿ**

ಶಾಲೆ ಅಭಿವೃದ್ಧಿಗೊಳಿಸುವುದನ್ನು ಬಿಟ್ಟು ನೆಲಸಮಗೊಳಿಸಲಾಗುತ್ತಿದೆ.

ಶಾಲೆಗೆ ಮೂಲಸೌಕರ್ಯ ಕಲ್ಪಿಸುವಂತೆ ಹಲವು ಬಾರಿ ಮನವಿ ಮಾಡಿದರೂ ಸ್ಪಂದಿಸಿಲ್ಲ.

ಬದಲಿಗೆ ತರಾತು ರಿಯಲ್ಲಿ ನೆಲಸಮಗೊಳಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ದೂರಿದರು.

ಮುಖಂಡ ಹಿದಾಯತ್, ಖಾಲಿದ್ ಅಹ್ಮದ್, ಆರ್ ಕೆ ನಿಸಾರ್, ಶಾಕಿರ್ ಅಹಮದ್, ಯುನುಸ್, ಪುರಸಭೆ ಸದಸ್ಯ ರಿಯಾಜ್ ಅಹ್ಮದ್. ಸಿಕಂದರ್, ಹೋಟೆಲ್ ಶಫಿ, ಜಿಮ್ ಶಫಿ, ಝುಬಿವುಲ್ಲಾ ಉಪಸ್ಥಿತರಿದ್ದರು.

# ರಾಜಕೀಯ ಪಕ್ಷಗಳಿಗೆ ರಾಜ್ಯದ ಹಿತ ಬೇಕಿಲ್ಲ: ಕೋಡಿಹಳ್ಳಿ ಚಂದ್ರಶೇಖರ್

### ರಾಜಕೀಯ ಪಕ್ಷಗಳು ರಾಜ್ಯದ ಹಿತ ಕಾಪಾಡುವ ನಿಟ್ಟಿನಲ್ಲಿ ಬದ್ಧತೆ ತೋರುತ್ತಿಲ್ಲ, ಪರ್ಯಾಯವಾಗಿ ಜನಸಾಮಾನ್ಯರ ಪಕ್ಷದ ಅಗತ್ಯವಿದೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ರಾಜಕೀಯ ಪಕ್ಷಗಳು ರಾಜ್ಯದ ಹಿತ ಕಾಪಾಡುವ ನಿಟ್ಟಿನಲ್ಲಿ ಬದ್ಧತೆ ತೋರುತ್ತಿಲ್ಲ. ಇದಕ್ಕೆ ಪರ್ಯಾಯವಾಗಿ ಜನಸಾಮಾನ್ಯರ ಪಕ್ಷದ ಅಗತ್ಯವಿದೆ ಎಂದು ಕರ್ನಾಟಕ ರೈತ ಸಂಘ ಮತ್ತು ಹಸಿರುಸೇನೆ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಪ್ರತಿಪಾದಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ನವ ಕರ್ನಾಟಕ ಜನಾಂದೋಲನ ಹಾಗೂ ಜನರ ನಡುವೆ ಜನತಾ ಪ್ರಣಾಳಿಕೆಯ ಚರ್ಚೆಯ ಸಭೆಯನ್ನುದ್ದೇಶಿಸಿ ಮಾತನಾಡಿದರು. ಕೇಂದ್ರ ಬಜೆಟ್‌ನಲ್ಲಿ ಉತ್ತರ ಭಾರತಕ್ಕೆ ಆದ್ಯತೆ ಸಿಕ್ಕಿದೆ. ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯವಾಗಿದೆ. ಪ್ರತಿಬಾರಿಯೂ ಇದೇ ಧೋರಣೆ ಮುಂದುವರಿಯುತ್ತಿದೆ. ಇದರ ವಿರುದ್ಧ ಧ್ವನಿ ಎತ್ತಲು ಪ್ರಬಲ ಸಂಘಟನೆ, ಹೋರಾಟದ ಅಗತ್ಯವಿದೆ ಎಂದರು.

ರಾಜ್ಯದಿಂದ ಕೇಂದ್ರಕ್ಕೆ ಹೆಚ್ಚಿನ ತೆರಿಗೆ ಹಣ ಸಿಗುತ್ತಿದೆ. ಆದರೆ, ಇಲ್ಲಿಗೆ ಮಾತ್ರ ನ್ಯಾಯಯುತವಾಗಿ ಪಾಲು ಹಂಚಿಕೆಯಾಗುತ್ತಿಲ್ಲ. ಚುನಾವಣೆ ಲೆಕ್ಕಾಚಾರ, ರಾಜಕೀಯ ಸ್ನೇಹಿತ ಲಾಭದಲ್ಲಿ ಕೆಲ ರಾಜ್ಯಗಳಿಗೆ ಮಾತ್ರ ಮಣೆ ಹಾಕಿ, ತಾರತಮ್ಯ ನೀತಿ ಪ್ರದರ್ಶಿಸಲಾಗುತ್ತಿದೆ ಎಂದು ಆರೋಪಿಸಿದರು.



ಉದಯವಾಹಿನಿ ಚಿತ್ರ

**ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯ**

ರಾಜ್ಯ ನಾಯಕರು ಕಾಂಗ್ರೆಸ್, ಬಿಜೆಪಿ ವರಿಷ್ಠರ ಧೋರಣೆಯನ್ನು ಪ್ರಶ್ನಿಸಲು ಸಾಧ್ಯವಾಗುತ್ತಿಲ್ಲ. ಇಲ್ಲಿನ ಜನರಿಗೆ ಅಗತ್ಯವಿರುವ ಅನುದಾನ ಮಂಜೂರು, ಯೋಜನೆಗಳ ಘೋಷಣೆ ಮಾಡಿಸುವಲ್ಲಿ ವಿಫಲರಾಗುತ್ತಿದ್ದಾರೆ. ಜೆಡಿಎಸ್ ಹೊಂದಾಣಿಕೆ ರಾಜಕಾರಣದಲ್ಲಿ ಸಾಗುತ್ತಿದೆ ಎಂದು ಟೀಕಿಸಿದರು.

ನವದೆಹಲಿಯಲ್ಲಿ ರೈತರು ಮಾರಕ ಕೃಷಿ, ಕಾರ್ಮಿಕ, ಎಪಿಎಂಸಿ ಕಾಯ್ದೆಗಳನ್ನು ರದ್ದುಪಡಿಸಲು ಒತ್ತಾಯಿಸಿ ಸುದೀರ್ಘ ಹೋರಾಟ ನಡೆಸಿದರು. ಇದಕ್ಕೆ ಕಾಂಗ್ರೆಸ್ ಸಹ ಧ್ವನಿಗೂಡಿಸಿತ್ತು. ಆದರೆ, ರಾಜ್ಯದಲ್ಲಿ ಮಾರಕ ಕಾಯ್ದೆಗಳ ಅಂಶಗಳನ್ನು ಪರಿಗಣಿಸಿ, ನೀತಿ ರೂಪಿಸಲು ಸರ್ಕಾರವು ಆದೇಶಿಸಿದೆ. ಇದರಿಂದಲೇ ಪಕ್ಷಗಳ ಧೋರಣೆ ಏನೆಂಬುದು ಗೊತ್ತಾಗುತ್ತದೆ ಎಂದು ವ್ಯಂಗ್ಯವಾಡಿದರು.

ಸಭೆಯಲ್ಲಿ ಮಾಜಿ ಶಾಸಕ ಬಸವರಾಜ್, ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಭಕ್ತರಹಳ್ಳಿ ಬೈರೇಗೌಡ, ಜಿಲ್ಲಾಧ್ಯಕ್ಷ ರಾಮನಾಥ್, ಮುಖಂಡರಾದ ಪುಟ್ಟರಾಜು, ಶಿವರಾಮ್, ಎನ್.ರಮೇಶ್, ದಸ್ತಗಿರ್ ಮುಲ್ಲಾ, ರಾಧಾಕೃಷ್ಣ, ಅರುಣ್ ಗೌಡ, ಚನ್ನಕೃಷ್ಣಪ್ಪ ಮತ್ತಿತರರು ಇದ್ದರು.

**ಜನರ ಬೇಡಿಕೆಗಳ ಬಗ್ಗೆ ಚರ್ಚೆ**

**ರಾಜ್ಯದ ಗಂಭೀರ ಸಮಸ್ಯೆಗಳು, ನಿರೀಕ್ಷೆಯ ಯೋಜನೆಗಳ ಜತೆಗೆ ಜಿಲ್ಲೆಯ ಜನರ ಬೇಡಿಕೆಗಳ ಬಗ್ಗೆ ಚರ್ಚಿಸಲಾಯಿತು. ಮಹತ್ವದ ನೀರಾವರಿ ಯೋಜನೆಗಳು, ರೈತರ ಬೆಳೆಗಳಿಗೆ ಬೆಂಬಲ ಬೆಲೆ ಘೋಷಣೆ, ಕೃಷಿ ನಿರ್ವಹಣೆಗೆ ಸಾಲ ಸೌಲಭ್ಯ, ಸಬ್ಸಿಡಿ, ಎಪಿಎಂಸಿಗಳ ಬಲವರ್ಧನೆ, ಕಾರ್ಮಿಕ ನೀತಿ, ಮಹಿಳಾ ಸಬಲೀಕರಣ ವಿಚಾರಗಳ ಬಗ್ಗೆ ಚರ್ಚಿಸಲಾಯಿತು.**

ರೈತ, ದಲಿತ, ಮಹಿಳಾ, ಕಾರ್ಮಿಕ ಸೇರಿ ವಿವಿಧ ಸಂಘಟನೆಗಳು ನವ ಕರ್ನಾಟಕ ನಿರ್ಮಾಣ ಆಂದೋಲನವನ್ನು ಕೈಗೊಳ್ಳಲಾಯಿತು.

ಕೋಡಿಹಳ್ಳಿ ಚಂದ್ರಶೇಖರ್ ನೇತೃತ್ವದಲ್ಲಿ ಎಂ.ಜಿ. ರಸ್ತೆ, ಬಿ.ಬಿ. ರಸ್ತೆಯಲ್ಲಿ ಘೋಷಣೆಗಳೊಂದಿಗೆ ಸಾಗಲಾಯಿತು. ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಜನತಾ ಪ್ರಣಾಳಿಕೆಯ ಕಿರುಹೊತ್ತಗೆಯನ್ನು ಬಿಡುಗಡೆಗೊಳಿಸಲಾಯಿತು.

**ರಾಜಕೀಯ ಪಕ್ಷಗಳಲ್ಲಿನ ಹೈಕಮಾಂಡ್ ಸಂಸ್ಕೃತಿ ಕಿತ್ತೆಸೆಯುವುದು, ಪ್ರಾದೇಶಿಕ ಆಡಳಿತದ ಮೂಲಕ ರಾಜ್ಯದ ಹಿತವನ್ನು ಕಾಪಾಡುವುದೇ ನವ ಕರ್ನಾಟಕದ ಮುಖ್ಯ ಗುರಿ ಎಂದು ರಾಜ್ಯ ಬಿಎಸ್‌ಪಿ ಅಧ್ಯಕ್ಷ ಮಾರಸಂದ್ರ ಮುನಿಯಪ್ಪ ತಿಳಿಸಿದರು. 1956ರಿಂದ ಇದುವರೆಗೂ ಆಡಳಿತ ನಡೆಸಿದ ರಾಷ್ಟ್ರೀಯ ಪಕ್ಷಗಳು ಹೈಕಮಾಂಡ್ ಸಂಸ್ಕೃತಿಗೆ ಜೋತುಬಿದ್ದು ಈ ದೇಶದ ಬಹುಸಂಖ್ಯಾತರ ಬದುಕನ್ನು ಬೀದಿಗೆ ತಂದು ನಿಲ್ಲಿಸಿವೆ**

**–ಕೋಡಿಹಳ್ಳಿ ಚಂದ್ರಶೇಖರ್**

**ಚರ್ಚಿತ ವಿಷಯಗಳು:** ಸಮಿತಿ ಸಂಚಾಲಕ ಮೋಹನ್‌ರಾಜ್ ಮಾತನಾಡಿ ಜಾತಿ, ಧರ್ಮ, ಮದ್ಯ, ಹಣಕ್ಕೆ ದಾಸರಾಗಿ ಮತ ನೀಡುವುದಿಲ್ಲ, ಒಂದೇ ಪಕ್ಷ, ಒಂದೇ ಚಿಹ್ನೆಯನ್ನು ಬೆಂಬಲಿಸುವ ವಾಗ್ದಾನವನ್ನು ಜನರು ಮಾಡಬೇಕು ಎಂದರು.

## ಕಂದಾಯ ಗ್ರಾಮ ಘೋಷಣೆಗೆ ಗ್ರಾಮಸ್ಥರ ಪರ-ವಿರೋಧ

• **ಉದಯವಾಹಿನಿ, ಕನಕಪುರ**

ಹೊಂಗಾಣಿದೊಡ್ಡಿ ಗ್ರಾಮವನ್ನು ಕಂದಾಯ ಗ್ರಾಮವನ್ನಾಗಿ ಘೋಷಣೆ ಮಾಡುವ ವಿಚಾರದಲ್ಲಿ ಗ್ರಾಮಸ್ಥರ ನಡುವೆ ಪರ– ವಿರೋಧ ಚರ್ಚೆಗೆ ಗ್ರಾಮ ಸಭೆ ಸಾಕ್ಷಿಯಾಯಿತು.

ತಾಲ್ಲೂಕಿನ ಸಾತನೂರು ಹೋಬಳಿಯ ಅಚ್ಚಲು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಹೊಂಗಾಣಿದೊಡ್ಡಿ ಗ್ರಾಮದಲ್ಲಿ ನಡೆದ ಗ್ರಾಮ ಪಂಚಾಯಿತಿಯ ವಿಶೇಷ ಗ್ರಾಮ ಸಭೆಯಲ್ಲಿ ಕಂದಾಯ ಗ್ರಾಮ ಘೋಷಣೆ ಮಾಡುವ ಚರ್ಚೆ ನಡೆಯಿತು.

ಸಭೆಯಲ್ಲಿ ಕಂದಾಯ ಗ್ರಾಮ ಮಾಡುವ ವಿಷಯ ಪ್ರಸ್ತಾಪಿಸುತ್ತಿದ್ದಂತೆ ಕೆಲವರು ಗ್ರಾಮದಲ್ಲಿ ಜಮೀನಿನ ವಿವಾದವಿದ್ದು, ಯಾವ ರೀತಿ ಕಂದಾಯ ಗ್ರಾಮ ಮಾಡುತ್ತೀರಿ ಎಂದು ಪ್ರಶ್ನಿಸಿದರೆ. ಮತ್ತೆ ಕೆಲವರು ಯಾವುದೇ ಸಮಸ್ಯೆ ಇಲ್ಲದಂತೆ ಕಂದಾಯ ಗ್ರಾಮ ಮಾಡುವುದಾದರೆ ಮಾಡಿ ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಸದಸ್ಯ ಕುಮಾರಸ್ವಾಮಿ ಮಾತನಾಡಿ, ಕಂದಾಯ ಗ್ರಾಮ ಮಾಡುವ ಮೊದಲು ಗ್ರಾಮ ಪಂಚಾಯಿತಿ ಸದಸ್ಯರ ಸಭೆ ಕರೆದು ಅಲ್ಲಿ ಚರ್ಚಿಸಬೇಕು ಎಂದರು. ಕೆಲವು ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಣೆ ಮಾಡಲು ಅವಕಾಶವಿದ್ದರೂ ಮಾಡಿಲ್ಲ. ಆದರೆ, ಇದೇ ಗ್ರಾಮವನ್ನು ಏಕೆ ಕಂದಾಯ ಗ್ರಾಮವನ್ನಾಗಿ ಮಾಡುತ್ತಿದ್ದೀರಿ? ಇದರ ಉದ್ದೇಶವೇನು ಎಂದು ಪ್ರಶ್ನಿಸಿದರು.



ಉದಯವಾಹಿನಿ ಚಿತ್ರ

ತಹಶೀಲ್ದಾರ್ ಮಂಜುನಾಥ್ ಮಾತನಾಡಿ, ಮೂರ್ನಾಲ್ಕು ದಶಕಗಳಿಂದ ಈ ಗ್ರಾಮದಲ್ಲಿ ಮೂಲ ಸೌಕರ್ಯಗಳಿಲ್ಲದೆ ಪರದಾಡುತ್ತಿದ್ದೀರಿ. ನಿಮ್ಮ ಗ್ರಾಮಕ್ಕೆ ಮೂಲ ಸೌಕರ್ಯ ಕಲ್ಪಿಸಲು ಹೊಂಗಾಣಿದೊಡ್ಡಿ ಗ್ರಾಮವನ್ನು ಕಂದಾಯ ಗ್ರಾಮವನ್ನಾಗಿ ಮಾಡಲು ಇಲ್ಲಿಗೆ ಬಂದಿದ್ದೇವೆ. ಇದನ್ನು ಸದುಪಯೋಗಪಡಿಸಿಕೊಳ್ಳಿ. ಯಾರು ಸಹ ವಿರೋಧ ಮಾಡಬೇಡಿ ಎಲ್ಲರೂ ಸಹಕಾರ ಕೊಡಿ ಎಂದು ಮನವಿ ಮಾಡಿದರು.

## ಸುಬ್ಬಾರೆಡ್ಡಿಗೆ ಸುಪ್ರೀಂನಲ್ಲಿ ಮತ್ತೆ ಮುಖಭಂಗ

• **ಉದಯವಾಹಿನಿ, ಬಾಗೇಪಲ್ಲಿ**

ಚುನಾವಣಾ ತಕರಾರು ಅರ್ಜಿಯನ್ನು ವಜಾಗೊಳಿಸುವಂತೆ ಕೋರಿ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರು ನಾಲ್ಕನೇ ಬಾರಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿರುವ ಸುಪ್ರೀಂಕೋರ್ಟ್ ರಾಜ್ಯ ಹೈಕೋರ್ಟ್‌ನಲ್ಲೇ ವಿಚಾರಣೆ ಮುಂದುವರಿಸುವಂತೆ ನಿರ್ದೇಶಿಸಿದೆ.

ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರಕ್ಕೆ 2023 ಮೇ 10ರಂದು ನಡೆದ ಚುನಾವಣೆ ಸಮಯದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಸ್.ಎನ್.ಸುಬ್ಬಾರೆಡ್ಡಿ,


ಚುನಾವಣಾ ಆಯೋಗಕ್ಕೆ ಸಲ್ಲಿಸಿ ರುವ ನಾಮಪತ್ರ ದೋಷಪೂರಿತವಾಗಿದೆ, ಆಸ್ತಿ ವಿವರ ಮುಚ್ಚಿಟ್ಟಿರುವುದಲ್ಲದೆ ಆಸ್ತಿ ತೆರಿಗೆ ಬಾಕಿ ಕುರಿತು ನಾಮಪತ್ರದಲ್ಲಿ ಮಾಹಿತಿ ನೀಡದೆ ಚುನಾವಣಾ ಅಕ್ರಮ ಎಸಗಿ ಪ್ರಜಾ ಪ್ರತಿನಿಧಿ ಕಾಯ್ದೆ ಉಲ್ಲಂಘಿಸಿದ್ದಾರೆ ಎಂದು ಬಿಜೆಪಿ ಪರಾಜಿತ ಅಭ್ಯರ್ಥಿ ಸಿ.ಮುನಿರಾಜು ರಾಜ್ಯ ಹೈಕೋರ್ಟ್‌ನಲ್ಲಿ 2023ರ ಜೂ.6ರಂದು ಅರ್ಜಿ ಸಲ್ಲಿಸಿದ್ದು, 2023 ಜುಲೈ 3ರಂದು ಪ್ರಕರಣ ದಾಖಲಾಗಿತ್ತು.ತಮ್ಮ ವಿರುದ್ಧ ಸಲ್ಲಿಕೆಯಾಗಿರುವ ಚುನಾವಣಾ ತಕರಾರು ಅರ್ಜಿಯನ್ನು ವಜಾಗೊಳಿಸುವಂತೆ ಶಾಸಕ ಸುಬ್ಬಾರೆಡ್ಡಿ ಹೈಕೋರ್ಟ್‌ನಲ್ಲಿ ಮನವಿ ಮಾಡಿದ್ದು ನ್ಯಾಯಮೂರ್ತಿ ಎಂ.ಜಿ.ಎಸ್. ಕಮಲ್ ಅವರಿದ್ದ ಏಕ ಸದಸ್ಯ ಪೀಠ ಸುಬ್ಬಾರೆಡ್ಡಿ ಅವರ ಅರ್ಜಿಯನ್ನು 2024ರ ಮಾರ್ಚ್‌ನಲ್ಲಿ ವಜಾಗೊಳಿಸಿ ವಿಚಾರಣೆ ಮುಂದುವರಿಸುವಂತೆ ಆದೇಶಿಸಿತ್ತು.

ಈ ಆದೇಶವನ್ನು ಪ್ರಶ್ನಿಸಿ ಸುಬ್ಬಾರೆಡ್ಡಿ ಸುಪ್ರೀಂಕೋರ್ಟ್ ಮೊರೆ ಹೋಗಿದ್ದು, ನ್ಯಾಯಮೂರ್ತಿಗಳಾದ ಸೂರ್ಯಕಾಂತ್, ಉಜ್ವಲ್ ಬುಯಾನ್ ಅವರು 2024ರ ಅಕ್ಟೋಬರ್ 9ರಂದು ಸುಬ್ಬಾರೆಡ್ಡಿ ಅವರ ಮೇಲ್ಮನವಿ ವಜಾಗೊಳಿಸಿ, ರಾಜ್ಯ ಹೈಕೋರ್ಟ್‌ನಲ್ಲಿ ವಿಚಾರಣೆ ಮುಂದುವರಿಸುವಂತೆ ಆದೇಶಿಸಿದ್ದರು. ಸುಪ್ರಿಂಕೋರ್ಟ್‌ನಲ್ಲಿ

**ಮೂರನೇ ಬಾರಿಗೆ ಅರ್ಜಿ**

**ನಂತರ 2024ರ ನ.22ರಂದು ರಾಜ್ಯ ಹೈಕೋರ್ಟ್ ಏಕಸದಸ್ಯ ಪೀಠದಲ್ಲಿ ವಿಚಾರಣೆ ವಜಾಗೊಳಿಸುವಂತೆ ಸುಬ್ಬಾರೆಡ್ಡಿ ಮೂರನೇ ಬಾರಿಗೆ ಸಲ್ಲಿಸಿದ್ದ ಮಧ್ಯಂತರ ಅರ್ಜಿಯೂ ತಿರಸ್ಕೃತಗೊಂಡಿತ್ತು.**

ಸುಬ್ಬಾರೆಡ್ಡಿ ಪರ ಕಪಿಲ್‌ಸಿಬಲ್ ವಾದಿಸಿದರೆ, ಮುನಿರಾಜು ಪರ ವಕೀಲೆ ನಳಿನಿ ಮಾಯೇಗೌಡ ವಾದಿಸಿದ್ದರು.



## ಸಹಕಾರಿ ಸಂಘ ಸಾಲ ಮನ್ನಾಕ್ಕೆ ಆಗ್ರಹ

• **ಉದಯವಾಹಿನಿ, ಬಾಗೇಪಲ್ಲಿ**

ಕನಿಷ್ಠ ಮಾಸಿಕ ಆದಾಯ ಇಲ್ಲದ ಕುಟುಂಬಗಳು ಮೈಕ್ರೊ ಫೈನಾನ್ಸ್ ಸಂಸ್ಥೆಗಳು ಒಳಗೊಂಡಂತೆ, ಇತರ ರಾಷ್ಟ್ರೀಕೃತ ಮತ್ತು ಸಹಕಾರ ಸಂಘಗಳಿಂದ ಪಡೆದಿರುವ ಸಾಲ ಮನ್ನಾಕ್ಕೆ ಸರ್ಕಾರ ಮುಂದಾಗಬೇಕು ಎಂದು ಜನವಾದಿ ಮಹಿಳಾ ಸಂಘದ ಸಂಚಾಲಕಿ ಸಾವಿತ್ರಮ್ಮ ಆಗ್ರಹಿಸಿದರು.

ಸಾಲ ಕೊಡುವ ಮೈಕ್ರೊಫೈನಾನ್ಸ್ ಸಂಸ್ಥೆಗಳು ಸಾಲ ವಸೂಲಿ ನೆಪದಲ್ಲಿ ಮಹಿಳೆಯರಿಗೆ ಮಾನಸಿಕ ಹಾಗೂ ದೈಹಿಕ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿ, ಜನವಾದಿ ಮಹಿಳಾ ಸಂಘಟನೆ ನೇತೃತ್ವದಲ್ಲಿ ಸಂತ್ರಸ್ತ ಮಹಿಳೆಯರು ಪಟ್ಟಣದ ತಹಶಿಲ್ದಾರ್ ಕಛೇರಿಯ ಮುಂದೆ ಪ್ರತಿಭಟನೆ ನಡೆಸಿ ತಹಶಿಲ್ದಾರ್ ಮನೀಷ್ ಎನ್ ಪತ್ರಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಮಾತನಾಡಿದ ಅವರು ಮಹಿಳೆಯರಿಗೆ ಬಲವಂತವಾಗಿ ಸಾಲ ನೀಡಿ ಕಟ್ಟುವಂತೆ ಕಿರುಕುಳ ನೀಡುವ ಮೈಕ್ರೊ ಫೈನಾನ್ಸ್ ಸಂಸ್ಥೆಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು.

ಕನಿಷ್ಠ ಮಾಸಿಕ ಆದಾಯ ಇಲ್ಲದ ಕುಟುಂಬಗಳು ಮೈಕ್ರೊ ಫೈನಾನ್ಸ್ ಸಂಸ್ಥೆಗಳು ಒಳಗೊಂಡಂತೆ, ಇತರ ರಾಷ್ಟ್ರೀಕೃತ ಮತ್ತು ಸಹಕಾರ ಸಂಘಗಳಿಂದ ಪಡೆದಿರುವ ಸಾಲ ಮನ್ನಾಕ್ಕೆ ಸರ್ಕಾರ ಮುಂದಾಗಬೇಕು.



ಉದಯವಾಹಿನಿ ಚಿತ್ರ

**ಸಬ್ಸಿಡಿ ಸಹಿತ ಸಾಲ ನೀಡಬೇಕು**

ಇತ್ತೀಚೆಗೆ ಹೆಚ್ಚಾಗಿರುವ ಮೈಕ್ರೊ ಫೈನಾನ್ಸ್ ಸಂಸ್ಥೆಗಳ ನಿಯಂತ್ರಣಕ್ಕೆ ಕಾನೂನು ಜಾರಿಗೊಳಿಸಬೇಕು. ಸಂಸ್ಥೆಗಳಿಂದ ಕಿರುಕುಳಕ್ಕೆ ಒಳಗಾಗುವ ಕುಟುಂಬಗಳಿಗೆ ರಕ್ಷಣೆ ಒದಗಿಸಬೇಕು.

ಸರ್ಕಾರವೇ ಮಹಿಳಾ ಸ್ವಸಹಾಯ ಸಂಘ ಮತ್ತು ಸ್ತ್ರೀ ಶಕ್ತಿ ಸಂಘಗಳಿಗೆ ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ಕಡಿಮೆ ಬಡ್ಡಿದರದಲ್ಲಿ ಧೀರ್ಘಾವದಿಯ ಸಬ್ಸಿಡಿ ಸಹಿತ ಸಾಲ ನೀಡಬೇಕು ಎಂದು ಒತ್ತಾಯಿಸಿದರು.

ಸಿಪಿಐಎಂ ಮುಖಂಡ ಚನ್ನರಾಯಪ್ಪ ಮಾತನಾಡಿ ಸಂಸ್ಥೆಗಳ ವ್ಯವಹಾರದಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳಲು ನಿಯಮ ರೂಪಿಸಬೇಕು. ಈಗಾಗಲೇ ವಸೂಲಿ ಮಾಡಿರುವ ಬಡ್ಡಿ ಹಣವನ್ನು ಸರ್ಕಾರ ಮುಟ್ಟುಗೋಲು ಹಾಕಿಕೊಂಡು ಸಂತ್ರಸ್ತರಿಗೆ ಪರಿಹಾರ ರೂಪದಲ್ಲಿ ನೀಡಬೇಕು. ರಾಷ್ಟ್ರೀಕೃತ ಬ್ಯಾಂಕ್‌ಗಳಿಂದಲೇ ಕಡಿಮೆ ಬಡ್ಡಿಗೆ ಸಾಲ ಪಡೆದು, ಅದನ್ನು ಬಡವರಿಗೆ ನೀಡಿ ಹೆಚ್ಚು ಬಡ್ಡಿ ವಸೂಲಿ ಮಾಡುವುದನ್ನು ತಡೆಯಬೇಕು.

ಸ್ವಯಂ ಉದ್ಯೋಗ ಮಾಡುವ ಮಹಿಳೆಯರಿಗೆ ಕನಿಷ್ಠ 5 ಲಕ್ಷದವರೆಗೆ ಬ್ಯಾಂಕ್‌ಗಳಲ್ಲಿ ಸಾಲ ನೀಡಲು ಸರಳ ನಿಯಮಗಳನ್ನು ರೂಪಿಸಿ ಜಾರಿಗೊಳಿಸಬೇಕು. ಈ ಕುರಿತು ಸರ್ಕಾರ ಹೆಚ್ಚು ಗಮನ ಹರಿಸಬೇಕು. ಸಂಸ್ಥೆಗಳ ಸಂತ್ರಸ್ತರ ಜೊತೆ ಸಭೆ ನಡೆಸಿ, ಕಠಿಣ ನಿಯಮಗಳನ್ನು ರೂಪಿಸಬೇಕು ಎಂದು ಒತ್ತಾಯಿಸಿದರು.

ಸೋಮಶೇಖರ್, ಲಕ್ಷ್ಮೀಣರೆಡ್ಡಿ, ಸಿ.ಉಮಾ, ಅನಿತಾ, ಸರಿತಾ,ಲಕ್ಷ್ಮೀ ನರಸಮ್ಮ, ಶಾಂತಮ್ಮ ಸೇರಿದಂತೆ ಮುಂತಾದವರು ಹಾಜರಿದ್ದರು.

## ದಕ್ಷಿಣ ಕಾಶಿ ಕಪಿಲೆಯ ಒಡಲಲ್ಲಿ ಸೇರುತ್ತಿರುವ ತ್ಯಾಜ್ಯ

• **ಉದಯವಾಹಿನಿ, ನಂಜನಗೂಡು**

ದಕ್ಷಿಣ ಕಾಶಿ ನಂಜನಗೂಡು ಧಾರ್ಮಿಕ ಪುಣ್ಯಕ್ಷೇತ್ರವೆಂದೇ ಪ್ರಖ್ಯಾತಿ ಹೊಂದಿದೆ. ಇಲ್ಲಿಗೆ ಬರುವ ಭಕ್ತರು ಕಪಿಲೆಯಲ್ಲಿ ಮಿಂದು ಪಾಪ ಕಳೆಯಲು ಬರುತ್ತಾರೆ. ಆದ್ರೆ ಕಪಿಲೆಯ ಒಡಲಲ್ಲಿ ಸೇರುತ್ತಿರುವ ತ್ಯಾಜ್ಯ ಭಕ್ತರನ್ನ ಮಲಿನಗೊಳಿಸುತ್ತಿದೆ. ತ್ಯಾಜ್ಯದ ಜೊತೆಗೆ ಮಧ್ಯದ ಖಾಲಿ ಪ್ಯಾಕೆಟ್ ಗಳು ಸಹ ಭಕ್ತರನ್ನ ಪಾವನಗೊಳಿಸುತ್ತಿದೆ.

ನಂಜನಗೂಡಿನ ನಗರಸಭೆ ಹಾಗೂ ಅಬಕಾರಿ ಇಲಾಖೆ ಅಧಿಕಾರಿಗಳ ದಿವ್ಯನಿರ್ಲಕ್ಷ್ಯಕ್ಕೆ ಸ್ಪಷ್ಟ ಉದಾಹರಣೆ. ನಂಜನಗೂಡು ಸರ್ಕಾರಿ ಬಸ್ ನಿಲ್ದಾಣದ ಕೆನರಾ ಬ್ಯಾಂಕ್ ಸಮೀಪದಲ್ಲಿ ನುಗುನಾಲೆ ಹರಿಯುತ್ತಿದೆ. ಈ ನಾಲೆ ನೀರು ಗುಂಡ್ಲಾನದಿ ಸೇರಿ ನಂತರ ಕಪಿಲೆಯನ್ನ ಬೆರೆಯುತ್ತದೆ. ಆದ್ರೆ ವಿಷಾದದ ಸಂಗತಿ ಅಂದ್ರೆ, ನಾಲೆಗೆ ತ್ಯಾಜ್ಯದ ರಾಶಿ ಸುರಿಯಲಾಗುತ್ತಿದೆ. ಮಧ್ಯದ ಪ್ಯಾಕೆಟ್‌ಗಳು, ಕಸ, ಕೋಳಿ ರೆಕ್ಕೆಪುಕ್ಕಗಳು ನಾಲೆ ನೀರು ಸೇರುತ್ತಿದೆ. ಕಸದರಾಶಿ ನೀರನ್ನ ಸರಾಗವಾಗಿ ಹರಿಯಲು ಬಿಡದೆ ತಡೆಹಿಡಿಯುತ್ತಿದೆ.



ಉದಯವಾಹಿನಿ ಚಿತ್ರ

**ಭಕ್ತರ ಆರೋಗ್ಯದ ಜೊತೆ ಚೆಲ್ಲಾಟ**

**ಕಸದರಾಶಿಯಿಂದ ನುಸುಳಿ ಮಲಿನವಾಗಿ ಹೋಗುತ್ತಿರುವ ನೀರು ಗುಂಡ್ಲಾನದಿ ಮೂಲಕ ಕಪಿಲೆ ಒಡಲು ಸೇರುತ್ತಿದೆ. ಇದೇ ಮಲಿನ ನೀರಿನಲ್ಲಿ ಮಿಂದೇಳುವ ಭಕ್ತರು ಪಾಪಗಳನ್ನ ತೊಳೆದುಕೊಳ್ಳಲು ಮುಂದಾಗಿದ್ದಾರೆ. ಭಕ್ತರ ಆರೋಗ್ಯದ ಜೊತೆ ನಗರಸಭೆ ಅಧಿಕಾರಿಗಳು ಚೆಲ್ಲಾಟವಾಡುತ್ತಿದ್ದಾರೆ. ಬಾರ್ ಅಂಡ್ ರೆಸ್ಟೋರೆಂಟ್ ಗಳಿಂದ ಬರುತ್ತಿರುವ ಖಾಲಿ ಮಧ್ಯದ ಪ್ಯಾಕೆಟ್ ಗಳಿಗೆ ನಾಲೆ ಆವಾಸ ಸ್ಥಾನವಾಗಿ ಪರಿಣಮಿಸಿದೆ. ಅಬಕಾರಿ ಇಲಾಖೆ ಅಧಿಕಾರಿಗಳಂತೂ ಇದ್ಯಾವುದರ ಪರಿವೆ ಇಲ್ಲದಂತೆ ಕಣ್ಮುಚ್ಚಿ ಕುಳಿತಿದ್ದಾರೆ. ಬೇಸಿಗೆ ಸನಿಹವಾಗುವ ಸಮಯ. ನಗರಸಭೆ ಅಧಿಕಾರಿಗಳು ಇತ್ತ ಗಮನಹರಿಸಿ ಭಕ್ತರ ಒಳಿತಿಗಾಗಿ ಸ್ವಚ್ಛತೆ ಕಾಪಾಡಬೇಕಿದೆ.**

# ಜೆಜೆಎಂ ಕಳಪೆ ಕಾಮಗಾರಿ: ಸಮಗ್ರ ತನಿಖೆಗೆ ಆಗ್ರಹ

### • ಕಾಮಗಾರಿ ಹೆಸರಿನಲ್ಲಿ ಹಣದ ಲೂಟಿ ನಡೆಯುತ್ತಿದೆ • ಜಿಲ್ಲೆಯಲ್ಲಿ ನಡೆದಿರುವ ಕಾಮಗಾರಿ ಕುರಿತು ಸಮಗ್ರ ತನಿಖೆ ನಡೆಸಬೇಕು

• **ಉದಯವಾಹಿನಿ, ರಾಮನಗರ**

ಜಿಲ್ಲೆಯಾದ್ಯಂತ ನಡೆದಿರುವ ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆಯ ಕಾಮಗಾರಿ ಕಳಪೆಯಾಗಿದೆ. ಯೋಜನೆಯು ಹಳ್ಳ ಹಿಡಿದಿದ್ದು, ಕಾಮಗಾರಿ ಹೆಸರಿನಲ್ಲಿ ಹಣದ ಲೂಟಿ ನಡೆಯುತ್ತಿದೆ.

ಜಿಲ್ಲೆಯಲ್ಲಿ ನಡೆದಿರುವ ಕಾಮಗಾರಿ ಕುರಿತು ಸಮಗ್ರ ತನಿಖೆ ನಡೆಸಬೇಕು. ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾ ರೆಡ್ಡಿ ಅಧ್ಯಕ್ಷತೆಯಲ್ಲಿ ಜರುಗಿದ ಕೆಡಿಪಿ ಸಭೆಯಲ್ಲಿ ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು ಮಾಡಿದ. ಆಗ್ರಹವಿದು. ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸರದಿ ಬಂದಾಗ ಸ್ವತಃ ಸಚಿವರೇ, 'ಜಿಲ್ಲೆಯಲ್ಲಿ ನಡೆದಿರುವ ಕಾಮಗಾರಿ ಕಳಪೆಯಾಗಿದೆ ಎಂಬ ಆರೋಪ ಕೇಳಿ ಬರುತ್ತಿದೆಯಲ್ಲಾ... ? ಹಿಂದಿನ ಸಭೆಯಲ್ಲೂ ಇದೇ ವಿಷಯ ಚರ್ಚೆಯಾಗಿ, ತನಿಖೆ ನಡೆಸಿ ವರದಿಗೆ ಸೂಚಿಸಲಾಗಿತ್ತಲ್ಲವೇ ಎಂದು ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಅವರನ್ನು ಪ್ರಶ್ನಿಸಿದರು.

ಎಂಜಿನಿಯರ್, 2019ರಲ್ಲಿ ಶುರುವಾಗಿದ್ದ ಮೊದಲ ಹಂತದ ಕಾಮಗಾರಿಯಲ್ಲಿ ವಿವಿಧ ಸಮಸ್ಯೆಗಳ ಜೊತೆಗೆ ಆರೋಪಗಳು ಸಹ ಕೇಳಿಬಂದಿದ್ದವು. ಆ ಕುರಿತು ಎಂಜಿನಿಯರ್ ನೇತೃತ್ವದ ತಂಡ ಕಾಮಗಾರಿಯನ್ನು



ಉದಯವಾಹಿನಿ ಚಿತ್ರ

**ಬಿಲ್ ಮಾಡಿ ವರ್ಗವಾಗುತ್ತಿದ್ದಾರೆ**

**ಬಿಲ್ ಮಾಡಿ ವರ್ಗವಾಗುತ್ತಿದ್ದಾರೆ, ವರ್ಗಾವಣೆಯಾಗಿ ಹೋಗಿರುವ ಸಿಇಒ ಏನು ಮಾಡಿದ್ದಾರೆ...? ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದ ಯೋಜನೆಯನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸದಿದ್ದರೆ ಕೇಂದ್ರದಿಂದ ಅನುದಾನ ಬರುವುದಿಲ್ಲ. ಆಗ ಯಾರು ಹೊಣೆ? ಎಂದು ತರಾಟೆಗೆ ತೆಗೆದುಕೊಂಡರು.'ಜಿಲ್ಲೆಯಲ್ಲಿ ನಡೆದಿರುವ ಕಾಮಗಾರಿ ಕುರಿತು ಸಮಗ್ರ ತನಿಖೆಯಾದರೆ ಯೋಜನೆಯ ಕುರಿತು ನಮಗೆ ಸ್ಪಷ್ಟ ಚಿತ್ರಣ ಸಿಗಲಿದ್ದು, ಮುಂದೇನು ಮಾಡಬೇಕು ಎಂಬುದನ್ನು ತೀರ್ಮಾನಿಸಬಹುದಾಗಿದೆ. ಸಚಿವರು ಈ ಕುರಿತು ತನಿಖೆಗೆ ಸೂಚನೆ ನೀಡಬೇಕು' ಎಂದು ಬಾಲಕೃಷ್ಣ ಒತ್ತಾಯಿಸಿದರು.**

ಪರಿಶೀಲಿಸಿ ಸರಿಪಡಿಸುವ ಕೆಲಸ ಮಾಡುತ್ತಿದೆ ಎಂದು ಸಮಜಾಯಿಷಿ ನೀಡಿದರು. ಅವರ ಮಾತಿಗೆ ಕೆರಳಿದ ಮಾಗಡಿ ಶಾಸಕ ಎಚ್.ಸಿ. ಬಾಲಕೃಷ್ಣ. 'ಮೊದಲ ಹಂತದ ಕಾಮಗಾರಿಯಲ್ಲಿ ಓವರ್‌ಹೆಡ್ ಟ್ಯಾಂಕ್‌ಗಳನ್ನು ಪೂರ್ಣಗೊಳಿಸಿದ್ದೀರಾ..? ಇನ್ನೂ ಎಷ್ಟು ಆಗಬೇಕಿದೆ...?' ಎಂದು ಪ್ರಶ್ನಿಸಿದರು.

ಅದಕ್ಕೆ ಎಂಜಿನಿಯರ್, 2019ರಲ್ಲಿ ಶುರುವಾಗಿದ್ದ ಮೊದಲ ಹಂತದ ಕಾಮಗಾರಿಯಲ್ಲಿ ವಿವಿಧ ಸಮಸ್ಯೆಗಳ ಜೊತೆಗೆ ಆರೋಪಗಳು ಸಹ ಕೇಳಿಬಂದಿದ್ದವು. ಆ ಕುರಿತು ಎಂಜಿನಿಯರ್ ನೇತೃತ್ವದ ತಂಡ ಕಾಮಗಾರಿಯನ್ನು ಪರಿಶೀಲಿಸಿ ಸರಿಪಡಿಸುವ ಕೆಲಸ ಮಾಡುತ್ತಿದೆ' ಎಂದು ಸಮಜಾಯಿಷಿ ನೀಡಿದರು. ಅವರ ಮಾತಿಗೆ ಕೆರಳಿದ ಮಾಗಡಿ ಶಾಸಕ ಎಚ್.ಸಿ. ಬಾಲಕೃಷ್ಣ. 'ಮೊದಲ ಹಂತದ ಕಾಮಗಾರಿಯಲ್ಲಿ ಓವರ್‌ಹೆಡ್ ಟ್ಯಾಂಕ್‌ಗಳನ್ನು ಪೂರ್ಣಗೊಳಿಸಿದ್ದೀರಾ? ಇನ್ನೂ ಎಷ್ಟು ಆಗಬೇಕಿದೆ' ಎಂದು ಪ್ರಶ್ನಿಸಿದರು.

957 ಟ್ಯಾಂಕ್‌ಗಳ ಪೈಕಿ 350 ಮಾತ್ರ ಪೂರ್ಣಗೊಂಡಿದ್ದು, ಉಳಿದ ಟ್ಯಾಂಕ್‌ಗಳ ನಿರ್ಮಾಣ ಪ್ರಗತಿಯಲ್ಲಿದೆ ಎಂದು ಎಂಜಿನಿಯರ್ ಪ್ರತಿಕ್ರಿಯಿಸಿದರು.

ಆಗ ಬಾಲಕೃಷ್ಣ, 'ಹಿಂದಿನ ಸಭೆಯಲ್ಲೇ ಕಾಮಗಾರಿ ಕುರಿತು ತನಿಖೆಯಾಗಬೇಕು ಎಂದು ಹೇಳಿದ್ದರೂ ಏನು ಮಾಡಿಲ್ಲ.

**ತನಿಖೆಗೆ ಬಾಲಕೃಷ್ಣ ಒತ್ತಾಯ**

ಅವರ ಮಾತಿಗೆ ದನಿಗೂಡಿಸಿದ ಚನ್ನಪಟ್ಟಣ ಶಾಸಕ ಸಿ.ಪಿ. ಯೋಗೇಶ್ವರ್, 'ಕಾಮಗಾರಿಯನ್ನು ಯಾರೊ ಜೈನ್ ಎಂಬಾತನಿಗೆ ಕೊಟ್ಟಿದ್ದು, ಆತ ಸಬ್ ಕಂಟ್ರಾಕ್ಟ್ ನೀಡಿ ಕೆಲಸ ಮಾಡಿಸುತ್ತಿದ್ದಾನೆ. ಎಲ್ಲಾ ಕಾಮಗಾರಿ ಕಳಪೆಯಾಗಿದ್ದು, ಎಂಜಿನಿಯರ್‌ಗಳು ಕೆಲಸ ಮಾಡಿದ್ದೇವೆ ಎಂದು ಹೇಳಿ ಬಿಲ್ ಪಾಸ್ ಮಾಡಿ, ವರ್ಗಾವಣೆ ಮಾಡಿಸಿಕೊಂಡು ಹೋಗುತ್ತಿದ್ದಾರೆ.ಯೋಜನೆಯ ಕಾಮಗಾರಿ ಕುರಿತು ತನಿಖೆ ನಡೆಸಲೇಬೇಕು' ಎಂದರು. ವಿಧಾನ ಪರಿಷತ್ ಸದಸ್ಯ ಎಸ್. ರವಿ ಮತ್ತು ಸುಧಾಮ್ ದಾಸ್, 'ಈ ಯೋಜನೆಯು ಗ್ರಾಮೀಣ ಭಾಗಕ್ಕೆ ನೀರು ಪೂರೈಸುವ ವರವಾಗದೆ ಶಾಪವಾಗಿದೆ. ಕಾಮಗಾರಿ ಹೆಸರಿನಲ್ಲಿ ರಸ್ತೆಗಳು ಹಾಳಾಗಿದೆ. ಕಳಪೆ ಕಾಮಗಾರಿ ಕುರಿತು ಆರೋಪಗಳು ಹೆಚ್ಚಾಗಿವೆ. ಈ ಬಗ್ಗೆ ತನಿಖೆ ಮಾಡಿ ತಪ್ಪಿತಸ್ಥರನ್ನು ಪತ್ತೆ ಹಚ್ಚಿ, ಕ್ರಮ ಕೈಗೊಳ್ಳಬೇಕು. ಕಾಲಮಿತಿಯಲ್ಲಿ ಈ ಕೆಲಸ ಆಗಬೇಕು. ಮುಂದಿನ ಸಭೆಯಲ್ಲಿ ಕ್ರಮ ಕೈಗೊಂಡಿರುವ ವರದಿಯನ್ನು ಸಹ ಸಭೆಯಲ್ಲಿ ಅಧಿಕಾರಿಗಳು ಮಂಡಿಸಬೇಕು.

**ಅರ್ಕಾವತಿಗೆ ತ್ಯಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿ ಸಭೆಗೆ ಗೈರಾಗಿರುವುದಕ್ಕೆ ಸಿಟ್ಟಾದ ಸಚಿವರು ಮತ್ತು ಶಾಸಕರು, ಅವರಿಗೆ ನೋಟಿಸ್ ಕೊಡಿ ಎಂದು ಜಿಲ್ಲಾಧಿಕಾರಿಗೆ ಸೂಚಿಸಿದರು. ಆಗ ಶಾಸಕ ಎಚ್.ಎ. ಇಕ್ಬಾಲ್ ಹುಸೇನ್, ' ಕೋಳಿ ಕಸ ಸೇರಿದಂತೆ ಬೆಂಗಳೂರಿನ ತ್ಯಾಜ್ಯವನ್ನು ಅರ್ಕಾವತಿ ನದಿಗೆ ತಂದು ಹಾಕುತ್ತಿದ್ದಾರೆ. ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿ ಏನು ಮಾಡುತ್ತಿದ್ದಾರೆ' ಎಂದು ಕಿಡಿಕಾರಿದರು.**

## ಮಿನಿ ನ್ಯೂಸ್

### ಅನಧಿಕೃತ ರಥದ ಶೆಡ್ ತೆರವು

• **ಉದಯವಾಹಿನಿ, ಚಿಂತಾಮಣಿ**

ನಗರದ ಹೃದಯಭಾಗ ಅಜಾದ್‌ಚೌಕದಲ್ಲಿ ಅನಧಿಕೃತವಾಗಿ ನಿರ್ಮಾಣಗೊಂಡಿದ್ದ ರಥದ ಶೆಡ್ ಅನ್ನು ನಗರಸಭೆಸಿಬ್ಬಂದಿ ವಿವಿಧ ಇಲಾಖೆಗಳ ಸಹಯೋಗದಲ್ಲಿ ಮುಂಜಾನೆ ತೆರವುಗೊಳಿಸಿದರು.

ಪೊಲೀಸ್ ಇಲಾಖೆ ಬಲವಾದ ಬಂದೋಬಸ್ತ್ ಏರ್ಪಡಿಸಿತ್ತು. ಕಲ್ಲಿನ ಚಕ್ರಗಳುಳ್ಳ ರಥಕ್ಕೆ ಯಾವುದೇ ಧಕ್ಕೆಯಾಗದಂತೆ ಡೈಮಂಡ್ ಚಿತ್ರಮಂದಿರ ರಸ್ತೆಯಲ್ಲಿರುವ ಅದರ ಮೂಲ ಸ್ಥಳಕ್ಕೆ ಸ್ಥಳಾಂತರ ಮಾಡಲಾಯಿತು. ರಥವು ಶಿಥಿಲಗೊಂಡಿದ್ದು ಹೊಸ ರಥ ನಿರ್ಮಾಣ ಮಾಡಲು ದೇವಾಲಯದ ಟ್ರಸ್ಟ್ ತೀರ್ಮಾನಿಸಿತ್ತು ಹೊಸ ರಥದ ಬಿಡಿ ಭಾಗಗಳನ್ನು ಜೋಡಿಸಿ ಅಂತಿಮ ರೂಪ ನೀಡುವ ಸಲುವಾಗಿ ಅಜಾದ್‌ಚೌಕದಲ್ಲಿ ತಾತ್ಕಾಲಿಕವಾಗಿ ಶೆಡ್ ನಿರ್ಮಾಣ ಮಾಡಲಾಗಿತ್ತು ರಥ ನಿರ್ಮಾಣದ ಕೆಲಸ ಪೂರ್ಣವಾದ ನಂತರ ಮೂಲ ಶೆಡಗೆ ಸ್ಥಳಾಂತರಿಸದೆ ತಾತ್ಕಾಲಿಕವಾಗಿ ನಿರ್ಮಾಣ ಮಾಡಿದ ಶೆಡ್‌ನಲ್ಲೆ ಇತ್ತು. ನಗರಸಭೆ ಅನುಮತಿ ಪಡೆಯದೆ ಕೆಲವರ ಕುಮ್ಮಕ್ಕಿನಿಂದ ಅನಧಿಕೃತವಾಗಿ ನಿರ್ಮಿಸಿದ್ದ ಶೆಡ್‌ನ್ನೇ ಅಧಿಕೃತವಾಗಿಸಿಕೊಂಡಿದ್ದರು. ಶೆಡ್ ತೆರವುಗೊಳಿಸುವಂತೆ ನಗರಸಭೆ ಅನೇಕ ಬಾರಿ ಸಂಬಂಧಿಸಿದವರಿಗೆ ನೋಟಿಸ್ ನೀಡಿದ್ದರೂ ಯಾವುದೇ ಕ್ರಮಕ್ಕೆಗೊಂಡಿರಲಿಲ್ಲ. ಉಪವಿಭಾಗಾಧಿಕಾರಿ ಅಶ್ವಿನ್, ತಹಶೀಲ್ದಾರ್ ಸುದರ್ಶನ ಯಾದವ್, ಡಿವೈಎಸ್ಪಿ ಪಿ.ಮುರಳೀಧರ್, ಪೌರಾಯುಕ್ತ ಜಿ.ಎನ್.ಚಲಪತಿ, ಬೆಸ್ಕಾಂ ಶಿವಶಂಕರ್, ಪೊಲೀಸ್ ಅಧಿಕಾರಿಗಳು, ನಗರಸಭೆ, ಕಂದಾಯ ಇಲಾಖೆ ಅಧಿಕಾರಿಗಳು ಇದ್ದರು.

### ಋಣಮುಕ್ತ ಕಾಯ್ದೆ: ಜಾರಿಗೆ ಆಗ್ರಹ

• **ಉದಯವಾಹಿನಿ, ಗೌರಿಬಿದನೂರು**

ದುಡಿಯುವ ಅಸಂಘಟಿತ ವರ್ಗದ ಕಾರ್ಮಿಕರನ್ನು ಸಾಲದಿಂದ ಋಣಮುಕ್ತರನ್ನಾಗಿಸಲು ಕೇರಳ ಮಾದರಿಯಲ್ಲಿ ರಾಜ್ಯದಲ್ಲೂ ಋಣಮುಕ್ತ ಕಾಯ್ದೆ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಜನವಾದಿ ಮಹಿಳಾ ಸಂಘಟನೆ, ಸಿಐಟಿಯು ಹಾಗೂ ಸಿಪಿಐಎಂ ನೇತೃತ್ವದಲ್ಲಿ ನಗರದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ತಾಲ್ಲೂಕು ಆಡಳಿತ ಸೌಧದ ಆವರಣದಲ್ಲಿ ಪ್ರತಿಭಟನೆ ನಡೆಸಿ ಕಿರು ಹಣಕಾಸು ಸಂಸ್ಥೆಗಳು ಸಾಲಗಾರರ ಮೇಲೆ ನಡೆಸುತ್ತಿರುವ ದಬ್ಬಾಳಿಕೆಯನ್ನು ಖಂಡಿಸಲಾಯಿತು.

ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಗಂಗಪ್ಪ ಮಾತನಾಡಿ, ನಗರದಲ್ಲಿ ಅನೇಕ ಕಿರು ಹಣಕಾಸು ಸಂಸ್ಥೆಗಳು ಆರ್‌ಬಿಐ ನಿಯಮ ಉಲ್ಲಂಘಿಸಿ ಕಾರ್ಯನಿರ್ವಹಿಸುತ್ತಿವೆ. ಅವುಗಳ ಅಸಲಿಯತ್ತಿನ ಬಗ್ಗೆ ಅಧಿಕಾರಿಗಳು ಪರಿಶೀಲಿಸುತ್ತಿಲ್ಲ. ಸಾಲ ವಸೂಲಿ ಮಾಡುವವರು ಪ್ರತಿವಾರ ಮನೆಗೆ ಬಂದು ಬಲವಂತದ ವಸೂಲಾತಿ, ಸಾರ್ವಜನಿಕರ ಮುಂದೆ ಅವಮಾನ ಮಾಡುವ ಮೂಲಕ ಸಾಲಗಾರರೊಂದಿಗೆ ಅಮಾನವೀಯವಾಗಿ ವರ್ತಿಸುತ್ತಿದ್ದಾರೆ.

ಧರ್ಮಸ್ಥಳ ಸಂಘದವರು ದೇವರ ಹೆಸರನ್ನು ಇಟ್ಟುಕೊಂಡು ಬಡವರಿಗೆ ಕಿರುಕುಳ ನೀಡಿ ದಂಧೆ ಮಾಡುತ್ತಿದ್ದಾರೆ. ಕೂಡಲೇ ಕಿರುಕುಳ ನಿಲ್ಲಿಸಬೇಕು. ಇಲ್ಲವಾದರೆ ಇಂತಹ ಅಧರ್ಮದ ವಿರುದ್ಧ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದರು.

### ಮದ್ಯ, 38 ಗ್ರಾಂ ಒಣ ಗಾಂಜಾ ವಶ

• **ಉದಯವಾಹಿನಿ, ಚಿಂತಾಮಣಿ**

ನಗರದ ಆಶ್ರಯ ಬಡಾವಣೆಯ ಮನೆಯೊಂದರ ಮೇಲೆ ದಾಳಿ ನಡೆಸಿದ ಅಬಕಾರಿ ಅಧಿಕಾರಿಗಳು ಮದ್ಯ ಹಾಗೂ ಗಾಂಜಾ ವಶಪಡಿಸಿಕೊಂಡಿದ್ದಾರೆ. ಬಡಾವಣೆಯ ಮನೆಯೊಂದರಲ್ಲಿ ಮಹಿಳೆಯೊಬ್ಬರು ಮದ್ಯ ಅಕ್ರಮ ಮಾರಾಟ ಮಾಡುತ್ತಿದ್ದಾರೆ ಎಂದು ನಿವಾಸಿಗಳು ನೀಡಿದ ದೂರಿನ ಆಧಾರದಲ್ಲಿ ಅಬಕಾರಿ ಅಧಿಕಾರಿಗಳು ಬುಧವಾರ ದಾಳಿ ನಡೆಸಿದರು. 9 ಬಾಟಲಿ ವಿಸ್ಕಿ, ಮದ್ಯದ ಟೆಟ್ರಾ ಪ್ಯಾಕೆಟ್‌ಗಳು ಹಾಗೂ 38 ಗ್ರಾಂ ಒಣ ಗಾಂಜಾವನ್ನು ಅಬಕಾರಿ ಅಧಿಕಾರಿಳು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ. ದಾಳಿಯಲ್ಲಿ ಡಿವೈಎಸ್‌ಪಿ ಜಿ.ಎಸ್. ಪಾಟೀಲ್, ಇನ್ಸ್‌ಪೆಕ್ಟರ್ ಮಂಜುಳಾ, ಎಸ್‌ಐ ದೇವರಾಜ್ ಮತ್ತಿತರರು ಇದ್ದರು.

### ಹುಲ್ಲು ಮೆದೆಗಳಿಗೆ ಕಿಡಿಗೇಡಿಗಳು ಬೆಂಕಿ: 10 ಲಕ್ಷ ರೂ ನಷ್ಟ

• **ಉದಯವಾಹಿನಿ, ಹುಣಸೂರು**

ಜಾನುವಾರು ಮೇಯುವ ಒಣ ಹುಲ್ಲು ಮೆದೆಗಳಿಗೆ ಕಿಡಿಗೇಡಿಗಳು ಬೆಂಕಿ ಹಚ್ಚಿದ ಪರಿಣಾಮ ಸುಮಾರು 8 ರಿಂದ 10 ಲಕ್ಷ ರೂಗಳು ನಷ್ಟವಾಗಿರುವ ಘಟನೆ ಹನಗೋಡಿನಲ್ಲಿ ರಾತ್ರಿ ನಡೆದಿದೆ.

ಗ್ರಾಮದ ಮಹದೇವ, ಪೊನ್ನು ಸ್ವಾಮಿ, ಮಂಜು, ಮರಿಯಯ್ಯ, ಜಯಲಕ್ಷ್ಮಿ ಹಾಗೂ ಇನ್ನೂ ಕೆಲವರಿಗೆ ಸೇರಿದ ಹುಲ್ಲುಮೆದೆಗಳಿಗೆ ಹಾಗೂ ಒಂದು ಶೆಡ್ಡಿಗೆ ಯಾರೋ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದಾರೆ. ಈ ಪ್ರಕರಣ ಹುಣಸೂರು ಗ್ರಾಮಾಂತರ ಠಾಣೆಯಲ್ಲಿ ದಾಖಲಾಗಿದೆ.

### ಭಾವನನ್ನೇ ಕೊಂದ ಬಾಮೈದ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಮಹಿಳೆಯೊಂದಿಗೆ ಅಕ್ರಮ ಸಂಬಂಧ ಇಟ್ಟುಕೊಂಡು, ಅಕ್ಕನಿಗೆ ಕಿರುಕುಳ ನೀಡುತ್ತಿದ್ದ ಭಾವನನ್ನು ಸಹಚರರೊಂದಿಗೆ ಸೇರಿಕೊಂಡು ಬಾಮೈದುನನೇ ಬರ್ಬರವಾಗಿ ಕೊಲೆ ಮಾಡಿದ್ದಾನೆ.

ತಾಲ್ಲೂಕಿನ ಗೌಚನಹಳ್ಳಿಯ ಸುಭಾಷ್ (35) ಕೊಲೆಯಾದವ, ಈತನ ಬಾಮೈದ ಮನೋಜ್ ಕುಮಾರ್ ಹಾಗೂ ಆತನ ಸ್ನೇಹಿತರಾದ ಪ್ರವೀಣ, ವಿಘ್ನೇಶ, ಗಿರೀಶ್, ಅನಿಲ್, ನಂದ, ಪ್ರಸಾದ್, ಮೋಹನ್, ಕಾರ್ತಿಕ, ಸಿರೀಶ್ ಅವರನ್ನು ಕೊಲೆ ಆರೋಪದಲ್ಲಿ ಬಂಧಿಸಲಾಗಿದೆ.

ಪ್ರಕರಣದ ಹಿನ್ನೆಲೆ ಖಾಸಗಿ ಸಂಸ್ಥೆ ನೌಕರ ಸುಭಾಷ್ ದೊಡ್ಡಬಳ್ಳಾಪುರ ಮೂಲದ ಇಂದುಶ್ರೀಯನ್ನು ಪ್ರೀತಿಸಿ ಮದುವೆಯಾಗಿದ್ದ. ಪ್ರಾರಂಭದಲ್ಲಿ ಇಬ್ಬರು ಅನ್ಯೋನ್ಯವಾಗಿದ್ದರು. ಆದರೆ, ಕ್ರಮೇಣ ಕೌಟುಂಬಿಕ ಕಲಹ ಹೆಚ್ಚಾಗಿದೆ. ಅಕ್ರಮ ಸಂಬಂಧ ಹೊಂದಿದ್ದ ಎನ್ನಲಾದ ಸುಭಾಷ್ ಪತ್ನಿಗೆ ಕಿರುಕುಳ ನೀಡುತ್ತಿದ್ದ. ಇದರ ಬಗ್ಗೆ ಮಾಹಿತಿ ತಿಳಿದು ಆಕ್ರೋಶಗೊಂಡ ಮನೋಜ್ ಕುಮಾರ್ ಕೊಲೆ ಮಾಡಿದ್ದಾನೆ. ರಸ್ತೆಯಲ್ಲಿ ಕೆಲವರು ಹಲ್ಲೆ ಮಾಡುತ್ತಿದ್ದಾರೆ. ಬಂದು ಕಾಪಾಡಿ ಎಂದು ಮನೋಜ್ ಕುಮಾರ್, ಭಾವ ಸುಭಾಷ್ ಕರೆ ಮಾಡಿದ್ದ ಸ್ಥಳಕ್ಕೆ ಆಗಮಿಸಿದ ಸುಭಾಷ್ ಮೇಲೆ ಮೊದಲೇ ಸಂಚು ರೂಪಿಸಿದಂತೆ ಹೊಂಚು ಹಾಕಿ ಕುಳಿತಿದ್ದ 10 ಜನರ ತಂಡ ಮಾರಾಕಾಸ್ತ್ರಗಳಿಂದ ಹಲ್ಲೆ ನಡೆಸಿದೆ. ಹೆದರಿ ಓಡಿದ ಸುಭಾಷ್‌ನನ್ನು ಬಿಡದೆ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದೆ. ಬಳಿಕ ಮನೋಜ್ ಕುಮಾರ್ ಸೇರಿ ಐವರು ಗ್ರಾಮಾಂತರ ಠಾಣೆಗೆ ಬಂದು ಶರಣಾಗಿದ್ದಾರೆ. ಪ್ರಕರಣ ದಾಖಲಿಸಿಕೊಂಡ ಪೊಲೀಸರು, ಉಳಿದ ಐವರು ಆರೋಪಿಗಳನ್ನು ಬಂಧಿಸಿದ್ದಾರೆ.

# ಕಡಲೆ ಖರೀದಿ ಕೇಂದ್ರ ಘೋಷಣೆ ಬೆನ್ನಲ್ಲೇ ಬೆಲೆ ದಿಢೀರ್ ಕುಸಿತ

• ಪರಮೇಶ.ಡಿ.ವಿಳಸಪೂರೆ
• ಉದಯವಾಹಿನಿ ಔರಾದ್


ಉದಯವಾಹಿನಿ ಚಿತ್ರ

**ದಲ್ಲಾಳಿಗೆ ಲಾಭ, ರೈತರಿಗೆ ತೀವ್ರ ನಷ್ಟ**

ಕನಿಷ್ಠ ಬೆಂಬಲಬೆಲೆ (ಎಂಎಸ್‌ಪಿ) ಯೋಜನೆ ಅಡಿ ಜಿಲ್ಲೆಯಾದ್ಯಂತ ಶೀಘ್ರ ಕಡಲೆ ಖರೀದಿ ಕೇಂದ್ರ ಆರಂಭಿಸಲಾಗುವುದು ಎಂದು ಸರ್ಕಾರ ಘೋಷಿಸುತ್ತಿದಂತೆಯೇ ಮುಕ್ತ ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಲ್‌ಗೆ ಇದ್ದ 6,500-6800 ರೂ. ಬೆಲೆ ದಿಢೀರ್ ಕುಸಿತ ಕಂಡಿದೆ.

ಸರ್ಕಾರವೇ ಕಡಿಮೆ ದರ ಘೋಷಿಸಿದ್ದರಿಂದ 5,500- 5,600 ರೂ. ಆಗಿದ್ದು, ಒಂದೇ ವಾರದಲ್ಲಿ ರೈತರಿಗೆ ಪ್ರತಿ ಕ್ವಿಂಟಾಲಗೆ 800 ರಿಂದ 900ರೂ. ನಷ್ಟ ಆಗುತ್ತಿದೆ. ಆದರೂ ಸರ್ಕಾರ ತಿಳಿಸದಂತೆ ಇತ್ತ ಕಡಲೆ ಖರೀದಿ ಕೇಂದ್ರವೂ ಆರಂಭವಾಗಿಲ್ಲ, ಇನ್ನೊಂದು ಕಡೆ ಬೆಲೆ ಕಡಿಮೆಯಾಗಿ ರೈತರು ನಷ್ಟ ಅನುಭವಿಸುವಂತಾಗಿದೆ.

ಕೆಲವು ವರ್ಷಗಳ ನಂತರ ಈ ಭಾಗದಲ್ಲಿ ಹಿಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗಿ ಎಕರೆಗೆ ಸರಾಸರಿ 6ರಿಂದ 8 ಕ್ವಿಂಟಲ್ ಇಳುವರಿ ಬಂದಿದೆ.

ಸರ್ಕಾರ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಕಡಲೆಯನ್ನು ಪ್ರತಿ ಕ್ವಿಂಟಲ್‌ಗೆ 5650 ರೂ.ಗೆ ಖರೀದಿಸುವುದಾಗಿ ಘೋಷಿಸಿದೆ. ಅದು ಪ್ರತಿ ಎಕರೆಗೆ ನಾಲ್ಕು ಕ್ವಿಂಟಲ್ ನಂತೆ ಪ್ರತಿ ರೈತರಿಂದ 20 ಕ್ವಿಂಟಲ್ ಕಡಲೆಯನ್ನು ಮಾತ್ರ ಖರೀದಿಸಲಾಗುವುದೆಂದು ತಿಳಿಸಿದೆ. ಇದರಿಂದ ಹತ್ತಾರು ಎಕರೆಯಲ್ಲಿ ಕಡಲೆ ಬೆಳೆದ ರೈತರು ಸರ್ಕಾರದ ಈ ನಿರ್ಧಾರದಿಂದ ಇಕ್ಕಟ್ಟಿಗೆ ಸಿಲುಕಿದಂತಾಗಿದೆ.

ಜನವರಿ ಮಧ್ಯದಿಂದಲೇ ಕಡಲೆ ರಾಶಿ ಕಾರ್ಯ ಆರಂಭವಾಗಿದ್ದು, ಅರ್ಧದಷ್ಟು ಪ್ರದೇಶದ ಕಟಾವು ಪೂರ್ಣಗೊಂಡಿದೆ. ಪ್ರತಿ ಎಕರೆಗೆ ಮಿಷನ್ನಿನಿಂದ ಕಡಲೆ ಬೆಳೆ ಕಟಾವ ಮಾಡಲು 2200-2400 ರೂ. ಖರ್ಚಾಗುತ್ತಿದೆ. ಕೆಲವು ರೈತರು ದನಕರುಗಳಿಗೆ ಹೊಟ್ಟು ಬೇಕಾಗುವುದರಿಂದ ಕೃಷಿ ಕಾರ್ಮಿಕರಿಂದ ಕಡಲೆ ಗಿಡ ಕೀಳಿಸುತ್ತಿದ್ದು, ಪ್ರತಿ ಎಕರೆಗೆ ಅಂದಾಜು 2800 ರೂ. ಖರ್ಚು ಮಾಡುತ್ತಿದ್ದಾರೆ.

ಇನ್ನೂ ರಾಶಿ ಮಾಡಲು ಪ್ರತಿ ಚೀಲಕ್ಕೂ 250ರೂ. ಖರ್ಚಾಗುತ್ತದೆ. ಸಾಗುವಳಿ, ಬೀಜ ಖರೀದಿ, ಬಿತ್ತನೆ, ಕಿಟನಾಶಕ, ಕಳೆ ತೆಗೆಯುವುದು ಸೇರಿ ಪ್ರತಿ ಎಕರೆಗೆ ಕಡಲೆ ಬೆಳೆ ಬೆಳೆಯಲೂ ರೂ.12,000 ಖರ್ಚು ಮಾಡಲಾಗಿದೆ. ಆದರೆ, ಸರ್ಕಾರ ಬೆಂಬಲ ಬೆಲೆ ಕೇವಲ 5,650.ರೂ. ನಿಗದಿ ಮಾಡಿದ್ದು ಯಾವುದಕ್ಕೂ ಸಾಲುವುದಿಲ್ಲ. ಮತ್ತೆ ನಷ್ಟದ ಮುಖ ನೋಡಬೇಕಿದೆ ಎಂದು ಕುಸುಗಲ್ ಗ್ರಾಮದ ರೈತ ಮಲ್ಲೇಶ ಕುರಹಟ್ಟಿ ಅಳಲು ತೋಡಿಕೊಂಡರು.

> ಹಿಂಗಾರು ಹಂಗಾಮಿನ ಕಡಲೆ ಒಳ್ಳೆಯ ಫಸಲು ಬರುವ ಮೂಲಕ ರೈತ ಮುಖದಲ್ಲಿ ಸಂತಸ ಹೆಚ್ಚಿಸಿದೆ. ಆದರೆ ಕೇಂದ್ರ, ಸರಕಾರದ ಬೆಂಬಲ ಬೆಲೆಗಿಂತ ಮಾರುಕಟ್ಟೆಯಲ್ಲಿ ಕಡಿಮೆ ಬೆಲೆ ನೀಡುತ್ತಿರುವುದರಿಂದ 'ಹಲ್ಲು ಇದ್ದವನಿಗೆ ಕಡಲೆ ಇಲ್ಲ, ಕಡಲೆ ಇದ್ದವನಿಗೆ ಹಲ್ಲು ಇಲ್ಲ' ಎಂಬಂತಾಗಿದೆ ರೈತರ ಪರಿಸ್ಥಿತಿ.
> -ರವಿ ಸ್ವಾಮಿ ಬೋರ್ಗಿ, ಯುವ ರೈತ

ಸರ್ಕಾರ ಬೆಂಬಲ ಬೆಲೆಯನ್ನು ಇನ್ನಷ್ಟು ಹೆಚ್ಚಿಸಬೇಕು. ಎಲ್ಲಾ ರೈತರು ಕಡಲೆ ಬೆಳೆದಿರುವ ದಾಖಲೆ ನೀಡಿ ಬೆಳೆದ ಎಲ್ಲಾ ಉತ್ಪನ್ನವನ್ನೂ ಖರೀದಿಸಬೇಕು ಎಂದು ಅನೇಕ ರೈತರು ಆಗ್ರಹಿಸುತ್ತಾರೆ. ಕಡಲೆಯಿಂದ ತಯಾರಿಸುವ ಪುಟಾಣಿಗೆ ಮಾರುಕಟ್ಟೆಯಲ್ಲಿ ಪ್ರತಿ ಕೆ.ಜಿ.ಗೆ 96 ರೂ. ಹಾಗೂ ಕಡಲೆ ಬೇಳೆಗೆ 84 ರೂ. ಇದೆ. ನಾವು ಬೆಳೆದ ಕಡಲೆಗೆ ಕ್ವಿಂಟಲ್‌ಗೆ 5,500 ರೂ. ಅತ್ಯಂತ ಕಡಿಮೆ. ಖರೀದಿ ಕೇಂದ್ರ ತೆರೆಯುವುದರ ಲಾಭವನ್ನು ದಲ್ಲಾಳಿಗಳೂ, ವ್ಯಾಪಾರಸ್ಥರೂ ಮಾತ್ರ ಪಡೆಯುತ್ತಾರೆ. ಆದರೆ ರೈತ ಬೆಳೆದ ಬೆಳೆಗೆ ಯಾವತ್ತೂ ಲಾಭ ಸಿಗುವುದಿಲ್ಲ ಎಂದು ರೈತ ರವಿ ಸ್ವಾಮಿ ಬೋರ್ಗಿ ಬೇಸರ ವ್ಯಕ್ತಪಡಿಸಿದರು.

# ಕರ್ನಾಟಕಕ್ಕೆ 2 ನಮೋ ಭಾರತ್ ರೈಲು, ಮಾರ್ಗಗಳು

• ಉದಯವಾಹಿನಿ ಹುಬ್ಬಳ್ಳಿ

ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ಮಾದರಿಯಲ್ಲಿ 'ನಮೋ ಭಾರತ್' ರೈಲುಗಳಿಗೆ ಸಹ ಬೇಡಿಕೆ ಇದೆ. ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ 2025-26ನೇ ಸಾಲಿನ ಬಜೆಟ್ ಮಂಡನೆ ಮಾಡಿದ್ದಾರೆ. ಸಾಮಾನ್ಯ ಬಜೆಟ್‌ನಲ್ಲಿಯೇ ರೈಲ್ವೆ ಬಜೆಟ್ ಸೇರಿರುವ ಕಾರಣ ಬಜೆಟ್ ಭಾಷಣದಲ್ಲಿ 'ನಮೋ ಭಾರತ್' ರೈಲುಗಳ ಬಗ್ಗೆ ಘೋಷಣೆ ಮಾಡಲಾಗಿದೆ.



ಕರ್ನಾಟಕ ರಾಜ್ಯಕ್ಕೆ ಎರಡು ನಮೋ ಭಾರತ್ ರೈಲುಗಳು ಸಿಕ್ಕಿವೆ. ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ 'ನಮೋ ಭಾರತ್' ರೈಲುಗಳ ಕುರಿತು ಮಾಹಿತಿ ನೀಡಿದ್ದಾರೆ. ಎರಡು ನಗರಗಳ ನಡುವೆ ಸಂಪರ್ಕ ಕಲ್ಪಿಸಲು ಕೇಂದ್ರ ಸರ್ಕಾರ ಮೊದಲು 'ವಂದೇ ಮೆಟ್ರೋ' ಹೆಸರಿನ ರೈಲು ಘೋಷಣೆ ಮಾಡಿತ್ತು. ಬಳಿಕ ಇದರ ಹೆಸರನ್ನು 'ನಮೋ ಭಾರತ್' ಎಂದು ಬದಲಾವಣೆ ಮಾಡಲಾಗಿದೆ.

ಈಗಾಗಲೇ 2024ರ ಸೆಪ್ಟೆಂಬರ್‌ನಲ್ಲಿ ಬುಜ್-ಅಹಮದಾಬಾದ್ ನಡುವಿನ 'ನಮೋ ಭಾರತ್' ರೈಲು ಸೇವೆಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದ್ದಾರೆ. ಕರ್ನಾಟಕಕ್ಕೆ ಈಗ ಎರಡು ಈ ಮಾದರಿಯ ರೈಲುಗಳನ್ನು ಘೋಷಣೆ ಮಾಡಲಾಗಿದೆ.


> 'ಹುಬ್ಬಳ್ಳಿ-ದಾವಣಗೆರೆ ಮತ್ತು ಬೆಂಗಳೂರು-ಮೈಸೂರು ನಡುವೆ 2 ನಮೋ ಭಾರತ್ ರೈಲುಗಳು ಪ್ರಸಕ್ತ ವರ್ಷದಿಂದಲೇ ಸಂಚರಿಸಲಿವೆ. ಕರ್ನಾಟಕಕ್ಕೆ ಈ ರೈಲು ಸೌಲಭ್ಯ ನೀಡಿದ ಗೌರವಾನ್ವಿತ ಪ್ರಧಾನಿ ಶ್ರೀ ನರೇಂದ್ರ ಮೋದಿಜಿ ಮತ್ತು ರೈಲ್ವೆ ಸಚಿವರಾದ ಶ್ರೀ ಅಶ್ವಿನಿ ವೈಷ್ಣನ್ ಅವರಿಗೆ ಕನ್ನಡಿಗರ ಪರವಾಗಿ ತುಂಬು ಹೃದಯದ ಧನ್ಯವಾದ ಅರ್ಪಿಸುತ್ತೇನೆ' ಎಂದು ತಿಳಿಸಿದ್ದಾರೆ.

ಧಾರವಾಡ ಸಂಸದ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಕರ್ನಾಟಕದ ಎರಡು 'ನಮೋ ಭಾರತ್' ರೈಲುಗಳ ಕುರಿತು ಮಾಹಿತಿ ನೀಡಿದ್ದಾರೆ. ತಮ್ಮ ಪೋಸ್ಟ್‌ನಲ್ಲಿ ಸಚಿವರು, 'ನಮ್ಮ ಹೆಮ್ಮೆಯ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ದೇಶದ ಪ್ರಮುಖ ನಗರಗಳ ನಡುವೆ 50 ನಮೋ ಭಾರತ್ ರೈಲುಗಳು ಸಂಚಾರ ಸೌಲಭ್ಯ ಕಲ್ಪಿಸಿದ್ದಾರೆ. ಇದರಲ್ಲಿ ನಮ್ಮ ಕರ್ನಾಟಕಕ್ಕೂ 2 ರೈಲುಗಳ ಕೊಡುಗೆ ನೀಡಿದ್ದಾರೆ' ಎಂದು ಹೇಳಿದ್ದಾರೆ.

## ಮಿನಿ ನ್ಯೂಸ್

### ನೂತನ ರಥ ಲೋಕಾರ್ಪಣೆ

• ಉದಯವಾಹಿನಿ ಹೊನ್ನಾಳಿ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಹಳೇದೇವರ ಹೊನ್ನಾಳಿ ಗ್ರಾಮದಲ್ಲಿ ಲಕ್ಷ್ಮಿ ದೇವಾಲಯ, ಮಾಧವ ರಂಗನಾಥಸ್ವಾಮಿ ದೇವಾಲಯದ ನೂತನ ವಿಮಾನ ಗೋಪುರದ ಕಳಶಾರೋಹಣ ಹಾಗೂ ನೂತನ ರಥ ಲೋಕಾರ್ಪಣೆ ಕಾರ್ಯಕ್ರಮ ನಡೆಯಿತು.

ಸುಪ್ರಭಾತ ಸೇವೆ, ಕಳಶಾಭಿಷೇಕ, ನೂತನ ರಥಕ್ಕೆ ಕಳಶ ಸ್ಥಾಪನೆ, ಮಾಧವ ರಂಗನಾಥಸ್ವಾಮಿಯ ದಿವ್ಯ ಕಲ್ಯಾಣೋತ್ಸವದ ನಂತರ ಲಕ್ಷ್ಮೀ ಮಾಧವರಂಗನಾಥ ಸ್ವಾಮಿಯನ್ನು ನೂತನ ರಥದಲ್ಲಿರಿಸಿ ಮಹಾ ರಥೋತ್ಸವ ನಡೆಸಲಾಯಿತು. ಶಯಾಸನ, ದೀಪೋತ್ಸವ, ಭೂತನ ಸೇವೆ, ಅವಭೃಥ ಸ್ನಾನ ಕಾರ್ಯಕ್ರಮಗಳು ನೆರವೇರಿದವು. ಅನ್ನ ಸಂತರ್ಪಣೆ ನಡೆಯಿತು.

ದೈವಪ್ರೇರಣೆಯಿಂದ ಈ ರಥವನ್ನು ನಿರ್ಮಿಸಿ ದೇವಸ್ಥಾನದ ಆಡಳಿತ ಮಂಡಳಿಗೆ ಸಲ್ಲಿಸಿದ್ದಾಗಿ ಸ್ವದೇಶಿ ಗ್ರೂಪ್‌ನ ಸಿಇಒ ಆಗಿರುವ ಗ್ರಾಮದ ಯುವಕ ಕೆ.ಪ್ರವೀಣ್ ಕರಿಬಸಪ್ಪ ಹೇಳಿದರು. ವೈಯಕ್ತಿಕವಾಗಿ 45 ಲಕ್ಷ ಹಾಗೂ ಭಕ್ತರ ದೇಣಿಗೆ ನೆರವಿನಿಂದ ರಥ ನಿರ್ಮಿಸಲಾಗಿದೆ. ಮುಂದಿನ ದಿನಗಳಲ್ಲಿ ಕ್ಷೇತ್ರವನ್ನು ಪ್ರೇಕ್ಷಣೀಯ ಸ್ಥಳವನ್ನಾಗಿ ಮಾಡುವ ಕನಸಿದೆ ಎಂದು ಹೇಳಿದರು. ನಿವೃತ್ತ ಉಪನ್ಯಾಸಕ ವರದರಾಜ್, ಗ್ರಾಮದ ಯುವಮು ಖಂಡರಾದ ಕೆ. ಮಾದಪ್ಪ, ರಂಗನಾಥ್, ಪ್ರಕಾಶ್, ಎಂ.ಎಸ್. ಸುನೀಲ್, ಉಪನ್ಯಾಸಕ ಹಾಲೇಶ್, ನಾಗೇಂದ್ರಪ್ಪ ಹಾಗೂ ಪ್ರಧಾನ ಅರ್ಚಕರು ಉಪಸ್ಥಿತರಿದ್ದರು.

### ಹಬೀಬುಲ್ಲಾ ಷಾ ಖಾದ್ರಿ ಉರುಸ್

• ಉದಯವಾಹಿನಿ ಮಲೇಬೆನ್ನೂರು

ಸೂಫಿ ಸಂತ ಹಜರತ್ ಸೈಯದ್ ಹಬೀಬುಲ್ಲಾ ಷಾ ಖಾದಿ ಉರುಸ್‌ಗೆ ಪಟ್ಟಣ ಸಜ್ಜಾಗಿದೆ. ಗಂಧ ಮೆರವಣಿಗೆ (ಸಂಧಲ್) ಹಾಗೂ ಉರುಸ್ ನಡೆಯಲಿವೆ. ಹಿಂದೂ-ಮುಸ್ಲಿಂ ಭಾವೈಕ್ಯತೆ ಸಾರುವ ಉರುಸ್ ಅಂಗವಾಗಿ ದರ್ಗಾ ಷರೀಫ್‌ನಿಂದ ಆರಂಭವಾಗುವ ಮೆರವಣಿಗೆ ಪಟ್ಟಣದ ರಾಜಬೀದಿಯಲ್ಲಿ ಸಾಗಲಿದೆ. ಮುಸ್ಲಿಂ ಧರ್ಮಗುರುಗಳು ಹಿಂದೂ ಧರ್ಮೀಯರ ಮನೆಯಿಂದ ಶ್ರೀಗಂಧ ಪಡೆದು, ಹಿಂದೂ ಧರ್ಮ ಗುರುಗಳ ಜತೆ ಗಂಧದ ಮೆರವಣಿಗೆ ನಡೆಸುವುದು ಸಂಪ್ರದಾಯ.

ಗಂಧದ ಧೂಪದ ಸುವಾಸನೆ ನಡುವೆ ಬಾಜಾ ಭಜಂತ್ರಿ, ಫಕೀರರ ಪವಾಡ, ಖಂಜರ ನಿನಾದ, ವಾದ್ಯವೃಂದ, ಗೀತ ಗಾಯನ, ದಫ್ಟ್, ಖುರಾನ್ ಪಠಣೆಯೊಟ್ಟಿಗೆ ಸಕ್ಕರೆ ನಿವೇದಿಸಿ ಭಕ್ತಿ ಸಮರ್ಪಿಸಿ ಭಾವೈಕ್ಯ ಸಂದೇಶ ಸಾರಲಾಗುತ್ತದೆ. ಪ್ರಯುಕ್ತ ಪಟ್ಟಣದಲ್ಲಿ ಉರುಸ್ ಶುಭಾಶಯ ಕೋರುವ ಪ್ರಕ್ಸ್, ಬ್ಯಾನರ್, ಬಂಟಿಂಗ್ಸ್, ದೀಪಾಲಂಕಾರ ಜನಮನ ಸೆಳೆಯುತ್ತಿದೆ. ಬಡಾವಣೆಗಳು ವಾಹನ, ಜನರಿಂದ ತುಂಬಿವೆ. ಭೋಜನ ವ್ಯವಸ್ಥೆ ಭರದಿಂದ ಸಾಗಿದೆ.

ದರ್ಗಾ ರಸ್ತೆ, ಷರೀಫಿಗೆ ಝಗಮಗಿಸುವ ಆಕರ್ಷಕ ವಿದ್ಯುತ್ ದೀಪಾಲಂಕಾರ ಮಾಡಲಾಗಿದೆ. ದರ್ಗಾ ಮೈದಾನದಲ್ಲಿ ಬಗೆಬಗೆಯ ಮನೋರಂಜನಾ ಬೈಕ್, ಕುದುರೆ, ವಾಹನ ಸವಾರಿ, ತಿರುಗು ಯಂತ್ರ, ಕುಣಿತ, ಜಿಗಿತ, ತಿರುಗಣಿ ಆಟ ಇನ್ನಿತರ ವಿವಿಧ ಬಗೆಯ ಆಕರ್ಷಕ ಆಟಗಳ ವ್ಯವಸ್ಥೆ ಇದೆ. ಆಲಂಕಾರಿಕ ವಸ್ತು, ಪುಸ್ತಕ, ಗಾಜಿನ ವಸ್ತು, ಬಟ್ಟೆ ಆಟಿಕೆ ಸಾಮಾನು, ಬಳೆ, ವಿದ್ಯುನ್ಮಾನ ವಸ್ತುಗಳ ಮಾರಾಟ ಮಳಿಗೆಗಳು ತಲೆ ಎತ್ತಿವೆ.

### ಕೆರೆಗೆ ಉರುಳಿ ಬಿದ್ದ ಕಾರು : ಐವರು ವೈದ್ಯಕೀಯ ವಿದ್ಯಾರ್ಥಿಗಳಿಗೆ ಗಾಯ

• ಉದಯವಾಹಿನಿ ಹಾಸನ

ಕಾರಿನ ಟೈರ್ ಪಂಚರ್ ಆಗಿ ನಿಯಂತ್ರಣ ಕಳದ ಕೊಂಡು ರಸ್ತೆ ಬದಿಯಲ್ಲಿದ್ದಂತಹ ಕೆರೆಗೆ ಉರುಳಿ ಬಿದ್ದ ಪರಿಣಾಮ ಕಾರಿನಲ್ಲಿದ್ದ ಐವರು ವೈದ್ಯಕೀಯ ವಿದ್ಯಾರ್ಥಿಗಳು ಗಂಭೀರವಾಗಿ ಗಾಯಗೊಂಡಿರುವ ಘಟನೆ ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಮುದ್ದೆನಹಳ್ಳಿ ಗೇಟ್ ಬಳಿ ನಡೆದಿದೆ.

ಘಟನೆಯಲ್ಲಿ ಕಾರಿನಲ್ಲಿದ್ದ ಐವರಿಗೆ ಗಂಭೀರವಾಗಿ ಗಾಯಗಳಿವೆ. ತಕ್ಷಣ ಸ್ಥಳೀಯರು ಚನ್ನರಾಯಪಟ್ಟಣ ಆಸ್ಪತ್ರೆಗೆ ದಾಖಲಿಸಿದ್ದಾರೆ. ಕಾರಿನಲ್ಲಿದ್ದವರು ಚೆನ್ನೈ ಮೂಲದ ವೈದ್ಯಕೀಯ ವಿದ್ಯಾರ್ಥಿಗಳು ಎಂದು ತಿಳಿದು ಬಂದಿದೆ. ಕಾರಿನಲ್ಲಿ ಸಿಲುಕಿದವರನ್ನು ಕೂಡಲೇ ಸ್ಥಳೀಯರು ಆಸ್ಪತ್ರೆಗೆ ರವಾನಿಸಿದ್ದಾರೆ.

ಅದೃಷ್ಟವಶಾತ್ ಕಾರಿನಲ್ಲಿದ್ದ ಎಲ್ಲಾ ವಿದ್ಯಾರ್ಥಿಗಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಘಟನೆ ಕುರಿತು ಚನ್ನರಾಯಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಾಲ ಮಂಜೂರಾತಿ ಹಾಗೂ ವಸೂಲಾತಿ ನಿಯಮ ಬದ್ಧವಾಗಿರಲಿ

## ಆರ್‌ಬಿಐ ಮಾರ್ಗಸೂಚಿ ಪಾಲನೆ ಕಡ್ಡಾಯ, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ

• ಉದಯವಾಹಿನಿ ಚಿತ್ರದುರ್ಗ


ಉದಯವಾಹಿನಿ ಚಿತ್ರ

ಮೈಕ್ರೋ ಫೈನಾನ್ಸ್, ಲೇವಾದೇವಿ, ಗಿರವಿ ಹಣಕಾಸು ಸಂಸ್ಥೆಗಳು ಕಡ್ಡಾಯವಾಗಿ ಆರ್.ಬಿ.ಐ (ಭಾರತೀಯ ರಿಸರ್ವ್ ಬ್ಯಾಂಕ್) ಮಾರ್ಗಸೂಚಿ ಪಾಲನೆ ಮಾಡಬೇಕು. ಸಾಲ ಮಂಜೂರಾತಿ ಹಾಗೂ ವಸೂಲಾತಿ ನಿಯಮ ಬದ್ಧವಾಗಿರಬೇಕು. ಯಾವುದೇ ಕಾರಣಕ್ಕೂ ನಿಯಮಬಾಹಿರ ಮಾರ್ಗ ಅನುಸರಿಸಬಾರದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

ಸಾಲ ವಸೂಲಾತಿ ಸಮಯದಲ್ಲಿ ಸಾರ್ವಜನಿಕರಿಗೆ ನೀಡುತ್ತಿರುವ ಕಿರುಕುಳ ಹಾಗೂ ಅತಿಯಾದ ಬಡ್ಡಿ ವಿಧಿಸುತ್ತಿರುವ ಕುರಿತಂತೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಮೈಕ್ರೋ ಫೈನಾನ್ಸ್, ಲೇವಾದೇವಿ, ಗಿರವಿ ಹಣಕಾಸು ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾಲ ಮಂಜೂರಾತಿ ಸಂದರ್ಭದಲ್ಲಿಯೇ ಸಂಸ್ಥೆಯ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ಸಾಲ ಪಡೆಯುವವರಿಗೆ ಮನವರಿಕೆ ಮಾಡಿಕೊಡಬೇಕು. ಯಾವುದೇ ಕಾರಣಕ್ಕೂ ಮಾನವೀಯತೆ ಹಾಗೂ ಮಾನವೀಯ ಮೌಲ್ಯಗಳನ್ನು ಮೀರಿ ಸಾಲ ವಸೂಲಾತಿ ಮಾಡಬಾರದು. ನಿಯಮಬದ್ಧವಾಗಿಯೇ ಸಾಲ ವಸೂಲಾತಿ ಮಾಡಬೇಕು. ಯಾವುದೇ ತರಹದ ಒತ್ತಡವನ್ನು ಸಾಲಗಾರರ ಮೇಲೆ ಹೇರಬಾರದು. ಅಪರಾಧ ಹಿನ್ನಲೆ ಹೊಂದಿರುವವರನ್ನು ಸಾಲ ವಸೂಲಾತಿಗೆ ನೇಮಿಸಿಕೊಳ್ಳಬಾರದು ಎಂದು ಹೇಳಿದರು.

> ಹಣಕಾಸು ಸಂಸ್ಥೆಗಳು ಸಾಲ ನೀಡುವಾಗ ಪಾರದರ್ಶಕತೆಯನ್ನು ಕಾಯ್ದುಕೊಳ್ಳಬೇಕು. ಸಾಲ ನೀಡುವಾಗ ಎಲ್ಲಾ ಮುನ್ನಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಮನಿ ಲೆಂಡರ್ ಆಕ್ಟ್, ಪಾನ್ ಬ್ರೋಕರ್ ಆಕ್ಟ್ ಹಾಗೂ ಆರ್.ಬಿ.ಐ. ಮಾರ್ಗಸೂಚಿಗಳನ್ನು ಸರಿಯಾಗಿ ತಿಳಿದುಕೊಳ್ಳಬೇಕು. ಯಾವುದೇ ಕಾರಣಕ್ಕೂ ಸಾಲ ವಸೂಲಾತಿಗೆ ಕಾನೂನುಬಾಹಿರ ಕ್ರಮಗಳನ್ನು ಕೈಗೊಳ್ಳಬಾರದು. ಮನೆಗೆ ತೆರಳಿ ಗಲಾಟೆ, ಸಂಬಂಧಿಕರಿಗೆ ಕಿರುಕುಳ, ರಾತ್ರಿ ಸಮಯದಲ್ಲಿ ಸಾಲ ವಸೂಲಾತಿಯಂತಹ ಮಾರ್ಗಗಳನ್ನು ಅನುಸರಿಸಬಾರದು. ರಾಜ್ಯ ಸರ್ಕಾರ ಇಂತಹ ಕ್ರಮಗಳನ್ನು ಗಂಭೀರವಾಗಿ ಪರಿಗಣಿಸಿದೆ. ಕಾಯ್ದೆಗಳನ್ನು ಮೀರಿ ಸಾಲ ವಸೂಲಾತಿ ಮಾಡುತ್ತಿರುವ ಬಗ್ಗೆ ದೂರು ಕೇಳಿಬಂದರೆ, ತಕ್ಷಣವೇ ಸಾಲ ವಸೂಲಿಗೆ ಬಂದವರ ಮೇಲೆ ಅಪರಾಧಿಕ ಅತಿಕ್ರಮಣ, ದೌರ್ಜನ್ಯ ಹಾಗೂ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಅಪರಾಧಗಳ ಅಡಿ ಬಂಧಿಸಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು
> -ರಂಜಿತ್ ಕುಮಾರ್ ಬಂಡಾರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

**ಮಧ್ಯವರ್ತಿಗಳಿಗೆ ಅವಕಾಶ ನೀಡಬಾರದು**



ಉದಯವಾಹಿನಿ ಚಿತ್ರ

ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಒಬ್ಬರ ಹೆಸರಿನಲ್ಲಿ ಮತ್ತೊಬ್ಬರಿಗೆ ಸಾಲ ನೀಡುವುದಾಗಲಿ, ವಸೂಲಿ ಮಾಡುವುದಾಗಲಿ ಮಾಡಬಾರದು. ಸಾಲ ಮಂಜೂರಾತಿ ಸಂದರ್ಭದಲ್ಲಿ ನೇರವಾಗಿ ಸಾಲ ಪಡೆದವರೊಂದಿಗೇ ವ್ಯವಹರಿಸಬೇಕು. ಮಧ್ಯವರ್ತಿಗಳಿಗೆ ಅವಕಾಶ ನೀಡಬಾರದು. ಸಾಲ ಮಂಜೂರಾತಿ ನಿಯಮಗಳು, ಸಾಲದ ಮೊತ್ತ, ಅವಧಿ, ಬಡ್ಡಿ ದರ, ಹಿಂಪಾವತಿ ಅವಧಿ ಸೇರಿದಂತೆ ಅಗತ್ಯ ಮಾಹಿತಿಗಳನ್ನೊಳಗೊಂಡ ಸತ್ಯಾಂಶ ಮಾಹಿತಿಯನ್ನು (ಫ್ಯಾಕ್ಟ್ ಶೀಟ್) ಸಾಲ ಪಡೆಯುವವರಿಗೆ ಕಡ್ಡಾಯವಾಗಿ ನೀಡಬೇಕು ಎಂದು ಸೂಚಿಸಿದರು.

**ಸಾಲಗಾರರ ಮೇಲೆ ಒತ್ತಡವನ್ನು ಹೇರಬಾರದು**

ಮೈಕ್ರೋ ಫೈನಾನ್ಸ್ ಸಾಲ ವಸೂಲಾತಿ ಕಿರುಕುಳ ತಡೆಯುವ ನಿಟ್ಟಿನಲ್ಲಿ ಮಾರ್ಗಸೂಚಿಗಳ ರೂಪಿಸಿ ರಾಜ್ಯ ಸರ್ಕಾರ ಸುಗ್ರೀವಾಜ್ಞೆ ಮೂಲಕ ಹೊಸ ಕಾಯ್ದೆ ಜಾರಿ ಮಾಡಲಿದೆ. ಇದರ ಅನುಸಾರ ಉಪವಿಭಾಗಾಧಿಕಾರಿಗಳು ಅಧ್ಯಕ್ಷತೆಯಲ್ಲಿ ಪ್ರಾಧಿಕಾರ ರಚಿಸಲಾಗುವುದು.


ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ಘಟಕ ತೆರೆಯಲಾಗುವುದು.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ತಮ್ಮ ಮಾಹಿತಿಯನ್ನು ಜಿಲ್ಲಾಧಿಕಾರಿ ಕಚೇರಿಗೆ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

ಸಭೆಯಲ್ಲಿ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕ ಕುಮಾರ್ ಬಾಬು, ಡಿವೈಎಸ್‌ಪಿಗಳಾದ ದಿನಕರ್, ರಾಜಣ್ಣ, ಶಿವಕುಮಾರ್ ಹಾಗೂ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು ಇದ್ದರು.

# ಕನಸು ನನಸಾಗಲು ಸಾಧಕರ ಸಾಧನೆ ಅರಿಯಿರಿ

• ಉದಯವಾಹಿನಿ ಕೊಣನೂರು


ಉದಯವಾಹಿನಿ ಚಿತ್ರ

**ಪ್ರತಿಭಾ ಪುರಸ್ಕಾರ ಸಮಾರಂಭ**

ಕನಸು ನನಸಾಗಿಸಲು ನೀವು ಆಯ್ಕೆ ಮಾಡಿಕೊಂಡ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಸಾಧಕರ ಯಶಸ್ಸಿನ ಹಾದಿ ಅರಿತುಕೊಂಡಲ್ಲಿ ಸಾಧನೆ ಹಾದಿ ಸುಲಭ' ಎಂದು ಶಾಸಕ ಎ.ಮಂಜು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಪಟ್ಟಣದಲ್ಲಿ ಮಂಗಳವಾರ ಭವಾನಿ ಶಂಕರಿ ಚಾರಿಟಬಲ್ ಟ್ರಸ್ಟ್ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮಾತನಾಡಿ, 'ಸಂಸ್ಕಾರ, ಸಾಮರ್ಥ್ಯದ ಮೂಲಕ ಇಷ್ಟದ ಬದುಕನ್ನು ರೂಪಿಸಿಕೊಳ್ಳಲು ಪ್ರಯತ್ನಿಸಬೇಕು. ಜಾತಿ ಮತ್ತು ಹಣದ ಪ್ರಭಾವದಿಂದ ಪ್ರಸ್ತುತ ರಾಜಕಾರಣ ವ್ಯವಸ್ಥೆ ಹಾಳಾಗಿದೆ. ರಾಜಕೀಯ ವ್ಯಕ್ತಿಗಳನ್ನು ಮಾದರಿಯಾಗಿಟ್ಟುಕೊಳ್ಳದೆ, ಸಾಧಕರನ್ನು ಮಾದರಿಯಾಗಿಟ್ಟುಕೊಂಡು ನಿಮ್ಮ ಭವಿಷ್ಯ ಉತ್ತಮವಾಗಿ ರೂಪಿಸಿಕೊಳ್ಳಿ' ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ವೆಂಕಟೇಶ್ ಮಾತನಾಡಿ, 'ನಿಮ್ಮ ಮುಂದೆ ನೂರಾರು ಅವಕಾಶಗಳಿದ್ದು, ಸವಾಲಗಳು ಸಹ ಅಷ್ಟೇ ಇರುವುದರಿಂದ ನಿಮ್ಮ ಆಯ್ಕೆಗೆ ಬದ್ಧರಾಗಿರಬೇಕು' ಎಂದರು.

ಕಾರ್ಯಕ್ರಮದಲ್ಲಿ ಹೋಬಳಿಯ ವಿವಿಧ ಶಾಲೆಗಳಲ್ಲಿ 7ನೇ ತರಗತಿಯಿಂದ ಪದವಿವರೆಗೂ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳು ಮತ್ತು ಕ್ರೀಡೆಗಳಲ್ಲಿ ರಾಜ್ಯ ಮತ್ತು ರಾಷ್ಟ್ರಮಟ್ಟದ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು. ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಜಯಮ್ಮ ಅತಿಥಿ ರಮೇಶ್, ಕೆ.ಎನ್.ಕೃಷ್ಣಸ್ವಾಮಿ, ಭವಾನಿಶಂಕರಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷ ಗಣೇಶಮೂರ್ತಿ, ಸದಸ್ಯರು ಹೋಬಳಿಯ ವಿವಿಧ ಶಾಲೆಗಳ ಸಾಧಕ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸ್ಥಳೀಯರಿದ್ದರು.

ಕೊಣನೂರಿನ ಶ್ರೀ ಭವಾನಿಶಂಕರಿ ಚಾರಿಟಬಲ್ ಟ್ರಸ್ಟ್‌ನ ವತಿಯಿಂದ ನಡೆದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ರಾಜ್ಯ ಮತ್ತು ರಾಷ್ಟ್ರಮಟ್ಟದ ಸಾಧನೆಮಾಡಿದ ವಿದ್ಯಾಥರ್‌ಗಳಿಗೆ ಬಹುಮಾನ ನೀಡಲಾಯಿತು.

> ಅತಿಥಿಗಳಾದ ಅಚ್ಯುತಾನಂದ ಮತ್ತು ಡಾ.ಎನ್.ವಾಸುದೇವ್ ಮಾತನಾಡುತ್ತಾ, ಆಕಾಶದಷ್ಟು ಕನಸು ಕಾಣಿ, ಬೆಟ್ಟದಷ್ಟು ಪ್ರಯತ್ನ ಮಾಡಿದಾಗ ಮಾತ್ರ ಕಂಡ ದೊಡ್ಡ ಕನಸನ್ನು ನನಸು ಮಾಡಿಕೊಳ್ಳಲು ಸಾಧ್ಯ' ಎಂದರು.

# ಸಮಾಜಕ್ಕಾಗಿ ಶ್ರಮಿಸಿದ ಯುಗ ಪುರುಷ ಸವಿತಾ ಮಹರ್ಷಿ: ಶಾಸಕ

• ಉದಯವಾಹಿನಿ ಚಿಕ್ಕಮಗಳೂರು


ಉದಯವಾಹಿನಿ ಚಿತ್ರ

ಸವಿತಾ ಮಹರ್ಷಿಗಳು ಸಮಾಜದ ಶ್ರೇಷ್ಠತೆಗೆ ಶ್ರಮಿಸಿದ ಮಹಾನ್ ಯುಗ ಪುರುಷ ಎಂದು ಶಾಸಕ ಎಚ್.ಡಿ. ತಮ್ಮಯ್ಯ ಹೇಳಿದರು. ನಗರದ ಕುವೆಂಪು ಕಲಾ ಮಂದಿರದ ಹೇಮಾಂಗಣದಲ್ಲಿ ಜಿಲ್ಲಾಡಳಿತದ ವತಿಯಿಂದ ಏರ್ಪಡಿಸಲಾಗಿದ್ದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

'ಸವಿತಾ ಮಹರ್ಷಿಗಳು ಸಮಾಜಮುಖಿಯಾಗಿ ಬೆಳೆದು ದಾರಿ ದೀಪವಾಗಿದ್ದಾರೆ. ಇಂತಹ ಮಹಾತ್ಮರ ಜಯಂತಿ ಆಚರಿಸುವ ಮೂಲಕ ಸರ್ಕಾರ ಇವರ ಆದರ್ಶಗಳ ಹಾದಿಯಲ್ಲಿ ನಡೆಯಲು ನಮಗೆ ಬೆಳಕು ತೋರಿಸಿದೆ.

ಸವಿತಾ ಸಮಾಜದ ಬಂಧುಗಳು ಮಹರ್ಷಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು' ಎಂದು ಹೇಳಿದರು.

ಸವಿತಾ ಸಮಾಜವು ಹಿಂದುಳಿದ ಸಮಾಜವಾಗಿದ್ದು ಸರ್ಕಾರದ ಸೌಲಭ್ಯ ಬಳಸಿಕೊಂಡು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಬೆಳೆಯಬೇಕು. ಜೊತೆಗೆ ಸಹಕಾರ ಸಂಘಗಳ ಮೂಲಕ, ಆರ್ಥಿಕ ಚಟುವಟಿಕೆಗಳ ಮೂಲಕ ಸಂಘಟಿತರಾಗಬೇಕು. ಸವಿತಾ ಸಮಾಜಕ್ಕೆ ಜಾಗ ಮಂಜೂರು ಮಾಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಉಪ ತಹಶೀಲ್ದಾರ್ ರಾಮರಾವ್ ದೇಸಾಯಿ, ಸಮಾಜದ ಮುಖಂಡ ವಿಶ್ವನಾಥ್, ಸವಿತಾ ಸಮಾಜದ ಜಿಲ್ಲಾ ಘಟಕದ ಅಧ್ಯಕ್ಷ ಮಹಾಲಿಂಗ, ಸಮಾಜದ ಮುಖಂಡರಾದ ಯೋಗೇಶ್. ರಾಘವೇಂದ್ರ ಉಪಸ್ಥಿತರಿದ್ದರು.

> ಪೌರಣಿಕ ವ್ಯಕ್ತಿಯಾದ ಸವಿತಾ ಮಹರ್ಷಿಯು ರಥ ಸಪ್ತಮಿಯ ದಿನ ಜನಿಸಿದರು. ಶಿವನ ಬಲಗಣ್ಣಿನಿಂದ ಜನಿಸಿದವರೇ ಸವಿತಾ ಮಹರ್ಷಿ ಎಂಬ ನಂಬಿಕೆ ಇದೆ. ಅಪಾರ ಜ್ಞಾನ ಭಂಡಾರ ಹೊಂದಿದ ಮಹರ್ಷಿಗಳು, ನಾಲ್ಕನೇ ವೇದವಾದ ಸಾಮವೇದ ಕೃತಿ ರಚಿಸಿದ್ದಾರೆ - ಬಿ.ತಿಪ್ಪೇರುದ್ರಪ್ಪ,

### ವರದಕ್ಷಿಣೆ ಕಿರುಕುಳ ಆರೋಪ: ಗೃಹಿಣಿ ನೇಣಿಗೆ ಶರಣು, ಪತಿ ಸೇರಿ ನಾಲ್ವರ ವಿರುದ್ಧ ಎಫ್ಐಆರ್

• ಉದಯವಾಹಿನಿ ಧಾರವಾಡ

ಗೃಹಿಣಿಯೊಬ್ಬರು ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ಧಾರವಾಡ ಜಿಲ್ಲೆಯ ಅಣ್ಣಿಗೇರಿಯಲ್ಲಿ ನಡೆದಿದೆ. ಆದರೆ ಪತಿಯ ಮನೆಯವರ ವರದಕ್ಷಿಣೆ ಕಿರುಕುಳದಿಂದ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬ ಆರೋಪ ಕೇಳಿಬರುತ್ತಿದೆ. ಮೃತ ಗೃಹಿಣಿಯನ್ನು ಶಭನಮ್ ಎಂದು ತಿಳಿದು ಬಂದಿದೆ. ನಿನ್ನೆ ನೇಣು ಬಿಗಿದು ಆತ್ಮಹತ್ಯೆಗೆ ಯತ್ನಿಸಿದ್ದ ಮಹಿಳೆ ಯನ್ನು ಅಣ್ಣಿಗೇರಿ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು ಆದರೆ ಚಿಕಿತ್ಸೆ ಫಲಕಾರಿಯಾಗದೇ ಮಹಿಳೆ ಸಾವನ್ನಪ್ಪಿದ್ದಾರೆ. ಮಹಿಳೆಯ ಕತ್ತಿನ ಭಾಗದಲ್ಲಿ ಗಾಯಗಳಾಗಿದ್ದು, ಸಾಕಷ್ಟು ಅನುಮಾನಕ್ಕೆ ಕಾರಣವಾಗಿದೆ.

ಇನ್ನು ಮಹಿಳೆಯ ಮಗ ಅಮ್ಮನಿಗೆ ತಂದೆ ಹಾಗೂ ಅಜ್ಜಿ ಹೊಡೆದಿರುವುದಾಗಿ ಕಣ್ಣೀರಿಟ್ಟಿದ್ದಾನೆ. ನಾಲ್ಕು ವರ್ಷಗಳ ಹಿಂದೆ ವಿವಾಹವಾಗಿದ್ದ ಶಭನಮ್‌ಗೆ ಪತಿ ಹಾಗೂ ಕುಟುಂಬದವರು ಕಿರುಕುಳ ನೀಡುತ್ತಿದ್ದರು ಎನ್ನಲಾಗಿದೆ. ಅನುಮಾನಾಸ್ಪದವಾಗಿ ಶಭನಮ್ ಸಾವನ್ನಪ್ಪಿದ್ದು, ಶಭನಮ್ ಪತಿ ಸಾಮದಾನಿ ಗೌಸುಸಾಬ್, ಫಾತಿಮ ಅಮಾಬುಸಾಬ್, ದಾವಲ್ಮಾ ರಫಿಕ್ ವಿರುದ್ಧ ಎಫ್ಐಆರ್ ದಾಖಲಾಗಿದೆ.

# ಜಿಲ್ಲಾ ಪತಂಜಲಿ ಯೋಗ ಸಮಿತಿಯಿಂದ ರಥಸಪ್ತಮಿ ಆಚರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲೆಯ ವಿವಿಧ ಕಡೆಗಳಲ್ಲಿ ರಥಸಪ್ತಮಿ ಅಂಗವಾಗಿ ಸೂರ್ಯ ದೇವರ ವಿಶೇಷ ಪೂಜೆ, ಆರಾಧನೆ ನಡೆಯಿತು. ನಗರದ ವಾಸವಿ ಶಾಲಾ ಆವರಣದಲ್ಲಿ ಜಿಲ್ಲಾ ಪತಂಜಲಿ ಯೋಗ ಸಮಿತಿ ವತಿಯಿಂದ ಬುಧವಾರ ಹಮ್ಮಿಕೊಳ್ಳಲಾಗಿದ್ದ ರಥ ಸಪ್ತಮಿ ಕಾರ್ಯಕ್ರಮದಲ್ಲಿ ಬೆಳಿಗ್ಗೆ 5ಗಂಟೆಗೆ ಸರಿಯಾಗಿ ಪತಂಜಲಿ ಯೋಗ ಶಾಖೆಗಳಿಂದ ಬಂದಿದ್ದ ಯೋಗ ಶಿಕ್ಷಕ ಶ್ರೀಧರ್ ನೇತೃತ್ವದಲ್ಲಿ 108 ಸೂರ್ಯ ನಮಸ್ಕಾರ ಅಗ್ನಿಹೋತ್ರ ಹೋಮ ಹಾಗೂ ಸೂರ್ಯದೇವನಿಗೆ ಅರ್ಘ್ಯವನ್ನು ಸಮರ್ಪಿಸುವ ಮೂಲಕ ಶ್ರದ್ಧಾ ಭಕ್ತಿಯಿಂದ ಸೂರ್ಯನ ಆರಾಧನೆ ಮಾಡಿದರು. ಈ ಸಂಧರ್ಭದಲ್ಲಿ ಮಾತನಾಡಿದ ಅವರು ರಥಸಪ್ತಮಿ ಸಾಂಕೇತಿಕವಾಗಿ ಸೂರ್ಯ - ದೇವರು ಏಳು ಕುದುರೆಗಳಿಂದ (ಏಳು ಬಣ್ಣಗಳನ್ನು ಪ್ರತಿನಿಧಿಸುವ) ಎಳೆಯುವ ತನ್ನ ರಥವನ್ನು ಉತ್ತರ ಗೋಳಾರ್ಧದ ಕಡೆಗೆ, ಈಶಾನ್ಯ ದಿಕ್ಕಿನಲ್ಲಿ ತಿರುಗಿಸುವ ರೂಪದಲ್ಲಿ ಪ್ರತಿನಿಧಿಸಲಾಗುತ್ತದೆ. ಇದು ಸೂರ್ಯನ ಜನ್ಮವನ್ನು ಸೂಚಿಸುತ್ತದೆ ಮತ್ತು ಆದ್ದರಿಂದ ಸೂರ್ಯ ಜಯಂತಿ ಎಂದು ಸಹ ಆಚರಿಸಲಾಗುತ್ತದೆ. ಕಾರ್ಯಕ್ರಮದಲ್ಲಿ ಜಿಲ್ಲಾ ಪತಂಜಲಿ ಸಮಿತಿ ಅಧ್ಯಕ್ಷ ದೇವಾನಂದ ನಾಯಕ್ ಕಾರ್ಯದರ್ಶಿ ಗುರುಮೂರ್ತಿ ಯೋಗ ತರಬೇತುದಾರ ವಾಸವಿ ಶಾಲೆ ಕಾರ್ಯದರ್ಶಿ ಅಜಯ್ ಕುಮಾರ್ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

# ಮಾನವ ಕುಲಕ್ಕೆ ವೇದ ಶಿಕ್ಷಣ ನೀಡಿದವರು ಸವಿತಾ ಮಹರ್ಷಿಗಳು

## ● ಇಂದು ನಾಗರಿಕರ ಸಮಾಜ ಸುಂದರವಾಗಿ ಕಾಣಿಸಿಕೊಳ್ಳುವಲ್ಲಿ ಸವಿತಾ ಸಮಾಜದ ಕೊಡುಗೆ ಅಪಾರ: ಬಿ.ಎಸ್ ಸಾವಳಗಿ

• ಉದಯವಾಹಿನಿ ಮುದ್ದೇಬಿಹಾಳ


ಉದಯವಾಹಿನಿ ಚಿತ್ರ

ಮಾನವ ಕುಲಕ್ಕೆ ಅಗತ್ಯ ಸಂಸ್ಕಾರಗಳನ್ನು ನೀಡುವ ಮೂಲಕ ಮಾನವ ಉನ್ನತಸ್ಥಾನಕ್ಕೆ ಕರೆದೊಯ್ಯುವ ವೇದ ಶಿಕ್ಷಣ ನೀಡಿದವರು ಸಾಮವೇದ ಕರ್ತೃ ಸವಿತಾ ಮಹರ್ಷಿಗಳು ಎಂದು ಸವಿತಾ ಸಮಾಜದ ಸಂಶೋಧಕ ಲೇಖಕ ಮಹೇಶ ತೇಲಂಗಿ ಹೇಳಿದರು.

ಬುಧವಾರ ತಾಲ್ಲೂಕ ಆಡಳಿತದಿಂದ ತಹಶೀಲ್ದಾರ ಕಚೇರಿ ಸಭಾ ಭವನದಲ್ಲಿ ಹಮ್ಮಿಕೊಂಡ ಸಾಮವೇದ ಕರ್ತೃ ಸವಿತಾ ಮಹರ್ಷಿಗಳ ಜಯಂತೋತ್ಸವ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಅವರು ಪ್ರಭು ಶ್ರೀರಾಮ ಕಾಲ್ಪನಿಕ ಪುರಷನೆಂದು ಹೇಳುವ ಈ ಕಾಲಘಟ್ಟದಲ್ಲಿ ನಮ್ಮ ಮಹರ್ಷಿಗಳ ಮಾಹಿತಿ ನಮಗೆ ಇರದೆ ಇರುವುದು ದುರಂತ ಸವಿತಾ ಮಹರ್ಷಿಗಳು ಚತುರ್ವೇದದ ಅಧಿಪತಿಗಳು ಉಪಯನದ ಜನಕರು ಸಾಕ್ಷಾತ್ ಸೂರ್ಯದೇವರ ಪ್ರತಿರೂಪವೇ ಸವಿತಾ ಮಹರ್ಷಿಗಳು ಉಪನಯನ ಸಂಸ್ಕಾರ ದೇವತೆಗಳಿಂದ ಮನುಕುಲದ ಒಳಿತಿಗಾಗಿ ನೀಡಿದ್ದಾರೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್ ಸಾವಳಗಿ ಪುರಸಭೆ ಸದಸ್ಯೆ ಸಂಗಮ್ಮ ದೇವರಳ್ಳಿ ಮಾತನಾಡಿ ಇಂದು ನಾಗರಿಕರ ಸಮಾಜ ಸುಂದರವಾಗಿ ಕಾಣಿಸಿಕೊಳ್ಳುವಲ್ಲಿ ಸವಿತಾ ಸಮಾಜದ ಕೊಡುಗೆ ಅಪಾರವಾಗಿದೆ ಸವಿತಾ ಮಹರ್ಷಿಗಳ ಹಿನ್ನೆಲೆಯನ್ನು ನಮ್ಮ ಇಂದಿನ ಪಿಳಿಗೆಗೆ ತಿಳಿಸಬೇಕಿದೆ ಇತಿಹಾಸದಲ್ಲಿ ಕೆಲವೊಂದು ಮಹರ್ಷಿಗಳು ಕುರಿತು ಪಠ್ಯಗಳು ಬರಬೇಕಿದೆ ಇಂದು ಸಣ್ಣ ಸಣ್ಣ ಸಮಾಜಗಳು ಮುಖ್ಯ ವಾಹಿನಿಗೆ ಬರಲು ಶಿಕ್ಷಣಕ್ಕೆ ಒತ್ತು ನೀಡಬೇಕು ಸವಿತಾ ಮಹರ್ಷಿಗಳು ಸಾಮವೇದ ರಚಿಸಿದವರು ಆ ವೇದಗಳ ಕಾಲದಲ್ಲಿ ಯಾವ ತಾರತಮ್ಯ ಹೆಣ್ಣು ಗಂಡು ಜಾತಿಗಳು ಇರಲಿಲ್ಲ ವೇದಗಳ ನಂತರದ ಕಾಲದಲ್ಲಿ ಮೇಲು ಕೀಳು ಹುಟ್ಟಿದೆ ಮೇಲು ಕೀಳು ಬಿಡಬೇಕು ರಾಷ್ಟ್ರಧ್ವಜ ಕೆಳಗೆ ಎಲ್ಲರೂ ಸಮಾನರು ಎಂದರು. ಪುರಸಭೆ ಮುಖ್ಯಾಧಿಕಾರಿಗಳಿಗೆ ಪುರಸಭೆ ಅಧ್ಯಕ್ಷರಿಗೆ ಸವಿತಾ ಸಮಾಜದ ಧಾರ್ಮಿಕ ಚಟುವಟಿಕೆಗೆ ನಿವೇಶನ ನೀಡುವಂತೆ ಈ ಸಂದರ್ಭದಲ್ಲಿ ಸಮಾಜದವರು ವಿನಂತಿಸಿದರು.



ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ, ಶಿರಸ್ತೆದಾರ ಎಂ ಎ ಬಾಗೇವಾಡಿ, ಪುರಸಭೆ ಸದಸ್ಯೆ ಭಾರತಿ ಪಾಟೀಲ, ಮಹಾಂತೇಶ ಮಾಗಿ, ಮುದ್ದೆಬಿಹಾಳ, ಸಮಾಜದ ಹಿರಿಯರಾದ ಮಲ್ಲಣ್ಣ ತೇಲಂಗಿ, ದೇವಪ್ಪ ಶಹಾಪೂರ, ಶರಣಪ್ಪ ಮಸಾಲಜಿ, ಈರಣ್ಣ ಈಡ್ಲೂರ, ಶ್ರೀ ಕಾಂತ ತೇಲಂಗಿ, ಪ್ರವೀಣ ಮಸಾಲಜಿ, ಶ್ರೀನಿವಾಸ ಶಹಾಪೂರ, ಸುರೇಶ ಮಸಾಲಜಿ, ಮುತ್ತಣ್ಣ ಹಡಪದ, ತಿಪ್ಪಣ್ಣ ಶಹಾಪೂರ, ಭೀಮಣ್ಣ ಹಡಪದ, ಗೌತಮ ಚಿಗನೂರ, ಶಿವು ಹಡಪದ, ಶಿವು ಬಿದರಕುಂದಿ, ಶ್ರೀಕಾಂತ ಹಡಪದ, ಮಹಾಂತೇಶ ಹಡಪದ, ಮುತ್ತಣ್ಣ ಹಡಪದ ಸಾಲವಾಡಗಿ ಸೇರಿದಂತೆ ಸವಿತಾ ಹಾಗೂ ಹಡಪದ ಸಮಾಜದ ಭಾಂದವರು ಕಂದಾಯ ಇಲಾಖೆಯ ಸಿಬ್ಬಂದಿಗಳು ಭಾಗವಹಿಸಿದ್ದರು.

ಶಿಕ್ಷಕ ಗುಂಡು ಚವ್ಹಾಣ ನಿರೂಪಿಸಿ ವಂದಿಸಿದರು.

ಇದಕ್ಕೂ ಮುನ್ನ ಪಟ್ಟಣದ ತಾಳಿಕೋಟೆ ರಸ್ತೆಯಲ್ಲಿಯ ಸವಿತಾ ಮಹರ್ಷಿಗಳ ವೃತ್ತದಲ್ಲಿ ಸಮಾಜದ ಭಾಂದವರು ಪೂಜೆಯನ್ನು ಸಲ್ಲಿಸಿದರು

**ಸವಿತಾ ಮಹರ್ಷಿಗಳ ಜಯಂತೋತ್ಸವ**

> ಮಾನವನ ಆಯುಷ್ಯ ವೃದ್ದಿಗಾಗಿ ಕ್ಷೌರ ಸಂಸ್ಕಾರವಿದೆ ಸವಿತಾ ಮಹರ್ಷಿಗಳು ಕ್ಷೌರಿಕ ಜನಾಂಗದ ಮೂಲ ಮಹರ್ಷಿಗಳು , ಈ ಸವಿತಾ ಸಮಾಜದವರೇ ವಿಶ್ವದ ಮೊದಲ ಪ್ಲಾಸ್ಟಿಕ್ ಸರ್ಜನ್ ರು, ನಾಟಿವೈದ್ಯರು, ದೇವಾಲಯದಲ್ಲಿ ನಾದಸ್ವರ ನುಡಿಸುವವರು, ಈ ಸಮಾಜದ ಮೂಲ ಮಹರ್ಷಿಗಳಲ್ಲಿ ಸವಿತಾ, ಕೌಂಡಿನ್ಯ ಮತಂಗ, ನಾರದ, ಭಾರತದ ಅರಸ ಪರಂಪರೆಯಲ್ಲಿ ಮಗದ್ ಸಂಸ್ಥಾನ, ಮಹಾಪದ್ಮಾನಂದ ನಂದವಂಶ, ಕಳಚೂರಿಗಳು, ಬಿಜ್ಜಳ ಅರಸ, ಶರಣಪರಂಪರೆಯಲ್ಲಿ ಹಡಪದ ಅಪ್ಪಣ್ಣ ,ಲಿಂಗಮ್ಮ, ರೇಚಿ ರೇಚಣ್ಣ,ದೇವಗಿ ಅಮುಗಯ್ಯಾ ರೇವಮ್ಮಾ, ಸಂತ ಸೇನಾಮಹಾರಾಜ,ನಾರಾಯಣಮಾತಾ, ಸ್ವಾತಂತ್ರ್ಯ ಸಂಗ್ರಾಮದಲ್ಲಿ ವಿಠ್ಠಲರಾವ್ ಕೋತ್ವಾಲ್ ಶಿವಾಜಿ ಮಹಾರಾಜರ ಅಂಗರಕ್ಷಕರಲ್ಲಿ ಶಿವಾಕಾಶಿದ್ ಶಿವಾಜಿ ಮಹಾಲೆ ಆಗಿದ್ದಾರೆ - ಮಹೇಶ ತೇಲಂಗಿ, ಸವಿತಾ ಸಮಾಜ ಸಂಶೋಧಕ ಲೇಖಕರು

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ಕುಟುಂಬದ ನೀವು ಕಿರಿಕಿರಿ ಸಾಧ್ಯವಾಯಿತು ಇದು ನಿಮ್ಮಿಂದ ಸಾಕಷ್ಟು ನಿರೀಕ್ಷಿಸುತ್ತದೆ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ.

**ವೃಷಭ** ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ.

**ಮಿಥುನ** ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಸೋದರಿಯ ಪ್ರೀತಿ ನಿಮ್ಮನ್ನು ಉತ್ತೇಜಿಸುತ್ತದೆ.

**ಕರ್ಕಾಟಕ** ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಇಂದು ಹಣದ ತುಂಬಾ ಅಗತ್ಯವಿರಬಹುದು.

**ಸಿಂಹ** ನಿಮ್ಮ ಆಸಕ್ತಿಗಳನ್ನು ಮುಂದುವರಿಸಲು ಅಥವಾ ನೀವು ತುಂಬ ಆನಂದಿಸುವ ಕೆಲಸಗಳನ್ನು ಮಾಡಲು ಹೆಚ್ಚು ಸಮಯ ಕಳೆಯಬೇಕು. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು.

**ಕನ್ಯಾ** ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ.

**ತುಲಾ** ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು.

**ವೃಶ್ಚಿಕ** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಯಾವುದೇ ಅನಗತ್ಯ ಒತ್ತಡ ತಪ್ಪಿಸಿ.

**ಧನಸ್ಸು** ಹಿರಿಯರು ಉತ್ತಮ ಲಾಭ ಪಡೆಯಲು ತಮ್ಮ ಹೆಚ್ಚುವರಿ ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಪತ್ನಿಯೊಂದಿಗೆ ಜಗಳ ಮಾನಸಿಕ ಒತ್ತಡಕ್ಕೆ ಕಾರಣವಾಗಬಹುದು.

**ಮಕರ** ಧ್ಯಾನ ಪರಿಹಾರ ತರುತ್ತದೆ. ನಿಮ್ಮ ಹೂಡಿಕೆಗಳು ಬಗ್ಗೆ ನಿಮ್ಮ ಭವಿಷ್ಯದ ಗುರಿಗಳ ಬಗ್ಗೆ ರಹಸ್ಯಮಯವಾಗಿರಿ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ನಿಮ್ಮ ಪ್ರಿಯತಮೆಯ ಜೊತೆ ತಿಳುವಳಿಕೆ. ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ.

**ಕುಂಭ** ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ತರಾತುರಿಯಲ್ಲಿ ಹೂಡಿಕೆಗಳನ್ನು ಮಾಡಬೇಡಿ – ನೀವು ಎಲ್ಲಾ ಸಾಧ್ಯವಿರುವ ಕೋನಗಳಿಂದ ಹೂಡಿಕೆಯನ್ನು ಪರಿಶೀಲಿಸದೇ ಹೋದರೆ ನಷ್ಟ ಖಚಿತ. ಸಂಜೆ ಸಾಮಾಜಿಕ ಚಟುವಟಿಕೆ ನೀವು ನಿರೀಕ್ಷಿಸಿದ್ದಕ್ಕಿಂತ ಉತ್ತಮವಾಗಿರುತ್ತದೆ.

**ಮೀನ** ನಿಮ್ಮಲ್ಲಿ ಶಕ್ತಿಯ ಕೊರತೆಯಿರದೇ ಆತ್ಮವಿಶ್ವಾಸದ ಕೊರತೆಯಿರುವುದರಿಂದ ನಿಮ್ಮ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಿ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ, ಹೊಸ ಹಣ ಬರುತ್ತದೆ. ನಿಮ್ಮ ಮಗುವಿನಂಥ, ಮುಗ್ಧ ವರ್ತನೆ ಕುಟುಂಬದ ಸಮಸ್ಯೆಯನ್ನು ಪರಿಹರಿಸುವಲ್ಲಿ ಒಂದು ಪ್ರಮುಖ ಪಾತ್ರ.

# ಮೂಲಭೂತ ಸೌಕರ್ಯ ವಂಚಿತ ಇಂದ್ರಪಾಡ ಹೋಸಳ್ಳಿ

## • ಗ್ರಾಮಸ್ಥರು ಜನಪ್ರತಿನಿಧಿಗಳ, ಅಧಿಕಾರಿಗಳ ಮೇಲೆ ಹಿಡಿಶಾಪ • ಕೆಸರಿನಲ್ಲಿಯೇ ಸಾಗಿ ಹೋಗಬೇಕಾದ ಪರಿಸ್ಥಿತಿ

• ಮಹೇಬೂಬಶಾ ಅಣವಾರ

• ಉದಯವಾಹಿನಿ ವಿಶೇಷ ವರದಿ

**ಚಿಂಚೋಳಿ:** ತಾಲ್ಲೂಕಿನ ಅಣವಾರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಇಂದ್ರಪಾಡ ಹೋಸಳ್ಳಿ ಗ್ರಾಮದಲ್ಲಿ ಮೂಲಭೂತ ಸೌಕರ್ಯ ಇಲ್ಲದೆ ಗ್ರಾಮದ ಸಾರ್ವಜನಿಕರು ಜನಪ್ರತಿನಿಧಿಗಳ ಮೇಲೆ ಅಧಿಕಾರಿಗಳ ಮೇಲೆ ಹಿಡಿಶಾಪ ಹಾಕುತ್ತಿದ್ದಾರೆ.

ತಾಲ್ಲೂಕಿನ ಇಂದ್ರಪಾಡ ಹೋಸಳ್ಳಿ ಗ್ರಾಮದಲ್ಲಿ ಚರಂಡಿಯಿಲ್ಲ,ಸಿಸಿರಸ್ತೆ ಇಲ್ಲ,ಬೀದಿದ್ವೀಪ ಇಲ್ಲ,ಶುದ್ಧ ಕುಡಿಯುವ ನೀರಿಲ್ಲ,ಹೀಗೆ ಗ್ರಾಮದ ಹತ್ತಾರು ಮೂಲಭೂತ ಸೌಕರ್ಯ ಸಮಸ್ಯೆಗಳಿದ್ದರು ಜನ ಪ್ರತಿನಿಧಿಗಳು ಅಧಿಕಾರಿಗಳು ಮೌನವಾಗಿದ್ದಾರೆ.

ಇದೆ ಗ್ರಾಮದಿಂದ ಸುಲೇಪೇಟ ಜಿಪಂಗೆ ಸ್ಪರ್ಧಿಸಿ ಗೆಲುವು ಸಾಧಿಸಿದ ಸದಸ್ಯರಾಗಿದರು, ಗ್ರಾಮದಿಂದ ಒಬ್ಬ ಗ್ರಾಪಂ.ಸದಸ್ಯರು ಕೂಡ ಇದ್ದಿದ್ದಾರೆ, ಆದರೆ ಗ್ರಾಮದ ಅಭಿವೃದ್ಧಿ ಮಾತ್ರ ಶೂನ್ಯವಾಗಿದೆ.ಗ್ರಾಮಕ್ಕೆ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಬರುವುದಿಲ್ಲ ತಾಪಂ.ಇಓ ಬರುವುದಿಲ್ಲ, ಶಾಸಕರು ಬರುವುದಿಲ್ಲ, ಸಂಸದರು ಬರುವುದಿಲ್ಲ, ಜನಪ್ರತಿನಿಧಿಗಳು ಕೇವಲ ಚುನಾವಣೆ ಸಂದರ್ಭದಲ್ಲಿ ಗ್ರಾಮಕ್ಕೆ ಆಗಮಿಸಿ ದೊಡ್ಡ ದೊಡ್ಡ ಅಶ್ವಾಸನೆ ಕೊಟ್ಟು ಹೋಗುತ್ತಾರೆ ಆದರೆ ಚುನಾವಣೆ ಮುಗಿದ ಮೇಲೆ ಈಕಡೆ ತಿರುಗಿ ನೋಡುವುದಿಲ್ಲಾ ಎಂಬುವುದು ಗ್ರಾಮಸ್ಥರ ಆರೋಪವಾಗಿದೆ.

ಗ್ರಾಮ ದಲ್ಲಿ ಕಾಲ್ನಡಿಗೆ ಮೂಲಕ ಹೋಗುವುದಾದರೆ ಚರಂಡಿ ಹೊಲಸು ನೀರಿನಲ್ಲಿಯೇ ಹೋಗಬೇಕು, ರಾತ್ರಿ ಸಮಯದಲ್ಲಿ ಕತ್ತಲಲ್ಲಿಯೇ ಹೋಗಬೇಕು, ಸಿಸಿರಸ್ತೆ ಇಲ್ಲದೆ ರಸ್ತೆಗಳಲ್ಲಿ ಕೆಸರಿನಲ್ಲಿಯೇ ಸಾಗಿ ಹೋಗಬೇಕಾದ ಪರಿಸ್ಥಿತಿ ಇಂದ್ರಪಾಡ ಹೋಸಳ್ಳಿ ಗ್ರಾಮದ ಜನರದಾಗಿದೆ, ಇವರ ಸಮಸ್ಯೆಗಳು ಪರಿಹಾರ ಯಾವಾಗ ಆಗು ತ್ತವೆ ಎಂಬುವುದೆ ಯಕ್ಷಪ್ರೇಶ್ನೆಯಾಗಿದೆ.ಗ್ರಾಮದಲ್ಲಿ ಸಾಕಷ್ಟು ಬಡಜನರಿದ್ದು ಅವರವರ ಕೆಲಸ ಕಾರ್ಯಗಳಲ್ಲಿ ಮಗ್ನರಾಗಿ ಇರುತ್ತಾರೆ, ಆದರೆ ಕೇಂದ್ರ, ಹಾಗೂ ರಾಜ್ಯ ಸರ್ಕಾರಗಳ ಯೋಜನೆಗಳು ಗ್ರಾಮಕ್ಕೆ ತಲುಪಿಸುವಲ್ಲಿ ಅಧಿಕಾರಿಗಳಾಗಲಿ ಜನ ಪ್ರತಿನಿಧಿಗಳಾಗಲಿ ವಿಫಲವಾಗಿದ್ದಾರೆ.

ಸ್ವಾತಂತ್ರ್ಯ ಸಿಕ್ಕು 76ವರ್ಷ ಕಳೆದರೂ ಇಂದ್ರ ಪಾಡ ಹೋಸಳ್ಳಿಗೆ ಇನ್ನು ಮೂಲಭೂತ ಸೌಕರ್ಯ ದೊರಕದೆ ವಂಚಿತರಾಗಿದ್ದು ಸಾರ್ವಜನಿಕರು ಹಿಡಿಶಾಪ ಹಾಕುತ್ತಿದ್ದಾರೆ, ಆದಷ್ಟೂ ಶೀಘ್ರದಲ್ಲೇ ಸಂಬಂಧ ಪಟ್ಟ ಜನಪ್ರತಿನಿಧಿಗಳು ಅಧಿಕಾರಿಗಳು ಇಂದ್ರಪಾಡ ಹೋಸಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಸಮಸ್ಯೆಗಳು ವಿಕ್ಷಿಸಿ ಪರಿಹರಿಸಬೇಕು ಎಂಬುವುದೆ ಗ್ರಾಮಸ್ಥರು ಅಭಿಪ್ರಾಯವಾಗಿದೆ.





ಉದಯವಾಹಿನಿ ಚಿತ್ರ



ಈಗಾಗಲೇ ಇಂದ್ರಪಾಡ ಹೋಸಳ್ಳಿ ಗ್ರಾಮದ ಮೂಲಭೂತ ಸೌಕರ್ಯ ಬಗ್ಗೆ ಗ್ರಾಮಸ್ಥರು ನನ್ನ ಗಮನಕ್ಕೆ ತಂದಿದ್ದು ಅಣವಾರ ಗ್ರಾಮ ಪಂಚಾಯತ ಪಿಡಿಓ ಅಧಿಕಾರಿಗೆ ಹೇಳಿ ಗ್ರಾಮದ ಪ್ರಮುಖ ರಸ್ತೆಗಳು ತಾತ್ಕಾಲಿಕವಾಗಿ ಸ್ವಚ್ಛತೆಗೊಳಿಸಲಾಗಿದೆ, ಬರುವ 15ನೇ ಹಣಕಾಸು ಯೋಜನೆ ಯಡಿಯಲ್ಲಿ ಚರಂಡಿ, ಸಿಸಿರಸ್ತೆಗಳು, ಬೀದಿದ್ವೀಪ, ಕುಡಿಯುವ ನೀರಿನ ಬಗ್ಗೆ ಕ್ರಿಯಾಯೋಜನೆ ಮಾಡಿ ಸಾರ್ವಜನಿಕರ ಸಮಸ್ಯೆಗಳು ಶೀಘ್ರದಲ್ಲೇ ಪರಿಹರಿಸಲು ಕಾಮಗಾರಿಗಳು ಶೀಘ್ರದಲ್ಲೇ ಮಾಡಿಸುವಂತೆ ಪಿಡಿಓಗೆ ನಿರ್ದೇಶನ ನೀಡಲಾಗಿದೆ.

– ಶಂಕರ ರಾಠೋಡ್, ತಾಪಂ.ಇಓ ಚಿಂಚೋಳಿ.

ಅಣವಾರ ಗ್ರಾ.ಪಂ.ಗೆ ಒಳಪಡುವ ಇಂದ್ರಪಾಡ ಹೋಸಳ್ಳಿ ಗ್ರಾಮಕ್ಕೆ ಕಳೆದ ಬಾರಿ ಚರಂಡಿ,ನೀರಿನ ಹೌಸ್,ಸಿಸಿರಸ್ತೆ ಕಾಮಗಾರಿ ಇಡಲಾಗಿತ್ತು ಕಾಮಗಾರಿ ಆಗಿರುವುದಿಲ್ಲ,ಇಂದ್ರಪಾಡ ಹೋಸಳ್ಳಿ ಸದಸ್ಯರ ಜೋತೆಗೆ ಗ್ರಾಮಕ್ಕೆ ತೆರಳಿ ಗ್ರಾಮದ ಮೂಲಭೂತ ಸೌಕರ್ಯ ವಿಕ್ಷಿಸಿ ಅವಶ್ಯವಿರುವ ಕಾಮಗಾರಿಗಳು ಈಗ 15ನೇ ಹಣಕಾಸು ಯೋಜನೆ ಯಡಿಯಲ್ಲಿ ಕ್ರಿಯಾಯೋಜನೆ ಸಿದ್ಧಪಡಿಸಿಕೊಂಡು ಕಾಮಗಾರಿ ಮಾಡಿಸಿ ಜನರ ಸಮಸ್ಯೆಗಳು ಪರಿಹರಿಸಲಾಗುವುದು.

– ಅನೀತಾ ಆನಂದ ಅಧ್ಯಕ್ಷರು,ಗ್ರಾ.ಪಂ.ಅಣವಾರ.

ಅಣವಾರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಇಂದ್ರಪಾಡ ಹೋಸಳ್ಳಿ ಗ್ರಾಮ ಬರುತ್ತದೆ ನಮ್ಮ ಗ್ರಾಮದಲ್ಲಿ ಯಾವುದೇ ಮೂಲಭೂತ ಸೌಕರ್ಯ ಚರಂಡಿ, ಸಿಸಿರಸ್ತೆ, ಬೀದಿದ್ವೀಪ, ಶುದ್ಧ ಕುಡಿಯುವ ನೀರು ಇಲ್ಲ,ಪಿಡಿಓರಾಗಲಿ ಅಧಿಕಾರಿಗಳಾಗಲಿ ಜನಪ್ರತಿನಿಧಿಗಳಾಗಲಿ ಗ್ರಾಮಕ್ಕೆ ಭೇಟಿನೀಡಲ್ಲ, ಗ್ರಾಮ ಅಭಿವೃದ್ಧಿ ಆಗಿಲ್ಲ ಯಾರಿಗೆ ಹೇಳಬೇಕು ಮೌಖಿಕವಾಗಿ ಎಲ್ಲೋರನ್ನು ಹೇಳಿ ಹೇಳಿ ಸಾಕಾಗಿದೆ, ಈಗಾಲಾದರೂ ಅಧಿಕಾರಿಗಳು ಜನಪ್ರತಿನಿಧಿಗಳು ಏಚ್ಚೆತುಕೊಂಡು ಗ್ರಾಮದ ಸಮಸ್ಯೆಗಳು ಪರಿಹರಿಸಬೇಕು ಇಲ್ಲದಿದ್ದರೆ ಬರುವ ದಿನಗಳಲ್ಲಿ ತಾಪಂ. ಕಛೇರಿ ಎದುರು ಪ್ರತಿಭಟನೆ ನಡೆಸಲಾಗುವುದು.

– ಹಸೇನ್ ಪಟೇಲ ಇಂದ್ರಪಾಡ ಹೋಸಳ್ಳಿ ಗ್ರಾಮಸ್ಥ

## ಪರಿಶಿಷ್ಟ ಜಾತಿ, ರೈಟ್ ಸಮುದಾಯದ ಸಂಚಾಲಕರಾಗಿ ರೇವಣಸಿದ್ದಪ್ಪ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಪರಿಶೀಷ್ಟ ಜಾತಿಯ,ರೈಟ್ ಸಮೂದಾಯದ ಸಂಚಾಲಕರಾಗಿ ಸುಲೇಪೇಟದ ಗ್ರಾಮದ ನಿವೃತ್ತ ಯೋಧ ರೇವಣಸಿದ್ದಪ್ಪಾ ಸುಬೇದಾರ ಅವರಿಗೆ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಸಮಾಜ ಹಿರಿಯ ಮುಖಂಡ ರಮೇಶ ಯಾಕಾಪೂರ ತಿಳಿಸಿದ್ದಾರೆ. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪರಿಶೀಷ್ಟ ಜಾತಿ,ರೈಟ್ ಸಮೂದಾಯದಿಂದ ಹಮ್ಮಿಕೊಂಡ ಸಭೆಯಲ್ಲಿ ಮಾತನಾಡಿದ ಅವರು,ಈಗಾಗಲೇ ದೇಶದಲ್ಲಿ ಅನೇಕ ರೀತಿಯ ದಬ್ಬಾಳಿಕೆ ಸಂವಿಧಾನ ಬಗ್ಗೆ ಅಗೌರವ ಮಾತುಗಳು ಕೇಳಿಬರುತ್ತಿವೆ.

ನಮ್ಮ ಪರಿಶೀಷ್ಟ ಜಾತಿ, ರೈಟ್ ಸಮೂದಾಯವು ಕೂಡ ಬಹಳಷ್ಟು ಹಿಂದುಳಿದಿದೆ, ಸಮೂದಾಯದ ಸರ್ವಾಂಗೀಣ ಅಭಿವೃದ್ಧಿಗಾಗಿ ಒಟ್ಟಾರೆಯಾಗಿ ಒಂದು ಸಮಿತಿ ರಚನೆ ಮಾಡೋಣ ಇಲ್ಲಿಯವರೆಗೂ ಯಾವುದೇ ಸಂಘ ಸಮಿತಿ ನಮ್ಮ ಸಮಾಜದಲ್ಲಿ ಮಾಡಿಲ್ಲ, ಸಮಾಜದ ಏಳಿಗೆಗಾಗಿ,ಮೀಸಲಾತಿಗಾಗಿ ಹೋರಾಟ ಮಾಡಲು, ರಾಜಕೀಯ, ಸಮಾಜೀಕ, ಆರ್ಥಿಕವಾಗಿ ಸ್ಥಾನಮಾನ ಸಿಗದೆ ವಂಚಿತರಾಗುತ್ತಿದ್ದೇವೆ, ಬರುವ ದಿನಗಳಲ್ಲಿ ಈಗಾಗಲೇ ಸಂಚಾಲಕರ ನೇಮಕ ಮಾಡಿದ್ದು ಮುಂದೆ ಸಮಿತಿ ರಚನೆ ಮಾಡಲು ಸದಸ್ಯರ ನೇಮಕ ಮಾಡುವ ಪ್ರಕ್ರಿಯೆ ಮಾಡಲಾಗುವುದು ನಂತರ ಅಧ್ಯಕ್ಷ ಚುನಾವಣೆ ಮಾಡಿ ಸದಸ್ಯರು ಮತಗಳು ಚಲಾವಣೆ ಮಾಡಿ ಅಧ್ಯಕ್ಷರಿಗೆ ನೇಮಕ ಮಾಡಬೇಕು.

ಉಪ ಸಂಚಾಲಕರಾಗಿ ಆನಂದ ಟೈಗರ್, ಗೌತಮ್ ಬೋಮ್ನಳ್ಳಿ, ಗೋಪಾಲ ರಾಂಪೂರೆ, ಕಾಶಿನಾಥ ಸಿಂದೆ, ಪಾಂಡುರಂಗ ಲೋಡನೂರ್, ಆಯ್ಕೆ ಮಾಡಲಾಗಿದೆ.

ಸಭೆಯಲ್ಲಿ ಶ್ರೀಮಂತ ಕಟ್ಟಿಮನಿ, ಮಾರುತಿ ಗಂಜಗಿರಿ, ನಾಗೇಂದ್ರಪ್ಪಾ ಗುರಂಪಳ್ಳಿ, ರುದ್ರ ಮುನಿ ರಾಮತೀರ್ಥ, ಬಂಡೆಪ್ಪ ಸುಲೇಪೇಟ, ಚೇತನ ಕಳಸ್ಕರ, ಒಮನರಾವ ಕೊರವಿ, ಶಿವ ಯೋಗಿ ರುಸ್ತಾಂಪೂರ, ಕಾಶಿನಾಥ ತಳವಾರ, ರಘು ಹೂವಿನ ಬಾವಿ, ರಾಜಶೇಖರ ಹೊಸಮನಿ, ಉಮೇಶ, ರಾಜಕುಮಾರ, ಗೈಬಣ್ಣ, ಅನೇಕರಿದ್ದರು.



ಉದಯವಾಹಿನಿ ಚಿತ್ರ

ಸಮಾಜದಲ್ಲಿ ಯಾವುದೇ ರಾಜಕೀಯ ಬೇರೆಸಬಾರದು ರಾಜಕೀಯ ವ್ಯಕ್ತಿಗಳು ತಮ್ಮ ತಮ್ಮ ಪಕ್ಷದಲ್ಲಿ ಬೆಳೆಯಲಿ ಆದರೆ ಸಮಾಜ ವಿಷಯ ಬಂದಾಗ ನಾವೆಲ್ಲರೂ ಒಂದೆಯಾಗಿ ಹೋರಾಟ ಮಾಡಬೇಕಾಗಿದೆ,ಆಗ ಸಮಾಜ ಬೆಳೆಯಲು ಸಾಧ್ಯವಾಗುತ್ತದೆ. ಪ್ರತಿಯೊಂದು ಸಮೂದಾಯದವರು ತನ್ನದೆಯಾದ ಪ್ರತ್ಯೇಕ ಮೀಸಲಾತಿಗಾಗಿ ಹೋರಾಟ ಮಾಡುತ್ತಿದ್ದಾರೆ ಅದರಂತೆ ನಮ್ಮ ಸಮಾಜವು ಕೂಡ ನಾವೆಲ್ಲರೂ ಸಮಾಜಕ್ಕಾಗಿ ದುಡಿದು ಮುಂದಿನ ಪಿಳಿಗೆಗೆ ಒಳ್ಳೆಯ ಭವಿಷ್ಯ ಮಾಡೋಣ ಎಂದರು.

## ದೋಣಿಯಲ್ಲಿ ವಿಹರಿಸಿ ತರಳಬಾಳು ಹುಣ್ಣಿಮೆಗೆ ಚಾಲನೆ

• ಉದಯವಾಹಿನಿ, ಚಿತ್ರದುರ್ಗ

ಭರಮಸಾಗರದಲ್ಲಿರುವ ಐತಿಹಾಸಿಕ, ತುಂಬಿ ತುಳುಕುತ್ತಿರುವ ಭರಮಣ್ಣ ನಾಯಕನ ಕೆರೆಯಲ್ಲಿ ಮಂಗಳವಾರ ದೋಣಿ ವಿಹಾರ ನಡೆಸುವ ಮೂಲಕ ತರಳಬಾಳು ಮಠದ ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಅವರು 9 ದಿನಗಳ ತರಳಬಾಳು ಹುಣ್ಣಿಮೆ ಮಹೋತ್ಸವಕ್ಕೆ ವಿಧ್ಯುಕ್ತ ಚಾಲನೆ ನೀಡಿದರು. ಮುರುಡೇಶ್ವರದಿಂದ ತರಿಸಿದ್ದ ಅಲಂಕೃತ ದೋಣಿಯಲ್ಲಿ ಶ್ರೀಗಳು 20 ನಿಮಿಷ ವಿಹಾರ ನಡೆಸಿದರು. ಸಾವಿರ ಎಕರೆ ವಿಸ್ತೀರ್ಣ ಹೊಂದಿರುವ ಕೆರೆಯ ಇಕ್ಕೆಲಗಳಲ್ಲಿ ನಡೆದ ದೋಣಿ ವಿಹಾರವನ್ನು ಸಾವಿರಾರು ಜನರು ಕಣ್ತುಂಬಿಕೊಂಡರು. ನಂತರ ಭರಮಣ್ಣ ನಾಯಕ ಮಹಾಮಂಟಪದ ಆವರಣಕ್ಕೆ ಬಂದ ಸ್ವಾಮೀಜಿ ಶಿವ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಭಕ್ತರ ಸಂಭ್ರಮ ಮುಗಿಲು ಮುಟ್ಟಿತ್ತು.

ಇದಕ್ಕೂ ಮೊದಲು ಬೆಳಿಗ್ಗೆ, ಸಿರಿಗೆರೆ ಐಕ್ಯಮಂಟಪದಲ್ಲಿ ಶ್ರೀಗಳು ಶಿವಕುಮಾರ ಶಿವಾಚಾರ್ಯ ಸ್ವಾಮೀಜಿ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿ ಭರಮಸಾಗರದತ್ತ ಹೊರಟರು ಮಾರ್ಗಮದ್ದಕ್ಕೂ 32 ಹಳ್ಳಿಗಳಿಗೆ ಭೇಟಿನೀಡಿ ಮುಂದೆ ಸಾಗಿದರು.

ಸಂಜೆ 5 ಗಂಟೆಗೆ ಭರಮಸಾಗರದ ಭರಮಣ್ಣನಾಯಕನ ಕೆರೆಯಂಗಳ ತಲುಪಿದರು. ಇಳಿಸಂಜೆಯಲ್ಲಿ ನಡೆದ ದೋಣಿ ವಿಹಾರ ನೋಡುಗರ ಕಣ್ಮನ ಸೆಳೆಯಿತು.



ಉದಯವಾಹಿನಿ ಚಿತ್ರ

### ಮಹೋತ್ಸವಕ್ಕೆ ನಾಂದಿ

ಸ್ವಾಮೀಜಿಯವರು ತಾಲ್ಲೂಕಿನ ಹಲವಾರು ಕೆರೆಗಳಿಗೆ ನೀರು ತುಂಬಿಸಲು ಶ್ರಮಿಸಿದ್ದು, ಸಿರಿಗೆರೆ ಭಾಗದ ಬಹುತೇಕ ಕೆರೆಗಳು ಮೈದುಂಬಿಕೊಂಡಿವೆ. ಸಮೃದ್ಧಿಯ ಸಂಕೇತವಾಗಿ ಶ್ರೀಗಳು ದೋಣಿ ವಿಹಾರ ನಡೆಸಿ ಹುಣ್ಣಿಮೆ ಮಹೋತ್ಸವಕ್ಕೆ ನಾಂದಿ ಹಾಡಿದರು.

## ವೃದ್ಧಾಶ್ರಮಗಳ ಸಂಖ್ಯೆ ಕಡಿಮೆಯಾಗಲಿ: ಗುರು ಮಹಾಂತ ಸ್ವಾಮೀಜಿ

• ಉದಯವಾಹಿನಿ, ಅಥಣಿ

ಗುರು ಹಿರಿಯರನ್ನು ಯಾರು ಭಕ್ತಿ ಭಾವದಿಂದ ಕಾಣುತ್ತಾರೋ ಅವರ ಮನೆತನವು ಪ್ರಗತಿ ಪಥದಲ್ಲಿ ಸಾಗುತ್ತದೆ, ಇಂದಿನ ದಿನಗಳಲ್ಲಿ ವೃದ್ಧಾಶ್ರಮಗಳ ಸಂಖ್ಯೆ ಕಡಿಮೆಯಾಗಬೇಕು, ಮಕ್ಕಳಿಗೆ ತಂದೆ ತಾಯಿ ಗುರು ಹಿರಿಯರ ಕುರಿತು ಬಾಲ್ಯದಲ್ಲಿಯೇ ತಿಳಿ ಹೇಳಬೇಕೆಂದು ಇಳಕಲ್ಲ ಮಠದ ಗುರು ಮಹಾಂತ ಸ್ವಾಮೀಜಿ ಹೇಳಿದರು. ಅವರು ತಾಲ್ಲೂಕಿನ ಸವದಿ ಗ್ರಾಮದಲ್ಲಿ ಕೊಪ್ಪದ ಬಂಧುಗಳ ತೋಟದಲ್ಲಿ ಜರುಗಿದ ಶರಣೆ ಶಿವಕ್ಕ ಕೊಪ್ಪದ ಅವರ ನೂರರ ಬಸವ ವಸಂತಗಳ ಸಂಭ್ರಮ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದರು.

ಪ್ರತಿಯೊಂದು ಕುಟುಂಬದಲ್ಲಿ ಅಜ್ಜ ಅಜ್ಜಿ ಮಕ್ಕಳೊಂದಿಗೆ ವಾಸಿಸಬೇಕು, ಮನೆಯಲ್ಲಿರುವ ಚಿಕ್ಕ ಮಕ್ಕಳು ಆರೋಗ್ಯವಂತರಾಗಿ ಸುಸಂಸ್ಕೃತರಾಗಿ ಬೆಳೆಯಲು ಅಜ್ಜ ಅಜ್ಜಿಯ ಪಾತ್ರ ಅತ್ಯಂತ ಮುಖ್ಯವಾಗಿರುತ್ತದೆ. ಪ್ರತಿಯೊಬ್ಬರು ಅವರವರ ತಂದೆ ತಾಯಿಗಳನ್ನು ಚೆನ್ನಾಗಿ ನೋಡಿಕೊಂಡರೆ ಮುಂದೆ ಅವರ ಮಕ್ಕಳು ಅವರನ್ನು ಚೆನ್ನಾಗಿ ನೋಡಿಕೊಳ್ಳುತ್ತಾರೆಂದು ಅವರು ಹೇಳಿದರು.

ಈ ವೇಳೆ ಶಿರೂರದ ಡಾ. ಬಸವಲಿಂಗ ಸ್ವಾಮೀಜಿ, ಬಸವಬೆಳವಿಯ ಶರಣಬಸವ ದೇವರು, ಜನವಾಡ ಅಲ್ಲಮಪ್ರಭು ಆಶ್ರಮದ ಮಲ್ಲಿಕಾರ್ಜುನ ಸ್ವಾಮೀಜಿ, ಕಲಬುರಗಿಯ ಪ್ರಭುಶ್ರೀ ತಾಯಿ ಅವರು ಮಾತನಾಡಿದರು.

ವಿವಿಧ ಗಣ್ಯರು ಶತಾಯುಷಿ ಶರಣೆ ಶಿವಕ್ಕ ಕೊಪ್ಪದ ಅವರನ್ನು ಗೌರವಿಸಿ ಸತ್ಕರಿಸಿದರು ಎಲ್ಲರಿಗೂ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು. ಶತಾಯುಷಿ ಶರಣೆ ಶಿವಕ್ಕ ಕೊಪ್ಪದ, ಸಂಗಪ್ಪ ಕೊಪ್ಪದ, ಮಹಾದೇವ ಕವಟಕೊಪ್ಪ, ಡಾ. ಶ್ರೀಶೈಲ ಕೊಪ್ಪದ, ಶಿವಬಸಪ್ಪ ಕೊಪ್ಪದ, ನಾಗಪ್ಪ ಠಕ್ಕನ್ನವರ, ಸಿದ್ದಪ್ಪ ಕೊಪ್ಪದ, ಎಸ್. ಎಲ್. ಬಾಡಗಿ, ರಮೇಶ ಸಿಂದಗಿ, ರಾಣಿ ಚೆನ್ನಮ್ಮ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಧರೆಪ್ಪ ಠಕ್ಕನ್ನವರ, ಪ್ರಕಾಶ ಪಾಟೀಲ, ಜಿನ್ನಪ್ಪ ಸುರಗೋಣ, ರಮೇಶ ಕೊಪ್ಪದ, ಸುರೇಶ ಸಂತಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಪ್ರಕಾಶ ಪಾಟೀಲ ನಿರೂಪಿಸಿದರು, ರಮೇಶ ಕೊಪ್ಪದ ವಂದಿಸಿದರು.



ಉದಯವಾಹಿನಿ ಚಿತ್ರ

## ದುಡಿಯುವ ಕಾರ್ಮಿಕರಿಗೆ ಮೂಲಸೌಕರ್ಯಗಳಿಂದ ಬಳಲಿಸುತ್ತಿರುವ ಶ್ರೀ ಸಿಮೆಂಟ್: ಆರೋಪ

• ಉದಯವಾಹಿನಿ, ಸೇಡಂ

ತಾಲ್ಲೂಕಿನ ಕೋಡ್ಲಾ ಬೆನಕನಹಳ್ಳಿಯ ಶ್ರೀ ಸಿಮೆಂಟ್ ಕಂಪನಿಯಲ್ಲಿ ದುಡಿಯುವ ಕಾರ್ಮಿಕರಿಗೆ ಸರಿಯಾಗಿ ಮೂಲಸೌಕರ್ಯಗಳು ಸಿಗುತ್ತಿಲ್ಲ ಎಂದು ಶ್ರೀ ಸಿಮೆಂಟ್ ಸ್ಟಾಫ್ ಜನರಲ್ ವರ್ಕರ್ಸ್ ಸಂಘದ ಅಧ್ಯಕ್ಷ ಬಸವರಾಜ್ ರೆಡ್ಡಿ, ಸದಸ್ಯರು ಆರೋಪಿಸಿದ್ದರು.

ಮಾತನಾಡಿದ ಅವರು ಕೆಲಸಕ್ಕೆ ತಕ್ಕ ವೇತನ ಹಾಗೂ ಸುಚಿಯಾದ ಕುಡಿ ಯುವ ನೀರು, ಶೌಚಾಲಯ, ಸಾರಿಗೆ ವ್ಯವಸ್ಥೆ ಮತ್ತು ಸುರಕ್ಷಾ ಬೂಟುಗಳು ಹಾಗೆ ಸಮವಸ್ತ್ರವನ್ನು ಒದಗಿಸಿದೆ ನಿಯಮಿತವಾದ ಸಮಯ ಪಾಲನೆ ಇಲ್ಲದೆ ಜೀತದಾಳಂತೆ ದುಡಿಸಿಕೊಳ್ಳುತ್ತಿದೆ.

ಇದರ ಬಗ್ಗೆ ಶ್ರೀ ಸಿಮೆಂಟ್ ಯುನಿಯನ್ ಪಧಾದಿಕಾರಿಗಳು ಸೂಕ್ಷ್ಮವಾಗಿ ಗಮನಹರಿಸಿ ಕಾರ್ಖಾನೆಯ ಆಡಳಿತ ಮಂಡಳಿಗೆ ಕಾರ್ಮಿಕರಿಗೆ ಮೂಲಸೌಕರ್ಯವನ್ನು ಸರಿಯಾದ ಸಮಯಕ್ಕೆ ಒದ ಗಿಸಬೇಕೆಂದು ತಿಳಿಸಿದರು. ಕ್ಯಾರೆ ಎನ್ನದೆ ಕಾರ್ಮಿಕರ ಜೀವನದ ಜೊತೆ ಚಲ್ಲಾಟ ವಾಡುತ್ತಿದ್ದಾರೆ.

ಸಮಸ್ಯೆ ಯನ್ನು ಬಗೆಹರಿಸದಿದ್ದರೆ ಕಾರ್ಮಿಕ ಹಿತದೃಷ್ಟಿಗಾಗಿ ಮುಂದಿನ ದಿನಗಳಲ್ಲಿ ಹೊರಾಟ ಮಾಡುವುದು ಅನಿವಾರ್ಯ ಎಂದು ಹೇಳಿದ್ದಾರೆ.

ಈ ವೇಳೆಯಲ್ಲಿ ಗೌರವ ಅಧ್ಯಕ್ಷರಾದ ಸಿದ್ದಣ್ಣ ಹೊಸಮನಿ, ಉಪಾಧ್ಯಕ್ಷರಾದ ಬಲವಂತರೆಡ್ಡಿ ಯಾಳಗಿ, ಮಲ್ಲಪ್ಪ ಡೊಣಗಾಂ,ಪ್ರಧಾನ ಕಾರ್ಯದರ್ಶಿಯಾದ ಶೇಕರ್ ರೆಡ್ಡಿ ನಿರ್ಲಗಿ ,ಕಾಶಪ್ಪ ಜೊಗಿ, ನಾಗರೆಡ್ಡಿ ಮುಂಡರಗಿ, ಸಂಘನಾ ಕಾರ್ಯದರ್ಶಿಯಾದ ಕಾಶಪ್ಪ ಪಾಪಳ್ಳಿ, ವಿನೋದ್ ಕುಮಾರ್ ಪಾಂಚಾಳ್ ಇದ್ದರು.

## ಸಾಕ್ಷಾತ್ಕಾರಕ್ಕೆ ಭಾವಶುದ್ಧಿ ಅಗತ್ಯ

• ಉದಯವಾಹಿನಿ, ಧಾರವಾಡ

ಆತ್ಮ ಸಾಕ್ಷಾತ್ಕಾರಕ್ಕೆ ಭಾವ ಶುದ್ಧಿ ಅಗತ್ಯ. ಸತ್ಸಂಗದಿಂದ ಆತ್ಮೋದ್ಧಾರವಾಗುತ್ತದೆ ಎಂದು ಹಿರಿಯ ವೈದ್ಯರಾದ ಡಾ.ಎಸ್. ಆರ್.ರಾಮನಗೌಡರ ಅಭಿಪ್ರಾಯಪಟ್ಟರು. ಕರ್ನಾಟಕ ವಿದ್ಯಾವರ್ಧಕ ಸಂಘವು ಪೂರ. ಬಸಯ್ಯ ಶಿವಯ್ಯ ಶಿರೋಳ ದತ್ತಿ ಅಂಗವಾಗಿ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಯೋಗವಾಸಿಷ್ಠ ವಿಷಯ ಕುರಿತು ಮಾತನಾಡುತ್ತಿದ್ದರು.

ಮುಂದುವರೆದು ಮಾತನಾಡಿದ ಅವರು, ಯೋಗವಾಸಿಷ್ಠವು ಆರು ಪ್ರಕರಣಗಳನ್ನು ಹೊಂದಿದ್ದು, ವಾಸಿಷ್ಠರು ಶ್ರೀರಾಮನ 42 ಪ್ರಶ್ನೆಗಳಿಗೆ ಸಂಬಂಧಿಸಿದಂತೆ ನೀಡಿದ ಉತ್ತರಗಳನ್ನು ಒಳಗೊಂಡಿದೆ. ಬಹಿರ್ಮುಖವಾಗಿರುವ ಮನಸ್ಸನ್ನು ಒಮ್ಮುಖಗೊಳಿಸಿ ಮುಕ್ತಿ ಪಡೆಯುವ ಮಾರ್ಗವನ್ನು, ಅಜ್ಞಾನ ಎಂಬ ಕತ್ತಲೆ ಕಳೆದು ಮಾನವಜನ್ಮ ಸಾರ್ಥಕಗೊಳಿಸಿಕೊಳ್ಳುವುದರ ಮೂಲಕ ಪರಮ ಸುಖದ ಮಾರ್ಗವನ್ನು ಯೋಗವಾಸಿಷ್ಠದಲ್ಲಿ ತಿಳಿಸಲಾಗಿದೆ ಮನುಷ್ಯ ಜೀವನದ ಪರಿಪೂರ್ಣ ಬದುಕಿಗೆ ಈ ಗ್ರಂಥ ಸಹಕಾರಿಯಾಗಲಿದೆ ಎಂದು ಹೇಳಿದರು. ದಿವ್ಯ ಸಾನಿಧ್ಯ ವಹಿಸಿದ್ದ ಹಿರೇಮಠ ನರೇಗಲ್, ಮೂಲಿಮಠ ಸವದತ್ತಿಯ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಪೂಜ್ಯರು ಆಶೀರ್ವಚನ ನೀಡಿ, ಕಾಶಿ ಮೊದಲ ವಿದ್ಯಾ ಕೇಂದ್ರವಾದರೆ ಧಾರವಾಡ ಎರಡನೆಯದು. ಇಂದಿನ ಸಂಸಾರ ಜಂಜಾಟದಿಂದ ಗ್ರಂಥ ಓದಲು ಸಾಧ್ಯವಾಗದಿದ್ದರೆ ಇಂಥ ಉಪನ್ಯಾಸ ಕೇಳಿ ಸಾರ್ಥಕ ಬದುಕು ನಿಮ್ಮದಾಗಬೇಕು. ಡಾಎಸ್. ಆರ್. ರಾಮನಗೌಡರ ವೈದ್ಯರಾಗಿ, ಆಧ್ಯಾತ್ಮಿಕ ಕ್ಷೇತ್ರದ ದೊಡ್ಡ ಸಾಧಕರಾಗಿದ್ದಾರೆ ಎಂದು ಹೇಳಿದರು. ವೇದಿಕೆಯಲ್ಲಿ ಪೂರ. ಬಸಯ್ಯ ಶಿರೋಳ ಉಪಸ್ಥಿತರಿದ್ದರು.ಡಾ. ಮಹೇಶ ಹೊರಕೇರಿ ಸ್ವಾಗತಿಸಿದರು.

ಬಸವರಾಜ ಕೌಜಲಗಿ ಪರಿಚಯಿಸಿದರು. ಶಂಕರ ಹಲಗತ್ತಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಂಕರ ಕುಂಬಿ ನಿರೂಪಿಸಿದರು. ವೀರಣ್ಣ ಒಡ್ಡಿನ ವಂದಿಸಿದರು. ದತ್ತಿದಾನಿಗಳು ಡಾ. ಎಸ್. ಆರ್.ರಾಮನಗೌಡರ, ಪೂಜ್ಯರನ್ನು ಗೌರವಿಸಿದರು.



ಉದಯವಾಹಿನಿ ಚಿತ್ರ

## ಹಾವನೂರು ಜಾತ್ರೆ ಸಂಭ್ರಮ ದಟ್ಟಣೆಯಲ್ಲಿ ಸಿಲುಕಿದ ಜನ

• ಉದಯವಾಹಿನಿ, ಹಾವೇರಿ

ತಾಲ್ಲೂಕಿನ ಹಾವನೂರು ಗ್ರಾಮದೇವಿ ಜಾತ್ರೆ, ಬುಧವಾರ ವಿಜೃಂಭಣೆಯಿಂದ ನಡೆಯುತ್ತಿದ್ದು ಸಾವಿರಾರು ಜನರು ಜಾತ್ರೆಯಲ್ಲಿ ಜಮಾಯಿಸಿದ್ದಾರೆ. ಉತ್ತರ ಕರ್ನಾಟಕದ ಪ್ರಮುಖ ಜಾತ್ರೆಯಲ್ಲಿ ಒಂದಾದ ಹಾವನೂರು ಜಾತ್ರೆಗೆ ರಾಜ್ಯ–ಹೊರ ರಾಜ್ಯಗಳಿಂದಲೂ ಜನರು ಬಂದಿದ್ದಾರೆ. ಹಾವನೂರು ಗ್ರಾಮದಿಂದ, ತುಂಗಭದ್ರಾ ನದಿ ದಡದಲ್ಲಿರುವ ದೇವಸ್ಥಾನಕ್ಕೆ ಸಂಪರ್ಕಿಸುವ ರಸ್ತೆಯಲ್ಲಿ ದಟ್ಟಣೆ ಉಂಟಾಗಿದೆ.

ಬೈಕ್, ಟ್ರ್ಯಾಕ್ಟರ್ ಹಾಗೂ ಕಾರುಗಳು ರಸ್ತೆಯಲ್ಲಿ ನಿಂತಿವೆ. ಜನರು ಓಡಾಡಲು ದಾರಿ ಇಲ್ಲದಂತಾಗಿದೆ. ದೇವಸ್ಥಾನಕ್ಕೆ ಹೋಗಲು ಜನರು ಹರಸಾಹಸಪಡುತ್ತಿದ್ದಾರೆ. ಮಕ್ಕಳು, ವೃದ್ಧರು ಕಷ್ಟಪಡುತ್ತಿದ್ದಾರೆ. ರಸ್ತೆಯ ಅಕ್ಕ–ಪಕ್ಕದಲ್ಲಿ ದೊಡ್ಡ ಕಾಲುವ ಇದ್ದು, ಅದರ ದಡದಲ್ಲಿಯೇ ಜನರು ಹರಸಾಹಸಪಟ್ಟು ಮುಂದಕ್ಕೆ ಸಾಗುತ್ತಿದ್ದಾರೆ.

ದೇವಿಯ ಮೂರ್ತಿಯ ದರುಶನಕ್ಕೆ ಇಂದು ಕೊನೆಯ ದಿನವಾಗಿದೆ. ಹೀಗಾಗಿ, ಭಕ್ತರು ದರುಶನ ಪಡೆಯಲು ಧಾವಂತದಲ್ಲಿ ದೇವಸ್ಥಾನದತ್ತ ಹೊರಟಿದ್ದಾರೆ. ಜನರನ್ನು ನಿಯಂತ್ರಿಸಲು ಪೊಲೀಸರು ಹರಸಾಹಸಪಡುತ್ತಿದ್ದಾರೆ.

## ಯಾದಗಿರಿಯಲ್ಲಿ ಭೀಕರ ಅಪಘಾತ ಪ್ರಕರಣ ಒಂದೇ ಕುಟುಂಬದ ಐವರ ಸಾವು

• ಉದಯವಾಹಿನಿ, ಯಾದಗಿರಿ

ರಾಜ್ಯದಲ್ಲಿ ಮತ್ತೊಂದು ಭೀಕರವಾದಂತಹ ಅಪಘಾತ ಸಂಭವಿಸಿದ್ದು ಬೈಕ್‌ಗೆ ವೇಗವಾಗಿ ಬಂದು ಸಾರಿಗೆ ಬಸ್ ಗುದ್ದಿದ ಪರಿಣಾಮ ಬೈಕ್ ನಲ್ಲಿ ಚಲಿಸುತ್ತಿದ್ದ ಒಂದೇ ಕುಟುಂಬದ ಐವರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ತಿಂಥಣಿ ಬಳಿ ನಡೆದಿದೆ. ಹೌದು ಬೈಕ್ ಗೆ ಸಾರಿಗೆ ಬಸ್ ಡಿಕ್ಕಿಯಾಗಿ ಐವರು ಸಾವನ್ನಪ್ಪಿರುವ ಘಟನೆ ಯಾದಗಿರಿಯ ಸುರಪುರ ತಾಲ್ಲೂಕಿನ ತಿಂಥಣಿ ಬಳಿ ಈ ಒಂದು ಭೀಕರ ಅಪಘಾತ ನಡೆದಿದೆ. ತಿಂಥಣಿ ಕಡೆಗೆ ಹೊರಟಿದ್ದ ಬೈಕಿಗೆ ಸಾರಿಗೆ ಬಸ್ ಡಿಕ್ಕಿ ಹೊಡೆದಿದ್ದು, ಬಸ್ ಡಿಕ್ಕಿ ಹೊಡೆದ ಪರಿಣಾಮ ಆಂಜನೇಯ (35) ಪತ್ನಿ ಗಂಗಮ್ಮ (28) ಹಾಗೂ ಅವರ ಮೂವರು ಮಕ್ಕಳು ಸೇರಿದಂತೆ ಒಂದೇ ಕುಟುಂಬದ ಐವರು ಸ್ಥಳದಲ್ಲೇ ಸಾವನಪ್ಪಿದ್ದಾರೆ ಎಂದು ತಿಳಿದುಬಂದಿದೆ.

ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಇಬ್ಬರನ್ನು ಕೂಡಲೇ ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲು ಆಂಬುಲೆನ್ಸ್ ನಲ್ಲಿ ಕರೆದುಕೊಂಡು ಹೋಗುವಾಗ ಮಾರ್ಗಮಧ್ಯೆ ಸಾವನ್ನಪ್ಪಿದ್ದರೆ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು, ಸುರಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೈಂದೂರು ಏತ ನೀರಾವರಿ ಸಭೆ ವೇಳೆ ಗಲಾಟೆ ಕೈಕೈ ಮಿಲಾಯಿಸಿಕೊಂಡ ರೈತ ಮುಖಂಡರು

• ಉದಯವಾಹಿನಿ, ಉಡುಪಿ

ಬೈಂದೂರು ಏತ ನೀರಾವರಿ ಸಭೆ ವೇಳೆ ಗಲಾಟೆ ನಡೆದಿದ್ದು, ರೈತ ಮುಖಂದರು ಪರಸ್ಪರ ಕೈ ಕೈ ಮಿಲಾಯಿಸಿಕೊಂಡ ಘಟನೆ ಉಡುಪಿಯಲ್ಲಿ ನಡೆದಿದೆ. ಉಡುಪಿ ಜಿಲ್ಲೆಯ ಬೈಂದೂರು ತಾಲ್ಲೂಕು ಕಂಬದಕೋಣೆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಡೆದ ಸಭೆಯಲ್ಲಿ ರೈತರ ಎರಡು ತಂಡಗಳ ನಡುವೆ ಸಂಘರ್ಷ ನಡೆದಿದೆ. ಹೇರಂಜಾಲು ಏತ ನೀರಾವರಿ ಯೋಜನೆ ವೈಫಲ್ಯ, ಸ್ಥಳೀಯ ರೈತರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಚರ್ಚಿಸಲು ಸಭೆ ಕರೆಯಲಾಗಿತ್ತು. ಸಭೆ ವೇಳೆ ಗಲಾಟೆ ಆರಂಭವಾಗಿದೆ. ರೈತ ಮುಖಂಡರು ಪರಸ್ಪರ ವಾಗ್ವಾದಕ್ಕಿಳಿದಿದ್ದಾರೆ. ಸಭೆಯಲ್ಲಿಯೇ ನೂಕಾಟ, ತಳ್ಳಾಟ ಆರಂಭವಾಗಿದ್ದು, ಪರಿಸ್ಥಿತಿ ಉದ್ವಿಗ್ನಗೊಂಡಿದೆ. ತಕ್ಷಣ ಪೊಲೀಸರು ಮಧ್ಯಪ್ರವೇಶ ಮಾಡಿ ರೈತ ಮುಖಂಡರನ್ನು ಸಮಾಧಾನಪಡಿಸಿದ್ದಾರೆ. ಅಧಿಕಾರಿಗಳು ಅವೈಜ್ಞಾನಿಕವಾಗಿ ಕಾಮಗಾರಿ ನಡೆಸುತ್ತಿದ್ದಾರೆ ಎಂದು ರೈತ ಮುಖಂಡರಾದ ಎಸ್.ಪ್ರಕಾಶ್ ಚಂದ್ರ ಶೆಟ್ಟಿ ತರಾಟೆಗೆ ತೀದುಕೊಂಡರು. ಈ ವೇಳೆ ಮತ್ತೊಂದು ರೈತ ತಂಡದ ಮುಖಂಡರು ಅವರ ಕೈಯಿಂದ ಮೈಕ್ ಕಿತ್ತುಕೊಂಡರು. ಈ ವೇಳೆ ಎಳೆದಾಟ, ತಳ್ಳಾಟ ನಡೆದು ಗಲಾಟೆಗೆ ಕಾರಣವಾಗಿದೆ ಎಂದು ತಿಳಿದುಬಂದಿದೆ.

# ಜೀವಕೋಶ ವಿಭಜನೆಗಳಿಂದ ದೇಹದಲ್ಲಿ ಬೆಳವಣಿಗೆಯಾಗುವ ಗಡ್ಡೆ

## ವಿಶ್ವ ಕ್ಯಾನ್ಸರ್ ದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ''ಕ್ಯಾನ್ಸರ್'' ಕುರಿತು ಅರಿವು ಮೂಡಿಸುವ ಕಾರ್ಯಕ್ರಮ

• ಉದಯವಾಹಿನಿ, ಗದಗ


ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ವಿಭಾಗ, ತಂಬಾಕು ನಿಯಂತ್ರಣಕೋಶ, ಎಸ್.ಟಿ.ಎಸ್.ಕೆ.ಕೆ.ಪಾಲಿಟೆಕ್ನಿಕ್ ಕಾಲೇಜ್, ಗದಗ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಕ್ಯಾನ್ಸರ್ ದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ಕ್ಯಾನ್ಸರ್ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಅಸಾಂಕ್ರಾಮಿಕ ರೋಗಗಳಲ್ಲಿ ಹೃದಯ ಸಂಬಂಧಿತ ಖಾಯಿಲೆಯ ನಂತರದಲ್ಲಿ 2ನೇ ಸ್ಥಾನದಲ್ಲಿ ಕ್ಯಾನ್ಸರ್‌ನಿಂದ ಅತೀ ಹೆಚ್ಚು ಸಾವು ಸಂಭವಿಸುತ್ತಿವೆ ಎಂದು ತಿಳಿಸಿದರು. ಕ್ಯಾನ್ಸರ್ ಖಾಯಿಲೆಯು ಅನಿಯಂತ್ರಿತ ಜೀವಕೋಶ ವಿಭಜನೆಗಳಿಂದ ದೇಹದಲ್ಲಿ ಬೆಳವಣಿಗೆಯಾಗುವಂತಹ ಗಡ್ಡೆ. ಕ್ಯಾನ್ಸರ್ ಜೀವಕೋಶವು ಲಿಂಪ್‌ನೋಡ್ಸ ಮುಖಾಂತರ ದೇಹದ ಎಲ್ಲಾ ಭಾಗಗಳಲ್ಲಿ ಪಸರಿಸುತ್ತದೆ.

ಕ್ಯಾನ್ಸರ್ ರೋಗದಲ್ಲಿ ನಾಲ್ಕು ಹಂತಗಳಿದ್ದು, ಮೊದಲನೇ ಮತ್ತು ಎರಡನೇ ಹಂತದಲ್ಲಿರುವ ಕ್ಯಾನ್ಸರ್ ರೋಗವನ್ನು ತಜ್ಞ ವೈದ್ಯರಲ್ಲಿ ಚಿಕಿತ್ಸೆ ಪಡೆದರೆ ಸಂಪೂರ್ಣ ಗುಣಪಡಿಸಬಹುದೆಂದು ತಿಳಿಸಿದರು.

ಈಗಿನ ಆಧುನಿಕ ಜೀವನ ಶೈಲಿ ಮತ್ತು ತಂಬಾಕು ಸೇವನೆಯಿಂದ ಅತೀ ಹೆಚ್ಚು ಕ್ಯಾನ್ಸರ್ ರೋಗಗಳು ಕಂಡುಬರುತ್ತಿವೆ. ಪುರುಷರಲ್ಲಿ ಬಾಯಿ, ಅನ್ನನಾಳ, ಶ್ವಾಸಕೋಶ ಮತ್ತು ಲೀವರ್ ಕ್ಯಾನ್ಸರ್‌ಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಮಹಿಳೆಯರಲ್ಲಿ ಸ್ತನ, ಗರ್ಭಕಂಠ ಮತ್ತು ಅಂಡಾಣುವಿನ ಕ್ಯಾನ್ಸರ್ ಸಾಮಾನ್ಯವಾಗಿ ಕಂಡುಬರುತ್ತವೆ. ಕ್ಯಾನ್ಸರ್ ರೋಗಿಗಳಿಗೆ ಸರಿಯಾದ ಚಿಕಿತ್ಸೆ, ಆರೈಕೆ ಹಾಗೂ ಮನೋಸ್ಥೈರ್ಯ ಮಾತುಗಳಿಂದ ಗುಣಪಡಿಸಬಹುದು. ಉತ್ತಮ ಜೀವನ ಶೈಲಿ, ಸಮತೋಲನ ಆಹಾರ, ತರಕಾರಿ ಹಣ್ಣು ಹಂಪಲಗಳ ಸೇವನೆ, ಪ್ರತಿನಿತ್ಯ ಯೋಗ, ಧ್ಯಾನ ಮತ್ತು ದೈಹಿಕ ಚಟುವಟಿಕೆಯಿಂದ ಕ್ಯಾನ್ಸರ್ ಖಾಯಿಲೆ ಬರದಂತೆ ತಡೆಯಬಹುದೆಂದು ತಿಳಿಸಿದರು.

ಡಾ.ವೆಂಕಟೇಶ ರಾಠೋಡ, ಜಿಲ್ಲಾ ಸಮೀಕ್ಷಣಾಧಿಕಾರಿಗಳು ಹಾಗೂ ಕಾರ್ಯಕ್ರಮಾಧಿಕಾರಿಗಳು ಗದಗ ರವರು ವಿಶ್ವ ಕ್ಯಾನ್ಸರ್ ದಿನಾಚರಣೆ ಕುರಿತು ಮಾತನಾಡುತ್ತ ನಮ್ಮ ದೇಶದಲ್ಲಿ ಪ್ರತಿ ವರ್ಷ 14,13,316 ಹೊಸ ಕ್ಯಾನ್ಸರ್ ಪ್ರಕರಣಗಳು ಪತ್ತೆ ಆಗುತ್ತಿದ್ದು, ಅವುಗಳಲ್ಲಿ 30–60 ವಯಸ್ಸಿನವರಲ್ಲಿ 9,16,827 ರೋಗಿಗಳು ಸಾವನ್ನಪ್ಪುತ್ತಿದ್ದಾರೆ. ಮಹಿಳೆಯರಲ್ಲಿ ಸ್ತನ ಮತ್ತು ಗರ್ಭಕಂಠದ ಕ್ಯಾನ್ಸರ್‌ನಿಂದ ಅತೀ ಹೆಚ್ಚಾಗಿ ಸಾವನ್ನಪ್ಪುತ್ತಿದ್ದಾರೆ ಎಂದು ತಿಳಿಸಿದರು.




ಉದಯವಾಹಿನಿ ಚಿತ್ರ



### ಕಾಯಿಲೆಗಳಿಗೆ ಉಚಿತ ತಪಾಸಣೆ

ಜಿಲ್ಲೆಯಲ್ಲಿ ಅಸಾಂಕ್ರಾಮಿಕ ಕಾಯಿಲೆಗಳ ಪ್ರಾಥಮಿಕ ಹಂತದ ತಪಾಸಣೆಯು ಪ್ರತಿ ಗ್ರಾಮಗಳಲ್ಲಿ ಕೈಗೊಳ್ಳಲಾಗುತ್ತಿದ್ದು, ಒಟ್ಟು 7 ಎನ್.ಸಿ.ಡಿ. ಕ್ಲಿನಿಕ್‌ಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಪ್ರತಿ ಆರೋಗ್ಯ ಕೇಂದ್ರಗಳಲ್ಲಿ ಅಸಾಂಕ್ರಾಮಿಕ ಕಾಯಿಲೆಗಳಿಗೆ ಉಚಿತ ತಪಾಸಣೆ ಮತ್ತು ಔಷಧ ವಿತರಿಸಲಾಗುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆಯು 2025ರ ಒಳಗಾಗಿ ಸುಮಾರು 25% ಅಸಾಂಕ್ರಾಮಿಕ ಕಾಯಿಲೆಗಳಿಂದ ಮರಣ ಹೊಂದುವುದನ್ನು ತಡೆಯುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು.

ವಿಶ್ವ ಕ್ಯಾನ್ಸರ್ ದಿನಾಚರಣೆಯನ್ನು ಪ್ರತಿ ವರ್ಷ ಫೆಬ್ರುವರಿ–4 ರಂದು ಆಚರಿಸಲಾಗುತ್ತಿದ್ದು, ಕ್ಯಾನ್ಸರ್ ಖಾಯಿಲೆಯ ಭೀಕರತೆ ಹಾಗೂ ಸಮಾಜದ ಮೇಲಾಗುವ ಗಂಭೀರ ಪರಿಣಾಮಗಳ ಕುರಿತು ಮಾತನಾಡುತ್ತಾ ಕ್ಯಾನ್ಸರ್ ಖಾಯಿಲೆಯನ್ನು ಮುನ್ನೆಚ್ಚರಿಕೆ ಮತ್ತು ಆರಂಭಿಕ ಹಂತದಲ್ಲಿ ಪತ್ತೆ ಮಾಡುವುದು ಮುಖ್ಯವಾಗಿದೆ

– ಡಾ.ಗಣೇಶರಾವ್ ಕುಂದಾಪೂರ

# ಇಸ್ರೇಲ್ ಜೊತೆ ರಾಜತಾಂತ್ರಿಕ ಸಂಬಂಧ ಸಾಧ್ಯವಿಲ್ಲ

## ನೋ ಪ್ಯಾಲೆಸ್ಟೈನ್, ನೋ ರಿಲೇಷನ್ಸ್, ರಾಜತಾಂತ್ರಿಕ ಸಂಬಂಧದ ಕನಸು ಕಾಣದಂತೆ ಇಸ್ರೇಲ್‌ಗೆ ಸೌದಿ ಅರೇಬಿಯಾ ತಾಕೀತು

**ರಿಯಾದ್:** ಮಧ್ಯಪ್ರಾಚ್ಯ ರಾಷ್ಟ್ರಗಳೊಂದಿಗೆ ಉತ್ತಮ ರಾಜತಾಂತ್ರಿಕ ಸಂಬಂಧ ಹೊಂದಲು ಬಯಸಿರುವುದಾಗಿ ಇಸ್ರೇಲ್ ಪ್ರಧಾನಮಂತ್ರಿ ಬೆಂಜಮಿನ್ ನೆತನ್ಯಾಹು ಘೋಷಿಸಿರುವ ಮಧ್ಯೆಯೇ, ಪ್ಯಾಲೆಸ್ಟೈನ್ ದೇಶ ರಚನೆಗೆ ಅವಕಾಶ ಮಾಡಿಕೊಡದಿದ್ದರೆ ಇಸ್ರೇಲ್ ಜೊತೆಗೆ ಯಾವುದೇ ರಾಜತಾಂತ್ರಿಕ ಸಂಬಂಧ ಬೆಳೆಸುವುದಿಲ್ಲ ಎಂದು ಸೌದಿ ಅರೇಬಿಯಾ ಸ್ಪಷ್ಟಪಡಿಸಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಸೌದಿ ಅರೇಬಿಯಾ ವಿದೇಶಾಂಗ ಸಚಿವಾಲಯವು, ಪೂರ್ವ ಜೆರುಸಲೇಂನ್ನು ರಾಜಧಾನಿಯನ್ನಾಗಿ ಹೊಂದುವ ಸ್ವತಂತ್ರ್ಯ ಪ್ಯಾಲೆಸ್ಟೈನ್ ದೇಶ ರಚನೆಗೆ ಸೌದಿ ಅರೇಬಿಯಾ ತನ್ನ ಪ್ರಯತ್ನಗಳನ್ನು ಮುಂದುವರೆಸುತ್ತದೆ. ಅಲ್ಲದೇ ಸ್ವತಂತ್ರ್ಯ ಪ್ಯಾಲೆಸ್ಟೈನ್ ದೇಶ ರಚನೆಯಾಗುವವರೆಗೂ ಇಸ್ರೇಲ್ ಜೊತೆ ಯಾವುದೇ ತೆರನಾದ ರಾಜತಾಂತ್ರಿಕ ಸಂಬಂಧಗಳನ್ನು ಸ್ಥಾಪಿಸುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

ಸ್ವತಂತ್ರ್ಯ ಪ್ಯಾಲೆಸ್ಟೈನ್ ದೇಶ ರಚನೆಯ ತನ್ನ ಬೇಡಿಕೆಯಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದಿರುವ ಸೌದಿ ಅರೇಬಿಯಾ, ಅರಬ್ಬರ ಹಿತಾಸಕ್ತಿ ಕಾಪಾಡುವ ತನ್ನ ಹಕ್ಕನ್ನು ಕಾಯ್ದಿರಿಸಿರುವುದಾಗಿ ತಿಳಿಸಿದೆ. ಈ ವಿಚಾರವಾಗಿ ಇಸ್ರೇಲ್ ಜೊತೆಗೆ ಯಾವುದೇ ಒಪ್ಪಂದಕ್ಕೆ ತಾನು ಸಿದ್ಧವಿಲ್ಲ ಎಂದೂ ಸೌದಿ



- ಪ್ಯಾಲೆಸ್ಟೈನ್ ದೇಶ ರಚನೆಯ ಬೇಡಿಕೆಯಿಂದ ಹಿಂದೆ ಸರಿಯಲ್ಲ ಎಂದ ಸೌದಿ
- ಇಸ್ರೇಲಿ ವಿರೋಧಿ ನಿರೂಪಣೆಯಿಂದ ಹೊರಬರದ ಪ್ರಮುಖ ಅರಬ್ ರಾಷ್ಟ್ರ
- ನೆತನ್ಯಾಹು ಅಮೆರಿಕ ಪ್ರವಾಸದ ಮಧ್ಯೆಯೇ ಸೌದಿ ಅರೇಬಿಯಾದ ಮಹತ್ವದ ಘೋಷಣೆ

ಅರೇಬಿಯಾ ಖಚಿತಪಡಿಸಿದೆ. ಅಮೆರಿಕ ಪ್ರವಾಸದಲ್ಲಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಹಮಾಸ್ ವಿರುದ್ಧದ ಕದನದಲ್ಲಿ ಅಮೆರಿಕದ ನೆರವು ನಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸಿದೆ. ಎಂದು ಹೇಳಿದ್ದಾರೆ. ಅದೇ ರೀತಿ, ನೆತನ್ಯಾಹು ಜೊತೆಗಿನ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಗಾಜಾ ಪಟ್ಟಿಯನ್ನು ಅಮೆರಿಕ ಶೀಘ್ರದಲ್ಲೇ ತನ್ನ ಸುಪರ್ದಿಗೆ

### ಸೌದಿ ಅರೇಬಿಯಾ ಸ್ಪಷ್ಟನೆ

**ಪ್ಯಾಲೆಸ್ಟೈನ್ ದೇಶ ರಚನೆಗೆ ಅವಕಾಶ ಮಾಡಿಕೊಡದಿದ್ದರೆ ಇಸ್ರೇಲ್ ಜೊತೆಗೆ ಯಾವುದೇ ರಾಜತಾಂತ್ರಿಕ ಸಂಬಂಧ ಬೆಳೆಸುವುದಿಲ್ಲ ಎಂದು ಸೌದಿ ಅರೇಬಿಯಾ ಸ್ಪಷ್ಟಪಡಿಸಿದೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ಸೌದಿ ಅರೇಬಿಯಾ ವಿದೇಶಾಂಗ ಸಚಿವಾಲಯವು, ಪೂರ್ವ ಜೆರುಸಲೇಂನ್ನು ರಾಜಧಾನಿಯನ್ನಾಗಿ ಹೊಂದುವ ಸ್ವತಂತ್ರ್ಯ ಪ್ಯಾಲೆಸ್ಟೈನ್ ದೇಶ ರಚನೆಗೆ ಸೌದಿ ಅರೇಬಿಯಾ ತನ್ನ ಪ್ರಯತ್ನಗಳನ್ನು ಮುಂದುವರೆಸುತ್ತದೆ. ಅಲ್ಲದೇ ಸ್ವತಂತ್ರ್ಯ ಪ್ಯಾಲೆಸ್ಟೈನ್ ದೇಶ ರಚನೆಯಾಗುವವರೆಗೂ ಇಸ್ರೇಲ್ ಜೊತೆ ಯಾವುದೇ ತೆರನಾದ ರಾಜತಾಂತ್ರಿಕ ಸಂಬಂಧಗಳನ್ನು ಸ್ಥಾಪಿಸುವುದಿಲ್ಲ.. ಎಂದು ಸ್ಪಷ್ಟಪಡಿಸಿದೆ.**

ತೆಗೆದುಕೊಳ್ಳಲಿದೆ. ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ನೆತನ್ಯಾಹು-ಟ್ರಂಪ್ ಜಂಟಿ ಘೋಷಣೆ ಬೆನ್ನಲ್ಲೇ, ಈ ಕುರಿತು ತೀಕ್ಷ್ಣವಾಗಿ ಪ್ರತಿಕ್ರಿಯೆ ನೀಡಿರುವ ಸೌದಿ ಅರೇಬಿಯಾ, ಪ್ಯಾಲೆಸ್ಟೈನ್ ದೇಶ ರಚನೆಯ ಹೊರತು ಇಸ್ರೇಲ್ ಜೊತೆ ಯಾವುದೇ ರೀತಿಯ ರಾಜತಾಂತ್ರಿಕ ಸಂಬಂಧ ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದೆ.

**ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ**

ಇಸ್ರೇಲ್, ಸೌದಿ ಅರೇಬಿಯಾ ನಡುವಣ ರಾಜತಾಂತ್ರಿಕ ಸಂಬಂಧ ಸುಧಾರಣೆಗೆ ಅಮೆರಿಕ ನಿರಂತರವಾಗಿ ಪ್ರಯತ್ನಿಸುತ್ತಲೇ ಇದೆ. ಆದರೀಗ ಸೌದಿ ಅರೇಬಿಯಾದ ನಿಲುವು ಅಮೆರಿಕದ ಈ ಪ್ರಯತ್ನಗಳಿಗೆ ಹಿನ್ನಡೆಯುಂಟು ಮಾಡಬಹುದು ಎಂದು ಅಂದಾಜಿಸಲಾಗಿದೆ. ಇಸ್ರೇಲ್ ಬಹುತೇಕ ಮಧ್ಯಪ್ರಾಚ್ಯ ರಾಷ್ಟ್ರಗಳು ಮಂಡಿಸುವ ಎರಡು ರಾಜ್ಯ ಪರಿಹಾರವನ್ನು ವಿರೋಧಿಸುತ್ತದೆ. ಇಸ್ರೇಲ್ 2020ರಲ್ಲಿ ಅರಬ್ ಸಂಯುಕ್ತ ಸಂಸ್ಥಾನ(ಯುಎಇ), ಮೊರಾಕ್ಕೊ ಮತ್ತು ಬಹ್ರೇನ್‌ನೊಂದಿಗೆ ರಾಜತಾಂತ್ರಿಕ ಸಂಬಂಧವನ್ನು ಸ್ಥಾಪಿಸುವ ಮೂಲಕ ಜಾಗತಿಕವಾಗಿ ಗಮನ ಸೆಳೆದಿತ್ತು. ಇಸ್ರೇಲ್ ಮತ್ತು ಅರಬ್ ದೇಶಗಳ ನಡುವಿನ ಈ ಐತಿಹಾಸಿಕ ಒಪ್ಪಂದದಲ್ಲಿ, ಆಗಿನ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಹತ್ತರವಾದ ಪಾತ್ರ ನಿರ್ವಹಿಸಿದ್ದರು. ಆದರೆ ಸೌದಿ ಅರೇಬಿಯಾ ಇದುವರೆಗೂ ಇಸ್ರೇಲ್‌ಗೆ ಅಧಿಕೃತ ಮಾನ್ಯತೆ ನೀಡಿಲ್ಲವಾದರೂ, ನಾಗರಿಕ ಪರಮಾಣು ಕಾರ್ಯಕ್ರಮದ ಕುರಿತು ಯುಎಸ್ ರಕ್ಷಣಾ ಒಪ್ಪಂದದಡಿ ಇಸ್ರೇಲ್ ಜೊತೆ ಹೊಂದಾಣಿಕೆಯ ಮಾತುಕತೆ ನಡೆಸುತ್ತಿದೆ. ಇಸ್ರೇಲ್ ವಿಚಾರವಾಗಿ ಸೌದಿ ಅರೇಬಿಯಾ ದ್ವಿ-ಮಾರ್ಗದ ರಾಜತಾಂತ್ರಿಕತೆಯನ್ನು ಅಳವಡಿಸಿಕೊಂಡಂತೆ ತೋರುತ್ತಿದೆ.


ಆದಾಗ್ಯೂ, ಪ್ಯಾಲೆಸ್ಟೈನ್ ವಿಚಾರವಾಗಿ ಸೌದಿ ಅರೇಬಿಯಾ ನಿಲುವು ದೃಢವಾಗಿದ್ದು, ಸ್ವತಂತ್ರ್ಯ ಪ್ಯಾಲೆಸ್ಟೈನ್ ರಚನೆಯ ತನ್ನ ಬೇಡಿಕೆಯಿಂದ ಹಿಂದೆ ಸರಿಯುವುದಿಲ್ಲ ಎಂದು ಸ್ಪಷ್ಟಪಡಿಸಿದೆ. ಸೌದಿ ಜನರ ಭಾವನೆಗಳಿಗೆ ವಿರುದ್ಧವಾಗಿ ಇಸ್ರೇಲ್ ಜೊತೆ ನೇರ ರಾಜತಾಂತ್ರಿಕ ಸಂಬಂಧ ಸ್ಥಾಪಿಸುವುದು ಸೌದಿ ಸರ್ಕಾರಕ್ಕೆ ಸಾಧ್ಯವಿಲ್ಲ ಎಂದು ತಜ್ಞರು ವಿಶ್ಲೇಷಿಸುತ್ತಾರೆ. ಅಂತರರಾಷ್ಟ್ರೀಯ ನಿರ್ಣಯಗಳಿಗೆ ಅನುಸಾರವಾಗಿ ಪ್ಯಾಲೇಸ್ಟಿನಿಯನ್ ಜನರು ತಮ್ಮ ಕಾನೂನುಬದ್ಧ ಹಕ್ಕುಗಳನ್ನು ಪಡೆಯದೆ ಶಾಶ್ವತ ಮತ್ತು ನ್ಯಾಯಯುತ ಶಾಂತಿಯನ್ನು ಸಾಧಿಸುವುದು ಅಸಾಧ್ಯ.

ನಮ್ಮ ನಿಲುವನ್ನು ಅಮೆರಿಕದ ಈ ಹಿಂದಿನ ಬೈಡನ್ ಆಡಳಿತ ಮತ್ತು ಪ್ರಸ್ತುತ ಡೊನಾಲ್ಡ್ ಟ್ರಂಪ್ ಆಡಳಿತಕ್ಕೆ ಸ್ಪಷ್ಟವಾಗಿ ತಿಳಿಸಿದ್ದೇವೆ ಎಂದು ಸೌದಿ ಅರೇಬಿಯಾ ವಿದೇಶಾಂಗ ಇಲಾಖೆ ಮಾಹಿತಿ ನೀಡಿದೆ.

## ಸ್ವೀಡನ್‌ನ ಶಿಕ್ಷಣ ಕೇಂದ್ರದಲ್ಲಿ ಗುಂಡಿನ ದಾಳಿ, 11 ಜನರು ಸಾವು

**ಓರೆಬ್ರೊ:** ಇಲ್ಲಿನ ವಯಸ್ಕ ಶಿಕ್ಷಣ ಕೇಂದ್ರದಲ್ಲಿ ಬಂದೂಕುಧಾರಿ ನಡೆಸಿದ ಭೀಕರ ಗುಂಡಿನ ದಾಳಿಯಲ್ಲಿ ಸುಮಾರು 11 ಜನರು ಸಾವನ್ನಪ್ಪಿದ್ದಾರೆ.ಸ್ವೀಡನ್‌ನ ಪ್ರಧಾನಿ ಉಲ್ ಫ ಕ್ರಿಸ್ಟರ್ಸನ್ ಘಟನೆಯನ್ನು ಖಂಡಿಸಿ ನಾವು ಸಂಪೂರ್ಣವಾಗಿ ಮುಗ್ಧ ಜನರ ವಿರುದ್ಧ ಕ್ರೂರ, ಮಾರಕ ಹಿಂಸಾಚಾರವನ್ನು ನೋಡಿದ್ದೇವೆ ಇದು ಸ್ವೀಡಿಷ್ ಇತಿಹಾಸದಲ್ಲಿ ಅತ್ಯಂತ ಕೆಟ್ಟ ಸಾಮೂಹಿಕ ಗುಂಡಿನ ದಾಳಿಯಾಗಿದೆ, ಬುಧವಾರ ಅತ್ಯಂತ ನೋವಿನ ದಿನ ಎಂದು ಹೇಳಿದ್ದಾರೆ.

ಘಟನಾ ಸ್ಥಳದಲ್ಲಿ ಎಷ್ಟು ಜನರು ಸಾವನ್ನಪ್ಪಿದ್ದಾರೆ ಮತ್ತು ಗಾಯಾಳುಗಳ ಬಗ್ಗೆ ಖಚಿತವಾಗಿ ಹೇಳಲು ಸಾಧ್ಯವಾಗಲಿಲ್ಲ ಎಂದು ಸ್ಥಳೀಯ ಪೊಲೀಸ್ ಮುಖ್ಯಸ್ಥ ರಾಬರ್ಟೊ ಈದ್ ಫಾರೆಸ್ಟ್ ಹೇಳಿದ್ದಾರೆ. ಸ್ಟಾಕ್‌ಹೋಮ್‌ನಿಂದ ಪಶ್ಚಿಮಕ್ಕೆ ಸುಮಾರು 200 ಕಿ.ಮೀ ದೂರದಲ್ಲಿರುವ ಓರೆಬ್ರೊ ನಗರದ ಹೊರವಲಯದಲ್ಲಿ ಗುಂಡಿನ ದಾಳಿ ನಡೆದಿದೆ.ಸಾವಿನ ಸಂಖ್ಯೆ ಹೆಚ್ಚಾಗಬಹುದು ಎಂದು ಪೊಲೀಸರು ತಿಳಿಸಿದ್ದಾರೆ.



**ಸ್ಥಳೀಯ ಸಮಯ ಮಧ್ಯಾಹ್ನ 12:30ರ ಸುಮಾರಿಗೆ (1130) ಪ್ರಾರಂಭವಾದ ಗುಂಡಿನ ದಾಳಿಯ ನಂತರ ಶಾಲೆಯ ಇತರ ಭಾಗಗಳನ್ನು ಸ್ಥಳಾಂತರಿಸಲಾಯಿತು ಎಂದು ವಿದ್ಯರ್ಥಿಯೊಬ್ಬ ಹೇಳಿದ್ದಾನೆ.**

ಶಂಕಿತ ಬಂದೂಕುಧಾರಿ ಕೊಲ್ಲಲ್ಪಟ್ಟವರಲ್ಲಿ ಸೇರಿದ್ದಾನೆ ಎಂದು ಈದ್ ಫಾರೆಸ್ಟ್ ವರದಿಗಾರರಿಗೆ ತಿಳಿಸಿ ದ್ದಾರೆ. ಅಪರಾಧಿ ಒಬ್ಬನೇ ಕೃತ್ಯ ಎಸಗಿದ್ದಾನೆ ಎಂದು ಪೊಲೀಸರು ನಂಬಿದ್ದಾರೆ ಮತ್ತು ಅವನು ಈ ಹಿಂದೆ ಪೊಲೀಸರಿಗೆ ತಿಳಿದಿರಲಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಹಂತದಲ್ಲಿ ಭಯೋತ್ಪಾದನೆಗೆ ಯಾವುದೇ ಶಂಕಿತ ಸಂಪರ್ಕವಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ, ಆದರೆ ಪೊಲೀಸರು ಉದ್ದೇಶವನ್ನು ಒದಗಿಸಲಿಲ್ಲ. ಕ್ಯಾಂಪಸ್ ರಿಸ್ಬರ್ಗ್ಸ್ಕಾ ಎಂದು ಕರೆಯಲ್ಪಡುವ ಈ ಶಾಲೆಯು 20 ವರ್ಷಕ್ಕಿಂತ ಮೇಲ್ಪಟ್ಟ ವಿದ್ಯಾರ್ಥಿಗಳಿಗೆ ಸೇವೆ ಸಲ್ಲಿಸುತ್ತದೆ ಎಂದು ಅದರ ವೆಬ್‌ಸೈಟ್ ತಿಳಿಸಿದೆ. ಪ್ರಾಥಮಿಕ ಮತ್ತು ಉನ್ನತ ಮಾಧ್ಯಮಿಕ ಶಾಲಾ ಕೋರ್ಸ್‌ಗಳನ್ನು ನೀಡಲಾಗುತ್ತದೆ, ಜೊತೆಗೆ ಸ್ವೀಡಿಷ್‌ನಲ್ಲಿ ವಲಸೆ ಬಂದವರಿಗೆ ತರಗತಿಗಳು, ವೃತ್ತಿಪರ ತರಬೇತಿ ಮತ್ತು ಬೌದ್ಧಿಕ ವಿಕಲಚೇತನರಿಗೆ ಕಾರ್ಯಕ್ರಮಗಳನ್ನು ನೀಡಲಾಗುತ್ತದೆ.

ಸ್ವೀಡನ್‌ನಲ್ಲಿ ಶಾಲೆಗಳಲ್ಲಿ ಬಂದೂಕು ಹಿಂಸಾಚಾರ ಬಹಳ ಅಪರೂಪ. ಆದರೆ ಇತ್ತೀಚಿನ ವರ್ಷಗಳಲ್ಲಿ ಚಾಕುಗಳು, ಕೊಡಲಿಗಳಂತಹ ಇತರ ಆಯುಧಗಳಿಂದ ಜನರು ಗಾಯಗೊಂಡರು, ಕೊಲ್ಲಲ್ಪಟ್ಟ ಹಲವಾರು ಘಟನೆಗಳು ನಡೆದಿವೆ. ಗುಂಡೇಟಿಗೆ ಪ್ರತಿಕ್ರಿಯಿಸಿದ ಪೊಲೀಸರು ಮತ್ತು ರಕ್ಷಣಾ ಮತ್ತು ವೈದ್ಯಕೀಯ ಸಿಬ್ಬಂದಿಯನ್ನು ಸ್ವೀಡಿಷ್ ರಾಜ ಕಾರ್ಲ್ ಗುಸ್ತಾಫ್ ಶ್ಲಾಘಿಸಿದರು, ಬಲಿಪಶುಗಳ ಕುಟುಂಬಗಳಿಗೆ ಸಾಂತ್ವನ ಹೇಳಿದರು.

## ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ ಪ್ರಧಾನಿ

**ಮಹಾಕುಂಭನಗರ:** ಪ್ರಧಾನಿ ನರೇಂದ್ರ ಮೋದಿ ಅವರು ಬುಧವಾರ ಪ್ರಯಾಗ್ ರಾಜ್‌ಗೆ ಭೇಟಿ ನೀಡಿ ಮಾಘ ಅಷ್ಟಮಿ, ಭೀಷ್ಮ ಅಷ್ಟಮಿಯ ಶುಭ ಸಂದರ್ಭಗಳಲ್ಲಿ ಪ್ರಯಾಗ್‌ರಾಜ್‌ನ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದರು. ಕೇಸರಿ ಸ್ವೆಟ್ ಶರ್ಟ್ ಮತ್ತು ಟ್ರ್ಯಾಕ್‌ಸೂಟ್‌ನಲ್ಲಿ ಧರಿಸಿದ್ದ ಪ್ರಧಾನಿ ಮೋದಿ ಆರತಿ ನೀಡುವ ಮೊದಲು ತ್ರಿವೇಣಿ ಸಂಗಮದಲ್ಲಿ ರುದ್ರಾಕ್ಷಿ ಮಣಿಗಳನ್ನು ಹಿಡಿದುಕೊಂಡು, ಸಂಸ್ಕೃತ ಮಂತ್ರಗಳನ್ನು ಪಠಿಸುತ್ತಾ ಪ್ರಾರ್ಥನೆ ಸಲ್ಲಿಸಿದರು.

ಧಾರ್ಮಿಕ ಸ್ನಾನವನ್ನು ಮಾಡಿದ ನಂತರ, ಪ್ರಧಾನಿ ಮೋದಿ ಅವರು ಹಲವಾರು ಅಖಾಡಾಗಳ ಸಂತರ ಸಭೆಯನ್ನು ಉದ್ದೇಶಿಸಿ ರಾಷ್ಟ್ರ ನಿರ್ಮಾಣದ ಬಗ್ಗೆ ಮಾತನಾಡಿದರು. ಪ್ರಧಾನಿ ಮೋದಿ ಅವರು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರೊಂದಿಗೆ ಏರಿಯಲ್ ಘಾಟ್‌ನಿಂದ ಮಹಾಕುಂಭಕ್ಕೆ ದೋಣಿ ವಿಹಾರ ತೆರಳಿ ಪವಿತ್ರ ಸ್ನಾನ ಮಾಡಿದರು.




**ನಾನು ಪವಿತ್ರ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಿದ್ದು ನನ್ನ ಅದೃಷ್ಟ. ದಯವಿಟ್ಟು ಎಲ್ಲರೂ ಮಾರ್ಗಸೂಚಿಗಳನ್ನು ಅನುಸರಿಸಿ, ಮಹಾಕುಂಭಕ್ಕೆ ಬರುವ ಒಟ್ಟು ಸಂಖ್ಯೆ ಅಭೂತಪೂರ್ವವಾಗಿದೆ ಮತ್ತು ಮಹಾಕುಂಭ ಅಭೂತಪೂರ್ವವಾಗಿದೆ ಎಂದು ಹೇಳಿದ್ದಾರೆ.**

ಕೇಂದ್ರ ಸಚಿವ ಕಿರಣ್ ರಿಜಿಜು ಅವರು ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ಸಂಗಮ ಸ್ಥಳವಾದ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದರು.

ಎಕ್ಸ್‌ನಲ್ಲಿ ವೀಡಿಯೊವನ್ನು ಪೋಸ್ಟ್ ಮಾಡಿದ ರಿಜಿಜು, ಮಹಾ ಕುಂಭವು 144 ವರ್ಷಗಳಿಗೊಮೆ ಬರುತ್ತದೆ, ಅಂದರೆ ಅನೇಕ ತಲೆಮಾರುಗಳಿಗೆ ಒಮ್ಮೆ. ಯಾರೂ ಇಂತಹ ಐತಿಹಾಸಿಕ ಧಾರ್ಮಿಕ ಕ್ಷಣದಲ್ಲಿ ರಾಜಕೀಯ ಮಾಡಬಾರದು.

# ನಿಜವಾದ ಅಭಿವೃದ್ಧಿ ಮಾಡಿದವರಿಗೆ ಮತ ನೀಡಿ

**ನವದೆಹಲಿ:** ದೆಹಲಿ ವಿಧಾನಸಭಾ ಚುನಾವಣೆಗೆ ಮತದಾನ ಆರಂಭವಾಗುತ್ತಿದ್ದಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಬುಧವಾರ ದೆಹಲಿಯಲ್ಲಿ ನಿಜವಾದ ಅಭಿವದ್ಧಿ ಮಾಡಿರುವವರಿಗೆ ಮತ ನೀಡಿ, ಸುಳ್ಳು ಭರವಸೆ ನೀಡಿ ಜನರನ್ನು ವಂಚಿಸಬೇಡಿ ಎಂದು ಮನವಿ ಮಾಡಿದ್ದಾರೆ. ಜನರಿಗಾಗಿ ಹೋರಾಡುವ ನಾಟಕವಾಡುವ ಮೂಲಕ ಅಧಿಕಾರದಲ್ಲಿ ಉಳಿಯಲು ಬಯಸುವವರು ಅವರ ಮತಕ್ಕೆ ಅರ್ಹರಲ್ಲ ಎಂದು ಅವರು ಪ್ರತಿಪಾದಿಸಿದರು. ದಿಲ್ಲಿಯ ಗೌರವಾನ್ವಿತ ಜನತೆಗೆ ತಮ ಅಮೂಲ್ಯವಾದ ಮತ ಚಲಾಯಿಸುವಂತೆ ನಾನು ಮನವಿ ಮಾಡುತ್ತೇನೆ. ನಿಮ ಒಂದು ಮತವು ದೆಹಲಿಯಲ್ಲಿ ಬದಲಾವಣೆಯ ಸಂಕೇತವಾಗಿದೆ. ದೆಹಲಿಯನ್ನು ಮೊದಲಿನಂತೆ ಅಭಿವದ್ಧಿಯ ಪಥದಲ್ಲಿ ಕೊಂಡೊಯ್ಯಬೇಕಾದರೆ, ದೆಹಲಿಯಲ್ಲಿ ನಿಜವಾದ ಅಭಿವದ್ಧಿಯನ್ನು ಮಾಡಿದವರನ್ನು ಆಯ್ಕೆ ಮಾಡಿ ಮತ್ತು ಸುಳ್ಳು ಭರವಸೆಗಳನ್ನು ನೀಡಿ ನಿಮನ್ನು ವಂಚಿಸುವವರಿಗೆ ಪಾಠ ಕಲಿಸಿ ಎಂದು ಖರ್ಗೆ ಹಿಂದಿಯಲ್ಲಿ ಪೋಸ್ಟ್ ಮಾಡಿದ್ದಾರೆ. ಹದಗೆಟ್ಟ ರಸ್ತೆಗಳು, ಕೊಳಕು ನೀರು, ಕಸ, ಕಲುಷಿತ ಗಾಳಿಯ ಸಮಸ್ಯೆಗಳನ್ನು ಪರಿಹರಿಸಲು ಒಂದೇ ಒಂದು ಹೆಜ್ಜೆಯೂ ಇಡದ ಮತ್ತು ಕೇವಲ ಬೈಗುಳಗಳನ್ನು ಹೇಳುವವರಿಗೆ ನಿಮ ಬಗ್ಗೆ ಎಷ್ಟು ಕಾಳಜಿ ಇದೆ ಎಂದು ಇವಿಎಂ ಬಟನ್ ಒತ್ತುವ ಮೊದಲು ಯೋಚಿಸಿ ಎಂದು ಕಾಂಗ್ರೆಸ್



ಮುಖಂಡರು ಮತದಾರರಿಗೆ ಮನವಿ ಮಾಡಿದರು. ಜನರಿಗಾಗಿ ಹೋರಾಡುವಂತೆ ನಟಿಸುವ ಮೂಲಕ ಅಧಿಕಾರದಲ್ಲಿ ಉಳಿಯಲು ಬಯಸುವವರು ನಿಜವಾಗಿಯೂ ನಿಮ ಮತಕ್ಕೆ ಅರ್ಹರಲ್ಲ ಎಂದು ಅವರು ಹೇಳಿದರು. ದೆಹಲಿಯ ಸಹೋದರತ್ವ, ಸೌಹಾರ್ದತೆ, ಸಮದ್ಧಿ, ಸಂತೋಷ, ಎಲ್ಲರನ್ನೂ ಒಳ ಗೊಳ್ಳುವ ಅಭಿವದ್ಧಿ ಮುಖ್ಯ ಎಂದು ಖರ್ಗೆ ಹೇಳಿದರು. ಯುವಕರು, ವಿಶೇಷವಾಗಿ ಮೊದಲ ಬಾರಿಗೆ ಮತದಾರರು ತಮ ಹಕ್ಕು ಚಲಾಯಿಸುವಂತೆ ಅವರು ಕರೆ ನೀಡಿದರು. ದೆಹಲಿ ವಿಧಾನಸಭೆ ಚುನಾವಣೆಗೆ ಬೆಳಗ್ಗೆ 7 ಗಂಟೆಗೆ ಮತದಾನ ಆರಂಭವಾಗಿದೆ. ಆಡಳಿತಾರೂಢ ಎಎಪಿ ತನ್ನ ಆಡಳಿತ ದಾಖಲೆ ಮತ್ತು ಕಲ್ಯಾಣ ಯೋಜನೆಗಳ ಮೇಲೆ ಬ್ಯಾಂಕಿಂಗ್ ಮಾ ಡುವ ಮೂಲಕ ಮೂರನೇ ನೇರ ಅವಧಿಯ ಮೇಲೆ ಕಣ್ಣಿಟ್ಟಿದ್ದರೆ, ಬಿಜೆಪಿ ಮತ್ತು ಕಾಂಗ್ರೆಸ್ ಪುನರುತ್ಥಾನಕ್ಕಾಗಿ ನೋಡುತ್ತಿವೆ. ರಾಜಧಾನಿಯಲ್ಲಿ ಸುಮಾರು 1.56 ಕೋಟಿ ಅರ್ಹ ಮತದಾರರಿದ್ದಾರೆ.

## ಭಾರತಕ್ಕೆ ಮರಳಲಿದ್ದಾರೆ ಅಕ್ರಮ ಭಾರತೀಯ ವಲಸಿಗರು

**ಅಮೃತಸರ:** ಸುಮಾರು 200 ಅಕ್ರಮ ಭಾರತೀಯ ವಲಸಿಗರನ್ನು ಹೊತ್ತೊಯ್ಯುತ್ತಿದ್ದ ಅಮೆರಿಕ ಸೇನಾ ವಿಮಾನ ಬುಧವಾರ ಮಧ್ಯಾಹ್ನ ಇಲ್ಲಿನ ಪಂಜಾಬ್‌ನ ಗುರು ರಾಮದಾಸ್ ಜಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯುವ ಸಾಧ್ಯತೆ ಇದೆ. ವರದಿಗಳ ಪ್ರಕಾರ, ಯುಎಸ್ ಮಿಲಿಟರಿ ವಿಮಾನ ಸಿ -17 ಪಂಜಾಬ್, ನೆರೆಯ ರಾಜ್ಯಗಳಿಂದ ಬಂದ 205 ಅಕ್ರಮ ವಲಸಿಗರನ್ನು ಹೊತ್ತೊಯ್ಯುತ್ತಿದೆ.

ಪಂಜಾಬ್ ಪೊಲೀಸ್ ಮಹಾನಿರ್ದೇಶಕ ಗೌರವ್ ಯಾದವ್ ಅವರು ರಾಜ್ಯ ಸರ್ಕಾರವು ವಲಸಿಗರನ್ನು ಸ್ವೀಕರಿಸುತ್ತದೆ ಮತ್ತು ವಿಮಾನ ನಿಲ್ದಾಣದಲ್ಲಿ ಕೌಂಟರ್‌ಗಳನ್ನು ಸ್ಥಾಪಿಸುತ್ತದೆ ಎಂದು ಹೇಳಿದರು. ಪಂಜಾಬ್ ಎನ್‌ಆರ್‌ಐ ವ್ಯವಹಾರಗಳ ಸಚಿವ ಕುಲದೀಪ್ ಸಿಂಗ್ ಧಲಿವಾಲ್ ಅವರು ಯುಎಸ್ ಸರ್ಕಾರದ ನಿರ್ಧಾರದ ಬಗ್ಗೆ ನಿರಾಶೆ ವ್ಯಕ್ತಪಡಿಸಿದ್ದಾರೆ ಮತ್ತು ಆ ದೇಶದ ಆರ್ಥಿಕತೆಗೆ ಕೊಡುಗೆ ನೀಡಿದ ಈ ವ್ಯಕ್ತಿಗಳಿಗೆ ಗಡೀಪಾರು ಮಾಡುವ ಬದಲು ಶಾಶ್ವತ ನಿವಾಸವನ್ನು ನೀಡಬೇಕಾಗಿತ್ತು ಎಂದು ಹೇಳಿದರು. ಅನೇಕ ಭಾರತೀಯರು ಕೆಲಸದ ಪರವಾನಿಗೆಯ ಮೇಲೆ ಯುಎಸ್ ಪ್ರವೇಶಿಸಿದ್ದಾರೆ, ಅದು ನಂತರ ಅವಧಿ ಮುಗಿದಿದೆ, ಅವರನ್ನು ಅಕ್ರಮ ವಲಸಿಗರನ್ನಾಗಿ ಮಾಡಿದೆ ಎಂದು ಅವರು ಹೇಳಿದರು.



### ಧಲಿವಾಲ್ ಮನವಿ


**ವಿಶ್ವಾದ್ಯಂತ ಅವಕಾಶಗಳನ್ನು ಪ್ರವೇಶಿಸಲು ಕೌಶಲ್ಯ, ಶಿಕ್ಷಣವನ್ನು ಪಡೆದುಕೊಳ್ಳುವ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತಾ ಅಕ್ರಮ ಮಾರ್ಗಗಳ ಮೂಲಕ ವಿದೇಶ ಪ್ರವಾಸ ಮಾಡದಂತೆ ಪಂಜಾಬಿಗಳಿಗೆ ಧಲಿವಾಲ್ ಮನವಿ ಮಾಡಿದ್ದರು. ವಿದೇಶಕ್ಕೆ ಪ್ರಯಾಣಿಸುವ ಮೊದಲು ಕಾನೂನು ಮಾರ್ಗಗಳನ್ನು ಸಂಶೋಧಿಸಲು, ಶಿಕ್ಷಣ, ಭಾಷಾ ಕೌಶಲ್ಯಗಳನ್ನು ಪಡೆಯಲು ಜನರನ್ನು ಪ್ರೋತ್ಸಾಹಿಸಿದರು.**

ಅಮೆರಿಕದಲ್ಲಿ ವಾಸಿಸುವ ಪಂಜಾಬಿಗಳ ಕಾಳಜಿ ಮತ್ತು ಹಿತಾಸಕ್ತಿಗಳ ಬಗ್ಗೆ ಚರ್ಚಿಸಲು ವಿದೇಶಾಂಗ ವ್ಯವಹಾರಗಳ ಸಚಿವ ಎಸ್ ಜೈಶಂಕರ್ ಅವರನ್ನು ಮುಂದಿನ ವಾರ ಭೇಟಿ ಮಾಡಲು ಯೋಜಿಸಿರುವುದಾಗಿ ಸಚಿವರು ಹೇಳಿದರು.

## ಕಾಶಿಯತ್ತ ನಾಗಾ ಸಾಧುಗಳ ಪಯಣ

**ಪ್ರಯಾಗ ರಾಜ್:** ಪ್ರಯಾಗ್ ರಾಜ್ ಮಹಾ ಕುಂಭಮೇಳದ ಪ್ರಮುಖ ಅಮೃತ ಸ್ನಾನಗಳಾದ ಮಕರ ಸಂಕ್ರಾಂತಿ, ಮೌನಿ ಅಮಾವಾಸ್ಯೆ ಮತ್ತು ವಸಂತ ಪಂಚಮಿಗಳು ಪೂರ್ಣಗೊಂಡಿವೆ. ಈಗ ದೊಡ್ಡ ಪ್ರಶ್ನೆ ಏನೆಂದರೆ ನಾಗಾ ಸಾಧುಗಳು ಮುಂದೆ ಎಲ್ಲಿಗೆ ಹೋಗುತ್ತಾರೆ ಮತ್ತು ಅವರ ದಿನಚರಿ ಹೇಗಿರುತ್ತದೆ ಈ ಕುರಿತು ನಿರಂಜನಿ ಅಖಾಡಾದ ನಾಗಾ ಸಾಧು ದಿಗಂಬರ್ ಜೀ ಸಂಪೂರ್ಣ ಭವಿಷ್ಯದ ಯೋಜನೆಯನ್ನು ಹಂಚಿಕೊಂಡಿದ್ದಾರೆ. ಅಮೃತ ಸ್ನಾನದ ನಂತರವೂ, ನಾಗಾ ಸಾಧುಗಳಿಗೆ ಗುರು ಸಹೋದರರ ಸ್ನಾನ ಎಂದು ಕರೆಯಲ್ಪಡುವ ಒಂದು ವಿಶೇಷ ಸ್ನಾನ ಉಳಿದಿದೆ. ಈ ಸ್ನಾನವನ್ನು ತ್ರಿವೇಣಿ ಸಂಗಮದಲ್ಲಿ ಮಾಡಲಾಗುತ್ತದೆ. ನಂತರ ಅಖಾಡದ ಶಿಬಿರಕ್ಕೆ ಹಿಂತಿರುಗಿ ಅಲ್ಲಿ ಪಂಚ ಪರಮೇಶ್ವರರನ್ನು ಆಯ್ಕೆ ಮಾಡಲಾಗುತ್ತದೆ, ಇದರಲ್ಲಿ ಅಖಾಡದ ಹೊಸ ಮುಖ್ಯಸ್ಥರು ಮತ್ತು ಪ್ರಮುಖ ಸಂತರನ್ನು ಆಯ್ಕೆ ಮಾಡಲಾಗುತ್ತದೆ.ನಂತರ ಫೆಬ್ರವರಿ 7 ರಂದು ಈ ಪ್ರಕ್ರಿಯೆ ಪೂರ್ಣಗೊಂಡ ನಂತರ, ಎಲ್ಲಾ ನಾಗ ಸನ್ಯಾಸಿಗಳು ಕಾಶಿಗೆ ಹೊರಡುತ್ತಾರೆ.

ಈ ವಿಶೇಷ ಹೋಳಿ ಹಬ್ಬವು ಮಹಾದೇವನ ಅವತಾರಗಳಲ್ಲಿ ಒಂದಾದ ಮಶನ್ನನಾಥನಿಗೆ ಸಮರ್ಪಿತವಾಗಿದೆ ಮತ್ತು ನಾಗಾ ತಪಸ್ವಿಗಳಿಗೆ ಇದು ಬಹಳ



ಮುಖ್ಯವೆಂದು ಪರಿಗಣಿಸಲಾಗಿದೆ.

ನಾಗಾ ಸಾಧುಗಳು ಪ್ರಯಾಗ್‌ರಾಜ್, ಕಾಶಿಗೆ ಮಾತ್ರ ಸೀಮಿತವಾಗಿಲ್ಲ. ಮಹಾ ಕುಂಭ ಮೇಳದ ಮೂರು ಅಮೃತ ಸ್ನಾನದ ನಂತರ, ನಾಗಾ ಸಾಧುಗಳು ಈಗ ಕಾಶಿಯ ಕಡೆಗೆ ಹೊರ ಡುತ್ತಾರೆ. ಅಲ್ಲಿ, ಶಿವರಾತ್ರಿ ಹಬ್ಬವನ್ನು ಆಚರಿಸಿದ ನಂತರ, ಹೋಳಿಯನ್ನು ಆಡಿ ನಂತರ ತಮ್ಮ ಆಶ್ರ ಮಗಳು, ಅಖಾಡಗಳು, ತಪಸ್ಸಿನ ಸ್ಥಳ ಗಳಿಗೆ ಹಿಂತಿರುಗುತ್ತಾರೆ. ಕೆಲವರು ಹರಿದ್ವಾರ, ಹಿಮಾಲಯದ ಕಡೆಗೆ ಹೋದರೆ, ಇನ್ನು ಕೆಲವರು ಅರಣ್ಯಗಳು, ಗುಹೆಗಳಿಗೆ ಹೋಗಿ ಧ್ಯಾನ ಮತ್ತು ತಪಸ್ಸು ಮಾಡುತ್ತಾರೆ. ನಾಗಾ ಸನ್ಯಾಸಿಗಳ ಈ ಸಂಪ್ರದಾಯವು ಸಾವಿರಾರು ವರ್ಷಗಳಿಂದ ನಡೆದುಕೊಂಡು ಬಂದಿದೆ, ಇದನ್ನು ಸನಾತನ ಧರ್ಮ ಮತ್ತು ಆಧ್ಯಾತ್ಮಿಕ ಅಭ್ಯಾಸದ ರಕ್ಷಣೆಯ

**ಮಹಾ ಕುಂಭಮೇಳ ಮುಗಿದ ನಂತರ, ನಾಗಾ ಸಾಧುಗಳು ವಾರಣಾಸಿಯ ಕಾಶಿ ವಿಶ್ವನಾಥ ದೇವಸ್ಥಾನಕ್ಕೆ ಭೇಟಿ ನೀಡಿ ಶಿವರಾತ್ರಿ ಉತ್ಸವದಲ್ಲಿ ಭಾಗವಹಿಸುತ್ತಾರೆ. ಎಲ್ಲಾ ಅಖಾಡಗಳ ಗುಂಪುಗಳು ಕಾಶಿಯಲ್ಲಿ ಒಟ್ಟುಗೂಡುತ್ತವೆ ಮತ್ತು ಮಹಾನ್ ಹೋಳಿ ಆಡುತ್ತವೆ -ದಿಗಂಬರ ಜಿ**

ಸಂಕೇತವೆಂದು ಪರಿಗಣಿಸಲಾಗಿದೆ. ನಾಗಾ ಸಾಧುಗಳು ಯಾವಾಗಲೂ ತಮ್ಮ ದೇಹದ ಮೇಲೆ ರುದ್ರಾಕ್ಷಿಯನ್ನು ಧರಿಸಿರುತ್ತಾರೆ. ನಾಗಾ ಸಾಧುಗಳು ಕೇವಲ ಧಾರ್ಮಿಕ ಆಚರಣೆಗಳಿಗೆ ಹೆಸರುವಾಸಿಯಲ್ಲ, ಐತಿಹಾಸಿಕ ಮಹತ್ವವನ್ನೂ ಹೊಂದಿದ್ದಾರೆ. ಈ ಸಂತರು ಮೊಘಲ್ ಮತ್ತು ಬ್ರಿಟಿಷ್ ಆಳ್ವಿಕೆಯಲ್ಲಿ ಸನಾತನ ಧರ್ಮವನ್ನು ರಕ್ಷಿಸಲು ಯುದ್ಧದಲ್ಲಿ ಹೋರಾಡಿದರು. ಅವರಿಗೆ ಕತ್ತಿ, ತ್ರಿಶೂಲ, ಈಟಿ, ಬಿಲ್ಲು ಮುಂತಾದ ಆಯುಧಗಳನ್ನು ಬಳಸುವಲ್ಲಿ ಸರಿಯಾದ ತರಬೇತಿ ನೀಡಲಾಗುತ್ತದೆ. ಅದಕ್ಕಾಗಿಯೇ ಅವರನ್ನು ಸನಾತನ ಧರ್ಮದ ಯೋಧ ಸನ್ಯಾಸಿಗಳು ಎಂದೂ ಕರೆಯುತ್ತಾರೆ.

## ಗಾಜಾವನ್ನು ಕಸದ ರಾಶಿ ಎಂದು ಟ್ರಂಪ್ ಅಂದುಕೊಂಡಿರಬೇಕು, ಅಮೆರಿಕಾದ ಆಫರ್ ಅನ್ನು ಒಪ್ಪಿಕೊಳ್ಳಲು ಸಾಧ್ಯವೇ ಇಲ್ಲ

# ಡೊನಾಲ್ಡ್ ಟ್ರಂಪ್ ಅಧಿಪತ್ಯ ಆಗುವುದೇ ವಿಶ್ವಕ್ಕೆ ಪಥ್ಯ?

**ವಾಷಿಂಗ್ಟನ್:** ಕೆಲವು ದಿನಗಳ ಹಿಂದಿನ ವಿದ್ಯಮಾನವನ್ನು ಅವಲೋಕಿಸಿದಾಗ, ಹಮಾಸ್ ಜೊತೆಗಿನ ಕದನ ವಿರಾಮದ ನಿರ್ಣಾಯಕ ಮಾತುಕತೆಯಲ್ಲಿ ಮಹತ್ವದ ಪಾತ್ರವನ್ನು ವಹಿಸಿದವರು ಡೊನಾಲ್ಡ್ ಟ್ರಂಪ್. ಆ ವೇಳೆ ಟ್ರಂಪ್, ಇನ್ನೂ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿರಲಿಲ್ಲ. ಅಧ್ಯಕ್ಷರಾಗಿ ಆಯ್ಕೆಯಾದ ನಂತರ, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಆತಿಥ್ಯ ವಹಿಸಿದ್ದ ಸಭೆಯಲ್ಲಿ, ಗಾಜಾವನ್ನು ತಮ್ಮ ಸುಪರ್ದಿಗೆ ತೆಗೆದುಕೊಳ್ಳುವ ಪ್ರಸ್ತಾವವನ್ನು ಟ್ರಂಪ್ ಮಂಡಿಸುವ ಮೂಲಕ, ವಿಶ್ವವೇ ನಿಬ್ಬೆರಗಾಗುವಂತೆ ಮಾಡಿದ್ದಾರೆ.

ಟ್ರಂಪ್ ಅವರ ಆಫರ್ ಅನ್ನು ಎರಡು ರಾಷ್ಟ್ರಗಳು ಸ್ಪಷ್ಟವಾಗಿ ತಿರಸ್ಕರಿಸಿದೆ. ಆದರೂ, ಯುದ್ಧ ಪೀಡಿತ ಪ್ರದೇಶದಿಂದ ಹೊರಕ್ಕೆ ಹೋಗಬೇಕು ಮತ್ತು ಈಜಿಪ್ಟ್ ಅಥವಾ ಜೋರ್ಡಾನ್ ಮುಂತಾದ ಮಧ್ಯ ಪ್ರಾಚ್ಯ ರಾಷ್ಟ್ರಗಳಿಗೆ ಪ್ಯಾಲೆಸ್ತೇನರು ಸ್ಥಳಾಂತರಗೊಳ್ಳಬೇಕು ಎನ್ನುವ ಒತ್ತಾಯವನ್ನು ಟ್ರಂಪ್ ಮಾಡಿದ್ದಾರೆ ಎಂದು ವರದಿಯಾಗಿದೆ. ನೆತನ್ಯಾಹು ಜೊತೆಗಿನ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಗಾಜಾವನ್ನು ಅಮೆರಿಕಾ ತಮ್ಮ ಸುಪರ್ದಿಗೆ ತೆಗೆದು ಕೊಳ್ಳುತ್ತದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಸ್ಫೋಟಗೊಳ್ಳದ ಬಾಂಬ್ ಗಳನ್ನು ನಿಷ್ಕ್ರಿಯಗೊಳಿಸಲಾಗುವುದು. ಯುದ್ಧದಿಂದ ನೆಲಸಮವಾಗಿರುವ ಕಟ್ಟಡದ ಅವಶೇಷಗಳ ಜಾಗವನ್ನು ಸಮತಟ್ಟು ಮಾಡಲಾಗುವುದು. ಆರ್ಥಿಕತೆಯನ್ನು ಸರಿದಾರಿಗೆ ತರಲಾಗು ವುದು, ಅಲ್ಲಿನ ಜನರಿಗೆ ಉದ್ಯೋಗವನ್ನು ಸೃಷ್ಟಿಸಲಾಗುವುದು ಎನ್ನುವ ಭರ್ಜರಿ ಆಶ್ವಾಸನೆ ಕಮ್ ಆಫರ್ ಅನ್ನು ಟ್ರಂಪ್ ನೀಡಿದ್ದಾರೆ. ಆದರೆ, ಪ್ಯಾಲೆಸ್ತೇನ್ ಅಲ್ಲಿಂದ ಜಾಗ ಖಾಲಿ ಮಾಡಬೇಕು ಎಂದು ಟ್ರಂಪ್ ಹೇಳಿರು ವುದರಿಂದ, ಇವರು ನೀಡುತ್ತಿರುವ ಆಫರ್‌ಗಳು ಯಾರಿಗಾಗಿ ಎನ್ನುವ ಗೊಂದಲ ಮುಂದುವರಿದಿದೆ. ಗಾಜಾದಲ್ಲಿರುವ ಸುಮಾರು 2 ಮಿಲಿಯನ್ ನಾಗರೀಕರು ಬೇರೆ ದೇಶಕ್ಕೆ ಹೋಗ ಬೇಕು ಎನ್ನುವ ಷರತ್ತನ್ನು ಟ್ರಂಪ್ ಹಾಕಿ ದ್ದಾರೆ. ನಮ್ಮ ಆಫರ್ ಸ್ವೀಕರಿಸಲು ಇವರು ಯೋಗ್ಯರಲ್ಲ, ಇವರಿಗಾಗಿ ನಾವು ಅಷ್ಟೊಂದು ಹಣ ಖರ್ಚು ಮಾಡುವುದರಲ್ಲಿ ಅರ್ಥವಿಲ್ಲ, ಅಷ್ಟೊಂದು ಅನಾ ಹುತ ನಡೆಯುತ್ತಿದ್ದರೂ, ತಮ್ಮ ಹಕ್ಕಿಗಾಗಿ, ತಮ್ಮ ಜೀವನಕ್ಕಾಗಿ ಇವರು ಪಣತೊಟ್ಟವರಲ್ಲ.

**ಅಮೆರಿಕ ಸುಪರ್ದಿಗೆ ಗಾಜಾ ಪಟ್ಟಿ**

ತಮ್ಮ ಇಂದಿನ ಶೋಚನೀಯ ಸ್ಥಿತಿಗೆ ಅವರೇ ಕಾರಣ ಎಂದು ಟ್ರಂಪ್, ಗಾಜಾದ ಜನರನ್ನು ಟಾರ್ಗೆಟ್ ಮಾಡಿದ್ದಾರೆ. ಟ್ರಂಪ್ ಅವರ ಈ ಐತಿಹಾಸಿಕ ನಿರ್ಧಾರಕ್ಕೆ ಇಸ್ರೇಲ್ ಪ್ರಧಾನಿ ಉಫೇ..ಉಫೇ.. ಎಂದಿದ್ದಾರೆ. ಇಸ್ರೇಲ್ ಇತಿಹಾಸದಲ್ಲೇ ಇಂತಹ ಗೆಳೆಯನನ್ನು ನಮ್ಮ ದೇಶ ಕಂಡಿರಲಿಲ್ಲ ಎಂದು ನೆತನ್ಯಾಹು ಹೇಳಿದ್ದಾರೆ. ಟ್ರಂಪ್ ಅವರ ನಿರ್ಧಾರ ಐತಿಹಾಸಿಕ, ಸಮ ಯೋಚಿತ ಎಂದು ಬಣ್ಣಿಸಿದ್ದಾರೆ.



ಆದರೆ, ಪ್ಯಾಲೆಸ್ತೇನ್‌ಗಳು ಎರಡು ರಾಷ್ಟ್ರಗಳಲ್ಲಿ ನೆಲೆ ಕಂಡುಕೊಳ್ಳ ಬೇಕು ಎನ್ನುವ ಅಮೆರಿಕಾದ ಅಧ್ಯ ಕ್ಷರ ಆಫರ್ ಅನ್ನು ಜೋರ್ಡಾನ್ ಮತ್ತು ಈಜಿ ಪ್ಟ್ ಸ್ಪಷ್ಟವಾಗಿ ನಿರಾಕರಿ ಸಿದೆ. ಅಲ್ಲಿನ ರಾಯಭಾರಿ, ಪ್ಯಾಲೆಸ್ತೇನ್ ಅವರ ಭಾವನೆಯನ್ನು ಜಗತ್ತು

**ಗಾಜಾಪಟ್ಟಿಯ ವರ್ಷಗಳ ಸಮಸ್ಯೆಗೆ ಅಮೆರಿಕಾದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪೂರ್ಣವಿರಾಮ ನೀಡಲು ಮುಂದಾಗಿದ್ದಾರೆ. ಗಾಜಾಪಟ್ಟಿಯನ್ನು ಅಮೆರಿಕಾ ತನ್ನ ಸುಪರ್ದಿಗೆ ತೆಗೆದುಕೊಳ್ಳಲಿದೆ. ಅಲ್ಲಿರುವ ಎರಡು ಮಿಲಿಯನ್ ನಿರಾಶ್ರಿತರು ಜೋರ್ಡಾನ್ ಅಥವಾ ಈಜಿಪ್ಟ್ ದೇಶಕ್ಕೆ ಹೋಗಲಿ ಎನ್ನುವ ಆಫರ್ ಅನ್ನು ಟ್ರಂಪ್ ನೀಡಿದ್ದಾರೆ.**

ಅರ್ಥ ಮಾಡಿಕೊಳ್ಳಬೇಕು ಎಂದು ವಿಶ್ವಸಂಸ್ಥೆಗೆ ಒತ್ತಾಯಿಸಿದ್ದಾರೆ. ಗಾಜಾವನ್ನು ಕಸದ ರಾಶಿ ಎಂದು ಟ್ರಂಪ್ ಅಂದುಕೊಂಡಿರಬೇಕು. ಅಮೆರಿಕಾದ ಆಫರ್ ಅನ್ನು ಒಪ್ಪಿಕೊಳ್ಳಲು ಸಾಧ್ಯವೇ ಇಲ್ಲ ಎಂದು ಅಲ್ಲಿನ ನಿವಾಸಿ ಹತೀಂ ಅಜ್ಜಾಂ ಹೇಳಿದ್ದಾರೆ.

15 ತಿಂಗಳಿನಿಂದ ನಡೆಯುತ್ತಿದ್ದ ಭೀಕರ ಯುದ್ಧಕ್ಕೆ ಕದನ ವಿರಾಮ ತಂದ ಕೀರ್ತಿ ಡೊನಾಲ್ಡ್ ಟ್ರಂಪ್ ಅವರಿಗೆ ಸಲ್ಲುತ್ತದೆ. ಗಾಜಾದ ಸಮಸ್ಯೆಯನ್ನು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗುವ ನಿಟ್ಟಿನಲ್ಲಿ ನಾವು ಆಶಾವಾದಿಗಳಾಗಿದ್ದೇವೆ. ಟ್ರಂಪ್

- **ಸುಮಾರು 600 ಪ್ಯಾಲೆಸ್ತೇನ್ ಖೈದಿಗಳಿಗೆ ಬದಲಾಗಿ ಇದುವರೆಗೆ 18 ಒತ್ತೆಯಾಳುಗಳನ್ನು ಬಿಡುಗಡೆ**
- **ಟ್ರಂಪ್ ಅವರ ಈ ಐತಿಹಾಸಿಕ ನಿರ್ಧಾರಕ್ಕೆ ಇಸ್ರೇಲ್ ಪ್ರಧಾನಿ ಉಫೇ..ಉಫೇ.. ಎಂದಿದ್ದಾರೆ**

ಜೊತೆಗಿನ ಮಾತುಕತೆಗೆ ಮುನ್ನ, ಕತಾರ್ ದೇಶಕ್ಕೆ ನಮ್ಮ ಮಧ್ಯವರ್ತಿ ತಂಡವನ್ನು ಮುಂದಿನ ಹಂತದ ಶಾಂತಿ ಮಾತುಕತೆಗೆ ಕಳುಹಿಸುವುದಾಗಿ ನೆತನ್ಯಾಹು ಹೇಳಿದ್ದರು. ಮಂಗಳವಾರದಿಂದ ಮಾತುಕತೆ ಕತಾರ್ ನಲ್ಲಿ ಆರಂಭವಾಗಿದೆ ಎಂದು ಹಮಾಸ್ ನಾಯಕರು ಹೇಳಿದ್ದಾರೆ. ಸುಮಾರು 600 ಪ್ಯಾಲೆಸ್ತೇನ್ ಖೈದಿಗಳಿಗೆ ಬದಲಾಗಿ ಇದುವರೆಗೆ 18 ಒತ್ತೆಯಾಳುಗಳನ್ನು ಬಿಡುಗಡೆ ಮಾಡಲಾಗಿದೆ. ಇನ್ನೂ, 76 ಇಸ್ರೇಲಿಯನ್ನರು ಪ್ಯಾಲೆಸ್ತೇನ್ ಪ್ರದೇಶದಲ್ಲೇ ಇದ್ದಾರೆ. ಜ.19ರಿಂದ ಕದನ ವಿರಾಮ ಜಾರಿಗೆ ಬಂದ ನಂತರ, ಇಸ್ರೇಲ್ ಆಕ್ರಮಿತ ಪಶ್ಚಿಮ ದಂಡೆಯ ಉತ್ತರ ಭಾಗದಲ್ಲಿ ಉಗ್ರಗಾಮಿಗಳ ವಿರುದ್ಧ ಕಾರ್ಯಾಚರಣೆ ತೀವ್ರಗೊಂಡಿದೆ.

# ಮಿನಿ ನ್ಯೂಸ್

## ಬ್ಯಾಂಕ್‌ಗೆ ಸೇರಿದ್ದ 5 ಕೋಟಿ ರೂ. ಡ್ರೈ ಕ್ಲೀನಿಂಗ್ ಅಂಗಡಿಯಲ್ಲಿ ಪತ್ತೆ

**ಭಂಡಾರ:** ಡ್ರೈ ಕ್ಲೀನಿಂಗ್ ಶಾಪ್‌ನಲ್ಲಿ ಬಚ್ಚಿಟ್ಟಿದ್ದ ಐದು ಕೋಟಿ ರೂ.ಗಳನ್ನು ವಶಪಡಿಸಿಕೊಂಡಿರುವ ಪೊಲೀಸರು ಘಟನೆಗೆ ಸಂಬಂಧಿಸಿದಂತೆ ಖಾಸಗಿ ಬ್ಯಾಂಕ್ ಮ್ಯಾನೇಜರ್ ಸೇರಿದಂತೆ ಎಂಟು ಮಂದಿ ಆರೋಪಿಗಳನ್ನು ಬಂಧಿಸಿರುವ ಘಟನೆ ಮಹಾರಾಷ್ಟ್ರದಲ್ಲಿ ನಡೆದಿದೆ. ಮಹಾರಾಷ್ಟ್ರದ ಭಂಡಾರ ಜಿಲ್ಲೆಯಲ್ಲಿರುವ ಆಕ್ಸಿಸ್ ಬ್ಯಾಂಕ್‌ಗೆ ಬಂದ ಕೆಲ ವ್ಯಕ್ತಿಗಳು ಬ್ಯಾಂಕ್‌ನ ಮ್ಯಾನೇಜರ್‌ಗೆ ಐದು ಕೋಟಿ ನಗದು ನೀಡಿದರೆ ನಂತರ ಆರು ಕೋಟಿ ರೂ. ಹಿಂತಿರುಗಿಸುವುದಾಗಿ ನಂಬಿಸಿ ಐದು ಕೋಟಿ ಹಣ ಪಡೆದು ಪರಾರಿಯಾಗಿದ್ದರು ಎಂದು ಎಸ್‌ಪಿ ನೂರುಲ್ಲಾ ಹಸನ್ ತಿಳಿಸಿದ್ದಾರೆ.

ಈ ಕುರಿತಂತೆ ಬಂದ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿದ ಸ್ಥಳೀಯ ಪೊಲೀಸರು ಹಾಗೂ ಭಯೋತ್ಪಾದನಾ ನಿಗ್ರಹ ದಳದ ಪೊಲೀಸರು ತುಮ್ಸಾರ್ ಪ್ರದೇಶದ ಇಂದಿರಾನಗರದಲ್ಲಿರುವ ಡ್ರೈ ಕ್ಲೀನರ್ ಶಾಪ್‌ನಲ್ಲಿ ಬಚ್ಚಿಟ್ಟಿದ್ದ ಐದು ಕೋಟಿ ರೂ.ನಗದು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಶಾಪ್‌ನಲ್ಲಿ ಐದು ಕೋಟಿ ರೂ.ಗಳನ್ನು ಪೆಟ್ಟಿಗೆಯೊಂದರಲ್ಲಿ ಹಾಕಿ ಬಚ್ಚಿಡಲಾಗಿತ್ತು. ಹಣವನ್ನು ವಶಪಡಿಸಿಕೊಂಡಿರುವ ಪೊಲೀಸರು ಬ್ಯಾಂಕ್ ಮ್ಯಾನೇಜರ್ ಸೇರಿದಂತೆ ಎಂಟು ಮಂದಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಹಿಂದೂ ಸಂಪ್ರದಾಯ ಉಲ್ಲಂಘಿಸಿದ 18 ಸಿಬ್ಬಂದಿ ವಿರುದ್ಧ ಟಿಟಿಡಿ ಕ್ರಮ

**ಅಮರಾವತಿ:** ತಿರುಮಲ ತಿರುಪತಿಯಲ್ಲಿ ಕೆಲಸ ಮಾಡುವ ವೇಳೆ ಹಿಂದೂಯೇತರ ಧಾರ್ಮಿಕ ಆಚರಣೆಗಳನ್ನು ಅನುಸರಿಸುತ್ತಿರುವ 18 ಮಂದಿ ಸಿಬ್ಬಂದಿ ವಿರುದ್ಧ ತಿರುಮಲ ತಿರುಪತಿ ದೇವಸ್ಥಾನಂ ಮಂಡಳಿ ಕ್ರಮ ಕೈಗೊಂಡಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ. ಟಿಟಿಡಿ ಉತ್ಸವಗಳು ಮತ್ತು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರ ಜತೆಗೆ ಹಿಂದೂಯೇತರ ಧಾರ್ಮಿಕ ಆಚರಣೆಗಳಲ್ಲಿ ಭಾಗವಹಿಸುತ್ತಿದ್ದ 18 ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮಕ್ಕೆ ಆದೇಶ ಹೊರಡಿಸಲಾಗಿದೆ. ತನ್ನ ದೇವಾಲಯಗಳು, ಧಾರ್ಮಿಕ ಚಟುವಟಿಕೆಗಳ ಆಧ್ಯಾತ್ಮಿಕ ಪಾವಿತ್ರ್ಯತೆಯನ್ನು ಕಾಪಾಡುವುದು ಟಿಟಿಡಿಯ ಬದ್ಧತೆಯಾಗಿದೆ ಎಂದು ಪ್ರಕಟಣೆ ತಿಳಿಸಿದೆ. ತಿರುಮಲದಲ್ಲಿ ಕೆಲಸ ಮಾಡುವ ಹಿಂದೂಯೇತರ ಸಿಬ್ಬಂದಿಯ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳಬೇಕೆಂದು ಕೋರಿ ಆಂಧ್ರಪ್ರದೇಶ ಸರ್ಕಾರಕ್ಕೆ ಟಿಟಿಡಿ ಮಂಡಳಿ ಈಚೆಗೆ ಪತ್ರ ಬರೆದಿತ್ತು.

ತಿರುಮಲದಲ್ಲಿ ಕೆಲಸ ಮಾಡುವ ಪ್ರತಿಯೊಬ್ಬರೂ ಹಿಂದೂಗಳೇ ಆಗಿರಬೇಕು. ಟಿಟಿಡಿಯು ಹಿಂದೂ ದತ್ತಿ ಸಂಸ್ಥೆಯಾಗಿರುವುದರಿಂದ ಹಿಂದೂಯೇತರರು ಸಿಬ್ಬಂದಿಯಾಗಿ ಮುಂದುವರಿಯಲು ಅವಕಾಶ ನೀಡುವುದಿಲ್ಲ ಎಂದು ಟಿಟಿಡಿ ಮಂಡಳಿಯ ನೂತನ ಅಧ್ಯಕ್ಷರಾಗಿ ನೇಮಕಗೊಂಡ ಬಿ.ಆರ್.ನಾಯ್ಡು ಈ ಹಿಂದೆ ಘೋಷಿಸಿದ್ದರು.

ಇತರ ಧರ್ಮಕ್ಕೆ ಸೇರಿದ ಸಿಬ್ಬಂದಿಯನ್ನು ಸರ್ಕಾರದ ಇತರ ಇಲಾಖೆಗಳಿಗೆ ನಿಯುಕ್ತಿಗೊಳಿಸುವ, ಸ್ವಯಂ ನಿವೃತ್ತಿಗೆ ಅವಕಾಶ ಕಲ್ಪಿಸುವ ಕುರಿತು ಸಮಾಲೋಚನೆ ನಡೆಸಲಾಗುವುದು ಎಂದಿದ್ದರು. ತಿರುಮಲದಲ್ಲಿ ಯಾವುದೇ ರೀತಿಯ ರಾಜಕೀಯ ಹೇಳಿಕೆಗಳಿಗೆ ಅವಕಾಶ ನೀಡುವುದಿಲ್ಲ. ಅಂತಹ ವ್ಯಕ್ತಿಗಳು ಮತ್ತು ರಾಜಕೀಯ ಪಕ್ಷಗಳ ಪರ ಪ್ರಚಾರ ಮಾಡುವವರ ವಿರುದ್ಧ ಅಗತ್ಯಬಿದ್ದರೆ ಕಾನೂನುಬದ್ಧವಾಗಿ ಕ್ರಮ ತೆಗೆದುಕೊಳ್ಳಲಾಗುವುದು ಎಂದು ನಾಯ್ಡು ಹೇಳಿದ್ದರು.

## ಬೈಕ್‌ನಲ್ಲಿ ತೆರಳುವಾಗ ಆನೆ ದಾಳಿ ಜರ್ಮನ್ ಪ್ರವಾಸಿಗ ಸಾವು

**ಚೆನ್ನೈ:** ಕೊಯಮತ್ತೂರಿನ ವಾಲ್ಪಾರೈ ಬಳಿಯ ಘಾಟಿ ರಸ್ತೆಯಲ್ಲಿ ಬೈಕ್‌ನಲ್ಲಿ ತೆರಳುತ್ತಿದ್ದ ಜರ್ಮನ್ ಪ್ರವಾಸಿಗನ ಮೇಲೆ ಕಾಡಾನೆಯೊಂದು ದಾಳಿ ನಡೆಸಿದ್ದು, ಆತ ಸ್ಥಳದಲ್ಲೇ ಮೃತಪಟ್ಟಿದ್ದಾನೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಬೈಕ್‌ನಲ್ಲಿ ತೆರಳುತ್ತಿದ್ದ ಜರ್ಮನ್ ಪ್ರವಾಸಿಗ ಆನೆಯನ್ನು ಕಂಡು ರಸ್ತೆಯಿಂದ ಪಕ್ಕಕ್ಕೆ ಹೋಗಲು ಪ್ರಯತ್ನಿಸಿದ್ದ. ಆದರೆ, ಇದು ಸಾಧ್ಯವಾಗಿಲ್ಲ. ಆನೆ ಆತನನ್ನು ನೋಡಿ ಹಿಂಬಾಲಿಸಿ ಏಕಾಏಕಿ ದಾಳಿ ನಡೆಸುತ್ತಿರುವ ದೃಶ್ಯ ವಿಡಿಯೊದಲ್ಲಿ ಸೆರೆಯಾಗಿದೆ.

ಬೈಕ್‌ನ ಹಿಂದೆ ಬರುತ್ತಿದ್ದವರು ವಿಡಿಯೋ ಚಿತ್ರೀಕರಿಸಿದ್ದಾರೆ. ಜರ್ಮನ್ ಪ್ರವಾಸಿಗ ಬೈಕ್ ಬಿಟ್ಟು ಕಾಡಿನೊಳಗೆ ಓಡಿಹೋದರೂ ಬಿಡದೆ ಆನೆ ದಾಳಿ ನಡೆಸಿತು ಎಂದು ಪ್ರತ್ಯಕ್ಷದರ್ಶಿಯೊಬ್ಬರು ತಿಳಿಸಿದ್ದಾರೆ. ಮಂಗಳವಾರ ಸಂಜೆ ಈ ಘಟನೆ ಸಂಭವಿಸಿದ್ದು, ಮೃತ ವ್ಯಕ್ತಿಯನ್ನು 77 ವರ್ಷದ ಜರ್ಮನ್ ಪ್ರಜೆ ಮೈಕೆಲ್ ಎಂದು ಗುರುತಿಸಲಾಗಿದೆ. ಆನೆ ದಾಳಿ ನಡೆಸುತ್ತಿರುವ ವಿಡಿಯೋ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿದ್ದು, ನೆಟ್ಟಿಗರು ಆತಂಕ ವ್ಯಕ್ತಪಡಿಸಿದ್ದಾರೆ.

## ಫಡ್ನವೀಸ್ ಮರಾಠ ಮಕ್ಕಳನ್ನು ನಿರ್ಲಕ್ಷಿಸಿದ್ದಾರೆ: ಜಾರಂಗೆ




**ಸಂಭಾಜಿನಗರ:** ಮಗಳ ಬಗ್ಗೆ ಅಷ್ಟೊಂದು ಕಾಳಜಿ ವಹಿಸುವ ಮಹಾರಾಷ್ಟ್ರ ಸಿಎಂ ದೇವೇಂದ್ರ ಫಡಣವೀಸ್ ಅವರು ಮರಾಠರ ಮಕ್ಕಳ ಬಗ್ಗೆ ಕಾಳಜಿ ವಹಿಸಿ ಮೀಸಲಾತಿ ನೀಡುತ್ತಿಲ್ಲ ಏಕೆ ಎಂದು ಮರಾಠ ಮೀಸಲಾತಿ ಹೋರಾಟಗಾರ ಮನೋಜ್ ಜಾರಂಗೆ ಪಾಟೀಲ್ ಪ್ರಶ್ನಿಸಿದ್ದಾರೆ.'ನನ್ನ ಮಗಳ 10ನೇ ತರಗತಿ ಪರೀಕ್ಷೆ ಮುಗಿಯುವವರೆಗೆ ಮುಂಬೈನಲ್ಲಿರುವ ಮುಖ್ಯಮಂತ್ರಿಗಳ ಅಧಿಕೃತ ನಿವಾಸಕ್ಕೆ ಸ್ಥಳಾಂತರಗೊಳ್ಳುವುದನ್ನು ಮುಂದೂಡಿದ್ದೇನೆ' ಎಂದು ಸಿಎಂ ದೇವೇಂದ್ರ ಫಡಣವೀಸ್ ಅವರು ಈಚೆಗೆ ತಿಳಿಸಿದ್ದರು.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಜರಾಂಗೆ, 'ಮಗಳ ಮೇಲಿನ ತಂದೆಯ ಪ್ರೀತಿಯನ್ನು ನೋಡಿದ್ದೇವೆ. ದೇವೇಂದ್ರ ಫಡಣವೀಸ್ ಅವರಿಗೆ ಮಗಳ ಮೇಲೆ ಅಷ್ಟೊಂದು ಕಾಳಜಿ ಇದ್ದರೆ ಮರಾಠ ಸಮುದಾಯದ ಮಕ್ಕಳ ಬಗ್ಗೆ ಏಕೆ ಕಾಳಜಿ ವಹಿಸುತ್ತಿಲ್ಲ' ಎಂದು ಕಿಡಿಕಾರಿದ್ದಾರೆ. ನಿಮ್ಮಮಗಳ ಸಲುವಾಗಿ ನೀವು ಕೇವಲ 500 ಮೀಟರ್ ದೂರದಲ್ಲಿರುವ ಬೇರೆ ಬಂಗಲೆಗೆ ಸ್ಥಳಾಂತರಗೊಳ್ಳುತ್ತಿಲ್ಲ. ಹಾಗಾದರೆ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದರೆ ನೇಣು ಬಿಗಿದುಕೊಳ್ಳುವ ನಮ್ಮ ಮಕ್ಕಳ ಸ್ಥಿತಿ ನಿಮಗೆ ಏಕೆ ಅರ್ಥವಾಗುತ್ತಿಲ್ಲ' ಎಂದು ಜಾರಂಗೆ ಟೀಕಿಸಿದ್ದಾರೆ. 'ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಧಂಗರ್ ಸಮುದಾಯವನ್ನು ಮರಾಠರ ವಿರುದ್ಧ ಎತ್ತಿಕಟ್ಟಿದ್ದರು. ಹತ್ತು ವರ್ಷಗಳ ಕಾಲ ಮೀಸಲಾತಿಯ ಭರವಸೆಯೊಂದಿಗೆ ಧಂಗರ್ ಸಮುದಾಯವನ್ನು ದಾರಿ ತಪ್ಪಿಸಿದ್ದರು. ಇವತ್ತಿನವರೆಗೂ ಮೀಸಲಾತಿ ಕಾರ್ಯರೂಪಕ್ಕೆ ಬರಲೇ ಇಲ್ಲ' ಎಂದು ಫಡಣವೀಸ್ ವಿರುದ್ಧ ಜಾರಂಗೆ ಗುಡುಗಿದ್ದಾರೆ. ಮನೋಜ್ ಜಾರಂಗೆ ಅವರು ಮರಾಠ ಸಮುದಾಯಕ್ಕೆ ಶಿಕ್ಷಣ ಮತ್ತು ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ನೀಡುವಂತೆ ಒತ್ತಾಯಿಸಿ ಹಲವು ಬಾರಿ ಉಪವಾಸ ಸತ್ಯಾಗ್ರಹಗಳನ್ನು ಕೈಗೊಂಡಿದ್ದರು.



# ಸುದೀಪ್ ಅಳಿಯ ಸಂಚಿತ್ ಚೊಚ್ಚಲ ಚಿತ್ರದ ಟೈಟಲ್ ರಿವೀಲ್




ಸ್ಯಾಂಡಲ್‌ವುಡ್ ನಟ ಸುದೀಪ್ ಕುಟುಂಬದಿಂದ ಪ್ರತಿಭಾನ್ವಿತ ಕಲಾವಿದ ಸಂಚಿತ್ ಹೀರೋ ಆಗಿ ಎಂಟ್ರಿ ಕೊಡುತ್ತಿರೋದು ಹಳೆಯ ವಿಚಾರ. ಈಗ ಲೇಟೆಸ್ಟ್ ವಿಚಾರ ಏನೆಂದರೆ ಸುದೀಪ್ ಅಳಿಯ ಸಂಚಿತ್ ಸಂಜೀವ್ ನಟನೆಯ ಚೊಚ್ಚಲ ಸಿನಿಮಾದ ಟೈಟಲ್ ರಿವೀಲ್ ಆಗಿದೆ. ನಟನ ಫಸ್ಟ್ ಲುಕ್ ನೋಡುಗರ ಗಮನ ಸೆಳೆಯುತ್ತಿದೆ. ಸಂಚಿತ್‌ಗೆ ಹುಟ್ಟುಹಬ್ಬದ ಸಂಭ್ರಮ. ಈ ಹಿನ್ನೆಲೆ ಅವರ ನಟನೆಯ ಮೊದಲ ಸಿನಿಮಾದ ಟೈಟಲ್ ರಿವೀಲ್ ಮಾಡಲಾಗಿದೆ. 'ಮ್ಯಾಂಗೋ ಪಚ್ಚ' ಸಿನಿಮಾಗೆ ಟೈಟಲ್ ಫಿಕ್ಸ್ ಆಗಿದೆ. ಮೈಸೂರಿನ ಕಥೆ ಇರುವ ಈ ಸಿನಿಮಾದಲ್ಲಿ ಸಂಚಿತ್ ರೆಟ್ರೋ ಗೆಟಪ್‌ನಲ್ಲಿ ಮಿಂಚಿದ್ದಾರೆ. ಮೊದಲ ಸಿನಿಮಾದಲ್ಲೇ ಅವರು ಪ್ರಾಮಿಸಿಂಗ್ ಆಗಿ ಕಾಣಿಸಿಕೊಂಡಿದ್ದಾರೆ.

ಚಿತ್ರದ ಟೈಟಲ್ ಕೂಡ ವಿಭಿನ್ನವಾಗಿದೆ. ರಿಲೀಸ್ ಆಗಿರುವ ಪ್ರೋಮೋದಲ್ಲಿ ಸಂಚಿತ್ ಸಿಗರೇಟ್ ಸೇದುವ ಶೈಲಿಯಲ್ಲಿ ರಗಡ್ ಆಗಿ ಕಾಣಿಸಿಕೊಂಡಿದ್ದಾರೆ. ಮ್ಯಾಂಗೋ ಪಚ್ಚ ಅನ್ನೋ ಪಾತ್ರಕ್ಕೆ ನಟ ಜೀವ ತುಂಬುತ್ತಿದ್ದಾರೆ. ಈ ಚಿತ್ರಕ್ಕೆ ವಿವೇಕ್ ನಿರ್ದೇಶನ ಮಾಡುತ್ತಿದ್ದಾರೆ. ಚಿತ್ರದ ನಿರ್ಮಾಣಕ್ಕೆ ಕೆಆರ್‌ಜಿ ಸಂಸ್ಥೆ ಜೊತೆ ಪ್ರಿಯಾ ಸುದೀಪ್ ಕೈಜೋಡಿಸಿದ್ದಾರೆ.



# ನಯನತಾರಾ 'ಟಾಕ್ಸಿಕ್' ಶೂಟಿಂಗ್ ಶುರು



ರಾಕಿಂಗ್ ಸ್ಟಾರ್ ಯಶ್ 'ಟಾಕ್ಸಿಕ್' ಸಿನಿಮಾದ ಶೂಟಿಂಗ್‌ನಲ್ಲಿ ತೊಡಗಿಸಿಕೊಂಡಿದ್ದಾರೆ. ಮುಂಬೈ, ಗೋವಾದಲ್ಲಿ ಚಿತ್ರೀಕರಣ ನಡೆಸಿದ ಬಳಿಕ ಮತ್ತೆ ಬೆಂಗಳೂರಿನಲ್ಲಿ ಚಿತ್ರೀಕರಣ ಭರದಿಂದ ನಡೆಯುತ್ತಿದೆ. ಈ ಚಿತ್ರಕ್ಕಾಗಿ ನಯನತಾರಾ, ಕಿಯಾರಾ ಅಡ್ವಾಣಿ ಭಾಗಿಯಾಗಿದ್ದಾರೆ ಎನ್ನಲಾದ ಸುದ್ದಿಯೊಂದು ಈಗ ಚರ್ಚೆಗೆ ಗ್ರಾಸವಾಗಿದೆ. ಮಲಯಾಳಂ ನಿರ್ದೇಶಕಿ ಗೀತು ಮೋಹನ್‌ದಾಸ್ ಅವರು ಆಯಕ್ಷನ್ ಕಟ್ ಹೇಳ್ತಿದ್ದಾರೆ. ಸದ್ಯ ಬೆಂಗಳೂರಿನ ಹೆಚ್‌ಎಂಟಿ ಫ್ಯಾಕ್ಟರಿಯಲ್ಲಿ ನಡೆಯುತ್ತಿರುವ ಚಿತ್ರೀಕರಣಕ್ಕೆ ನಯನತಾರಾ, ಕಿಯಾರಾ, ತಾರಾ ಸುತಾರಿಯಾ, ಹುಮಾ ಖುರೇಶಿ ಭಾಗಿಯಾಗಿದ್ದಾರೆ ಎನ್ನಲಾಗಿದೆ. ಈ ಕುರಿತು ಚಿತ್ರತಂಡ ಅಧಿಕೃತ ಮಾಹಿತಿ ನೀಡ್ತಾರಾ ಕಾದುನೋಡಬೇಕಿದೆ. ಇನ್ನೂ ಜ.8ರಂದು ಯಶ್ ಬರ್ತ್‌ಡೇ 'ಟಾಕ್ಸಿಕ್' ಗ್ಲಿಂಪ್ಸ್ ರಿವೀಲ್ ಆಗಿತ್ತು. ಯಶ್ ಸಖತ್ ಸ್ಟೈಲೀಶ್ ಕಾಣಿಸಿಕೊಳ್ಳುವ ಮೂಲಕ ಫ್ಯಾನ್ಸ್‌ಗೆ ಸಿನಿಮಾ ಕುರಿತು ನಿರೀಕ್ಷೆ ಹೆಚ್ಚಿಸಿದ್ದರು. ಡ್ರಗ್ಸ್ ಮಾಫಿಯಾ ಕುರಿತು ಮಾಡಿರೋ ಸ್ಟೋರಿ ಇದಾಗಿದೆ. ಈ ಚಿತ್ರದ ಜೊತೆ ಯಶ್ ಬಾಲಿವುಡ್‌ನ 'ರಾಮಾಯಣ' ಚಿತ್ರ ಕೂಡ ಮಾಡಲಿದ್ದಾರೆ. ಅದರಲ್ಲಿ ರಾವಣನಾಗಿ ಅಬ್ಬರಿಸಲಿದ್ದಾರೆ.

# ಆ್ಯಂಕರ್ ಜಾನ್ವಿಯೀಗ ಅಧಿಪತ್ರದ ಅಧಿನಾಯಕಿ!

**ಚಯನ್ ಶೆಟ್ಟಿ ನಿರ್ದೇಶನದ ಚೊಚ್ಚಲ ಚಿತ್ರ**



ಬಿಗ್ ಬಾಸ್ ವಿನ್ನರ್ ರೂಪೇಶ್ ಶೆಟ್ಟಿ ನಾಯಕನಾಗಿ ನಟಿಸಿರುವ ಬಹುನಿರೀಕ್ಷಿತ ಚಿತ್ರ 'ಅಧಿಪತ್ರ'. ಈ ವಾರ ಅಂದರೆ, ಫೆಬ್ರವರಿ 7ರಂದು ಬಿಡುಗಡೆಗೊಳ್ಳಲಿರುವ ಈ ಚಿತ್ರದ ಮೂಲಕ ಖ್ಯಾತ ಸುದ್ದಿವಾಚಕಿ, ನಿರೂಪಕಿ ಜಾನ್ವಿ ನಾಯಕಿಯಾಗಿ ಚಿತ್ರರಂಗಕ್ಕೆ ಎಂಟ್ರಿ ಕೊಡುತ್ತಿದ್ದಾರೆ. ಖಾಸಗಿ ವಾಹಿನಿಯಲ್ಲಿ ಸುದ್ದಿ ವಾಚಕಿಯಾಗಿದ್ದ ಅವರು ಆ ಹಂತದಲ್ಲಿಯೇ ಅಪಾರ ಜನಪ್ರಿಯತೆ ಪಡೆದುಕೊಂಡಿದ್ದವರು. ನಾಯಕಿಯಾಗೋ ಗುಣ ಲಕ್ಷಣಗಳನ್ನು ಹೊಂದಿದ್ದ ಜಾನ್ವಿ ಹೀರೋಯಿನ್ ಆಗುತ್ತಾರೆ ಎಂಬಂಥಾ ಸುದ್ದಿಗಳು ಆಗಾಗ ಹಬ್ಬಿಕೊಳ್ಳುತ್ತಿದ್ದವು. ಕಡೆಗೂ ಅಧಿಪತ್ರದ ಮೂಲಕ ಅದು ನಿಜವಾಗಿದೆ. ಖುದ್ದು ಜಾನ್ವಿ ಬಹುವಾಗಿ ಮೆಚ್ಚಿಕೊಂಡು ಈ ಸಿನಿಮಾದ ಪಾತ್ರವನ್ನು ಒಪ್ಪಿಕೊಂಡು ನಟಿಸಿದ್ದಾರೆ. ಸದರಿ ಪಾತ್ರ ನಟಿಯಾಗಿ ಹೊಸಾ ದಿಕ್ಕು ತೋರುತ್ತದೆಂಬ ಗಾಢ ನಂಬಿಕೆ ಜಾನ್ವಿಯದ್ದಾಗಿದೆ. 'ಅಧಿಪತ್ರ' ಚಯನ್ ಶೆಟ್ಟಿ ನಿರ್ದೇಶನದ ಚೊಚ್ಚಲ ಚಿತ್ರ. ಸಿದ್ಧಸೂತ್ರ ಮೀರಿದ ಕಥೆಯೊಂದನ್ನು ಸಿದ್ಧಪಡಿಸಿಕೊಂಡಿದ್ದ ಚಯನ್, ಆಯಾ ಪಾತ್ರಗಳಿಗೆ ಸೂಟ್ ಆಗುವಂಥಾ ಕಲಾವಿದರನ್ನು ಆರಂಭದ ಹಂತದಲ್ಲಿಯೇ ನಿಕ್ಕಿಯಾಗಿಸಿಕೊಂಡಿದ್ದರು. ಹಾಗೆ ಈ ಚಿತ್ರದ ನಾಯಕಿ ಪಾತ್ರಕ್ಕೆ ಒಪ್ಪುವಂತೆ ಕಂಡಿದ್ದು ಆ್ಯಂಕರ್ ಜಾನ್ವಿ. ಹೀಗೆ ನಿರ್ದೇಶಕರ ಇಂಗಿತ ಜಾನ್ವಿಗೆ ತಲುಪಿಕೊಂಡಿದ್ದದ್ದು ಖಾಸಗಿ ವಾಹಿನಿಯ ಮಾರ್ಕೆಟಿಂಗ್ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದವರ ಮೂಲಕ. ಅದಕ್ಕೆ ಒಪ್ಪಿಗೆ ಸೂಚಿಸಿದ ಜಾನ್ವಿಯವರನ್ನು ನಿರ್ದೇಶಕ ಚಯನ್ ಶೆಟ್ಟಿ ಸ್ಕ್ರಿಫ್ಟ್ ಸಮೇತ ಭೇಟಿಯಾಗಿದ್ದರು.

## ಮಾತಿನ ಭರದಲ್ಲಿ ಪೂಜಾ ಹೆಗ್ಡೆ ಯಡವಟ್ಟು


ಕುಡ್ಲದ ಬೆಡಗಿ ಪೂಜಾ ಹೆಗ್ಡೆ ನಟಿಸಿದ ಸಿನಿಮಾಗಳೆಲ್ಲಾ ಗಲ್ಲಾಪೆಟ್ಟಿಗೆಯಲ್ಲಿ ಮಕಾಡೆ ಮಲಗಿದೆ. ಹೀನಾಯ ಸೋಲನ್ನೇ ಕಂಡಿರುವ ಪೂಜಾ ಈಗ ವಿವಾದವೊಂದನ್ನು ಮೈಮೇಲೆ ಎಳೆದುಕೊಂಡಿದ್ದಾರೆ. ಮಾತಿನ ಭರದಲ್ಲಿ ನಟಿ ಯಡವಟ್ಟು ಮಾಡಿಕೊಂಡು ಸಖತ್ ಟ್ರೋಲ್ ಆಗ್ತಿದ್ದಾರೆ.

ಶಾಹಿದ್ ಕಪೂರ್ ಜೊತೆಗಿನ 'ದೇವ' ಸಿನಿಮಾದ ಪ್ರಚಾರ ಕಾರ್ಯದ ವೇಳೆ, ಮಾಧ್ಯಮಗಳ ಜೊತೆ ಮಾತನಾಡುವಾಗ ಪೂಜಾ ಹೆಗ್ಡೆ ತೆಲುಗಿನ 'ಅಲಾ ವೈಕುಂಠಪುರಮುಲೋ' ಸಿನಿಮಾದ ಬಗ್ಗೆಯೂ ಮಾತನಾಡಿದ್ದಾರೆ. ಆಗ ಒಂದು ಎಡವಟ್ಟು ಆಗಿದೆ. 'ಅಲಾ ವೈಕುಂಠಪುರಮುಲೋ' ಒಂದು ತಮಿಳು ಸಿನಿಮಾ. ಅದು ಪ್ಯಾನ್ ಇಂಡಿಯಾ ಸಿನಿಮಾವಲ್ಲ, ಆದರೂ ಅದನ್ನು ಹಿಂದಿ ಪ್ರೇಕ್ಷಕರು ನೋಡಿ ಮೆಚ್ಚಿಕೊಂಡಿದ್ದಾರೆ. 'ಡಿಜೆ' ಸಿನಿಮಾವನ್ನು ಕೂಡ ನೋಡಿದ್ದಾರೆ. ಕೆಲಸ ಚೆನ್ನಾಗಿದ್ರೆ, ಅದು ಎಲ್ಲಾ ಕಡೆಗೆ ರೀಚ್ ಆಗುತ್ತದೆ ಎಂಬುದು ಗೊತ್ತಾಗುತ್ತದೆ ಎಂದು ಪೂಜಾ ಹೇಳಿದ್ದಾರೆ.

ಹೀಗೆ ಪ್ರಶ್ನೆಯೊಂದಕ್ಕೆ ತೆಲುಗಿನ 'ಅಲಾ ವೈಕುಂಠಪುರಮುಲೋ' ಸಿನಿಮಾವನ್ನು ಉದಾಹರಣೆಗೆ ತೆಗೆದುಕೊಂಡ ಪೂಜಾ, ಅದನ್ನು ತಮಿಳು ಸಿನಿಮಾ ಅಂತ ಹೇಳಿದ್ದು, ಪ್ರೇಕ್ಷಕರ ಕೋಪಕ್ಕೆ ಕಾರಣವಾಗಿದೆ. ತಾವೇ ನಟಿಸಿದ ತೆಲುಗಿನ ಸಿನಿಮಾವನ್ನು ತಮಿಳು ಚಿತ್ರ ಎನ್ನುತ್ತೀರಿ. ನೀವು ನಟಿಸಿದ ಸಿನಿಮಾ ಯಾವ ಭಾಷೆಯದ್ದು, ಎಂಬುದು ಕೂಡ ನಿಮಗೆ ಗೊತ್ತಿಲ್ವಾ ಎಂದೆಲ್ಲಾ ನಟಿಗೆ ಸೋಶಿಯಲ್ ಮೀಡಿಯಾದಲ್ಲಿ ನೆಟ್ಟಿಗರು ಟೀಕಿಸಿದ್ದಾರೆ.

# ಕುಂಭಮೇಳದ ಮೊನಾಲಿಸಾ

**ಸಿನಿಮಾ ಆಫರ್ ಒಪ್ಪಿದ್ದೇಗೆ**



ಪ್ರಯಾಗ್‌ರಾಜ್‌ನ ಕುಂಭಮೇಳದಲ್ಲಿ ತನ್ನ ಕಣ್ಣುಗಳಿಂದಲೇ ಎಲ್ಲರ ನಿದ್ದೆಗೆಡಿಸಿದ್ದ ಮೊನಾಲಿಸಾ ಇದೀಗ ದೊಡ್ಡ ಪರದೆಯ ಮೇಲೆ ಬರಲು ಸಿದ್ಧಳಾಗಿದ್ದಾಳೆ. ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ದಲ್ಲಿ ನಡೆಯುತ್ತಿರುವ ಮಹಾಕುಂಭಮೇಳದಲ್ಲಿ ಹುಡುಗಿಯೊಬ್ಬಳು ರುದ್ರಾಕ್ಷಿ ಮಾರುತ್ತಿದ್ದಳು. ಆಕೆಯ ಮುಗ್ಧ ನಗು, ನೀಲಿ ಕಣ್ಣುಗಳ ಮೂಲಕವೇ ಎಲ್ಲರ ಗಮನಸೆಳೆದು ರಾತ್ರೋರಾತ್ರಿ ಫೇಮಸ್ ಆಗಿ ಇಂಟರ್ನೆಟ್‌ನಲ್ಲಿ ಸಂಚಲನ ಮೂಡಿಸಿದ್ದಳು.

ಇದೀಗ ಬರಹಗಾರ ಹಾಗೂ ನಿರ್ದೇಶಕ ಸನೋಜ್ ಮಿಶ್ರಾ ಅವರು ಮೊನಾಲಿಸಾಳ ಮನೆಗೆ ಭೇಟಿ ನೀಡಿದ್ದು, ಅವರ ಕುಟುಂಬದವರ ಒಪ್ಪಿಗೆ ಮೇರೆಗೆ ದಿ ಡೈರಿ ಆಫ್ ಮಣಿಪುರ್‌ಚಿತ್ರದಲ್ಲಿ ನಟಿಸಲು ಮೊನಾಲಿಸಾ ಸಹಿ ಹಾಕಿದ್ದಾರೆ. ಇದಕ್ಕೂ ಮುನ್ನ ಮೊನಾಲಿಸಾಳಿಗೆ ಹಲವು ಸಿನಿಮಾದಲ್ಲಿ ನಟಿಸುವಂತೆ ಆಫರ್‌ಗಳು ಬಂದಿದ್ದವು ಎನ್ನಲಾಗಿದೆ. ಮೊನಾಲಿಸಾ ಮನೆಗೆ ನಿರ್ದೇಶಕರು ಭೇಟಿ ನೀಡಿರುವ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ವೈರಲ್ ಆಗಿರುವ ವಿಡಿಯೋದಲ್ಲಿ ನಿರ್ದೇಶಕ ಸನೋಜ್ ಮಿಶ್ರಾ ಮಾತನಾಡಿ, ಮೊನಾಲಿಸಾ ಕುಟುಂಬದವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದೇನೆ. ಮೊನಾಲಿಸಾ ಕುಟುಂಬದವರು ಮುಗ್ಧ ಮನಸ್ಸಿನವರು. ಸಿನಿಮಾದಲ್ಲಿ ನಟಿಸಲು ಆಕೆ ಹಾಗೂ ಕುಟುಂಬಸ್ಥರು ಒಪ್ಪಿಗೆ ಸೂಚಿಸಿದ್ದಾರೆ ಎಂದು ಹೇಳಿದರು. ಇದಕ್ಕೂ ಮುನ್ನ ಸಾಮಾಜಿಕ ಜಾಲತಾಣದಲ್ಲಿ ಮೊನಾಲಿಸಾ ಹಾಟ್ ಡ್ಯಾನ್ಸ್ ಮಾಡಿರುವ ವಿಡಿಯೋ ವೈರಲ್ ಆಗಿತ್ತು. ಕೆಂಪು ಬಣ್ಣದ ಒನ್‌ಪೀಸ್‌ನಲ್ಲಿ ಕಾಣಿಸಿಕೊಂಡಿದ್ದ ಮೊನಾಲಿಸಾಳ ಸಂಪೂರ್ಣ ಲುಕ್ ಬದಲಾಗಿದ್ದು, ಸಂಪೂರ್ಣವಾಗಿ ಎಐ ತಂತ್ರಜ್ಞಾನ ಬಳಸಿಕೊಂಡು ವಿಡಿಯೋ ಮಾಡಲಾಗಿತ್ತು.

# ಪಾಕಿಸ್ತಾನಕ್ಕೆ ಹೋಗಲು ಒಪ್ಪದ ಶ್ರೀನಾಥ್

ಫೆಬ್ರವರಿ 19 ರಿಂದ ಆರಂಭವಾಗಲಿರುವ ಚಾಂಪಿಯನ್ಸ್ ಟ್ರೋಫಿಗೆ ಐಸಿಸಿ, ಅಂಪೈರ್‌ಗಳ ಹಾಗೂ ಮ್ಯಾಚ್ ರೆಫರಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಇದರಲ್ಲಿ 12 ಅಂಪೈರ್‌ಗಳು ಹಾಗೂ ಮೂವರು ಮ್ಯಾಚ್ ರೆಫರಿಗಳು ಸೇರಿದ್ದಾರೆ. ಅಚ್ಚರಿಯಿಂದರೆ ಈ ಎರಡೂ ಪಟ್ಟಿಗಳಲ್ಲಿ ಭಾರತದ ಇಬ್ಬರು ಖ್ಯಾತ ಪಂದ್ಯದ ಅಧಿಕಾರಿಗಳ ಹೆಸರು ಕಾಣೆಯಾಗಿದೆ. ಅವರೆಂದರೆ ಐಸಿಸಿ ಅಂಪೈರ್‌ಗಳ ಪ್ಯಾನೆಲ್‌ನಲ್ಲಿ ಸ್ಥಾನ ಪಡೆದಿರುವ ನಿತಿನ್ ಮೆನನ್ ಹಾಗೂ ಅನುಭವಿ ಮ್ಯಾಚ್



**ರೆಫರಿಗಳ ಸಮಿತಿಯಲ್ಲಿ ಅವಕಾಶ ಸಿಕ್ಕಿಲ್ಲ**

ರೆಫರಿ ಕನ್ನಡಿಗ ಜಾವಗಲ್ ಶ್ರೀನಾಥ್. ವಾಸ್ತವವಾಗಿ ಈ ಇಬ್ಬರು ಐಸಿಸಿ ಆಯೋಜನೆ ಮಾಡುವ ಪ್ರತಿಯೊಂದು ಪಂದ್ಯಾವಳಿಯಲ್ಲೂ ಕಾಣಿಸಿಕೊಳ್ಳುತ್ತಿದ್ದರು. ಆದರೆ ಮುಂಬರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಈ ಇಬ್ಬರು ಇರುವುದಿಲ್ಲ. ವರದಿಯ ಪ್ರಕಾರ, ಈ ಇಬ್ಬರು ಪಾಕಿಸ್ತಾನಕ್ಕೆ ಹೋಗಲು ನಿರಾಕರಿಸಿದ್ದು, ಹೀಗಾಗಿ ಐಸಿಸಿ ಈ ಇಬ್ಬರ ಹೆಸರನ್ನು ಪಟ್ಟಿಯಿಂದ ಕೈಬಿಟ್ಟಿದೆ ಎಂದು ಹೇಳಲಾಗುತ್ತಿದೆ.

**ಮ್ಯಾಚ್ ರೆಫರಿಗಳ ಪಟ್ಟಿ:** ಮೇಲೆ ಹೇಳಿದಂತೆ ಭಾರತದ ಮಾಜಿ ವೇಗದ ಬೌಲರ್ ಮತ್ತು ಬಹಳ ಅನುಭವಿ ಐಸಿಸಿ ಮ್ಯಾಚ್ ರೆಫರಿ ಜಾವಗಲ್ ಶ್ರೀನಾಥ್ ಕೂಡ ಚಾಂಪಿಯನ್ಸ್ ಟ್ರೋಫಿಯಿಂದ ಹೊರಗುಳಿದಿದ್ದಾರೆ. ಅವರಿಗೂ ಪಂದ್ಯದ ರೆಫರಿಗಳ ಸಮಿತಿಯಲ್ಲಿ ಅವಕಾಶ ಸಿಕ್ಕಿಲ್ಲ. ಚಾಂಪಿಯನ್ಸ್ ಟ್ರೋಫಿಯಲ್ಲಿ ಡೇವಿಡ್ ಬೂನ್, ಆಂಡ್ರ್ಯೂ ಪೈಕ್ರಾಫ್ಟ್ ಮತ್ತು ರಂಜನ್ ಮದುಗಲ್ಲೆ ಪಂದ್ಯದ ರೆಫರಿಗಳಾಗಿರುತ್ತಾರೆ.

# ಮೊದಲ ಪಂದ್ಯಕ್ಕೆ ಟೀಮ್ ಇಂಡಿಯಾ ಬಲಿಷ್ಠ ತಂಡ



**ಜಸ್‌ಪ್ರೀತ್ ಬುಮ್ರಾ ಅಲಭ್ಯ**

ಭಾರತ ಮತ್ತು ಇಂಗ್ಲೆಂಡ್ ನಡುವಣ ಮೂರು ಪಂದ್ಯಗಳ ಏಕದಿನ ಸರಣಿ ಗುರುವಾರದಿಂದ ಶುರುವಾಗಲಿದೆ. ಮೊದಲ ಪಂದ್ಯವು ನಾಗ್ಪುರದಲ್ಲಿ ನಡೆದರೆ, ದ್ವಿತೀಯ ಪಂದ್ಯವು ಫೆಬ್ರವರಿ 9 ರಂದು ಕಟಕ್‌ನಲ್ಲಿ ನಡೆಯಲಿದೆ. ಇನ್ನು ಮೂರನೇ ಪಂದ್ಯವು ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ಜರುಗಲಿದೆ. ಭಾರತ ಮತ್ತು ಇಂಗ್ಲೆಂಡ್ ನಡುವಣ ಏಕದಿನ ಸರಣಿಯು ಇಂದಿನಿಂದ ಶುರುವಾಗಲಿದೆ. ನಾಗ್ಪುರದಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ಬಲಿಷ್ಠ ಪ್ಲೇಯಿಂಗ್ ಇಲೆವೆನ್ ರೂಪಿಸಲಿದೆ. ಏಕೆಂದರೆ ಈ ಸರಣಿಯ ಬಳಿಕ ಭಾರತ ತಂಡವು ಚಾಂಪಿಯನ್ಸ್ ಟ್ರೋಫಿ ಟೂರ್ನಿಗಾಗಿ ತೆರಳಲಿದ್ದು, ಅದಕ್ಕೂ ಮುನ್ನ ಸಮತೋಲಿತ ಆಡುವ ಬಳಗವನ್ನು ರೂಪಿಸಬೇಕಾದ ಅನಿವಾರ್ಯತೆ ಟೀಮ್ ಇಂಡಿಯಾ ಮುಂದಿದೆ.

ಅದರಂತೆ ಮೊದಲ ಏಕದಿನ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಆರಂಭಿಕರಾಗಿ ರೋಹಿತ್ ಶರ್ಮಾ ಹಾಗೂ ಶುಭ್‌ಮನ್ ಗಿಲ್ ಕಾಣಿಸಿಕೊಳ್ಳಲಿದ್ದಾರೆ. ಇನ್ನು ಮೂರನೇ ಕ್ರಮಾಂಕದಲ್ಲಿ ವಿರಾಟ್ ಕೊಹ್ಲಿ ಬ್ಯಾಟ್ ಬೀಸಲಿದ್ದು, ನಾಲ್ಕನೇ ಕ್ರಮಾಂಕದಲ್ಲಿ ಶ್ರೇಯಸ್ ಅಯ್ಯರ್ ಕಣಕ್ಕಿಳಿಯಲಿದ್ದಾರೆ. ಇನ್ನು ವಿಕೆಟ್ ಕೀಪರ್ ಆಗಿ ಕೆಎಲ್ ರಾಹುಲ್‌ಗೆ ಚಾನ್ಸ್ ಸಿಗುವ ಸಾಧ್ಯತೆ ಹೆಚ್ಚಿದೆ. ಹಾಗೆಯೇ ಆಲ್‌ರೌಂಡರ್‌ಗಳಾಗಿ ಹಾರ್ದಿಕ್ ಪಾಂಡ್ಯ ಹಾಗೂ ರವೀಂದ್ರ ಜಡೇಜಾ ಆಡುವ ಬಳಗದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ವೇಗಿಗಳಾಗಿ ಮೊಹಮ್ಮದ್ ಶಮಿ, ಅರ್ಷದೀಪ್ ಸಿಂಗ್ ಹಾಗೂ ಹರ್ಷಿತ್ ರಾಣಾ ಕಣಕ್ಕಿಳಿಯಲಿದ್ದು, ಸ್ಪಿನ್ನರ್ ಆಗಿ ವರುಣ್ ಚಕ್ರವರ್ತಿ ಅಥವಾ ಕುಲ್ದೀಪ್ ಯಾದವ್ ಪ್ಲೇಯಿಂಗ್ ಇಲೆವೆನ್‌ನಲ್ಲಿ ಕಾಣಿಸಿಕೊಳ್ಳಬಹುದು. ಅದರಂತೆ ಟೀಮ್ ಇಂಡಿಯಾದ ಸಂಭಾವ್ಯ ಪ್ಲೇಯಿಂಗ್ 11 ಈ ಕೆಳಗಿನಂತಿರಲಿದೆ

**ಭಾರತ ಏಕದಿನ ತಂಡ:** ರೋಹಿತ್ ಶರ್ಮಾ (ನಾಯಕ), ಶುಭ್‌ಮನ್ ಗಿಲ್ (ಉಪನಾಯಕ), ಯಶಸ್ವಿ ಜೈಸ್ವಾಲ್, ವಿರಾಟ್ ಕೊಹ್ಲಿ, ಶ್ರೇಯಸ್ ಅಯ್ಯರ್, ಕೆಎಲ್ ರಾಹುಲ್ (ವಿಕೆಟ್ ಕೀಪರ್), ರಿಷಭ್ ಪಂತ್ (ವಿಕೆಟ್ ಕೀಪರ್), ಹಾರ್ದಿಕ್ ಪಾಂಡ್ಯ, ರವೀಂದ್ರ ಜಡೇಜಾ, ವಾಷಿಂಗ್ಟನ್ ಸುಂದರ್, ಅಕ್ಷರ್ ಪಟೇಲ್, ಕುಲ್ದೀಪ್ ಯಾದವ್, ಹರ್ಷಿತ್ ರಾಣಾ, ಮೊಹಮ್ಮದ್ ಶಮಿ, ಅರ್ಷದೀಪ್ ಸಿಂಗ್, ವರುಣ್ ಚಕ್ರವರ್ತಿ.

ಈ ಸರಣಿಗೆ ಟೀಮ್ ಇಂಡಿಯಾದ ಪ್ರಮುಖ ವೇಗಿ ಜಸ್‌ಪ್ರೀತ್ ಬುಮ್ರಾ ಅಲಭ್ಯರಾಗಿದ್ದಾರೆ. ಬೆನ್ನು ನೋವಿನ ಸಮಸ್ಯೆಯಿಂದ ಬಳಲುತ್ತಿರುವ ಬುಮ್ರಾ ಸದ್ಯ ಚಿಕಿತ್ಸೆ ಪಡೆಯುತ್ತಿದ್ದು, ಹೀಗಾಗಿ ಅವರನ್ನು ಮೊದಲೆರಡು ಪಂದ್ಯಗಳಿಂದ ಕೈಬಿಡಲಾಗಿದೆ. ಅಲ್ಲದೆ ಅವರ ಬದಲಿಗೆ ಹರ್ಷಿತ್ ರಾಣಾಗೆ ತಂಡದಲ್ಲಿ ಸ್ಥಾನ ನೀಡಲಾಗಿದೆ.

# ನಂ.1 ಟಿ20 ಬೌಲರ್ ಆಗುವ ಸನಿಹದಲ್ಲಿ ವರುಣ್

ಐಸಿಸಿ ಪ್ರಕಟಿಸಿರುವ ಇತ್ತೀಚಿನ ಟಿ20 ಬೌಲರ್ ಶ್ರೇಯಾಂಕದಲ್ಲಿ ವರುಣ್ ಚಕ್ರವರ್ತಿ ಮೂರು ಸ್ಥಾನಗಳ ಏರಿಕೆಯೊಂದಿಗೆ ಎರಡನೇ ಸ್ಥಾನಕ್ಕೆ ಏರಿದ್ದಾರೆ. ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಯಲ್ಲಿ ಅದ್ಭುತ ಪ್ರದರ್ಶನ ನೀಡಿ 14 ವಿಕೆಟ್ ಪಡೆದ ಅವರು, ಸರಣಿಯ ಶ್ರೇಷ್ಠ ಆಟಗಾರ ಪ್ರಶಸ್ತಿಯನ್ನೂ ಗೆದ್ದಿದ್ದಾರೆ. ಈ ಏರಿಕೆಯಿಂದಾಗಿ ಅವರು ಆದಿಲ್ ರಶೀದ್ ಜೊತೆಗೆ ಎರಡನೇ ಸ್ಥಾನವನ್ನು ಹಂಚಿಕೊಂಡಿದ್ದಾರೆ. ಐಸಿಸಿ ಬಿಡುಗಡೆ ಮಾಡಿರುವ ನೂತನ ಟಿ20 ಬೌಲರ್‌ಗಳ ಶ್ರೇಯಾಂಕದಲ್ಲಿ ಟೀಂ ಇಂಡಿಯಾದ ಮಿಸ್ಟ್ರಿ ಸ್ಪಿನ್ನರ್ ವರುಣ್ ಚಕ್ರವರ್ತಿ ಮೂರು ಸ್ಥಾನಗಳನ್ನು ಮುಂಬಡ್ತಿ ಪಡೆಯುವುದರೊಂದಿಗೆ ಎರಡನೇ ಶ್ರೇಯಾಂಕವನ್ನು ಆಕ್ರಮಿಸಿಕೊಂಡಿದ್ದಾರೆ.

ಕಳೆದ ವಾರ ಬಿಡುಗಡೆಯಾಗಿದ್ದ ಐಸಿಸಿ ಶ್ರೇಯಾಂಕದಲ್ಲಿ 25 ಆಟಗಾರರನ್ನು ಹಿಂದಿಕ್ಕಿ 5 ನೇ ಸ್ಥಾನಕ್ಕೇರಿದ್ದ ಅವರು ಇದೀಗ 7 ದಿನಗಳಲ್ಲಿ ಮೂರು ಸ್ಥಾನ ಮೇಲೇರುವಲ್ಲಿ ಯಶಸ್ವಿಯಾಗಿದ್ದಾರೆ. ವರುಣ್ ಚಕ್ರವರ್ತಿ ಇತ್ತೀಚೆಗೆ ಮುಕ್ತಾಯಗೊಂಡ ಇಂಗ್ಲೆಂಡ್ ವಿರುದ್ಧದ 5 ಟಿ20 ಪಂದ್ಯಗಳಲ್ಲಿ ಅದ್ಭುತ ಪ್ರದರ್ಶನ ನೀಡಿದ್ದರು. ಇಡೀ ಸರಣಿಯಲ್ಲಿ ಅತಿ ಹೆಚ್ಚು ವಿಕೆಟ್ ಪಡೆದ ಬೌಲರ್ ಎನಿಸಿಕೊಂಡಿದ್ದ ವರುಣ್‌ಗೆ ಇದರ ಫಲವಾಗಿ ಸರಣಿಯ ಆಟಗಾರ ಪ್ರಶಸ್ತಿಯೂ ಲಭಿಸಿತ್ತು. ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳಲ್ಲಿ ಟಿ20 ಸರಣಿಯಲ್ಲಿ ವರುಣ್ ಚಕ್ರವರ್ತಿ 9.85 ಸರಾಸರಿಯಲ್ಲಿ 14 ವಿಕೆಟ್‌ಗಳನ್ನು ಪಡೆದಿದ್ದರು. ಇದೀಗ ಬಿಡುಗಡೆಯಾಗಿರುವ ರ್‍ಯಾಂಕಿಂಗ್‌ನಲ್ಲಿ ವರುಣ್ ಚಕ್ರವರ್ತಿ, ಇಂಗ್ಲೆಂಡ್‌ನ ಆದಿಲ್ ರಶೀದ್ ಅವರೊಂದಿಗೆ ಜಂಟಿ ಎರಡನೇ ಸ್ಥಾನವನ್ನು ಆಕ್ರಮಿಸಿಕೊಂಡಿದ್ದಾರೆ. ಇಬ್ಬರೂ ತಲಾ 705 ರೇಟಿಂಗ್ ಪಾಯಿಂಟ್‌ಗಳನ್ನು ಹೊಂದಿದ್ದು, ಇತ್ತೀಚಿನ ಟಿ20 ಶ್ರೇಯಾಂಕದಲ್ಲಿ ಆದಿಲ್ ರಶೀದ್ ಒಂದು ಸ್ಥಾನ ಕುಸಿದಿದ್ದಾರೆ. ಈ ಮೊದಲು ಮೊದಲ ಸ್ಥಾನದಲ್ಲಿದ್ದ ಆದಿಲ್ ರಶೀದ್ ಇದೀಗ ಎರಡನೇ ಸ್ಥಾನಕ್ಕೆ ಜಾರಿದ್ದಾರೆ. ಆದರೆ ವರುಣ್ ಚಕ್ರವರ್ತಿ 3 ಸ್ಥಾನ ಜಿಗಿದು 2 ನೇ ಸ್ಥಾನಕ್ಕೆ ತಲುಪಿದ್ದಾರೆ. ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಯಲ್ಲಿ ವರುಣ್ ಚಕ್ರವರ್ತಿ ಅವರ ಪ್ರದರ್ಶನವನ್ನು ನೋಡಿದ ಭಾರತೀಯ ತಂಡದ ಆಡಳಿತ ಮಂಡಳಿಯು ಅವರನ್ನು ಏಕದಿನ ಸರಣಿಯ ತಂಡಕ್ಕೂ ಸೇರಿಸಿಕೊಂಡಿದೆ. ವರುಣ್ ಚಕ್ರವರ್ತಿ ಅವರನ್ನು ಏಕದಿನ ತಂಡಕ್ಕೆ ಹಠಾತ್ತನೆ ಸೇರಿಸಿಕೊಂಡಿರುವುದು ಚಾಂಪಿಯನ್ಸ್ ಟ್ರೋಫಿಯಲ್ಲಿ ಅವರು ಆಡುವ ಬಗ್ಗೆ ಊಹಾಪೋಹಗಳಿಗೆ ಕಾರಣವಾಗಿದೆ. ವರುಣ್ ಚಕ್ರವರ್ತಿ ಇದುವರೆಗೆ ಭಾರತ ಪರ ಕೇವಲ ಟಿ20 ಪಂದ್ಯಗಳನ್ನು ಮಾತ್ರ ಆಡಿದ್ದಾರೆ. ಅಂತಹ ಪರಿಸ್ಥಿತಿಯಲ್ಲಿ, ನಾಯಕ ರೋಹಿತ್ ಶರ್ಮಾ ಇಂಗ್ಲೆಂಡ್ ವಿರುದ್ಧದ ಆಡುವ ಹನ್ನೊಂದರ ಬಳಗದಲ್ಲಿ ಅವರಿಗೆ ಅವಕಾಶ ನೀಡಿದರೆ, ಅವರ ಏ ಉಳಿದಂತೆ ಐಸಿಸಿ ಟಿ20 ಬೌಲರ್‌ಗಳ ಶ್ರೇಯಾಂಕದ ಅಗ್ರ 10 ರಲ್ಲಿ ವರುಣ್ ಚಕ್ರವರ್ತಿ ಸೇರಿದಂತೆ 3 ಬೌಲರ್‌ಗಳಿದ್ದಾರೆ. 4 ಸ್ಥಾನ ಮೇಲೇರಿರುವ ರವಿ ಬಿಷ್ಣೋಯ್ 671 ರೇಟಿಂಗ್ ಅಂಕಗಳೊಂದಿಗೆ ಆರನೇ ಸ್ಥಾನದಲ್ಲಿದ್ದಾರೆ.



# ಗಂಟೆಯೊಳಗೆ ಭಾರತ- ಪಾಕ್ ಪಂದ್ಯದ ಎಲ್ಲಾ ಟಿಕೆಟ್ ಸೋಲ್ಡ್ ಔಟ್



ಭಾರತ-ಪಾಕಿಸ್ತಾನ ನಡುವೆ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿ ಪಂದ್ಯದ ಟಿಕೆಟ್‌ಗಳು ಕ್ಷಣಾರ್ಧದಲ್ಲಿ ಮಾರಾಟವಾಗಿವೆ. ಫೆಬ್ರವರಿ 23ರಂದು ನಡೆಯಲ್ಲಿರುವ ಈ ಪಂದ್ಯದ ಟಿಕೆಟ್‌ಗೆ ಅಪಾರ ಬೇಡಿಕೆಯಿದ್ದು, ಇದಕ್ಕೆ ಪೂರಕವಾಗಿ ಐಸಿಸಿ ಕೂಡ ಟಿಕೆಟ್ ಬೆಲೆಯನ್ನು ಹೆಚ್ಚಿಸಿದೆ. ಆದಾಗ್ಯೂ ಸಾಕಷ್ಟು ಅಭಿಮಾನಿಗಳಿಗೆ ಈ ಪಂದ್ಯದ ಟಿಕೆಟ್ ಸಿಕ್ಕಿಲ್ಲ. ಪಾಕಿಸ್ತಾನ ಹಾಗೂ ದುಬೈ ಆತಿಥ್ಯದಲ್ಲಿ ಹೈಬ್ರಿಡ್ ಮಾದರಿಯಲ್ಲಿ ನಡೆಯಲ್ಲಿರುವ ಚಾಂಪಿಯನ್ಸ್ ಟ್ರೋಫಿ ಆರಂಭವಾಕ್ಕೆ ಇನ್ನ ಕೆಲವೇ ದಿನಗಳು ಬಾಕಿ ಇವೆ. ಈ ಪಂದ್ಯಾವಳಿ ಫೆಬ್ರವರಿ 19 ರಿಂದ ಪ್ರಾರಂಭವಾಗಲಿದ್ದು, ಭಾರತ ತನ್ನ ಎಲ್ಲಾ ಪಂದ್ಯಗಳನ್ನು ದುಬೈನಲ್ಲಿ ಆಡಲಿದೆ. ಈ ಟೂರ್ನಿಗಾಗಿ ಈಗಾಗಲೇ ಟೀಂ ಇಂಡಿಯಾವನ್ನು ಪ್ರಕಟಿಸಲಾಗಿದ್ದು, ಕಳೆದ ಸೋಮವಾರದಿಂದಲೇ ಟೀಂ ಇಂಡಿಯಾದ ಪಂದ್ಯಗಳ ಟಿಕೆಟ್ ಮಾರಾಟವನ್ನು ಐಸಿಸಿ ಆರಂಭಿಸಿದೆ. ಆ ಪ್ರಕಾರ, ಇಂದು ಇಡೀ ಟೂರ್ನಿಯ ಹೈವೋಲ್ಟೇಜ್ ಕದನವಾದ ಭಾರತ ಹಾಗೂ ಪಾಕಿಸ್ತಾನ ನಡುವಿನ ಪಂದ್ಯದ ಟಿಕೆಟ್‌ಗಳನ್ನು ಮಾರಾಟ ಮಾಡಲಾಯಿತು. ಎಂದಿನಂತೆ ಈ ಬಾರಿಯೂ ಈ ಪಂದ್ಯದ ಎಲ್ಲಾ ಟಿಕೆಟ್‌ಗಳು ಕೆಲವೇ ನಿಮಿಷಗಳಲ್ಲಿ ಮಾರಾಟವಾಗಿವೆ. ನಿರೀಕ್ಷೆಯಂತೆ, ಫೆಬ್ರವರಿ 23 ರಂದು ನಡೆಯಲಿರುವ ಭಾರತ-ಪಾಕಿಸ್ತಾನ ಪಂದ್ಯಕ್ಕೆ ಗರಿಷ್ಠ ಜನಸಂದಣಿ ಇತ್ತು. ಅದರಂತೆ ಕೇವಲ ಒಂದು ಗಂಟೆಯೊಳಗೆ ಪಂದ್ಯದ ಎಲ್ಲಾ ಟಿಕೆಟ್‌ಗಳು ಭೀಕರಿಯಾಗಿದ್ದು, ಟಿಕೆಟ್‌ಗಳಿಂದ ವಂಚಿತರಾದ ಅಭಿಮಾನಿಗಳಿಗೆ ಭಾರಿ ನಿರಾಸೆಯಾಗಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**